ಸಂಪುಟ: 04 ಸಂಚಿಕೆ: 310 ಪುಟಗಳು: 08 ಬುಧವಾರ 22 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

**ಮುಂಜಾನೆ ಮಾತು**
ಮತ್ತೊಬ್ಬರನ್ನು ಸೋಲಿಸುವುದು ಬಲು ಸುಲಭ. ಆದರೆ, ಮತ್ತೊಬ್ಬರನ್ನು ಗೆಲ್ಲುವುದು ಬಲು ಕಷ್ಟ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಇದು 60 ಪರ್ಸೆಂಟ್ ವಸೂಲಿ ಮಾಡಿದ ನೆನಪಿನ ಜಾತ್ರೆ

• ಉದಯವಾಹಿನಿ, ಬೆಂಗಳೂರು

ಬೆಳಗಾವಿಯಲ್ಲಿ ನಡೆದಿರುವುದು 60 ಪರ್ಸೆಂಟ್ ವಸೂಲಿ ಮಾಡಿದ ನೆನಪಿನ ಜಾತ್ರೆಯೇ ಹೊರತು ಕಾಂಗ್ರೆಸ್ ಸಮಾವೇಶವಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಟೀಕಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿಯಲ್ಲಿ ಮಹಾತ್ಮ ಗಾಂಧೀಜಿ ಹೆಸರಲ್ಲಿ ಕಾಂಗ್ರೆಸ್ ಸಮಾವೇಶ ಮಾಡಲಾಗಿದೆ. ಗಾಂಧೀಜಿ ಬಗ್ಗೆ ಅಷ್ಟೊಂದು ಪ್ರೀತಿ ಇದ್ದರೆ ಕಾಂಗ್ರೆಸ್ ಭವನಕ್ಕೆ ಗಾಂಧೀಜಿ ಅಥವಾ ಸರ್ದಾರ್ ವಲ್ಲಭಭಾಯಿ ಪಟೇಲ್ ಹೆಸರಿಡಬೇಕಿತ್ತು. ಸೋನಿಯಾ ಗಾಂಧಿಯಾಗಲೀ, ರಾಹುಲ್ ಗಾಂಧಿಯಾಗಲೀ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಲಿಲ್ಲ. ಇವರಿಗೆ ಗಾಂಧೀಜಿಯ ಹೆಸರು ಹೇಳುವ ನೈತಿಕತೆ ಇಲ್ಲ. ಇದು 60 ಪರ್ಸೆಂಟ್ ವಸೂಲಿ ಮಾಡುವ ನೆನಪಿನ ಜಾತ್ರೆಯೇ ಹೊರತು ಸಮಾವೇಶವಲ್ಲ ಎಂದರು.

## ಉಸ್ತುವಾರಿ ರಾಧಾಮೋಹನ್ ದಾಸ್ ನಡೆಗೆ ಅಸಮಾಧಾನ

• ಉದಯವಾಹಿನಿ, ಬೆಂಗಳೂರು

ಬಿಜೆಪಿಯಲ್ಲಿ ಒಂದೆಡೆ ಬಣ ಬಡಿದಾಟ ಜೋರಾಗಿದ್ದರೆ ಮತ್ತೊಂದೆಡೆ ಯತ್ನಾಳ್ ಬಣ ಹಾಗೂ ವಿಜಯೇಂದ್ರ ಬಣಗಳ ಪ್ರತ್ಯೇಕ ಸಭೆಗಳು ಭಾರಿ ಸದ್ದು ಮಾಡುತ್ತಿವೆ. ಈ ನಡುವೆ ರಾಜ್ಯಕ್ಕೆ ಆಗಮಿಸಿರುವ ಬಿಜೆಪಿ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್, ಶಾಸಕರ ಸಭೆ ಕರೆದಿದ್ದಾರೆ. ಈ ಬಗ್ಗೆ ಮಾಜಿ ಸಚಿವ ಬಿ.ಸಿ.ಪಾಟೀಲ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಧಾಮೋಹನ್ ದಾಸ್ ಅವರು ಬಿಜೆಪಿ ಶಾಸಕರ ಸಭೆ ಕರೆದಿದ್ದಾರೆ. ಶಾಸಕರ ಸಭೆ ಕರೆದಿರುವ ವಿಷಯ ಕೇಳಿ ನನಗೆ ಶಾಕ್ ಆಯ್ತು. ರಾಧಾಮೋಹನ್ ದಾಸ್ ಅವರು ಸೋತವರ ಸಭೆಯನ್ನೂ ಕರೆಯಬೇಕಿತ್ತು ಎಂದು ಹೇಳಿದ್ದಾರೆ. ಕೇವಲ 66 ಶಾಸಕರಿಂದ ಸರ್ಕಾರ ರಚನೆ ಮಾಡುವುದಕ್ಕೆ ಆಗಲ್ಲ. ಮಾಜಿ ಶಾಸಕರನ್ನು ಬಿಟ್ಟು ಸಭೆ ಮಾಡುತ್ತಿರುವುದು ನಮಗೆ ಅವಮಾನ. ರಾಧಾಮೋಹನ್ ದಾಸ್ ಅಗರ್ವಾಲ್ ಭೇಟಿಗೆ ನಾವು ಸಮಯ ಕೇಳಿದ್ದೇವೆ. ಭೇಟಿ ವೇಳೆ ಚರ್ಚಿಸುತ್ತೇವೆ ಎಂದು ಹೇಳಿದರು. ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಹದಗೆಟ್ಟಿದೆ. ಹಸುವಿನ ಕೆಚ್ಚಲು ಕತ್ತರಿಸಿದ್ದು, ಬ್ಯಾಂಕ್ ದರೋಡೆ, ಮಹಿಳೆ ಮೇಲೆ ಅತ್ಯಾಚಾರ ಮೊದಲಾದ ಘಟನೆಗಳನ್ನು ಕಡೆಗಣಿಸಿ ಸರ್ಕಾರ ಸಮಾವೇಶ ಮಾಡಿದೆ ಎಂದರು.

## ಉದ್ಯಮಿಗಳಿಗೆ, ಚಿನ್ನಾಭರಣ ಮಳಿಗೆಗಳಿಗೆ ರಕ್ಷಣೆ ಇಲ್ಲ

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ ಸದಸ್ಯ ಶರವಣ ಅವರ ಮಾಲೀಕತ್ವದ ಶ್ರೀ ಸಾಯಿ ಗೋಲ್ಡ್ ಪ್ಯಾಲೇಸ್‌ಗೆ ಸಂಬಂಧಿಸಿದ ಚಿನ್ನಾಭರಣ ಕಳ್ಳತನವಾಗಿದೆ. ಹಾಲ್ ಮಾರ್ಕ್ ಹಾಕಿಸಲು ಕೊಟ್ಟ 1 ಕೆಜಿ 249 ಗ್ರಾಂ ಚಿನ್ನ ಕಳ್ಳತನವಾಗಿದ್ದು, ಈ ಸಂಬಂಧ ಬಸವನಗುಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಘಟನೆ ಮಾತ್ರವಲ್ಲದೇ ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಕಳೆದ ಒಂದು ವಾರದಿಂದ ದರೋಡೆ ಪ್ರಕರಣ ಗಣನೀಯವಾಗಿ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಜೆಡಿಎಸ್ ವಿಧಾನ ಪರಿಷತ್ ಸದಸ್ಯ ಶರವಣ ಹಾಗೂ ಬಿಜೆಪಿ ವಿಧಾನ ಪರಿಷತ್ ಶಾಸಕ ಎನ್. ರವಿಕುಮಾರ್ ಸುದ್ದಿಗೋಷ್ಠಿ ನಡೆಸಿದ್ದು, ಕಾಂಗ್ರೆಸ್ ಸರ್ಕಾರ ವಿರುದ್ಧ ಕಿಡಿಕಾರಿದ್ದಾರೆ. ಕರ್ನಾಟಕ ಲೂಟಿ ಕೋರರು ಮತ್ತು ದರೋಡೆಕೋರರ ಸಾಮ್ರಾಜ್ಯ ಆಗುತ್ತಿದೆ. ಸಾರ್ವಜನಿಕರಿಗೆ, ಉದ್ಯಮಿಗಳಿಗೆ, ಹಣಕಾಸು ಸಂಸ್ಥೆಗಳಿಗೆ, ಚಿನ್ನಾಭರಣ ಮಳಿಗೆಗಳಿಗೆ ರಕ್ಷಣೆ ಇಲ್ಲದೇ, ಇದೊಂದು ಜಂಗಲ್ ರಾಜ್ ಆಗಿರುವ ಗುಮಾನಿ ಬಂದಿದೆ. ಬೀದರ್‌ನಲ್ಲಿ ಹಾಡುಹಗಲೇ ನಡು ಬೀದಿಯಲ್ಲಿ ಸಿಬ್ಬಂದಿ ಮೇಲೆ ಹಲ್ಲೆ ಮಾಡಿ ಬ್ಯಾಂಕ್ ಹಣ ದರೋಡೆ ಮಾಡಿ ಪರಾರಿ, ಮಂಗಳೂರಲ್ಲಿ ಸಹಕಾರಿ ಬ್ಯಾಂಕ್ ದರೋಡೆ, ಮೈಸೂರು ಬಳಿ ವಾಹನ ನಿಲ್ಲಿಸಿ, ಬೆದರಿಸಿ ದರೋಡೆ. ಇವು ರಾಜ್ಯ ಭೀಕರತೆ ಮತ್ತು ಅಮಾನುಷತೆಯತ್ತ ಸಾಗುತ್ತಿರುವ ಲಕ್ಷಣ ಎಂದರು.

## ಬಿಜೆಪಿ ಪ್ರಧಾನ ಕಾರ್ಯದರ್ಶಿ ಹುದ್ದೆಗೆ ರಾಜೀನಾಮೆ ಸುಳಿವು

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಬಿಜೆಪಿ ಪ್ರಧಾನ ಕಾರ್ಯದರ್ಶಿಯಾಗಿರುವಂತ ಶಾಸಕ ಸುನೀಲ್ ಕುಮಾರ್ ಅವರು, ಈ ಹುದ್ದೆಯನ್ನು ತೊರೆಯುವ ಇಂಗಿತವನ್ನು ವ್ಯಕ್ತಪಡಿಸಿದ್ದಾರೆ. ಆ ಮೂಲಕ ಬಿಜೆಪಿ ಪ್ರಧಾನ ಕಾರ್ಯದರ್ಶಿ ಹುದ್ದೆ ತೊರೆಯುವ ಸುಳಿವನ್ನು ನೀಡಿದ್ದಾರೆ. ಇಂದು ಸುದ್ದಿಗಾರರೊಂದಿಗೆ ಮಾತನಾಡಿದಂತ ಅವರು ಬಿಜೆಪಿ ಪ್ರಧಾನ ಕಾರ್ಯದರ್ಶಿ ಹುದ್ದೆಯನ್ನು ತೊರೆಯಲು ನಿರ್ಧಾರ ಮಾಡಿದ್ದೇನೆ. ವೈಯಕ್ತಿಕ ಕಾರಣದಿಂದ ತೊರೆಯಲು ನಿರ್ಧಾರ ಕೈಗೊಳ್ಳಲಾಗಿದೆ ಎಂದಿದ್ದಾರೆ.

ಬಹಿರಂಗವಾಗಿ ನಾನು ಈ ವಿಚಾರವನ್ನು ಎಲ್ಲಿಯೂ ಚರ್ಚೆ ಮಾಡಿಲ್ಲ. ಈ ವಿಚಾರ ಪಕ್ಷದ ರಾಜ್ಯಾಧ್ಯಕ್ಷರಿಗೂ ಗೊತ್ತಿಲ್ಲ. ಯಾವುದೇ ಬಣ ರಾಜಕೀಯದಿಂದ ನಾನು ತೊರೆಯುತ್ತಿಲ್ಲ. ನಾನು ಯಾವುದೇ ಬಣ ರಾಜಕೀಯ ಟೀಂ ಜೊತೆಗೂ ಗುರ್ತಿಸಿಕೊಂಡಿಲ್ಲ ಎಂದರು. ಒತ್ತಡ, ವೈಯಕ್ತಿಕ ಸಮಸ್ಯೆಯಿಂದ ಬಿಜೆಪಿ ಪ್ರಧಾನ ಕಾರ್ಯದರ್ಶಿ ಹುದ್ದೆಯನ್ನು ತೊರೆಯುವ ನಿರ್ಧಾರಕ್ಕೆ ಬಂದಿದ್ದೇನೆ ಎಂಬುದಾಗಿ ಶಾಸಕ ಸುನೀಲ್ ಕುಮಾರ್ ತಿಳಿಸಿದ್ದಾರೆ.



ಇದು ಕೇವಲ ಕಾಂಗ್ರೆಸ್ ಕಾರ್ಯಕ್ರಮವಲ್ಲ. ಇದು ದೇಶದ ಕಾರ್ಯಕ್ರಮ. ಕಾಂಗ್ರೆಸ್ ಪಕ್ಷ, ಗಾಂಧೀಜಿ, ಅಂಬೇಡ್ಕರ್, ಸಂವಿಧಾನದ ಆದರ್ಶ, ತತ್ವ ಸಿದ್ಧಾಂತದ ಮೇಲೆ ನಂಬಿಕೆ ಇಟ್ಟಿರುವ ಯಾರು ಬೇಕಾದರೂ ಈ ಸಮಾವೇಶಕ್ಕೆ ಆಗಮಿಸಬಹುದು. ಈ ಸಮಾವೇಶದಲ್ಲಿ ಭಾಗವಹಿಸಿ ನೀವೆಲ್ಲರೂ ಇತಿಹಾಸದ ಪುಟಕ್ಕೆ ಸೇರಬೇಕು
**-ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿ**




2004ರಲ್ಲಿ ಸೋನಿಯಾ ಗಾಂಧಿ ಪ್ರಧಾನ ಮಂತ್ರಿಯಾಗಬೇಕಿತ್ತು, ಆದರೆ ಅವರು ಹುದ್ದೆಯನ್ನು ತ್ಯಾಗ ಮಾಡಿ ಆರ್ಥಿಕ ತಜ್ಞ ಮನಮೋಹನ ಸಿಂಗ್ ಅವರನ್ನು ಪ್ರಧಾನ ಮಂತ್ರಿ ಮಾಡಿದರು, ಇಂದಿರಾ ಗಾಂಧಿಯವರು ದೇಶಕ್ಕಾಗಿ ತಮ್ಮ ಜೀವವನ್ನು ಬಲಿದಾನ ಮಾಡಿದ್ದರು, ಹಾಗೆಯೇ ರಾಜೀವ್ ಗಾಂಧಿಯವರು ರಾಷ್ಟ್ರಕ್ಕಾಗಿ ತಮ್ಮ ಜೀವ ಬಲಿಕೊಟ್ಟರು-ಹೀಗೆ ದೇಶಕ್ಕಾಗಿ ಬಲಿದಾನ ನೀಡಿದ ಪರಂಪರೆಯನ್ನು ಈ ಕುಟುಂಬ ಹೊಂದಿದೆ, ಸೋನಿಯ ಗಾಂಧಿ ಮಾಡಿದಂಥ ತ್ಯಾಗವನ್ನು ಈಗಿನ ಕೇಂದ್ರ ಸರ್ಕಾರದಲ್ಲಿ ಯಾರಾದರೂ ಮಾಡಿಯಾರೆ
**-ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಅಧ್ಯಕ್ಷ**



2024ರ ಲೋಕಸಭಾ ಚುನಾವಣಾ ಪ್ರಚಾರದ ವೇಳೆಯೂ ಸಂವಿಧಾನ ಬದಲಿಸುವುದಾಗಿ ಬಿಜೆಪಿ ನಾಯಕರು ಹೇಳಿದ್ದರು. ಹೀಗೆ ಹೇಳಿದ್ದಕ್ಕೆ ಲೋಕಸಭಾ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಿದ್ದಾರೆ. ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ ಸಂವಿಧಾನದ ವಿರೋಧಿಗಳು. ಮೋದಿ ಸರ್ಕಾರದಲ್ಲಿ ಸಾಂವಿಧಾನಿಕ ಸಂಸ್ಥೆಗಳ ಮೇಲೆ ದಾಳಿ ನಡೆದಿದೆ. ಅಧಿಕಾರಕ್ಕೆ ಬಂದ ಕೂಡಲೇ ಸಂವಿಧಾನ ವಿಮರ್ಶ ಸಮಿತಿ ರಚಿಸಿದ್ದರು
**-ಪ್ರಿಯಾಂಕಾ ಗಾಂಧಿ, ಸಂಸದರು**

# ಜೈ ಬಾಪು ಜೈ ಭೀಮ್ ಸಮಾವೇಶ ಸಿದ್ದರಾಮಯ್ಯ ತ್ಯಾಗದ ಆವೇಶ

**● ಬೆಳಗಾವಿಯಲ್ಲಿ ಜೈ ಬಾಪು, ಜೈ ಭೀಮ್ ಹಾಗೂ ಜೈ ಸಂವಿಧಾನ ಸಮಾವೇಶ ● ಕಾಂಗ್ರೆಸ್ ಪಾಳಯದಲ್ಲಿ ತ್ಯಾಗದ ಮಾತು ಬಿರುಸು ● ಪಕ್ಷ, ಹೈಕಮಾಂಡ್ ಸೂಚಿಸಿದರೆ ತ್ಯಾಗಕ್ಕೆ ಸಿದ್ಧರಿರಬೇಕು: ದಿನೇಶ್ ಗುಂಡೂರಾವ್**



• ಉದಯವಾಹಿನಿ, ಬೆಂಗಳೂರು:

ರಾಜ್ಯದಲ್ಲಿ ಸಿಎಂ ಬದಲಾವಣೆ, ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಚರ್ಚೆಯ ನಡುವೆಯೂ ಸಿಎಂ ಸಿದ್ದರಾಮಯ್ಯ ಅವರು ತ್ಯಾಗದ ಮಾತನ್ನಾಡಿದ್ದಾರೆ.

1. **ಜೈ ಬಾಪು-ಜೈ ಭೀಮ್ - ಜೈ ಸಂವಿಧಾನ ಅಭಿಯಾನದ ಪೂರ್ವ ಸಿದ್ಧತಾ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಮಾತು**
2. **ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ತ್ಯಾಗ ಮಾಡಿದ್ದಾರೆ**
3. **ನಾವು ಕೂಡಾ ಅದೇ ದಾರಿಯಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಕರೆ**

ಕೆಪಿಸಿಸಿ ಭಾರತ್ ಜೋಡೋ ಭವನದಲ್ಲಿ ನಡೆದ ಗಾಂಧಿ ಭಾರತ ಕಾರ್ಯಕ್ರಮ ಮತ್ತು ಜೈ ಬಾಪು-ಜೈ ಭೀಮ್ - ಜೈ ಸಂವಿಧಾನ ಅಭಿಯಾನದ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡುವ ಸಂದರ್ಭದಲ್ಲಿ ಕಾರ್ಯಕರ್ತರಿಗೆ ಕಿವಿ ಮಾತನ್ನು ಹೇಳಿದರು.

ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ತ್ಯಾಗ ಮಾಡಿದ್ದಾರೆ. ನಾವು ಕೂಡಾ ಅದೇ ದಾರಿಯಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಕರೆ ನೀಡಿದರು. ಕಾಂಗ್ರೆಸ್ ಪಕ್ಷದ ಮಾತ್ರ ಪರಿವರ್ತನೆ, ಎಲ್ಲರನ್ನೂ ಒಳಗೊಳ್ಳುವ ಸಿದ್ಧಾಂತದಲ್ಲಿ ನಂಬಿಕೆ ಇಟ್ಟಿದೆ. ಆದರೆ, ಬಿಜೆಪಿ ಯಥಾಸ್ಥಿತಿ ಬಯಸುತ್ತದೆ ಎಂದರು.

ಜೆಡಿಎಸ್ ಗೆ ಮಾತ್ರ ಯಾವುದೇ ಸಿದ್ಧಾಂತ ಇಲ್ಲ. ಬದಲಾಗಿ ಯಾರ ಜೊತೆಗೂ ಸೇರುತ್ತಾರೆ ಎಂದು ತಿರುಗೇಟು ನೀಡಿದರು. ಜೆಡಿಎಸ್ ಜಾತ್ಯಾತೀತ ಅಲ್ಲ, ಆ ಪದಕ್ಕೆ ಅವಮಾನ ಮಾಡುತ್ತಿದ್ದೀರಿ. ಅದನ್ನು ತೆಗೆದು ಹಾಕಿ ಎಂದು ಹೇಳಿದ್ದೇನೆ ಎಂದು ಇದೇ ಸಂದರ್ಭದಲ್ಲಿ ವಾಗ್ದಾಳಿ ನಡೆಸಿದರು.

ಇತ್ತೀಚೆಗೆ ಕಾರ್ಯಕರ್ತರ ಸಭೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಕೂಡಾ ತ್ಯಾಗದ ಮಾತನ್ನಾಡಿದ್ದರು. ಅವರು ಕೂಡಾ ಕಾಂಗ್ರೆಸ್ ನಾಯಕರ ಉದಾಹರಣೆಯನ್ನು ನೀಡಿ, ಕೆಲವೊಬ್ಬರು ಸಚಿವ ಸ್ಥಾನ ತ್ಯಾಗ ಮಾಡಬೇಕಾಗಿ ಬರಬಹುದು ಎಂದು ಪರೋಕ್ಷವಾಗಿ ಸೂಚನೆ ನೀಡಿದ್ದರು.


### ತ್ಯಾಗದ ಮಾತೇಕೆ?

**ಕೆಪಿಸಿಸಿ ಭಾರತ್ ಜೋಡೋ ಭವನದಲ್ಲಿ ಡಿಸಿಎಂ ಹಾಗೂ ಪಕ್ಷದ ಅಧ್ಯಕ್ಷರಾದ ಡಿಕೆ ಶಿವಕುಮಾರ್ ಅವರು ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಹೆಸರನ್ನು ಪ್ರಸ್ತಾಪ ಮಾಡಿ ತ್ಯಾಗದ ಮಾತನ್ನಾಡಿದ್ದರು. ಅಲ್ಲದೆ, ಪಕ್ಷ ಸೂಚಿಸಿದರೆ ಅಧಿಕಾರ ತ್ಯಾಗಕ್ಕೂ ಸಿದ್ಧರಿರಬೇಕು ಎಂಬ ಅರ್ಥದಲ್ಲಿ ಸೂಚನೆ ಕೊಡುವ ಮೂಲಕ ಸಂಪುಟ ಪುನಾರಚನೆಯ ಸುಳಿವನ್ನು ನೀಡಿದ್ದರು. ಇದರ ಬೆನ್ನಲ್ಲೇ ಭಾರತ್ ಜೋಡೋ ಭವನದಲ್ಲಿ ನಡೆದಿದ್ದ ಬೆಳಗಾವಿ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ಕೂಡಾ ತ್ಯಾಗದ ಮಾತನ್ನಾಡಿದ್ದರು.**

**ಬಿಜೆಪಿಯವರು ಹೊರತಾಗಿ ಈ ದೇಶ ಉಳಿಸಲು, ಸಂವಿಧಾನ ರಕ್ಷಿಸಲು, ಗಾಂಧಿಜಿ ಅವರ ಆಚಾರ ವಿಚಾರ ಪ್ರಚಾರ ಮಾಡುವ ಇಚ್ಛೆ ಇರುವ ಯಾರು ಬೇಕಾದರೂ ಸಮಾವೇಶಕ್ಕೆ ಆಗಮಿಸಬಹುದು ಎಂದು ಕೆಪಿಸಿಸಿ ಅಧ್ಯಕ್ಷರು ಹೇಳಿದ್ದರು. ಡಿಸಿಎಂ, ಬಿಜೆಪಿಯವರು ಬರುವುದು ಬೇಡ ಎಂದಿದ್ದರೂ, ಅಧಿಕೃತವಾಗಿ ಬಿಜೆಪಿ ಶಾಸಕರಾಗಿಯೇ ಇನ್ನೂ ಉಳಿದಿರುವ ಎಸ್.ಟಿ.ಸೋಮಶೇಖರ್ ಬೆಳಗಾವಿ ಸಭೆಯಲ್ಲಿ ಕಾಣಿಸಿಕೊಂಡಿದ್ದಾರೆ.**

### ನಾವು ಗಾಂಧಿ ವಂಶಸ್ಥರು, ಬಿಜೆಪಿಯವರು ಗೋಡ್ಸೆ ವಂಶಸ್ಥರು

ಅಂಬೇಡ್ಕರ್, ಗಾಂಧಿ, ನೆಹರೂ ಮತ್ತು ಕಾಂಗ್ರೆಸ್ಸಿನ ಹೋರಾಟದ ಚರಿತ್ರೆಯನ್ನು ನಾವು ಮುಂದಿನ ಪೀಳಿಗೆಗೆ ಅರ್ಥ ಮಾಡಿಸಬೇಕಿದೆ. ನಾವು ಗಾಂಧಿ ವಂಶಸ್ಥರು ಅವರು ಗೋಡ್ಸೆ ವಂಶಸ್ಥರು. ಬಿಜೆಪಿ ಮತ್ತು ಕಾಂಗ್ರೆಸ್ಸಿನ ಈ ಸೈದ್ಧಾಂತಿಕ ವ್ಯತ್ಯಾಸವನ್ನು ಇವತ್ತಿನ ಯುವ ಪೀಳಿಗೆಗೆ ಅರ್ಥೈಸಬೇಕಿದೆ ಎಂದು ಸಿಎಂ ಸಿದ್ದರಾಮಯ್ಯ ಅವರು ವಾಗ್ದಾಳಿ ನಡೆಸಿದರು. ದೇಶದ ಸ್ವಾತಂತ್ರ್ಯ ಹೋರಾಟ, ದೇಶದ ಸ್ವಾತಂತ್ರ್ಯ ಮತ್ತು ಸಂವಿಧಾನದ ಬಗ್ಗೆ ಗೌರವ ಇರುವ ಎಲ್ಲಾರಿಗೂ ಸಮಾವೇಷಕ್ಕೆ ಸ್ವಾಗತ ಎಂದ ಮುಖ್ಯಮಂತ್ರಿಗಳು ಆರ್‌ಎಸ್‌ಎಸ್ ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸದೆ ದೇಶಕ್ಕೆ ದ್ರೋಹ ಬಗೆದ ಚರಿತ್ರೆಯನ್ನು ಸಭೆಯಲ್ಲಿ ಸ್ಮರಿಸಿದರು. ಕಾಂಗ್ರೆಸ್ ಪಕ್ಷ ಹೋರಾಟ, ತ್ಯಾಗ, ಬಲಿದಾನಗಳಿಂದ ಕಟ್ಟಿದ್ದಾಗಿದೆ. ಇಂದಿರಾಗಾಂಧಿ ಮತ್ತು ರಾಜೀವ್ ಗಾಂಧಿ ದೇಶಕ್ಕಾಗಿ ಹುತಾತ್ಮರಾದರು. ಸೋನಿಯಾಗಾಂಧಿ ಮತ್ತು ರಾಹುಲ್ ಗಾಂಧಿ ಅವರು ತಮ್ಮ ಪಾಲಿಗೆ ಒದಗಿ ಬಂದಿದ್ದ ಪ್ರಧಾನಿ ಹುದ್ದೆಯನ್ನು ತ್ಯಾಗ ಮಾಡಿ ಮನಮೋಹನ್ ಸಿಂಗ್ ಅವರನ್ನು ಪ್ರಧಾನಿ ಮಾಡಿದರು. ಈ ಆದರ್ಶಗಳ ಮಾರ್ಗದಲ್ಲಿ ನಾವು ಮುನ್ನಡೆಯೋಣ ಎಂದರು.



**ಕಾರ್ಯಕರ್ತರಿಗೆ ಸಿಹಿ ಸುದ್ದಿ ಕೊಟ್ಟ ಸಿದ್ದರಾಮಯ್ಯ:** ಇನ್ನು ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಗೆ ಸಿಎಂ ಸಿದ್ದರಾಮಯ್ಯ ಸಿಹಿ ಸುದ್ದಿಯನ್ನು ನೀಡಿದರು. ಇತ್ತೀಚೆಗೆ ನಡೆದ ಮೂರು ಉಪ ಚುನಾವಣೆಯಲ್ಲಿ ನಾವು ಗೆಲುವು ಸಾಧಿಸಿದ್ದೇವೆ. ಇದಕ್ಕೆ ಪಕ್ಷದ ಕಾರ್ಯಕರ್ತರು, ಮುಖಂಡರ ಪ್ರಯತ್ನ ಇದೆ ಎಂದರು. ಯಾರಿಗೆ ಜವಾಬ್ದಾರಿ ನೀಡಲಾಗಿತ್ತು. ಅವರು ಚುನಾವಣೆಯ ಗೆಲುವಿಗೆ ಶ್ರಮಿಸಿದ್ದಾರೆ. ಅದಕ್ಕಾಗಿ ಸರ್ಕಾರ ಮತ್ತು ಪಕ್ಷದ ವತಿಯಿಂದ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು. ಕಾರ್ಯಕರ್ತರಿಗೆ ಅಧಿಕಾರದ ಅವಕಾಶವನ್ನು ನೀಡುವ ಹಿನ್ನಲೆಯಲ್ಲಿ ಡಾ. ಜಿ ಪರಮೇಶ್ವರ್ ಅವರ ನೇತೃತ್ವದಲ್ಲಿ ಸಮಿತಿ ರಚನೆ ಮಾಡಲಾಗಿತ್ತು. ಈ ಸಮಿತಿ ಪಕ್ಷದ ಕಾರ್ಯಕರ್ತರಿಗೆ ನಿಗಮ ಮಂಡಳಿಗಳಲ್ಲಿ ನಿರ್ದೇಶಕ ಸ್ಥಾನ ನೀಡುವ ಬಗ್ಗೆ ವರದಿ ನೀಡಿದೆ. ಅಲ್ಲದೆ, ಇನ್ನು ಬಾಕಿ ಇರುವ ನಿಗಮ- ಮಂಡಳಿಗಳಿಗೆ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.





## ಮೀಸಲಾತಿಗೆ ಈ ಸರ್ಕಾರದ ಮುಂದೆ ಹೋಗುವುದಿಲ್ಲ

• ಉದಯವಾಹಿನಿ, ದಾವಣಗೆರೆ

ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿಗೆ ಇನ್ನು ಮುಂದೆ ಈ ಸರ್ಕಾರದ ಮುಂದೆ ಹೋಗುವುದಿಲ್ಲ. ಮೀಸಲಾತಿ ಕೇಳುವುದೂ ಇಲ್ಲ ಎಂದು ಕೂಡಲ ಸಂಗಮದ ಲಿಂಗಾಯತ ಪಂಚಮಸಾಲಿ ಜಗದ್ಗುರು ಶ್ರೀ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ತಿಳಿಸಿದರು. ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದ ಇತಿಹಾಸದಲ್ಲಿ ಲಿಂಗಾಯತ ಸಮಾಜದವರ ಮೇಲೆ ಯಾರೂ ಕೂಡಾ ಈ ರೀತಿಯ ಹಲ್ಲೆ ಮಾಡಿರಲಿಲ್ಲ. ಹಾಗಾಗಿ ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ಕೇಳಲು ಸರ್ಕಾರದ ಮುಂದೆ ಹೋಗುವುದಿಲ್ಲ. ಬದಲಿಗೆ ಜನರ ಮುಂದೆ ಹೋಗುವುದಾಗಿ ತಿಳಿಸಿದರು. ಮೀಸಲಾತಿಗೆ ಒತ್ತಾಯಿಸಿ ಬೆಳಗಾವಿಯ ಸುವರ್ಣ ಸೌಧದ ಮುಂದೆ ಶಾಂತಿಯುತ ಹೋರಾಟ ನಡೆಸಿದ ಸಂದರ್ಭದಲ್ಲಿ ಸರ್ಕಾರ ಲಿಂಗಾಯತರ ಮೇಲೆ ಮಾರಣಾಂತಿಕ ಹಲ್ಲೆಗೆ ಕಾರಣವಾಗಿದೆ. ನಮ್ಮ ಹೋರಾಟವನ್ನು ಹತ್ತಿಕ್ಕಲು ಉದ್ದೇಶಪೂರ್ವಕವಾಗಿ ಪೊಲೀಸರಿಂದ ಹಲ್ಲೆ ನಡೆಸಲಾಗಿದೆ. ಘಟನೆ ನಡೆದ ನಂತರ ಈವರೆಗೆ ಕ್ಷಮಾಪಣೆ ಸಹ ಕೇಳಿಲ್ಲ. ಹಲ್ಲೆ ಮಾಡಿದಂತಹವರ ಮೇಲೆ ಯಾವುದೇ ಕ್ರಮವೂ ಆಗಿಲ್ಲ ಎಂದು ತಿಳಿಸಿದರು.

20 ವರ್ಷಗಳ ಕಾಲ ಇವರೇ ಮುಖ್ಯಮಂತ್ರಿಯಾಗಿ ಇರುವುದಿಲ್ಲ. ದೇವರ ದಯೆಯಿಂದ ಮುಂದೆ ಬೇರೆ ಮುಖ್ಯಮಂತ್ರಿಗಳು ಬರುತ್ತಾರೆ. ಅವರಲ್ಲಿ ನ್ಯಾಯ ಕೇಳುತ್ತೇವೆ. ಮತ್ತೆ ಈ ಸರ್ಕಾರದ ಮುಂದೆ ಹೋಗಿ ಮೀಸಲಾತಿ ಬಗ್ಗೆ ಹೇಳುವುದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಈಗಾಗಲೇ ಕೂಡಲ ಸಂಗಮದಿಂದ ಪ್ರತಿಜ್ಞಾ ಕ್ರಾಂತಿ ಅಭಿಯಾನ ನಡೆಸಲಾಗಿದೆ. 224 ವಿಧಾನಸಭಾ ಕ್ಷೇತ್ರದ ಪ್ರತಿ ಹಳ್ಳಿ ಹಳ್ಳಿಗೆ ತೆರಳಿ, ರಾಜ್ಯ ಸರ್ಕಾರ ಸಮಾಜಕ್ಕೆ ಮಾಡಿರುವ ಅನ್ಯಾಯದ ಬಗ್ಗೆ ಜನರಿಗೆ ತಿಳಿಸುತ್ತೇವೆ. ಲಾಠಿ, ಬೂಟಿನ ಏಟು ಕೊಟ್ಟವರಿಗೆ ಏನು ಉತ್ತರ ಕೊಡುತ್ತೀರಿ, ಮೀಸಲಾತಿ ಕೊಡುತ್ತೇವೆ ಎನ್ನುವವರಿಗೆ ಏನು ಉತ್ತರ ಕೊಡುತ್ತೀರಿ ಎಂದು ಜನರ ಮುಂದೆ ಇಡುತ್ತೇವೆ ಎಂದು ತಿಳಿಸಿದರು.



## ರಾಜ್ಯಾಧ್ಯಕ್ಷ ಚುನಾವಣೆಗೆ ಟ್ವಿಸ್ಟ್
### ಹೈಕಮಾಂಡ್ ಮುಂದೆ ಯತ್ನಾಳ್ ಹೊಸ ಡಿಮ್ಯಾಂಡ್!

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಬಿಜೆಪಿಯಲ್ಲಿ ಬಣ ರಾಜಕೀಯ ಚರ್ಚೆ ಜೋರಾಗಿದೆ. ಬಿಜೆಪಿಯಲ್ಲಿ ದಿನಕ್ಕೊಂದು ಬಣಗಳು ಸೃಷ್ಟಿಯಾಗುತ್ತಿದ್ದು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ವಿರುದ್ಧ ಬಿಜೆಪಿಯ ಘಟಾನುಘಟಿ ನಾಯಕರು ತಿರುಗಿ ಬಿದ್ದಿದ್ದಾರೆ. ಆದರೆ ಬಿಜೆಪಿ ಹೈಕಮಾಂಡ್ ಸಹಕಾರ ಇದಿದ್ದರಿಂದ ಇಷ್ಟು ದಿನಗಳ ಕಾಲ ಕರ್ನಾಟಕ ಬಿಜೆಪಿಯ ರಾಜ್ಯಾಧ್ಯಕ್ಷರಾಗಿ ಮುಂದುವರಿದಿದ್ದರು. ಆದರೆ ಈಚೆಗೆ ಕರ್ನಾಟಕದ ಮೂರು ವಿಧಾನಸಭೆ ಕ್ಷೇತ್ರಗಳಲ್ಲಿ ನಡೆದ ಉಪ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಪಕ್ಷಕ್ಕೆ ಹಿನ್ನಡೆಯಾದ ಹಿನ್ನಲೆಯಲ್ಲಿ ರಾಜ್ಯಾಧ್ಯಕ್ಷ ಸ್ಥಾನ ಬದಲಾವಣೆ ಚರ್ಚೆ ಕಾವು ಪಡೆದುಕೊಂಡಿದೆ.

ಮುಂದುವರಿದು ಬಿಜೆಪಿಯಲ್ಲಿ ಬಣ ರಾಜಕೀಯ ಹಾಗೂ ಬಿ.ವೈ ವಿಜಯೇಂದ್ರ ವಿರುದ್ಧ ಆರೋಪಗಳು, ವೈಮನಸ್ಸು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಬಿಜೆಪಿಯ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸಲು ಸಿದ್ಧತೆ ಶುರುವಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ಬಹುತೇಕ ಫಿಕ್ಸ್ ಅಂತಲೇ ಹೇಳಲಾಗುತ್ತಿದ್ದು, ಕರ್ನಾಟಕ ಬಿಜೆಪಿಯಲ್ಲಿ ಬಣ ರಾಜಕೀಯ ದಿನದಿಂದ ದಿನಕ್ಕೆ ಹೆಚ್ಚಳವಾಗಿದ್ದು. ಬೀದಿ ಜಗಳಕ್ಕೆ ಬಂದು ನಿಂತಿದೆ. ಮೊದಲು ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ ವಿಜಯೇಂದ್ರ ಅವರ ವಿರುದ್ಧ ಪಾಟೀಲ ಯತ್ನಾಳ್ ಅವರು ಮಾತ್ರ ತಿರುಗಿ ಬಿದ್ದಿದ್ದರು. ಆದರೆ ಇದೀಗ ವಿಜಯೇಂದ್ರ ಅವರ ವಿರುದ್ಧ ಹಲವರು ತಿರುಗಿ ಬಿದ್ದಿದ್ದಾರೆ.



# ಇಂದಿನ ಕಾಂಗ್ರೆಸ್ಸಿಗರ ಸಮಾವೇಶಕ್ಕೆ ಬಳಸಿದ ಹಣ ಯಾವುದು?
### ಕಾಂಗ್ರೆಸ್ಸಿನ ಖಾತೆಯಿಂದ ಖರ್ಚಾದ ಹಣವೇ? ಅಥವಾ ನೀವು ಸರಕಾರದ ಬೊಕ್ಕಸದಿಂದ ಖರ್ಚು ಮಾಡಿದ್ದೀರಾ ಎಂಬುದನ್ನು ತಿಳಿಸಿ

• ಉದಯವಾಹಿನಿ, ಬೆಂಗಳೂರು


ಕಾಂಗ್ರೆಸ್ಸಿಗರು ಇಂದಿನ ಸಮಾವೇಶಕ್ಕೆ ಬಳಸಿದ ಹಣ ಯಾವುದು? ಅದರ ಲೆಕ್ಕ ಕೊಡಬೇಕು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಗ್ರಹಿಸಿದ್ದಾರೆ. ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು. ಅದು ಕಾಂಗ್ರೆಸ್ಸಿನ ಖಾತೆಯಿಂದ ಖರ್ಚಾದ ಹಣವೇ? ಅಥವಾ ನೀವು ಸರಕಾರದ ಬೊಕ್ಕಸದಿಂದ ಖರ್ಚು ಮಾಡಿದ್ದೀರಾ ಎಂಬುದನ್ನು ಜನರಿಗೆ ತಿಳಿಸಬೇಕು ಎಂದು ಒತ್ತಾಯಿಸಿದರು. ಸುವರ್ಣಸೌಧದ ಮುಂದೆ ಗಾಂಧಿ ಪ್ರತಿಮೆಯನ್ನು ಇವತ್ತು ಪ್ರತಿಷ್ಠಾಪನೆ ಮಾಡಿದ್ದಾರೆ. ಸರಕಾರಿ ಬೊಕ್ಕಸದಿಂದ ಗಾಂಧಿ ಪ್ರತಿಮೆ ಪ್ರತಿಷ್ಠಾಪನೆಗೆ ನಮ್ಮ ವಿರೋಧವಿಲ್ಲ ಎಂದು ತಿಳಿಸಿದರು.

ಇದು ಮಹಾತ್ಮ ಗಾಂಧಿಯವರ ಕಾಲದ ಕಾಂಗ್ರೆಸ್ ಪಕ್ಷ ಅಲ್ಲ, ಮಹಾತ್ಮ ಗಾಂಧಿ ಸಿದ್ಧಾಂತಕ್ಕೂ ಇವತ್ತಿನ ಗಾಂಧಿಗಳ ಕಾಂಗ್ರೆಸ್ಸಿನ ಸಿದ್ಧಾಂತಕ್ಕೂ ಅಜಗಜಾಂತರವಿದೆ. ಅವತ್ತಿನ ಗಾಂಧಿ ಕಾಂಗ್ರೆಸ್ ಪಕ್ಷಕ್ಕೆ ಯಾರು ಮದ್ಯಪಾನ ಮಾಡುತ್ತಿದ್ದರೋ ಅವರು ಸದಸ್ಯರಾಗುವ ಹಾಗಿರಲಿಲ್ಲ; ಇವತ್ತಿನ ಕಾಂಗ್ರೆಸ್ಸಿನವರು ರಾತ್ರಿಯಿಡೀ ಕುಡಿದು ಮಲಗಿದ್ದು, ಬೆಳಿಗ್ಗೆ ಸಮಾವೇಶ ಮಾಡುತ್ತಾರೆ ಎಂದು ಟೀಕಿಸಿದರು.

**ಅಟ್ಟಾಡಿಸಿ ಕಾಂಗ್ರೆಸ್ಸಿನಿಂದ ಹೊರಕ್ಕೆ ಓಡಿಸುತ್ತಿದ್ದರು**

ಎಲ್ಲಾರೂ ಖಾದಿಧಾರಿಗಳಾಗಿ ಇರಬೇಕು ಎಂಬುದು ಹಳೆ ಕಾಂಗ್ರೆಸ್ಸಿನ ಸಿದ್ಧಾಂತ. ಇವತ್ತು ಶೇ 5 – 10 ರಷ್ಟು ಖಾದಿಧಾರಿಗಳೂ ಅಲ್ಲಿ ಸಿಗುವುದಿಲ್ಲ ಎಂದು ವ್ಯಂಗ್ಯವಾಡಿದರು. ಮಹಾತ್ಮ ಗಾಂಧಿಯವರು ಈ ಕಾಲದಲ್ಲಿ ಇದ್ದಿದ್ದರೆ, ಈ ಕಾಂಗ್ರೆಸ್ಸಿನವರನ್ನು ಅಟ್ಟಾಡಿಸಿ, ಕಾಂಗ್ರೆಸ್ಸಿನಿಂದ ಹೊರಕ್ಕೆ ಓಡಿಸುತ್ತಿದ್ದರು ಎಂದು ತಿಳಿಸಿದರು. ಕಾಂಗ್ರೆಸ್ ಸುಡುವ ಮನೆ ಎಂದಿದ್ದ ಡಾ.ಅಂಬೇಡ್ಕರರು ಇಂಥ ಪರಿಸ್ಥಿತಿಯಲ್ಲಿ ಇಲ್ಲಿ ಕಾಂಗ್ರೆಸ್ಸಿನ ಒಂದು ಸಮಾವೇಶ ನಡೆಯುತ್ತಿದೆ. ಇದು ಗಾಂಧಿ ತತ್ವಗಳ ವಿರೋಧಿ ಕಾಂಗ್ರೆಸ್ಸಿನ ಸಮಾವೇಶ ಎಂದ ಅವರು, ಜೈ ಭೀಮ್ ಎಂದಿದ್ದಾರೆ.





### ಡ್ರೈವರ್ ನಿದ್ದೆಗೆ ಜಾರಿದ್ದ- ಇವುಗಳಲ್ಲಿ ಯಾವುದು ಸತ್ಯ?

**ಸೆಕ್ಯುರಿಟಿ ಬಿಟ್ಟು ಪ್ರಯಾಣಿಸಿದ್ದೇಕೆ? ಘಟನೆ ನಡೆದಿದ್ದು ಹೇಗೆಂದು ಜನರಿಗೆ ತಿಳಿಸಿ ಎಂದು ಒತ್ತಾಯಿಸಿದರು. ಚಾಲಕ ಎಲ್ಲಿದ್ದಾರೆಂದು ತಿಳಿಸಲು ಆಗ್ರಹಿಸಿದರು. ನಾಯಿ ಅಡ್ಡ ಬಂದದ್ದು, ಹಿಂದಿನಿಂದ ಗುದ್ದಿ ಹೋದುದು, ಡ್ರೈವರ್ ನಿದ್ದೆಗೆ ಜಾರಿದ್ದ- ಇವುಗಳಲ್ಲಿ ಯಾವುದು ಸತ್ಯ? ಎಸ್ಕಾರ್ಟ್ ಯಾಕೆ ಇರಲಿಲ್ಲ ಎಂದು ಕೇಳಿದರು. ಬೆಳಗಾವಿಗೆ ಕರೆನ್ಸಿ ಲೋಡ್ ತೆಗೆದುಕೊಂಡು ಹೋಗುತ್ತಿದ್ದರೆಂದು ಜನರು ಹೇಳುತ್ತಾರೆ. ಇದು ಮನೆ ಮಾತಾಗಿದೆ. ದೊಡ್ಡ ಮೊತ್ತದ ಹಣ ಆ ಕಾರಿನಲ್ಲಿ ಸಾಗಿಸುತ್ತಿದ್ದರೆನ್ನಲಾಗಿದೆ. ದೂರು ಕೊಡದೆ ಆ ಕಾರನ್ನು ಲಿಫ್ಟ್ ಮಾಡಿ ಒಯ್ಯದ್ದು ಯಾಕೆ? ಎಂದು ಪ್ರಶ್ನಿಸಿದರು. ಕಾರಿನಲ್ಲಿದ್ದ ವಸ್ತುಗಳ ಕುರಿತು ಸರಕಾರ ಉತ್ತರಿಸಬೇಕು ಎಂದು ಒತ್ತಾಯಿಸಿದರು.**

ಬಾಬಾ ಸಾಹೇಬ ಅಂಬೇಡ್ಕರರು ಯಾವತ್ತಾದರೂ ಕಾಂಗ್ರೆಸ್ಸಿನವರಾಗಿದ್ದರೇ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಸುಡುವ ಮನೆ ಎಂದವರು, ಕಾಂಗ್ರೆಸ್ಸಿನ ಮೊದಲ ಕ್ಯಾಬಿನೆಟ್‌ನಿಂದ ರಾಜೀನಾಮೆ ಕೊಟ್ಟು ಹೊರಕ್ಕೆ ಹೋದವರು ಬಾಬಾ ಸಾಹೇಬ ಅಂಬೇಡ್ಕರರು ಎಂದು ಗಮನ ಸೆಳೆದರು. ಅಂಬೇಡ್ಕರರ ತತ್ವಗಳ ವಿರೋಧಿ, ಅವರನ್ನು ಜೀವಿತಾವಧಿಯಲ್ಲಿ ಅವಮಾನಿಸಿದ್ದ, ಚುನಾವಣೆಗಳಲ್ಲಿ ಸೋಲಿಸಿದ್ದ ಅವರು ಗೆದ್ದ ಸ್ಥಳವನ್ನು ಪಾಕಿಸ್ತಾನಕ್ಕೆ ಬಿಟ್ಟು ಕೊಟ್ಟ ಕಾಂಗ್ರೆಸ್ ಪಕ್ಷವು ಇವತ್ತು ಮತಬ್ಯಾಂಕಿಗಾಗಿ ಈ ನಾಟಕ ಮಾಡುತ್ತಿದೆ. ದಲಿತ ಸಮುದಾಯಗಳನ್ನು ಸೆಳೆಯಲು ಜೈ ಭೀಮ್ ಘೋಷಣೆ ಮಾಡಿದೆ ಎಂದು ಟೀಕಿಸಿದರು.

ಸಂವಿಧಾನಕ್ಕೆ ದ್ರೋಹ ಮಾಡಿದ್ದರೆ, ಅನ್ಯಾಯ ಮಾಡಿದ್ದರೆ ಅದು ಕಾಂಗ್ರೆಸ್ ಪಕ್ಷ ಎಂದು ತಿಳಿಸಿದ ಅವರು, ತಮ್ಮ ಸ್ಥಾನಮಾನಗಳನ್ನು ಉಳಿಸಿಕೊಳ್ಳಲು ಬಾಬಾ ಸಾಹೇಬ ಅಂಬೇಡ್ಕರರು ಬರೆದ ಸಂವಿಧಾನವನ್ನು ತಿರುಚಿ, 1975–76 ರಲ್ಲಿ ದೇಶದ ಮೇಲೆ ತುರ್ತು ಪರಿಸ್ಥಿತಿಯನ್ನು ಹೇರಿ ಸಂವಿಧಾನಕ್ಕೆ ಘೋರ ಅಪರಾಧ ಮಾಡಿದ ಪಕ್ಷ ಕಾಂಗ್ರೆಸ್ ಎಂದು ಆಕ್ಷೇಪಿಸಿದರು.

ಕಳೆದ ವಾರ ಮಾನ್ಯ ಸಚಿವ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಪ್ರಯಾಣ ಮಾಡುತ್ತಿದ್ದ ಕಪ್ಪು ಕಾರು ಅಪಘಾತಕ್ಕೆ ಈಡಾಗಿದೆ. ಆ ಕಾರಿನಲ್ಲಿ ಯಾರ್ಯಾರು ಇದ್ದರು? ನೀವು ಸಚಿವರಾಗಿ ಸರಕಾರಿ ಕಾರಿದ್ದರೂ, ಸೆಕ್ಯುರಿಟಿ, ಎಸ್ಕಾರ್ಟ್ ಬಿಟ್ಟು ಯಾಕೆ ಹೋಗಿದ್ದೀರಿ? ಪ್ರವಾಸ ಯೋಜನೆ (ಟಿಪಿ) ಯಾಕಿಲ್ಲ? ಎಂದು ಕೇಳಿದರು. ಅವರಿಗೆ ಆದ ಅಪಘಾತ ನೋವಿಗೆ ವಿಷಾದ, ಬೇಸರ ವ್ಯಕ್ತಪಡಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹8,123 /Gram24ct ₹7,450/Gram22ct ಬೆಳ್ಳಿ: ₹96.50/Gram



**ಸಿದ್ಧಸೂಕ್ತಿ**

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ನಿಷೇಕಾದಿಸ್ಮಶಾನಾಂತೋ

ಮಂತ್ರೈರ್ಯಸ್ಯೋದಿತೋ ವಿಧಿಃ
ತಸ್ಯ ಶಾಸ್ತ್ರೇಧಿಕಾರೋಸ್ಮಿನ್
ಜ್ಞೇಯೋ ನಾನ್ಯಸ್ಯ ಕಸ್ಯಚಿತ್.

ಮನುಸ್ಮೃತಿಯ ಎರಡನೇ ಅಧ್ಯಾಯದ ಹದಿನಾರನೆಯ ಶ್ಲೋಕ. ನಿಷೇಕ = ಗರ್ಭಾದಾನ. ಸ್ಮಶಾನ = ಅಂತ್ಯಕ್ರಿಯೆ. ಗರ್ಭಾದಾನಾದಿ ಅಂತ್ಯಕ್ರಿಯೆಯವರೆಗೆ ಹದಿನಾರು ವೈದಿಕ ಸಂಸ್ಕಾರಕಗಳನ್ನು ಹೇಳಲಾಗಿದೆ. ದೈವಾನುಗ್ರಹಕ್ಕಾಗಿ ಗುರು ದೈವತಾ ಪ್ರೀತಿಗಾಗಿ ಪ್ರತಿಯೊಬ್ಬರಿಗೂ ಈ ಸಂಸ್ಕಾರಕಗಳನ್ನು ಹೇಳಲಾಗಿದ್ದು ಇವುಗಳ ಅನುಸರಣೆ ಉತ್ತಮ ಸ್ವಭಾವ ವರ್ಧಿಸುವುದು. ಬ್ರಾಹ್ಮಣ ಕ್ಷತ್ರಿಯ ಹಾಗೂ ವೈಶ್ಯರಿಗೆ ಈ ಸಂಸ್ಕಾರಗಳನ್ನು ವೇದಮಂತ್ರಗಳ ಪೂರ್ವಕವಾಗಿ ಹೇಳಲಾಗಿದ್ದು ಶೂದ್ರನಿಗೆ ಇವುಗಳನ್ನು ವೇದಮಂತ್ರ ರಹಿತವಾಗಿ ಹೇಳಲಾಗಿದೆ. ಇದರರ್ಥ ಶೂದ್ರನಿಗೆ ಈ ಸಂಸ್ಕಾರಗಳನ್ನು ಮಾಡುವಾಗ ವೇದಮಂತ್ರಗಳನ್ನು ಹೇಳುವಂತಿಲ್ಲ ಕೇಳುವಂತಿಲ್ಲ. ಈ ವ್ಯವಸ್ಥೆಗೆ ಚ್ಯುತಿ ಬಾರದಂತೆ ಬ್ರಾಹ್ಮಣ ಕ್ಷತ್ರಿಯ ಹಾಗೂ ವೈಶ್ಯರು ಮಾತ್ರ ಈ ಮನುಸ್ಮೃತಿ ಮುಂತಾದ ಧರ್ಮಶಾಸ್ತ್ರದ ಅಧ್ಯಯನ ಮಾಡಲು, ಓದಲು ಹಾಗೂ ಕೇಳಲು ಅರ್ಹರು ಹೊರತು ಶೂದ್ರರಿಗೆ ಈ ಧರ್ಮಶಾಸ್ತ್ರವನ್ನು ಓದುವ ಕೇಳುವ ಅಧಿಕಾರವಿಲ್ಲ. ಶೂದ್ರನನ್ನು ಹಿಂದೂ ಎಂದು ಪರಿಗಣಿಸಿ, ಆತ ತನ್ನ ಧರ್ಮದ ಸ್ವರೂಪ ತಿಳಿಸುವ ಧರ್ಮಶಾಸ್ತ್ರವನ್ನು ಓದಬಾರದು ಕೇಳಬಾರದೆಂದು ದೂರಿಡುವುದಾದರೆ ಶೂದ್ರ ಹಿಂದೂ ಏಕಾಗಿರಬೇಕು?

# ಬಿಜೆಪಿ ನಾಯಕ ಛಲವಾದಿ ನಾರಾಯಣ ಸ್ವಾಮಿ ಗಂಭೀರ ಆರೋಪ!

## ಲಕ್ಷ್ಮೀ ಹೆಬ್ಬಾಳ್ಕರ್ ಪ್ರಯಾಣಿಸುತ್ತಿದ್ದ ಕಾರು ಅಪಘಾತ ಕ್ಕೀಡಾಗಿ ಅವರ ಬೆನ್ನಿಗೆ ಗಾಯವಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ

• ಉದಯವಾಹಿನಿ, ಬೆಂಗಳೂರು

ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಯಾಣಿಸುತ್ತಿದ್ದ ಕಾರು ಅಪಘಾತ ಕ್ಕೀಡಾಗಿ ಅವರ ಬೆನ್ನಿಗೆ ಗಾಯವಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇತ್ತ ಲಕ್ಷ್ಮೀ ಹೆಬ್ಬಾಳ್ಕರ್ ಆಸ್ಪತ್ರೆಗೆ ದಾಖಲಾದಾಗಿನಿಂದ ಹಲವು ಕಾಂಗ್ರೆಸ್ ನಾಯಕರು ನೋಡಲು ಬರುತ್ತಲೇ ಇದ್ದಾರೆ. .ಅದರಾಚೆ ಅದ್ರೆ ಇದೀಗ ಲಕ್ಷ್ಮೀ ಹೆಬ್ಬಾಳ್ಕರ್ ಅಪಘಾತ ಪ್ರಕರಣಕ್ಕೆ ಸಂಬಂಧಿಸಿ ಬಿಗ್ ಟ್ವಿಸ್ಟ್ ಒಂದು ಸಿಕ್ಕಿದೆ.

ಬಿಜೆಪಿ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರು ನೀಡಿರುವ ಹೇಳಿಕೆ ಸದ್ಯ ಭಾರೀ ಕುತೂಹಲ ಉಂಟುಮಾಡಿದೆ. ಅತ್ತ ಕಾಂಗ್ರೆಸ್ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಪಘಾತದಿಂದ ಚಿಕಿತ್ಸೆ ಪಡೆಯುತ್ತಿದ್ದರೆ, ಇತ್ತ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರು ಈ ಪ್ರಕರಣಕ್ಕೆ ಸಂಬಂಧಿಸಿ ಬಿಗ್ ಟ್ವಿಸ್ಟ್ ನೀಡಿದ್ದಾರೆ. ಅಪಘಾತಕ್ಕೆ ಸಂಬಂಧಿಸಿದ ಕೆಲವು ಪ್ರಶ್ನೆಗಳನ್ನು ಮುಂದಿಟ್ಟಿದ್ದು, ಇದು ಮತ್ತಷ್ಟು ಕಳವಳಕ್ಕೆ ಕಾರಣವಾಗಿದೆ.

ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಇದೀಗ ಲಕ್ಷ್ಮೀ ಹೆಬ್ಬಾಳ್ಕರ್ ಕಾರು ಅಪಘಾತದ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದಾರೆ. ಅಲ್ಲದೇ ಹೆಬ್ಬಾಳ್ಕರ್


ಉದಯವಾಹಿನಿ ಚಿತ್ರ



ಅವರು ಬೇಗ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ. ಬಳಿಕ ಅಪಘಾತದ ಬಗ್ಗೆ ಮಾತನಾಡಿದ ನಾರಾಯಣಸ್ವಾಮಿ, ಲಕ್ಷ್ಮೀ ಹೆಬ್ಬಾಳ್ಕರ್ ಅಪಘಾತವಾದಾಗ ಎಲ್ಲಾ ಸ್ಕೋರ್ಟ್ ಬಿಟ್ಟು ಯಾಕ್ ಹೋಗಿದ್ರು? ಆ ಡ್ರೈವರ್ ಯಾರು? ಎಲ್ಲಿದ್ದಾನೆ? ಬಹಿರಂಗಪಡಿಸಿ ಎಂದು ಆಗ್ರಹಿಸಿದ್ದಾರೆ. ಇನ್ನು ನಾಯಿ ಎದುರು ಬಂದಾಗ ಈ ಘಟನೆ ಆಯ್ತು ಅಂತೀರಿ? ಅಲ್ಲದೇ ಹಿಂದಿನಿಂದ ಬಂದು ಗುದ್ದಿದ್ದಾರೆ ಅಂದಿದ್ದೀರಿ. ಹಾಗಾದ್ರೆ ಇದರಲ್ಲಿ ಯಾವುದು ಸತ್ಯ? ಎಂದು ಪ್ರಶ್ನೆ ಮಾಡಿದ್ದಾರೆ. ಬಹಳಷ್ಟು ದೊಡ್ಡ ಮೊತ್ತದ ಹಣ ಆ ಕಾರಿನಲ್ಲಿ ಸಾಗಿಸಲಾಗ್ತಿತ್ತು ಎನ್ನಲಾಗಿದೆ. ಕಂಪ್ಲೆಂಟ್ ಕೂಡ ಲಾಡ್ಜ್ ಆಗಿಲ್ಲ ಅಪಘಾತದ ಬಗ್ಗೆ ಎಫ್ಐಆರ್ ಕೂಡ ದಾಖಲಾಗಿಲ್ಲ, ಯಾಕೆ ಆಗಿಲ್ಲ ಎಂದು ಪ್ರಶ್ನೆ ಮಾಡಿದ್ದಾರೆ.

ಅಷ್ಟಕ್ಕೂ ಪೊಲೀಸ್ ಬೆಂಗಾವಲಿನಲ್ಲೇ ಕಾರ್ ಲಿಫ್ಟ್ ಮಾಡಿದ್ದು ಯಾಕೆ? ಈ ಎಲ್ಲದರ ಬಗ್ಗೆ ಶೀಘ್ರವೇ ತನಿಖೆ ಆಗೋಕು. ಅದೂ ಕೂಡ ಸಿಟ್ಟಿಂಗ್ ಜಡ್ಜ್ ನೇತೃತ್ವದಲ್ಲಿ ತನಿಖೆಯಾಗಬೇಕು. ಇದನ್ನು ತಪ್ಪುದಾರಿಗೆ ಎಳೆಯಬಾರದು. ಅದರಲ್ಲಿ ಯಾರೆಲ್ಲಾ ಪ್ರಯಾಣ ಮಾಡ್ತಿದ್ರು ಅವರನ್ನ ಮಂಪರು ಪರೀಕ್ಷೆಗೆ ಒಳಪಡಿಸಬೇಕು ಎಂದು ಆಗ್ರಹಿಸಿದ್ದಾರೆ. ಇನ್ನು ಕಾರಿನಲ್ಲಿ ಬಹಳ ಮೊತ್ತದ ಬ್ಯಾಗ್ ಇತ್ತೆಂದು ಎನ್ನಲಾಗಿದೆ. ಇದನ್ನು ಯಾಕೆ ಮಹಜರು ಮಾಡಿಲ್ಲ ಎಂದು ಪ್ರಶ್ನೆ ಮಾಡಿದ್ದಾರೆ.

> ಆಸ್ಪತ್ರೆಯಿಂದ ಹೊರ ಬಂದು ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿದ ಪ್ರದೀಪ್ ಈಶ್ವರ್, ಲಕ್ಷ್ಮೀ ಹೆಬ್ಬಾಳ್ಕರ್ ಚೇತರಿಸಿಕೊಳ್ಳುತ್ತಿದ್ದಾರೆ, ಸ್ವಲ್ಪ ಬೆನ್ನು ನೋವಿದೆ, ಲಕ್ಷ್ಮೀ ಹೆಬ್ಬಾಳ್ಕರ್ ಶೀಘ್ರ ಗುಣಮುಖರಾಗಲಿ ಎಂದು ಶುಭ ಹಾರೈಸುವೆ ಎಂದು ಪ್ರತಿಕ್ರಿಯೆ ನೀಡಿದರು.

> ಜನವರಿ 14 ರಂದು ಕಿತ್ತೂರು ಬಳಿ ಕಾರು ಅಪಘಾತದಿಂದ ಹೆಬ್ಬಾಳ್ಕರ್ ಗಾಯಗೊಂಡಿದ್ದರು. ಬೆನ್ನಿನ ಭಾಗಕ್ಕೆ ಗಾಯವಾಗಿದ್ದರಿಂದ ಸಚಿವೆಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ಭೇಟಿ ನೀಡಿದ ಸಿಎಂ ಸಿದ್ದರಾಮಯ್ಯ, ಗೃಹ ಸಚಿವ ಜಿ ಪರಮೇಶ್ವರ್ ಹಾಗೂ ಸಚಿವ ಹೆಚ್‌ಸಿ ಮಹದೇವಪ್ಪ ಸಚಿವೆಯ ಆರೋಗ್ಯ ವಿಚಾರಿಸಿದ್ದಾರೆ. ಸಿಎಂ ಭೇಟಿಗೂ ಮುನ್ನಾ ಚಿಕ್ಕಬಳ್ಳಾಪುರ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಅವರು ಹೆಬ್ಬಾಳ್ಕರ್ ಆರೋಗ್ಯ ವಿಚಾರಿಸಿದ್ದಾರೆ.

## ಟಿಟಿಡಿ ವತಿಯಿಂದ ಧಾರ್ಮಿಕ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಜನವರಿ 21 ರಿಂದ 23ರ ಪ್ರತಿದಿನ ಸಂಜೆ 6-00ಕ್ಕೆ ಶ್ರೀ ವಾಸವಿ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, 7-00ಕ್ಕೆ ಡಾ|| ಗೀತಾ ರಮೇಶ್ ಇವರಿಂದ ದೇವಿ ಭಾಗವತ ಧಾರ್ಮಿಕ ಪ್ರವಚನ.


ಉದಯವಾಹಿನಿ ಚಿತ್ರ

ಜನವರಿ 24, ಶುಕ್ರವಾರ ಸಂಜೆ 6-30ಕ್ಕೆ ಶ್ರೀಮತಿ ಭವಾನಿ ಎಂ. ರಾವ್ ಮತ್ತು ಸಂಗಡಿಗರಿಂದ ಹರಿನಾಮ ಸಂಕೀರ್ತನೆ.

ಸ್ಥಳ : ಶ್ರೀ ಬಾಲಸುಬ್ರಹ್ಮಣ್ಯಸ್ವಾಮಿ ದೇವಸ್ಥಾನ, ಮರಿಯಪ್ಪನಪಾಳ್ಯ ಮೆಟ್ರೋ ನಿಲ್ದಾಣದ ಹತ್ತಿರ, ರಾಜಾಜಿನಗರ, ಬೆಂಗಳೂರು -560010

## ವಕೀಲೆ ಮೇಲೆ ಲೈಂಗಿಕ ದೌರ್ಜನ್ಯ ಆರೋಪ: ಐಟಿ ಅಧಿಕಾರಿ ವಿರುದ್ಧ ಎಫ್‌ಐಆರ್ ದಾಖಲು

• ಉದಯವಾಹಿನಿ, ಬೆಂಗಳೂರು

ವಕೀಲೆಗೆ ಲೈಂಗಿಕ ಕಿರುಕುಳ ನೀಡಿರುವ ಆರೋಪದಲ್ಲಿ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿ ಮೇಲೆ ಎಫ್ಐಆರ್ ದಾಖಲಿಸಲಾಗಿದೆ. ಐಟಿ ಅಧಿಕಾರಿ ವರುಣ್ ಮಲ್ಲಿಕ್ ವಿರುದ್ಧ ಗಂಭೀರ ಆರೋಪ ಕೇಳಿಬಂದಿದೆ. ವರುಣ್ ಮಲ್ಲಿಕ್ ತನ್ನ ಮೇಲೆ ಲೈಂಗಿಕ ದೌರ್ಜನ್ಯವೆಸಗಿದ್ದು, ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿ ವಕೀಲೆಯೊಬ್ಬರು ದೂರು ನೀಡಿದರು. ಈ ಹಿನ್ನೆಲೆಯಲ್ಲಿ ಸಿ.ಕೆ.ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ. ಕ್ರೈಂ ನ್ಯೂಸ್ ದೂರಿನ ಹಿನ್ನೆಲೆಯಲ್ಲಿ ಪೊಲೀಸರು ಆರೋಪಿ ವರುಣ್ ವಲ್ಲಿಕ್ ಗೆ ಎರಡು ನೋಟಿಸ್ ಜಾರಿ ಮಾಡಿದ್ದು ವಿಚಾರಣೆಗೆ ಹಾಜರಾಗುವಂತೆ ಸೂಚಿದ್ದಾರೆ

## 9 ಕೆಜಿಗೂ ಅಧಿಕ ಗಾಂಜಾ ಜಪ್ತಿ, ಓರ್ವ ಆರೋಪಿ ಅರೆಸ್ಟ್!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಬನ್ನೇರುಘಟ್ಟ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದಾರೆ. ಹೌದು ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ ಮನೆಯ ಮೇಲೆ ದಾಳಿ ನಡೆಸಿದ ಪೊಲೀಸರು ಸುಮಾರು 10 ಲಕ್ಷ ಮೌಲ್ಯದ 9 ಕೆಜಿಗೂ ಅಧಿಕ ಗಾಂಜಾ ಜಪ್ತಿ ಮಾಡಿದ್ದು, ಅಲ್ಲದೆ ಓರ್ವ ಆರೋಪಿಯನ್ನು ಅರೆಸ್ಟ್ ಮಾಡಿದ್ದಾರೆ ಬಂಧಿತ ಆರೋಪಿಯನ್ನು ರುಕ್ಸ್‌ನ ಎಂದು ತಿಳಿದುಬಂದಿದ್ದು, ಗಾಂಜಾ ಮಾರುತಿದ್ದ ಖಚಿತ ಮಾಹಿತಿಯ ಮೇರೆಗೆ ಪೊಲೀಸರು ದಾಳಿ ಮಾಡಿದ್ದಾರೆ. ಆರೋಪಿ ರುಕ್ಸಾನ ಬಳಿ 10 ಲಕ್ಷ ಮೌಲ್ಯದ 9 ಕೆಜಿ 850 ಗ್ರಾಮ ಗಾಂಜಾವನ್ನು ಇದೆ ವೇಳೆ ಜಪ್ತಿ ಮಾಡಿಕೊಂಡಿದ್ದಾರೆ. ಕರ್ನಾಟಕ ಬಿಳಹಳ್ಳಿಯ ರುಕ್ಷನಳನ್ನು ಅರೆಸ್ಟ್ ಮಾಡಿದ್ದು ಉಳಿದ ಮೂವರು ಸ್ಥಳದಿಂದ ಪರಾರಿಯಾಗಿದ್ದಾರೆ.

## 2 ನಿಲ್ದಾಣಗಳಲ್ಲಿ ಈ ಮೂಲ ಸೌಕರ್ಯಗಳು ಪ್ರಯಾಣಿಕರಿಗೆ ಮುಕ್ತ

• ಉದಯವಾಹಿನಿ, ಬೆಂಗಳೂರು

ದಿನೇ ದಿನೆ ನಮ್ಮ ಮೆಟ್ರೋ ಜಾಲ ವಿಸ್ತರಣೆ ಆಗುತ್ತಿದೆ. ದೈನಂದಿನ ಪ್ರಮಾಣಿಕರ ಸಂಖ್ಯೆಯಲ್ಲಿ ಏರಿಕೆ ಆಗುತ್ತಿದೆ. ಯಾರೆಲ್ಲ ವಿಧಾನಸೌಧ ಮತ್ತು ಕಬ್ಬನ್ ಉದ್ಯಾನ ಕಡೆಗೆ ಓಡಾಡುತ್ತಿರೋ ಅಂತಹ ಪ್ರಯಾಣಿಕರಿಗೆ ಬೆಂಗಳೂರು ಮೆಟ್ರೋ ರೈಲು ನಿಗಮವು ಮೂಲ ಸೌಕರ್ಯವನ್ನು ಲೋಕಾರ್ಪಣೆ ಮಾಡಿದೆ. ಸಾರ್ವಜನಿಕ ಬಳಕೆಗೆ ತೆರೆಯಲಾಗಿದೆ ಎಂದು ಮಂಗಳವಾರ ಅಧಿಕಾರಿಗಳು ಅಧಿಕೃತ ಮಾಹಿತಿ ನೀಡಿದ್ದಾರೆ. ಬೆಂಗಳೂರಿನಲ್ಲಿ ಅತ್ಯಧಿಕ ಜನರು ಹತ್ತುವ ಮತ್ತು ಓಡಾಡುವ ಮೆಟ್ರೋ ನಿಲ್ದಾಣಗಳಲ್ಲಿ ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣವು ಒಂದು. ಈ ನಿಲ್ದಾಣದ ಜಿ-ಪ್ರವೇಶ ದ್ವಾರವನ್ನು ತೆರೆಯಲಾಗಿದೆ. ನಿಲ್ದಾಣದಿಂದ ಆದಾಯ ತೆರಿಗೆ ಇಲಾಖೆಯ ಕಡೆಗಿನ ನಿಲ್ದಾಣದ ಜಿ.ಬಾಗಿಲನ್ನು ತೆರೆಯಲಾಗಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಜನವರಿ 13ರಿಂದಲೇ ಈ ಬಾಗಿಲು ತೆರೆಯಲಾಗಿದೆ. ನಿತ್ಯ ಪ್ರಯಾಣಿಕರ ಸಂಖ್ಯೆ ಹೆಚ್ಚಾಗುತ್ತಿದೆ. ಹೀಗಾಗಿ ನಿಲ್ದಾಣದಲ್ಲಿ ಜನದಟ್ಟಣೆ ಕಡಿಮೆ ಮಾಡಲು ಮೊದಲೇ ನಿರ್ಮಾಣವಾಗಿದ್ದ ಸುವ್ಯವಸ್ಥೆ ಪ್ರವೇಶ-ನಿರ್ಗಮನ ದ್ವಾರವನ್ನು ಜನ ಬಳಕೆಗೆ ತೆರೆಯಲಾಗಿದೆ ಎಂದು ಮೆಟ್ರೋ ಸಾರ್ವಜನಿಕ ಸಂಪರ್ಕಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ದರೋಡೆ ಮಾಡಿ ಕೊಲೆ ಪ್ರಕರಣ 8 ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ಪ್ರಕಟ

• ಉದಯವಾಹಿನಿ, ಬೆಂಗಳೂರು

ದರೋಡೆ ಮಾಡಿ ವ್ಯಕ್ತಿಯನ್ನು ಹತ್ಯೆ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ 8 ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ವಿಧಿಸಿರುವ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಡೆದಿದೆ. ದೊಡ್ಡಬಳ್ಳಾಪುರದ ಹುಲಿಕುಂಟೆ ಗ್ರಾಮದಲ್ಲಿ ನಡೆದಿದ್ದ ಪ್ರಕರಣ ಸಂಬಂಧ ನ್ಯಾಯಾಲಯ ತೀರ್ಪು ಪ್ರಕಟಿಸಿದೆ. ಮನೆ ದರೋಡೆ ನಡೆಸಿದ್ದ ಗ್ಯಾಂಗ್ ಮಂಜುನಾಥ್ ಎಂಬಾತನನ್ನು ಹತ್ಯೆಗೈದು ಪರಾರಿಯಾಗಿತ್ತು. 2020ರ ಆಗಸ್ಟ್ 17ರಂದು ಈ ಘಟನೆ ನಡೆದಿತ್ತು. ಇದೀಗ ಈ ಪ್ರಕರಣ ಸಂಬಂಧ 8 ಆರೋಪಿಗಳ ಅಪರಾಧ ಸಾಬೀತಾಗಿದ್ದು, 8 ಡಕಾಯಿತರಿಗೆ ದೊಡ್ಡಬಳ್ಳಾಪುರ 4ನೇ ಹೆಚ್ಚುವರಿ ಕೋರ್ಟ್ ಜೀವಾವಧಿ ಶಿಕ್ಷೆ ವಿಧಿಸಿ ಆದೇಶ ಹೊರಡಿಸಿದೆ.

## ರಾಜ್ಯದ ಗ್ರಾಮ ಆಡಳಿತಾಧಿಕಾರಿಗಳಿಗೆ ಬಿಗ್ ಶಾಕ್

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದಿಂದ ಕಂದಾಯ ಇಲಾಖೆಯ ಗ್ರಾಮ ಆಡಳಿತಾಧಿಕಾರಿಗಳಿಗೆ ಬಿಗ್ ಶಾಕ್ ನೀಡಿದೆ. ಅದೇನೆಂದರೇ ಇಲಾಖೆ ವ್ಯಾಪ್ತಿಯ ಇತರೆಡೆ ನಿಯೋಜನೆ, ಅನ್ಯ ಕರ್ತವ್ಯದ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಆಡಳಿತಾಧಿಕಾರಿಗಳನ್ನು ಕೂಡಲೇ ಮೂಲ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುವಂತೆ ಸೂಚಿಸಿ ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಸಂಬಂಧ ಕಂದಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಾಜೇಂದರ್ ಕುಮಾರ್ ಕಟಾರಿಯಾ ಅವರು ಸುತ್ತೋಲೆ ಹೊರಡಿಸಿದ್ದಾರೆ.



ಅದರಲ್ಲಿ ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿಗಳನ್ನು ಅವರು ನೇಮಕಗೊಂಡ ಮೂಲ ಹುದ್ದೆಯಲ್ಲಿಯ ಕರ್ತವ್ಯಕ ನಿಯೋಜಿಸುವಂತೆ ಸರ್ಕಾರದಿಂದ ಈಗಾಗಲೇ ಹಲವಾರು ಬಾರಿ ನಿರ್ದೇಶನ/ಸೂಚನೆಗಳನ್ನು ನೀಡಲಾಗಿದ್ದರೂ ಸಹ ಗ್ರಾಮ ಆಡಳಿತ ಅಧಿಕಾರಿಗಳು ಮೂಲ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸದೇ ನಿಯೋಜನೆ/ ಅನ್ನ ಕರ್ತವ್ಯದ ಆಧಾರದ ಮೇಲೆ ಪ್ರಾದೇಶಿಕ ಆಯುಕ್ತರ / ಜಿಲ್ಲಾಧಿಕಾರಿಗಳ ಉಪವಿಭಾಗಾಧಿಕಾರಿ/ ತಹಶೀಲ್ದಾರ್ ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ ಎಂದಿದ್ದಾರೆ. ಆಡಳಿತಾತ್ಮಕ, ಸಾರ್ವಜನಿಕ ಹಿತದೃಷ್ಟಿಯಿಂದ ಕಂದಾಯ ಇಲಾಖೆಯ ಕಾರ್ಯ ಸ್ವರೂಪವನ್ನು ಸರಳೀಕರಣಗೊಳಿಸಿ ದಿಜಟಲೀಕರಣ ಮಾಡುವ ಸಂಬಂಧ ಹಲವು ಜನಪರ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಬಗರ್ ಹುಕುಂ ದರಖಾಸ್ತು ಪೋಡಿಯ 1 to 5 ಪ್ರಕರಣಗಳು ಕಂದಾಯ ಇಲಾಖೆಯ ಕಡತಗಳ ಗಣಕೀಕರಣ, ಇನ್ನಿತರ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಪಾತ್ರ ಮಹತ್ವದ್ದಾಗಿದ್ದು

> ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ಕೊರತೆಯಿಂದಾಗಿ ಹಾಲಿ ಗ್ರಾಮ ಆಡಳಿತ ಅಧಿಕಾರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಮೇಲೆ ಹಚ್ಚಿನ ಕಾರ್ಯದೊತ್ತಡ ಉಂಟಾಗುತ್ತಿರುತ್ತದೆ ಎಂಬುದಾಗಿ ತಿಳಿಸಿದ್ದಾರೆ.

## ದಸರಾ ಆನೆ ಅರ್ಜುನನ ಸ್ಮಾರಕ ಉದ್ಘಾಟನೆ

• ಉದಯವಾಹಿನಿ, ಬೆಂಗಳೂರು

ಹಾಸನ ಜಿಲ್ಲೆಯ ಯಸಳೂರು ಅರಣ್ಯದಲ್ಲಿ 2023ರ ಡಿಸೆಂಬರ್ 4 ರಂದು ಕಾಡಾನೆ ಸೆರೆ ಕಾರ್ಯಾಚರಣೆ ವೇಳೆ ಮೃತಪಟ್ಟ ದಸರಾ ಅಂಬಾರಿ ಹೊರುತ್ತಿದ್ದ ಆನೆ ಅರ್ಜುನನ ಸ್ಮಾರಕವನ್ನು ಫೆಬ್ರವರಿ ಮೊದಲ ವಾರ ಉದ್ಘಾಟಿಸಲಾಗುವುದು ಎಂದು ಅರಣ್ಯ ಸಚಿವರಾದ ಈಶ್ವರ್ ಖಂಡ್ರೆ ಅವರು ತಿಳಿಸಿದ್ದಾರೆ.

ಹಾಸನ ಜಿಲ್ಲೆಯ ಯಸಳೂರು ಅರಣ್ಯದಲ್ಲಿ 2023ರ ಡಿಸೆಂಬರ್ 4 ರಂದು ಕಾಡಾನೆ ಸೆರೆ ಕಾರ್ಯಾಚರಣೆ ವೇಳೆ ಮೃತಪಟ್ಟ, ದಸರಾ ಅಂಬಾರಿ ಹೊರುತ್ತಿದ್ದ ಆನೆ ಅರ್ಜುನನ ಸ್ಮಾರಕವನ್ನು ಫೆಬ್ರವರಿ ಮೊದಲವಾರ ಉದ್ಘಾಟಿಸಲಾಗುವುದು. ಸ್ಮಾರಕ ಅರಣ್ಯ ಪ್ರದೇಶ ದಲ್ಲಿದ್ದು. ಸಾರ್ವಜನಿಕರ ವೀಕ್ಷಣೆಗೆ ತೊಡಕಾಗದ ರೀತಿಯಲ್ಲಿ ಕ್ರಮ


ಉದಯವಾಹಿನಿ ಚಿತ್ರ

ವಹಿಸಲಾಗುವುದು ಎಂದು ಅರಣ್ಯ ಸಚಿವರಾದ ಈಶ್ವರ್ ಖಂಡ್ರೆ ಅವರು ತಿಳಿಸಿದ್ದಾರೆ.

ಕಾಕನಕೋಟೆಯಲ್ಲಿ 1968ರಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಸೆರೆ ಹಿಡಿಯಲಾಗಿದ್ದ ಅರ್ಜುನ, ನಾಗರಹೊಳೆ ಅರಣ್ಯ ವ್ಯಾಪ್ತಿಯಲ್ಲಿರುವ ಬಳ್ಳೆ ಆನೆ ಶಿಬಿರದಲ್ಲಿದ್ದ. ಹೀಗಾಗಿ ಬಳ್ಳೆಯಲ್ಲಿ ಕೂಡ ಸ್ಮಾರಕ ನಿರ್ಮಿಸಲಾಗಿದ್ದು, ಫೆಬ್ರವರಿ ಅಂತ್ಯದಲ್ಲಿ ಅಥವಾ ಮಾರ್ಚ್ ಮೊದಲ ವಾರದಲ್ಲಿ ಆ ಸ್ಮಾರಕವನ್ನೂ ಸಾರ್ವಜನಿಕರ ವೀಕ್ಷಣೆಗೆ ಮುಕ್ತಗೊಳಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

## ಶಾಲಾ-ಕಾಲೇಜು ನೌಕರರಿಂದ ಪತ್ರ ಚಳವಳಿ ಆರಂಭ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರಿ ನೌಕರರು ಹಳೆ ಪಿಂಚಣಿ ವ್ಯವಸ್ಥೆಯನ್ನು ಜಾರಿಗೊಳಿಸುವಂತೆ ಸರ್ಕಾರದ ಮೇಲೆ ಒತ್ತಡ ಹೇರಲು ಪ್ರತಿಭಟನೆ ಮುಂದಾಗಿದ್ದಾರೆ. ಈಗಾಗಲೇ ಜನವರಿ 20ರಿಂದ 31ರವರೆಗೆ ಓಪಿಎಸ್ ಜಾರಿಗಾಗಿ ಅನುದಾನಿತ ಶಾಲಾ-ಕಾಲೇಜುಗಳ ನೌಕರರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಚಳುವಳಿಯನ್ನು ಆರಂಭಿಸಿದ್ದಾರೆ. ಆನಂತ್ರ ಫೆಬ್ರವರಿ 7ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಬೃಹತ್ ಧರಣಿ ಉಪವಾಸ ಸತ್ಯಾಗ್ರಹ ಮಾಡಲು ನಿರ್ಧರಿಸಿದ್ದಾರೆ.



ಉದಯವಾಹಿನಿ ಚಿತ್ರ

**ಪತ್ರಿಕಾ ಹೇಳಿಕೆ ಬಿಡುಗಡೆ**

ಈ ಕುರಿತು ಕರ್ನಾಟಕ ರಾಜ್ಯ ಅನುದಾನಿತ ಶಾಲಾ-ಕಾಲೇಜುಗಳ ಪಿಂಚಣಿ ವಂಚಿತ ನೌಕರರ ಸಂಘದ ರಾಜ್ಯಾಧ್ಯಕ್ಷ ಜಿ ಹನುಮಂತಪ್ಪ ಅವರು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದ್ದು ಅನುದಾನಿತ ಮತ್ತು ಸರ್ಕಾರಿ ನೌಕರರುಗಳಿಗೆ ಹಳೆಯ ನಿಶ್ಚಿತ ಪಿಂಚಣಿ ಸೌಲಭ್ಯವನ್ನು ದಿ:1.4.2006 ರಿಂದ ರದ್ದುಪಡಿಸಲಾಗಿದ್ದು, ಭವಿಷ್ಯದ ಬದುಕು ಅತಂತ್ರವಾಗಿದೆ. ಈ ಕುರಿತು ಕಳೆದ 15 ವರ್ಷಗಳಿಂದ ನಮ್ಮ ಸಂಘಟನೆ ಹಾಗೂ ರಾಜ್ಯ ಸರ್ಕಾರಿ NPS ನೌಕರರ ಸಂಘಟನೆ ಹೋರಾಟ ಮಾಡುತ್ತಾ ಬಂದಿದೆ. ಈ ಪರಿಣಾಮ ಪ್ರಸ್ತುತ ಆಡಳಿತ ರೂಢ ಸರ್ಕಾರ ತನ್ನ ಚುನಾವಣಾ ಪೂರ್ವದ ಪ್ರಣಾಳಿಕೆಯಲ್ಲಿ ನಮಗೆ ಓಪಿಎಸ್ ಭರವಸೆಯನ್ನ ನೀಡಿರುತ್ತದೆ ಎಂದಿದ್ದಾರೆ. ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳು ಮುಗಿಯುತ್ತಾ ಬಂದರೂ ನಮ್ಮ ಬೇಡಿಕೆ ಇನ್ನೂ ಈಡೇರಿರುವುದಿಲ್ಲ. ಹಾಗಾಗಿ ಸರ್ಕಾರದ ಗಮನ ಸೆಳೆಯಲು ಇದೇ ಜನವರಿ 20 ರಿಂದ 31 ನೇ ತಾರೀಕಿನ ತನಕ ಮುಖ್ಯಮಂತ್ರಿಗಳಿಗೆ ಪ್ರತಿಯೊಬ್ಬ ಅನುದಾನಿತ ಶಾಲಾ-ಕಾಲೇಜುಗಳ ಹಾಗೂ ಸರ್ಕಾರಿ ಓಕಖ ನೌಕರರು ಪತ್ರವನ್ನು ಬರೆಯುವಂತೆ ವಿನಂತಿಸಿದ್ದಾರೆ.

## ಬಿಜೆಪಿ ರಾಜ್ಯಾಧ್ಯಕ್ಷರ ಚುನಾವಣೆ ವಿಚಾರ ; ಬಿಎಸ್‌ವೈ ಆಪ್ತರ ಸಭೆ

• ಉದಯವಾಹಿನಿ, ಬೆಂಗಳೂರು

ಬಿಜೆಪಿಯ ಬಣ ಬಡಿದಾಟ ಮತ್ತು ಬಿಜೆಪಿ ರಾಜ್ಯಾಧ್ಯಕ್ಷರ ಚುನಾವಣೆ ಚರ್ಚೆ ಮಧ್ಯೆಯೇ ಇದೀಗ ಬಿಎಸ್‌ವೈ ಆಪ್ತರ ಬಣ ಸಭೆ ನಡೆಸಿದೆ. ಮಾಜಿ ಶಾಸಕ ಕಟ್ಟಾ ಸುಬ್ರಮಣ್ಯ ನಿವಾಸದಲ್ಲಿ ಯಡಿಯೂರಪ್ಪ ಆಪ್ತರ ಸಭೆ ನಡೆಯುತ್ತಿದೆ. ರಾಜ್ಯಾಧ್ಯಕ್ಷರ ಚುನಾವಣೆ ಸಂಬಂಧ ಶಾಸಕರು ಮತ್ತು ಸಂಸದರ ಅಭಿಪ್ರಾಯ ಪಡೆಯಲು ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ದಾಸ್ ಅಗರ್ವಾಲಾ ಆಗಮಿಸಿಲಿದ್ದಾರೆ.


ಉದಯವಾಹಿನಿ ಚಿತ್ರ

ಹೀಗಾಗಿ ಮಾಜಿ ಶಾಸಕರು ಸದಾಶಿವನಗರದಲ್ಲಿರುವ ಕಟ್ಟಾ ಸುಬ್ರಮಣ್ಯ ನಾಯ್ಡು ನಿವಾಸದಲ್ಲಿ ಸಭೆ ನಡೆಸುತ್ತಿದ್ದಾರೆ.

ವಿಜಯೇಂದ್ರ ಅವರನ್ನು ಮುಂದುವರಿಸುವಂತೆ ಸಭೆಯಲ್ಲಿ ಚರ್ಚೆ ನಡೆಯುತ್ತಿದ್ದು, ಸಭೆ ಬಳಿಕ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಹುದ್ದೆಯನ್ನು ಮುಂದುವರಿಸುವಂತೆ ರಾಧಾ ಮೋಹನ್ ದಾಸ್ ಅಗರವಾಲಾಗೆ ಮನವಿ ಮಾಡಿಕೊಳ್ಳಲಿದ್ದಾರೆ.

ಸಭೆಯಲ್ಲಿ ಮಾಜಿ ಶಾಸಕರಾದ ಎಂ.ಪಿ ರೇಣುಕಾಚಾರ್ಯ, ಕಟ್ಟಾ ಸುಬ್ರಮಣ್ಯ ನಾಯ್ಡು, ಬಸವರಾಜ್ ದಡೇಸುಗೂರು, ಬಸವರಾಜ್ ನಾಯ್, ಹರ್ತಾಳ್ ಹಾಲಪ್ಪ, ಜೀವರಾಜ್, ಮಾಜಿ ಶಾಸಕಿ ರೂಪಾಲಿ ನಾಯಕ್ ಸೇರಿದಂತೆ ಹಲವರು. ಭಾಗಿಯಾಗಿದ್ದಾರೆ

## ಓಲಾ ಬುಕ್ ಮಾಡಿದ ವ್ಯಕ್ತಿಯ ಸ್ನೇಹ ಬೆಳೆಸಿ ಅವನದ್ದೇ ಮನೆ ಕಳ್ಳತನ! ಆರೋಪಿ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಓಲಾ ಕಾರ್ ಬುಕ್ ಮಾಡಿದ ವ್ಯಕ್ತಿಯ ಜೊತೆ ಸ್ನೇಹ ಬೆಳಸಿ ಅವನದೇ ಮನೆಯಲ್ಲಿ 18 ಲಕ್ಷ ರೂ. ಕದ್ದಿದ್ದ ಖದೀಮ ಚಾಲಕ ಸತೀಶ್ ನನ್ನು ಚಂದ್ರಾಲೇಔಟ್ ಪೊಲೀಸರು ಅರೆಸ್ಟ್ ಮಾಡಿದ್ದಾರೆ. ತಂತ್ರಜ್ಞಾನ ಜನವರಿ 2ರಂದು ಊರಿಗೆ ತೆರಳುತ್ತಿದ್ದ ಪ್ರಕಾಶ್ ಕ್ಯಾಬ್ ಬುಕ್ ಮಾಡಿದ್ದ ವೇಳೆ ಸ್ನೇಹ ಬೆಳಸಿದ್ದ ಚಾಲಕ ಸತೀಶ್, ಪ್ರಕಾಶ್ ಮನೆಯಲ್ಲಿ ಯಾರೂ ಇಲ್ಲದನ್ನು ಖಚಿತ ಪಡಿಸಿಕೊಂಡಿದ್ದಾನೆ.

ಪ್ರಕಾಶ್ ಊರಿಗೆ ಹೋಗುತ್ತಿದ್ದಂತೆ ಮನೆ ಬೀಗ ಮುರಿದು 18 ಲಕ್ಷ ರೂ. ಬೆಲೆಬಾಳುವ ಚಿನ್ನಾಭರಣ ದೋಚಿದ್ದಾನೆ. ತನಿಖೆ ವೇಳೆ ಆಟೋ ಇಎಂಐ ಕಟ್ಟಲು ಮನೆ ಕಳ್ಳತನ ಮಾಡಿದ್ದಾಗಿ ಆರೋಪಿ ತಪ್ಪೊಪ್ಪಿಕೊಂಡಿದ್ದಾನೆ. ಘಟನೆ ಸಂಬಂಧ ಚಂದ್ರಾಲೇಔಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಆರ್ ಆರ್‌ನಗರ ಪೊಲೀಸ್ ಠಾಣೆಗೆ ಗನ್ ಸರೆಂಡರ್ ಮಾಡಿದ ದರ್ಶನ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಆರ್ ಆರ್ ನಗರ ಪೊಲೀಸ್ ಠಾಣೆಗೆ ನಟ ದರ್ಶನ್ ಗನ್ ಸರೆಂಡರ್ ಮಾಡಿದ್ದಾರೆ. ಪೊಲೀಸರು ತಾತ್ಕಾಲಿಕವಾಗಿ ಗನ್ ಲೈಸೆನ್ಸ್ ರದ್ದು ಮಾಡಿದ ಹಿನ್ನೆಲೆ ಬೆಂಗಳೂರಿನ ಆರ್ ಆರ್ ನಗರ ಪೊಲೀಸ್ ಠಾಣೆಗೆ ತನ್ನ ಸಹಾಯಕನ ಮೂಲಕ ಗನ್ ಸರೆಂಡರ್ ಮಾಡಿದ್ದಾರೆ.

ನನಗೆ ಗನ್ ಬೇಕು, ಲೈಸೆನ್ಸ್ ರದ್ದು ಮಾಡಬೇಡಿ ಎಂದು ಪೊಲೀಸರಿಗೆ ನಟ ದರ್ಶನ್ ಮನವಿ ಮಾಡಿದ್ದರು. ಪೊಲೀಸರ ನೋಟಿಸ್ ಗೆ ಉತ್ತರ ನೀಡಿದ ನಟ ದರ್ಶನ್



ನಾನು ಸೆಲೆಬ್ರಿಟಿ, ಹೊರಗಡೆ ಹೋದಾಗ ಸುರಕ್ಷತೆಗೆ ಗನ್ ಬೇಕಾಗುತ್ತದೆ.

ನನಗೆ ಗನ್ ಬೇಕು, ಲೈಸೆನ್ಸ್ ರದ್ದು ಮಾಡಬೇಡಿ ಎಂದು ಪೊಲೀಸರಿಗೆ ನಟ ದರ್ಶನ್ ಪತ್ರದ ಮೂಲಕ ಮನವಿ ಮಾಡಿದ್ದರು.

ರೇಣುಕಾಸ್ವಾಮಿ ಕೊಲೆ ಕೇಸ್ ವಿಚಾರಣೆ ಮುಗಿಯೋತನಕ ಗನ್ ಬಳಸುವ ಹಾಗಿಲ್ಲ, ಈ ಕೂಡಲೇ ಗನ್ ಸರೆಂಡರ್ ಮಾಡಲು ಸೂಚನೆ ನೀಡಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ. ಆರ್ ಆರ್ ನಗರ ಠಾಣೆಯ ಪೊಲೀಸರಿಗೆ ಸೂಚನೆ ನೀಡಲಾಗಿದ್ದು, ದರ್ಶನ್ ಬಳಿಯಿರುವ 2 ಗನ್‌ಗಳನ್ನು ವಶಕ್ಕೆ ಪಡೆಯಲು ಪೊಲೀಸರಿಗೆ ಸೂಚನೆ ನೀಡಲಾಗಿತ್ತು.

ಅಂತೆಯೇ ಪೊಲೀಸರು ಗನ್ ಸರೆಂಡರ್ ಮಾಡುವಂತೆ ಸೂಚನೆ ನೀಡಿದ್ದರು.

## ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಕರುನಾಡು ದರೋಡೆ ನಾಡಾಗಿ ಬದಲಾಗಿದೆ. ಹಲ್ಲೆ, ಕೊಲೆ, ಅತ್ಯಾಚಾರ, ಗೋ ಮಾತೆ ಮೇಲಿನ ಕ್ರೌರ್ಯ ದಿನ ದಿನಕ್ಕೂ ಬಿಗಡಾಯಿಸುತ್ತಿದೆ. ಅರಾಜಕತೆಯ ಪರಮಾವಧಿ ಎಲ್ಲೆ ಮೀರಿದೆ ಎಂದು ಕಾಂಗ್ರೆಸ್ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸಿದೆ. ಭ್ರಷ್ಟ ಸಿದ್ದರಾಮಯ್ಯ ಅವರ ದುರ್ಬಲ ಆಡಳಿತ ಆಕಸ್ಮಿಕ ಗೃಹ ಸಚಿವ ಜಿ.ಪರಮೇಶ್ವರ್ ಅವರ ಅಸಮರ್ಥತೆಯ ಕಾರಣದಿಂದ ಕರ್ನಾಟಕ ಅಯ್ಯಯ್ಯೋ ಅನ್ಯಾಯ ಎಂದು ಕೂಗುತ್ತಿದೆ. ಕರುನಾಡು ದರೋಡೆ ನಾಡಾಗಿ ಬದಲಾಗಿದೆ. ಹಲ್ಲೆ, ಕೊಲೆ, ಅತ್ಯಾಚಾರ, ಗೋ ಮಾತೆ ಮೇಲಿನ ಕ್ರೌರ್ಯ ದಿನ ದಿನಕ್ಕೂ ಬಿಗಡಾಯಿಸುತ್ತಿದೆ. ಅರಾಜಕತೆಯ ಪರಮಾವಧಿ ಎಲ್ಲೇ ಮೀರಿದೆ. ಆದರೂ, ದುಷ್ಟ ಸರ್ಕಾರ ನಕಲಿ ಗಾಂಧಿಗಳ ಭವಿಷ್ಯಕ್ಕಾಗಿ ಸಮಾವೇಶ ಮಾಡುತ್ತಾ ಕನ್ನಡಿಗರ ತೆರಿಗೆ ದುಡ್ಡನ್ನು ವೆಚ್ಚ ಮಾಡಿ ಕರ್ನಾಟಕವನ್ನು ದಿವಾಳಿ ಮಾಡುತ್ತಿದೆ ಎಂದು ಕಾಂಗ್ರೆಸ್ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸಿದೆ. ಸನ್ಮಾನ ಅವರೆ, ಬಾಬಾ ಸಾಹೇಬ್ ಅಂಬೇಡ್ಕರ್ ಅವರಿಗೆ ಭಾರತ ರತ್ನ ನೀಡದ ಅಂಬೇಡ್ಕರ್ ಅವರನ್ನು ಸೋಲಿಸಿದ ವ್ಯಕ್ತಿಗೆ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿದ ಹಿಂದಿನ ರಹಸ್ಯವನ್ನು ಬೆಳಗಾವಿ ಸಮಾವೇಶದಲ್ಲಿ ಬಹಿರಂಗಗೊಳಿಸುತ್ತಿರಾ..!! ಎಂದು ಕಾಂಗ್ರೆಸ್ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸಿದೆ.

# ಕೆಂಪೇಗೌಡ ಲೇಔಟ್ ಸೈಟ್‌ದಾರರಿಗೆ ಕತ್ತಲೆ ಭಾಗ್ಯ!

## ಇತ್ತೀಚೆಗಷ್ಟೇ ಭೀಮನಕುಪ್ಪೆಯಲ್ಲಿ 2ನೇ ವಿದ್ಯುತ್ ಉಪಕೇಂದ್ರಕ್ಕೆ ಟೆಂಡರ್ ಆಹ್ವಾನಿಸಿದ್ದು, ಉಳಿದ ಮೂರು ಕೇಂದ್ರಗಳ ಸ್ಥಾಪನೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ರಚಿತ ನಾಡ ಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಪೂರ್ಣ ಪ್ರಮಾಣದ ಮೂಲಸೌಕರ್ಯ ಇಲ್ಲದ ಕಾರಣ ಸೈಟ್‌ದಾರರು ಮನೆಗಳನ್ನು ನಿರ್ಮಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಮುಖ್ಯವಾಗಿ ವಿದ್ಯುತ್ ಸೌಲಭ್ಯ ಸಿಗದ ಕಾರಣ ಹೆಚ್ಚಿನ ಸಂಖ್ಯೆಯ ನಿವೇಶನ ಹಂಚಿಕೆದಾರರು ಸ್ವಂತ ಮನೆ ಹೊಂದುವ ಆಸೆಗೆ ಕಲ್ಲು ಬಿದ್ದಂತಾಗಿದೆ.

ಕೆಂಪೇಗೌಡ ಬಡಾವಣೆಯಲ್ಲಿ ಮೂಲ ಸೌಕರ್ಯ ಕಲ್ಪಿಸುವ ಕೆಲಸಕ್ಕೆ 5 ವರ್ಷದ ಹಿಂದೆಯೇ ಚಾಲನೆ ನೀಡಲಾಗಿದೆ.

ಆದರೂ, ಈವರೆಗೆ ಒಂದು ಸೌಕರ್ಯವೂ ಪೂರ್ಣಗೊಂಡಿಲ್ಲ ಅದರಲ್ಲೂ ವಿದ್ಯುತ್ ಸೌಲಭ್ಯ ಇಲ್ಲದ ಕಾರಣ ಮನೆ ನಿರ್ಮಾಣ ಚಟುವಟಿಕೆ ನೆಲಕಚ್ಚಿದೆ. ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆಯಲು ಹರಸಾಹಸ ಮಾಡಬೇಕಿರುವುದರಿಂದ ಸ್ವಂತ ಸೂರು ಹೊಂದುವ ಆಸೆಯಿದ್ದರೂ, ಮನೆ ನಿರ್ಮಿಸಲಾಗದೆ ಸಮಸ್ಯೆಗೆ ಒಳಗಾಗಿದ್ದಾರೆ. ಬಿಡಿಎ ಅಧಿಕಾರಿಗಳನ್ನು ವಿಚಾರಿಸಿದರೆ ಸ್ವಲ್ಪ ದಿನ ಕಾಯಿರಿ ಎಂಬ ಉತ್ತರ ನೀಡಿ ಸಾಗಹಾಕಲಾಗುತ್ತಿದೆ ಎಂಬ ವ್ಯಥೆಯಲ್ಲೇ ಜನತೆ ವಿದ್ಯುತ್ ಸಂಪರ್ಕಕ್ಕಾಗಿ ಚಾತಕಪಕ್ಷಿಯಂತೆ ಕಾಯುವಂತಾಗಿದೆ.


ಉದಯವಾಹಿನಿ ಚಿತ್ರ

**500 ಕೋಟಿ ರೂ.ವೆಚ್ಚದ ಯೋಜನೆ**

ಈ ಲೇಔಟ್‌ನ 9 ಬ್ಲಾಕ್‌ಗಳಲ್ಲಿ ಹಂಚಿಕೆಯಾಗಿರುವ 30 ಸಾವಿರ ಸೈಟ್‌ದಾರರಿಗೆ ವಿದ್ಯುತ್ ಪೂರೈಸಲು ಪ್ರಾಧಿಕಾರವು 500 ಕೋಟಿ ರೂ.ವೆಚ್ಚದ ಯೋಜನೆ ರೂಪಿಸಿದೆ. ಒಟ್ಟು 240 ಮೆ.ವ್ಯಾ. ವಿದ್ಯುತ್ ಪೂರೈಕೆಗಾಗಿ ಬಡಾವಣೆಯ ಐದು ಕಡೆಗಳಲ್ಲಿ 66/11 ಕೆವಿ ಸಾಮರ್ಥ್ಯದ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಬೇಕಿದೆ. ಈ ಪೈಕಿ 3 ವರ್ಷದ ಹಿಂದೆ ಕೊಮ್ಮಘಟ್ಟದಲ್ಲಿ ಮೊದಲ ವಿದ್ಯುತ್ ಉಪಕೇಂದ್ರ ಸ್ಥಾಪನೆಗೆ ಟೆಂಡರ್ ಆಹ್ವಾನಿಸಿ ಎಸ್‌ಎಂ ಇಂಜಿನಿಯರ್ಸ್ ಪ್ರೈ.ಲಿ. ಕಂಪನಿಗೆ ಗುತ್ತಿಗೆ ನೀಡಲಾಗಿತ್ತು.

ಕಾಮಗಾರಿ ಪೂರ್ಣಗೊಳಿಸಲು 13 ತಿಂಗಳ ಗಡುವು ನೀಡಿದ್ದು, ಸದ್ಯ ಶೇ.90 ಕೆಲಸ ಮಾತ್ರ ಮುಗಿದಿದೆ. ಬಾಕಿ ಕೆಲಸ ಪೂರ್ಣಗೊಳಿಸಲು ಗುತ್ತಿಗೆದಾರರು ತಿಣುಕಾಡುತ್ತಿರುವುದು ಸಬ್ ಸ್ಟೇಷನ್ ಆರಂಭಗೊಳ್ಳದೆ ವಿದ್ಯುತ್ ಸಂಪರ್ಕ ಕೈಗೆಟಕುತ್ತಿಲ್ಲ. ಇತ್ತೀಚೆಗಷ್ಟೇ ಭೀಮನಕುಪ್ಪೆಯಲ್ಲಿ 2ನೇ ವಿದ್ಯುತ್ ಉಪಕೇಂದ್ರಕ್ಕೆ ಟೆಂಡರ್ ಆಹ್ವಾನಿಸಿದ್ದು, ಉಳಿದ ಮೂರು ಕೇಂದ್ರಗಳ ಸ್ಥಾಪನೆ ಪ್ರಾರಂಭವಾಗಿಲ್ಲ. ಬಡಾವಣೆಯ 9 ಬ್ಲಾಕ್‌ಗಳಲ್ಲಿ ಗ್ರಾಮಗಳಿಗೆ ಹೊಂದಿಕೊಂಡಿರುವ ಕೆಲ ಪ್ರದೇಶಗಳಲ್ಲಿ ಬೀದಿ ದೀಪ ಅಳವಡಿಸುವ ಕಾರ್ಯ ವರ್ಷದ ಹಿಂದೆಯೇ ಕೈಗೊಳ್ಳಲಾಗಿತ್ತು. ಜತೆಗೆ ಕೇಬಲ್ ಫೀಡರ್ ಪರಿವರ್ತಕಗಳ ಅಳವಡಿಕೆಗೆ ಬಳಸುವ ಕಂಬ, ಬಾಕ್ಸ್‌ಗಳನ್ನು ಕಳ್ಳರು ಕದ್ದು ಹೊತ್ತೊಯ್ದಿದ್ದಾರೆ. ಗುತ್ತಿಗೆ ಕಂಪನಿಯ ಗೋದಾಮಿನಿಂದಲೂ ಹಲವು ವಿದ್ಯುತ್ ಉಪಕರಣಗಳು ಕಳ್ಳರ ಪಾಲಾಗಿವೆ. ಇಂತಹ 25ಕ್ಕೂ ಹೆಚ್ಚು ಪ್ರಕರಣಗಳು ನಡೆದಿದ್ದು, ಸ್ಥಳೀಯ ಪೊಲೀಸ್ ಠಾಣೆಗೆ ಬಿಡಿಎ ದೂರು ಸಲ್ಲಿಸಿದೆ. ಇದಾದ ಬಳಿಕ ಬಿಡಿಎ ಹಾಗೂ ಗುತ್ತಿಗೆ ಕಂಪನಿ ವಿದ್ಯುತ್ ಸಂಪರ್ಕ ಕಲ್ಪಿಸುವ ಕೆಲಸವನ್ನು ನಿಧಾನಗೊಳಿಸಿದೆ. ಸೈಟ್‌ರರು ಎಲ್ಲೆಲ್ಲಿ ಮನೆಗಳನ್ನು ನಿರ್ಮಿಸುವರೋ ಅಂತಹ ಪ್ರದೇಶದಲ್ಲಿ ಮಾತ್ರ ತಾತ್ಕಾಲಿಕವಾಗಿ ಕಂಬದ ಮೇಲೆ ಲೇನ್ ಎಳೆದು ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿದೆ. ಆದರೆ, ಬಹು ದೂರದಿಂದ ಸಂಪರ್ಕ ಕಲ್ಪಿಸಬೇಕಿದ್ದರೆ ಆ ವೆಚ್ಚವನ್ನು ಸೈಟ್ ದಾರರೇ ಭರಿಸಬೇಕಿರುವುದು ಜನರಿಗೆ ಹೊರೆಯಾಗಿದೆ.

ಕೆಂಪೇಗೌಡ ಬಡಾವಣೆಗೆ ವಿವಿಧ ಮೂಲಸೌಕರ್ಯ ಕಲ್ಪಿಸುವ ಕಾಮಗಾರಿಯ ಗಡುವು 2023ರಲ್ಲೇ ಮುಗಿದೆ. 3-4 ಬಾರಿ ಗಡುವು ವಿಸ್ತರಿಸಿದರೂ ರಸ್ತೆ, ಕುಡಿಯುವ ನೀರು, ಒಳಚರಂಡಿ, ವಿದ್ಯುತ್ ಸಹಿತ ಇನ್ನಿತರ ಸೌಲಭ್ಯವನ್ನು ಪೂರ್ಣಗೊಳಿಸಲು ಬಿಡಿಎಗೆ ಸಾಧ್ಯವಾಗಿಲ್ಲ.

> ಹೀಗಿದ್ದರೂ, ವಿದ್ಯುತ್ ಸೌಲಭ್ಯ ಕಲ್ಪಿಸಲು ಸಮಸ್ಯೆಗಳ ನೆಪ ಹೇಳಲಾಗುತ್ತಿದೆ. ಸರ್ಕಾರಿ ಸಂಸ್ಥೆಗಳ ಮಧ್ಯೆಯೇ ಸಮನ್ವಯ ಇಲ್ಲದಿರುವುದೇ ಲೇಔಟ್‌ಗೆ ವಿದ್ಯುತ್ ಸೌಕರ್ಯ ಕಲ್ಪಿಸುವುದು ನಿಧಾನವಾಗಿದೆ ಎನ್ನುತ್ತಾರೆ ಎನ್ ಪಿಕೆಎಲ್ ಓಪನ್ ಫೋರಂ ಪದಾಧಿಕಾರಿ ಸೂರ್ಯಕಿರಣ್.

> ವಿದ್ಯುತ್ ಸೌಲಭ್ಯ ಕಲ್ಪಿಸುವ ವಿಚಾರದಲ್ಲಿ ಬಿಡಿಎ, ಕೆಪಿಟಿಸಿಎಲ್ ಹಾಗೂ ಬೆಸ್ಕಾಂ ಸಂಸ್ಥೆಗಳ ಮಧ್ಯೆ ಸಮನ್ವಯ ಕೊರತೆ ಎದುರಾಗಿದೆ. ಆರಂಭದಲ್ಲಿ ಕೆಪಿಟಿಸಿಎಲ್ ವಿದ್ಯುತ್ ಸೌಲಭ್ಯಕ್ಕಾಗಿ ಅನುಮತಿ ನೀಡುವುದಕ್ಕೆ ವಿಳಂಬ ಮಾಡಿತು. ನಂತರ ಸೈಟ್ ದಾರರಿಗೆ ವಿದ್ಯುತ್ ಸಂಪರ್ಕ ಒದಗಿಸಲು ಬಿಡಿಎ 59 ಕೋಟಿ ರೂ. ಹಣವನ್ನು ಬೆಸ್ಕಾಂಗೆ ಸಂದಾಯ ಮಾಡಿದೆ.

# ಮಾನವೀಯತೆಯ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿದ ಪರಮ ಪೂಜ್ಯ

## ಡಾ. ಶಿವಕುಮಾರ್ ಮಹಾಶಿವಯೋಗಿಗಳ ಜೀವನ ಪಯಣ, ಸೇವೆ ಪ್ರತಿಯೊಬ್ಬರಿಗೂ ಸ್ಫೂರ್ತಿ: ಗೆಹ್ಲೋಟ್

• ಉದಯವಾಹಿನಿ, ತುಮಕೂರು



ಉದಯವಾಹಿನಿ ಚಿತ್ರ



ಡಾ. ಶಿವಕುಮಾರ್ ಮಹಾಶಿವಯೋಗಿಗಳ ಜೀವನ ಪಯಣ ಸೇವೆ, ಸಮರ್ಪಣೆ ಮತ್ತು ಪರೋಪಕಾರದ ವಿಶಿಷ್ಟ ಉದಾಹರಣೆಯಾಗಿದೆ. ನಿಜವಾದ ಮಾನವೀಯತೆ ಜಾತಿ, ಧರ್ಮ, ಭೌತಿಕತೆಯನ್ನು ಮೀರಿದೆ ಎಂದು ಅವರ ಜೀವನ ನಮಗೆ ಕಲಿಸುತ್ತದೆ.

ಅವರ ಕೊಡುಗೆ ಸದಾ ಸ್ಫೂರ್ತಿದಾಯಕವಾಗಿರುತ್ತದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದರು. ತುಮಕೂರಿನ ಸಿದ್ದಗಂಗಾ ಮಠದಲ್ಲಿ ಶಿವಕುಮಾರ ಮಹಾಶಿವಯೋಗಿಗಳವರ 6ನೇ ಪುಣ್ಯ ಸಂಸ್ಮರಣೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿವಕುಮಾರ ಮಹಾಸ್ವಾಮೀಜಿ ಅವರು ಸರಳ ಜೀವನ ಮತ್ತು ಉನ್ನತ ಚಿಂತನೆಯ ತತ್ವವನ್ನು ಅನುಸರಿಸಿ, ಇತರರನ್ನು ಅದೇ ಮಾರ್ಗವನ್ನು ಅನುಸರಿಸಲು ಪ್ರೇರೇಪಿಸಿದರು. ಅವರು ಮಾನವೀಯತೆಯ ನಿಜವಾದ ಸಂಕೇತವಾಗಿದ್ದಾರೆ.

ಅವರು ಜಾತಿ ಮತ್ತು ಧರ್ಮವನ್ನು ಮೀರಿ ಸಮಾಜಕ್ಕೆ ಸೇವೆ ಸಲ್ಲಿಸಿದ ಮಹಾನ್ ಜ್ಞಾನಿ. ಅವರಿಗೆ ಅನೇಕ ರಾಷ್ಟ್ರೀಯ, ಅಂತರರಾಷ್ಟ್ರೀಯ ಪ್ರಶಸ್ತಿ ದೊರೆತಿವೆ.

ಭಾರತ ಸರ್ಕಾರವು ಅವರಿಗೆ 2015ರಲ್ಲಿ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ ಎಂದರು. ಭಾರತೀಯ ಸಂಸ್ಕೃತಿ ಅನಂತವಾದುದು. ಇದನ್ನು ನಮ್ಮ ಸಂತರು ಅನಾದಿ ಕಾಲದಿಂದಲೂ ನಿರಂತರವಾಗಿ ರಕ್ಷಿಸುತ್ತಿದ್ದಾರೆ. ನಮ್ಮ ಸಂಸ್ಕೃತಿ ಯಾವಾಗಲೂ ವಿಶ್ವಸಹೋದರತ್ವ, ವಿಶ್ವಶಾಂತಿ, ಸಮಾನತೆ, ಸಾಮರಸ್ಯವನ್ನು ಪ್ರೇರೇಪಿಸುತ್ತದೆ. ನಮ್ಮ ಧರ್ಮದ ಏಕತೆ ಮತ್ತು ಸಾಮರಸ್ಯತೆಗೆ ಸನಾತನ ಧರ್ಮದ ಪರಂಪರೆಯನ್ನು ಶ್ರೀಮಂತ ಗೊಳಿಸಲು ಸಾಧುಗಳು ಮತ್ತು ಸಂತರು ದೊಡ್ಡ ಕೊಡುಗೆ ನೀಡಿದ್ದಾರೆ.

**'ನಡೆದಾಡುವ ದೇವರು' ಎಂದು ಕರೆಯಲ್ಪಡುವ ಡಾ.ಶಿವಕುಮಾರ್ ಮಹಾಶಿವಯೋಗಿ ಅವರು ತನ್ನ ಸಂಪೂರ್ಣ ಜೀವನವನ್ನು ಮಾನವ ಸೇವೆ, ಶಿಕ್ಷಣ ಮತ್ತು ಸಾಮಾಜಿಕ ಉನ್ನತಿಗೆ ಮುಡಿಪಾಗಿಟ್ಟವರು. ಕರ್ನಾಟಕ ಮತ್ತು ಭಾರತದಾದ್ಯಂತ ಅವರ ಕೊಡುಗೆ ಅನನ್ಯ ಮತ್ತು ಸ್ಫೂರ್ತಿದಾಯಕವಾಗಿದೆ ಎಂದರು.**

ಸಾಧುಗಳು, ಸಂತರು, ಆಚಾರ್ಯರು, ಋಷಿ ಮುನಿಗಳು ವಿಶ್ವವೇದಿಕೆಯಲ್ಲಿ ಧರ್ಮ, ಸಂಸ್ಕೃತಿ, ಆಧ್ಯಾತ್ಮಿಕತೆಯ ಧ್ವಜವನ್ನು ಹಾರಿಸಿದ್ದಾರೆ. ಪ್ರಸ್ತುತ ಪ್ರಪಂಚದ ಅನೇಕ ದೇಶಗಳು ಆಧ್ಯಾತ್ಮಿಕ ಮತ್ತು ಮಾನಸಿಕ ಯೋಗಕ್ಷೇಮಕ್ಕಾಗಿ ಭಾರತದ ಕಡೆಗೆ ನೋಡುತ್ತಿವೆ. ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭ ಒಂದು ಉದಾಹರಣೆಯಾಗಿದೆ ಎಂದು ತಿಳಿಸಿದರು. 111 ವರ್ಷಗಳಿಂದ ಮಾನವೀಯತೆಯ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿದ ಪರಮ ಪೂಜ್ಯ ಡಾ.ಶಿವಕುಮಾರ್ ಸ್ವಾಮೀಜಿಯವರ ಆರನೇ ಪುಣ್ಯತಿಥಿಗೆ ಆಗಮಿಸುವ ಮೂಲಕ ಪೂಜ್ಯರ ದರ್ಶನ ಮತ್ತು ಆಶೀರ್ವಾದ ಪಡೆಯುವ ಅವಕಾಶ ನನಗೆ ದೊರೆತಿರುವುದು ಸಂತಸ ತಂದಿದೆ.

**ಡಾ.ಶಿವಕುಮಾರ ಸ್ವಾಮೀಜಿಯವರು ಶಿಕ್ಷಣವನ್ನು ಸಮಾಜದ ಬದಲಾವಣೆಯ ಪ್ರಮುಖ ಸಾಧನವೆಂದು ಪರಿಗಣಿಸಿದ್ದಾರೆ. ಅವರು ಶಾಲೆಗಳು, ಕಾಲೇಜುಗಳು ಮತ್ತು ಎಂಜಿನಿಯರಿಂಗ್ ಮತ್ತು ವೈದ್ಯಕೀಯ ಕಾಲೇಜುಗಳನ್ನು ಒಳಗೊಂಡಂತೆ 125 ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿದರು. ಮಠದ ಅಡಿಯಲ್ಲಿ ನಡೆಯುವ ಸಂಸ್ಥೆಗಳು ಜಾತಿ, ಧರ್ಮ, ಅಥವಾ ಆರ್ಥಿಕ ಸ್ಥಿತಿಯನ್ನು ಲೆಕ್ಕಿಸದೇ ಶಿಕ್ಷಣವನ್ನು ನೀಡುತ್ತವೆ.**

ಧಾರ್ಮಿಕತೆ, ಧರ್ಮನಿಷ್ಠೆ ಮತ್ತು ಸಕಾರಾತ್ಮಕ ಶಕ್ತಿಯ ನಾಡಾಗಿರುವ ಶ್ರೀ ಸಿದ್ದಗಂಗಾ ಮಠವು ನಾಡಿನ ಪ್ರಸಿದ್ಧ ಮಠಗಳಲ್ಲಿ ಒಂದಾಗಿದೆ ಎಂದು ನುಡಿದರು.

ಸಿದ್ದಗಂಗಾ ಮಠಕ್ಕೆ 600 ವರ್ಷಗಳ ಇತಿಹಾಸವಿದೆ. ಈ ಮಠವು ಧಾರ್ಮಿಕ ಸ್ಥಳವಾಗಿದೆ ಮತ್ತು ಶಿಕ್ಷಣ, ಸೇವೆ ಮತ್ತು ಆಧ್ಯಾತ್ಮಿಕತೆಯ ಕೇಂದ್ರವಾಗಿದೆ. ಈ ಮಠ ಸಮಾಜವನ್ನು ಸಮರ್ಪಣೆ, ದಾನ, ಮಾನವೀಯತೆಯ ಸೇವೆ ಮತ್ತು ಜ್ಞಾನದ ಮಾರ್ಗವನ್ನು ಅನುಸರಿಸಲು ಪ್ರೇರೇಪಿಸುತ್ತಿದೆ. ಅಲ್ಲದೇ ಧರ್ಮ, ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ಪ್ರಚಾರ ಮತ್ತು ಸಾಮಾಜಿಕ ಪ್ರಗತಿಯಲ್ಲಿ ಪ್ರಮುಖ ಕೊಡುಗೆಯನ್ನು ನೀಡಿದೆ ಎಂದು ಶ್ಲಾಘಿಸಿದರು.

ಸಿದ್ದಗಂಗಾ ಮಠವು ಸಾಮಾಜಿಕ-ಆರ್ಥಿಕ ಬದಲಾವಣೆಗಳನ್ನು ತರುವ ಮೂಲಕ ಸಮಾಜವನ್ನು ಸ್ವಾವಲಂಬಿ ಮಾಡುವ ಮಹತ್ವದ ಕೆಲಸವನ್ನು ಮಾಡುತ್ತಿದೆ ಮತ್ತು ಸಾಮಾಜಿಕ ಸಮಾನತೆ ಮತ್ತು ಸಮಾನತೆ, ಸಮೃದ್ಧಿ, ಶ್ರೇಷ್ಠತೆ, ಸಬಲೀಕರಣ, ಉದ್ಯಮಶೀಲತೆ ಮತ್ತು ಜ್ಞಾನೋದಯಕ್ಕಾಗಿ ಎಲ್ಲರಿಗೂ ಮೌಲ್ಯಯುತವಾದ ಶಿಕ್ಷಣವನ್ನು ನೀಡುತ್ತಿದೆ.

# ಮೈಕ್ರೋ ಫೈನಾನ್ಸ್ ಹಾವಳಿ ಮಹಿಳೆ ಆತ್ಮಹತ್ಯೆ

• ಉದಯವಾಹಿನಿ, ರಾಮನಗರ




ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್‌ಗಳ ಹಾವಳಿ ಮುಂದುವರಿದಿದೆ. ಫೈನಾನ್ಸ್ ಕಾಟಕ್ಕೆ ಜನರು ಊರು ತೊರೆಯುತ್ತಿರುವುದು ಒಂದು ಕಡೆಯಾದರೇ ಮತ್ತೊಂದೆಡೆ ಜೀವವನ್ನೇ ಕಳೆದುಕೊಳ್ಳುವ ಹಂತಕ್ಕೆ ಬಂದು ನಿಂತಿದೆ. ಸಾಲಗಾರರ ಕಿರುಕುಳಕ್ಕೆ ಮಹಿಳೆಯೋರ್ವರು ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಮೈಕ್ರೋ ಫೈನಾನ್ಸ್ ಕಂಪನಿಗಳ ಹಾವಳಿಗೆ ಜನರು ಊರು ಖಾಲಿ ಮಾಡಿಕೊಂಡು ವಲಸೆ ಹೋಗುತ್ತಿದ್ದಾರೆ. ಮತ್ತೊಂದೆಡೆ ನಿತ್ಯ ಮನೆಬಳಿ ಬಂದು ಕಿರುಕುಳ ಕೊಡುತ್ತಿರುವ ಫೈನಾನ್ಸ್ ಸಿಬ್ಬಂದಿ ಕಾಟಕ್ಕೆ ಜೀವವನ್ನೇ ಕಳೆದುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ. ರಾಮನಗರದ ತಾಲ್ಲೂಕಿನ ತಿಮ್ಮಯ್ಯನದೊಡ್ಡಿ ಗ್ರಾಮದ ಯಶೋದಮ್ಮ ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಬೇಸತ್ತು ಮಹಿಳೆ ಆತ್ಮಹತ್ಯೆಗೆ ಶರಣಾಗಿದ್ದಾರೆ. ಕೂಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದ ಯಶೋದಮ್ಮ ಸುಮಾರು ಎಂಟು ಖಾಸಗಿ ಫೈನಾನ್ಸ್ ಕಂಪನಿಗಳಿಂದ 5 ಲಕ್ಷ ಸಾಲ ಪಡೆದಿದ್ದರು. ಕಳೆದ ಎರಡು ತಿಂಗಳಿನಿಂದ ಅನಾರೋಗ್ಯಕ್ಕೀಡಾದ ಹಿನ್ನೆಲೆ ಸರಿಯಾಗಿ ಕೆಲಸಕ್ಕೆ ಹೋಗದೇ ಸಾಲ ಮರುಪಾವತಿ ಮಾಡಿರಲಿಲ್ಲ. ಎರಡು ತಿಂಗಳು ಸಾಲ ಬಾಕಿ ಉಳಿಸಿಕೊಂಡ ಹಿನ್ನಲೆ ಫೈನಾನ್ಸ್ ಕಂಪನಿಯ ಸಿಬ್ಬಂದಿ ಮನೆ ಬಳಿ ಬಂದು ಗಲಾಟೆ ನಡೆಸಿ ಇನ್ನೆರಡು ದಿನದಲ್ಲಿ ಸಾಲ ಕಟ್ಟಲಿಲ್ಲ ಅಂದರೆ ಮನೆ ಜಪ್ತಿ ಮಾಡುವುದಾಗಿ ಬೆದರಿಕೆ ಹಾಕಿದ್ದರಿಂದ ಬೇಸತ್ತ ಯಶೋದಮ್ಮ ಮನೆಯಲ್ಲಿ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ.

ಇನ್ನೂ ಗ್ರಾಮದಲ್ಲಿ ಹಲವು ಮಂದಿ ಇದೇ ರೀತಿ ಫೈನಾನ್ಸ್ ಕಂಪನಿಯಲ್ಲಿ ಸಾಲ ಪಡೆದಿದ್ದು ನಿತ್ಯ ಮೈಕ್ರೋ ಫೈನಾನ್ಸ್ ಸಿಬ್ಬಂದಿ ಗ್ರಾಮಕ್ಕೆ ಬಂದು ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ಮನೆ ಜಪ್ತಿ ಮಾಡಿ ಬೆದರಿಕೆ ಹಾಕುತ್ತಿದ್ದಾರೆ. ಅಲ್ಲದೇ ಒಂದು ಫೈನಾನ್ಸ್‌ನಿಂದ ಸಾಲ ತೀರುವ ಮುನ್ನವೇ ಮತ್ತೊಂದು ಫೈನಾನ್ಸ್‌ನವರು ಹಣ ಕೊಡುತ್ತೇವೆ ಎಂದು ಜನರಿಗೆ ಸಾಲ ನೀಡಿ ಅಧಿಕ ಬಡ್ಡಿ ಹಾಕುತ್ತಿದ್ದಾರೆ. ಅಲ್ಲದೇ ನಾಲ್ಕು ಜನ ಮಹಿಳೆಯರನ್ನು ಸೇರಿಸಿ ಒಂದು ಗುಂಪು ಮಾಡಿ ಸಾಲ ಕೊಡುತ್ತಾರೆ. ಒಬ್ಬರು ಸಾಲ ಕಟ್ಟದಿದ್ದರೆ ಉಳಿದ ಮೂರು ಮಂದಿಗೆ ಆ ಸಾಲ ಕಟ್ಟುವಂತೆಯೂ ಫೈನಾನ್ಸ್ ಸಿಬ್ಬಂದಿ ಒತ್ತಡ ಹೇರಿ ಮಾನಸಿಕ ಕಿರುಕುಳ ಕೊಡುತ್ತಾರೆ ಎಂದು ಗ್ರಾಮಸ್ಥರು ದೂರಿದ್ದಾರೆ.

# ಟಿಪ್ಪು ಸುಲ್ತಾನ್ ದಿ ಸಾಗಾ ಆಫ್ ಮೈಸೂರು ಪುಸ್ತಕ ಬಿಡುಗಡೆ

• ಉದಯವಾಹಿನಿ, ಮಡಿಕೇರಿ



ಉದಯವಾಹಿನಿ ಚಿತ್ರ

ಮೈಸೂರು, ಕೊಡಗು, ಮಲಬಾರ್ ಪ್ರದೇಶದಲ್ಲಿ ಟಿಪ್ಪು ಸುಲ್ತಾನ್ ಆಳ್ವಿಕೆಯ ಪ್ರತಿಕೂಲ ಪರಿಣಾಮಗಳ ಹಿನ್ನೆಲೆ ಹೊಂದಿರುವ ಟಿಪ್ಪು ಸುಲ್ತಾನ್ ದಿ ಸಾಗಾ ಆಫ್ ಮೈಸೂರು ಇಂಟರ್ರೆಗ್ನಮ್ ಪುಸ್ತಕವನ್ನು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಬಿಡುಗಡೆಗೊಳಿಸಿದರು.

ಕೊಡಗಿನ ಪೊನ್ನಂಪೇಟೆ ತಾಲ್ಲೂಕಿನ ಗೋಣಿಕೊಪ್ಪದ ಖಾಸಗಿ ಹೋಟೆಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಪುಸ್ತಕ ಬಿಡುಗಡೆ ಮಾಡಿದರು. ಬಳಿಕ ಮಾತನಾಡಿದ ಅವರು, ಇತಿಹಾಸಕಾರ ವಿಕ್ರಮ್ ಸಂಪತ್ ಅವರು ಬರೆದ ಈ ಪುಸ್ತಕ ದೇಶ-ವಿದೇಶಗಳಲ್ಲಿ ಈಗಾಗಲೇ ಬಿಡುಗಡೆಯಾಗಿದೆ. ಮೈಸೂರು, ಬೆಂಗಳೂರು, ಮಂಗಳೂರಿನಲ್ಲೂ ಬಿಡುಗಡೆಯಾಗಿದೆ. ಆದ್ರೆ ಕೊಡಗಿನಲ್ಲಿ ಈ ಬುಕ್ ಬಿಡುಗಡೆಯಾಗಿರಲ್ಲಿಲ್ಲ. ಲೇಖಕರು ಪುಸ್ತಕ ರಚನೆ ಮಾಡುವ ಸಂದರ್ಭದಲ್ಲಿ ದಾಖಲೆಗಳ ಸಮೇತ ಬರೆದಿದ್ದಾರೆ. ಕೊಡಗಿನಲ್ಲಿ ಟಿಪ್ಪುವಿನಿಂದ ಎಷ್ಟು ದೌರ್ಜನ್ಯಗಳು ನಡೆದಿದೆ.

**ಇನ್ನೂ ಇದೇ ಸಂದರ್ಭದಲ್ಲಿ ಮಾತನಾಡಿದ ಇತಿಹಾಸಕಾರ ವಿಕ್ರಮ್ ಸಂಪತ್, ಕೊಡಗು ಜಿಲ್ಲೆಯಲ್ಲಿನ ಜನ ಹೈದರಾಲಿ ಮತ್ತು ಟಿಪ್ಪು ಸುಲ್ತಾನ್ ದೌರ್ಜನ್ಯ ಸಾಕಷ್ಟು ನೋವು ಕಂಡಿದ್ದಾರೆ. ದೇವಟಿ ಪರಂಬುನಲ್ಲಿ ಕೊಡವರ ಹತ್ಯೆ ಘಟನೆ ಹೇಗಾಯ್ತು? ಇನ್ನೂ ಮುಂತಾದ ಪ್ರಕರಣವನ್ನು ಈ ಪುಸ್ತಕದಲ್ಲಿ ಉಲ್ಲೇಖ ಮಾಡಿದ್ದೇನೆ. ಯಾವುದೇ ಒಂದು ರಾಜಕೀಯ ಇಲ್ಲದೇ ಸತ್ಯಾಂಶ ಅನಾವರಣಗೋಳಿಸುವ ಪ್ರಯತ್ನ ಇದಾಗಿದೆ ಎಂದು ನುಡಿದರು.**


ಆ ಸಂದರ್ಭದಲ್ಲಿ ಟಿಪ್ಪು ವಿರುದ್ಧ ಕೊಡಗಿನ ಜನರು ಯಾವ ರೀತಿಯಲ್ಲಿ ವಿರೋಧ ವ್ಯಕ್ತಪಡಿಸಿದ್ರು, ಎಲ್ಲವನ್ನೂ ಪುಸ್ತಕದಲ್ಲಿ ಚಿತ್ರಿಸಿದ್ದಾರೆ.

ಟಿಪ್ಪು ದೌರ್ಜನ್ಯದ ಸಂದರ್ಭದಲ್ಲಿ ಕೊಡಗಿನ ಸಂಸ್ಕೃತಿ, ಪರಂಪರೆಯನ್ನು ಕೊಡವರು ಹೇಗೆ ರಕ್ಷಣೆ ಮಾಡಿದರು. ಇಷ್ಟು ಇತಿಹಾಸ ಹೊಂದಿರುವ ಕೊಡುಗಿನಲ್ಲಿ ಪುಸ್ತಕ ಬಿಡುಗಡೆ ಮಾಡಿರುವುದು ಸಂತೋಷದ ವಿಚಾರ. ನಾವು ಕಳೆದು ಹೋದ ಘಟನೆಯನ್ನು ಎಂದಿಗೂ ಮರೆಯಬಾರದು ಅಂತ ಸಲಹೆ ನೀಡಿದರು.

# ಹೆದ್ದಾರಿ ಪ್ರಾಧಿಕಾರ, ಆರ್‌ಟಿಒ, ಪಿಡಬ್ಲ್ಯುಡಿ ಅಧಿಕಾರಿಗಳೊಂದಿಗೆ ಎಸ್‌ಪಿ ಸಭೆ

• ಉದಯವಾಹಿನಿ, ರಾಮನಗರ

ಜಿಲ್ಲೆಯ ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ ಸೇರಿದಂತೆ ವಿವಿಧ ಹೆದ್ದಾರಿಗಳು ಹಾಗೂ ರಸ್ತೆಗಳಲ್ಲಿ ಸಂಭವಿಸುತ್ತಿರುವ ಅಪಘಾತಗಳಿಂದಾಗಿ ಹೆಚ್ಚಿನ ಸಾವು-ನೋವು ವರದಿಯಾಗುತ್ತಿದೆ. ಹಾಗಾಗಿ, ಅಪಘಾತಗಳನ್ನು ತಗ್ಗಿಸಲು ಸಂಬಂಧಪಟ್ಟ ಇಲಾಖೆಯವರು ಪರಸ್ಪರ ಸಹಯೋಗದಲ್ಲಿ ಕೆಲಸ ಮಾಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ ಗೌಡ ಸೂಚನೆ ನೀಡಿದರು. ಸಂಬಂಧಪಟ್ಟ ಇಲಾಖೆಯವರು ತಮ್ಮ ವ್ಯಾಪ್ತಿಯ ರಸ್ತೆಯನ್ನು ಸೂಕ್ತವಾಗಿ ನಿರ್ವಹಣೆ ಮಾಡಬೇಕು. ಜೊತೆಗೆ ರಸ್ತೆ ಸುರಕ್ಷತೆಗೆ ಸಂಬಂಧಿಸಿದ ಫಲಕಗಳನ್ನು ಅಗತ್ಯವಿರುವೆಡೆ ಅಳವಡಿಸಬೇಕು. ಅಪಘಾತ ತಡೆಗೆ ಅಗತ್ಯ ಕ್ರಮಗಳನ್ನು ಪರಸ್ಪರ ಸಹಯೋಗದಲ್ಲಿ ಕೈಗೊಳ್ಳಬೇಕು ಎಂದು ತಿಳಿಸಿದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಟಿ.ವಿ. ಸುರೇಶ್, ಡಿವೈಎಸ್ಪಿಗಳು, ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ ಯೋಜನಾ ನಿರ್ದೇಶಕ ರಾಹುಲ್ ಗುಪ್ತಾ, ಪಿಡಬ್ಲ್ಯುಡಿ ಕಾರ್ಯನಿರ್ವಾಹಕ ಎಂಜಿನಿಯರ್, ಆರ್‌ಟಿಒ ಅಧಿಕಾರಿಗಳು ಸಭೆಯಲ್ಲಿದ್ದರು.



ಉದಯವಾಹಿನಿ ಚಿತ್ರ

**ರಸ್ತೆಗಳಲ್ಲಿ ಬೆಳೆದಿರುವ ಗಿಡಗಂಟಿಗಳನ್ನ ಕತ್ತರಿಸಿ**

**ಅಪಘಾತಗಳನ್ನು ತಗ್ಗಿಸುವ ನಿಟ್ಟಿನಲ್ಲಿ ತಮ್ಮ ಕಚೇರಿಯಲ್ಲಿ ಸೋಮವಾರ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ಲೋಕೋಪಯೋಗಿ ಇಲಾಖೆ ಅಧಿಕಾರಿಗಳೊಂದಿಗೆ ಅವರು ಸಭೆ ನಡೆಸಿದರು. ನಿರ್ದೇಶಕರು, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಹೆಚ್ಚಿನ ಅಪಘಾತಗಳು ಸಂಭವಿಸುತ್ತಿರುವ ಹಾಟ್ ಸ್ಪಾಟ್‌ಗಳನ್ನು ಪತ್ತೆಹಚ್ಚಿ, ಅಪಘಾತಗಳ ಇಳಿಕೆಗೆ ಮುಂದಾಗಬೇಕು. ವೇಗ ನಿಯಂತ್ರಿಸಲು ರಸ್ತೆಯುಬ್ಬು ನಿರ್ಮಾಣ, ಅಪಘಾತ ಸ್ಥಳದ ಸೂಚನಾ ಫಲಕಗಳು, ಅಗತ್ಯವಿರುವೆಡೆ ರಸ್ತೆ ವಿಸ್ತರಣೆ ಸೇರಿದಂತೆ ಇತರ ಕ್ರಮಗಳನ್ನು ಕೈಗೊಳ್ಳಬೇಕು. ಇದಕ್ಕೆ ಪೊಲೀಸ್ ಇಲಾಖೆ ಎಲ್ಲಾ ರೀತಿಯಿಂದಲೂ ಸಹಕಾರ ನೀಡುತ್ತದೆ ಎಂದರು.ಹೆದ್ದಾರಿ, ರಸ್ತೆ ವಿಭಜಕ, ರಸ್ತೆಗಳಲ್ಲಿ ಬೆಳೆದಿರುವ ಗಿಡಗಂಟಿಗಳನ್ನ ಕತ್ತರಿಸಬೇಕು.**

# ಹಣ ವಸೂಲಿ ಕೇಂದ್ರವಾದ ಆರ್‌ಟಿಒ

• ಉದಯವಾಹಿನಿ, ಕೋಲಾರ



ಉದಯವಾಹಿನಿ ಚಿತ್ರ

ಜಿಲ್ಲೆಯ ಆರ್‌ಟಿಒ ಕಚೇರಿಯಲ್ಲಿ ಅಡ್ಜಸ್ಟ್‌ಮೆಂಟ್ ಜೋರಾಗಿದೆ. ಹಣ ವಸೂಲಿ ಮಿತಿಮೀರಿದೆ. ಗಡಿ ಭಾಗದ ನಂಗಲಿ ಚೆಕ್‌ಪೋಸ್ಟ್‌ನಲ್ಲಿ ದೊಣ್ಣೆ ಹಿಡಿದು ನಿಂತು ವಸೂಲಿ ಮಾಡುತ್ತಿರುವ ಮಾಹಿತಿ ಬಂದಿದ್ದು, ಶಾಸಕರಿಂದಲೂ ದೂರುಗಳು ಬರುತ್ತಿವೆ. ಆರ್‌ಟಿಒ ಅಮಾನತಿಗೆ ಸಂಬಂಧಪಟ್ಟ ಅಧಿಕಾರಿಗೆ ಪತ್ರ ಬರೆಯುತ್ತೇನೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್, ಆರ್‌ಟಿಒ ಅಧಿಕಾರಿಗಳ ಮೇಲೆ ಮುಗಿಬಿದ್ದರು. ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಕೆಡಿಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. 'ಆಂಧ್ರ ಪ್ರದೇಶ, ತಮಿಳುನಾಡಿನಿಂದ ಕಾನೂನು ಬಾಹಿರವಾಗಿ ಕೋಲಾರ ಮೂಲಕ ಬೆಂಗಳೂರಿಗೆ ಖಾಸಗಿ ಬಸ್ಸುಗಳು, ಇತರ ವಾಹನಗಳು ಓಡಾಡುತ್ತಿವೆ. ಅನುಮತಿ ಪಡೆಯದೆ, ತೆರಿಗೆ ಪಾವತಿಸದೆ ಅಕ್ರಮವಾಗಿ ಓಡಾಡುತ್ತಿದ್ದು, ಸರ್ಕಾರಕ್ಕೆ ಆರ್ಥಿಕ ನಷ್ಟವಾಗುತ್ತಿದೆ. ಈ ಸಂಬಂಧ ನಿಯಂತ್ರಣಕ್ಕೆ ಏನು ಕ್ರಮ ವಹಿಸಿದ್ದೀರಿ? ಈ ಸಂಬಂಧ ಜಿಲ್ಲಾಧಿಕಾರಿಯು ಪರಿಶೀಲನೆ ನಡೆಸಿ ಮಾಹಿತಿ ನೀಡಬೇಕು ಎಂದು ಸೂಚನೆ ನೀಡಿದರು. ಕಳೆದ ಕೆಡಿಪಿ ಸಭೆಯಲ್ಲೂ ಇದೇ ವಿಚಾರ ಪ್ರಸ್ತಾಪವಾಗಿತ್ತು. ಆಗ ಏಕ ಸಭೆಗೆ ಆರ್‌ಟಿಒ ಬಂದಿಲ್ಲ? ಜಿಲ್ಲೆಗೆ ವರ್ಗಾವಣೆಯಾಗಿ ಬಂದು ಎಷ್ಟು ದಿನಗಳಾದವು ಏಕೆ ನನ್ನನ್ನು ಶಾಸಕರು, ಸಂಸದರನ್ನು ಈವರೆಗೆ ಭೇಟಿ ಆಗಿಲ್ಲ? ಶಿಷ್ಟಾಚಾರ ಗೊತ್ತಿಲ್ಲವೇ?' ಎಂದು ಕೇಳಿದರು. ಆಗ ಆರ್‌ಟಿಒ ವೇಣುಗೋಪಾಲರೆಡ್ಡಿ, 'ಕೋರ್ಟ್ ವಿಚಾರ ಇದ್ದ ಕಾರಣ ಬರಲು ಸಾಧ್ಯವಾಗಿರಲಿಲ್ಲ. ಖಾಸಗಿ ವಾಹನಗಳ ಅಕ್ರಮ ಪ್ರವೇಶ ಸಂಬಂಧ ಕ್ರಮ ಕೈಗೊಂಡಿದ್ದು ಶಾಸಕ, ಜಿಲ್ಲಾಧಿಕಾರಿಗೆ ವರದಿ ನೀಡಿದ್ದೇನೆ. ಸಂಸದರನ್ನು ಭೇಟಿಯಾಗಿ ಮಾತನಾಡಿದ್ದೇನೆ ಎಂದರು.

# ತಡಗವಾಡಿ ಕೆರೆ ಅಭಿವೃದ್ಧಿ: ಲೋಕಾರ್ಪಣೆ

• ಉದಯವಾಹಿನಿ, ಶ್ರೀರಂಗಪಟ್ಟಣ



ಉದಯವಾಹಿನಿ ಚಿತ್ರ

ತಾಲ್ಲೂಕಿನ ತಡಗವಾಡಿ ಗ್ರಾಮದ ಕೆರೆಯನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಸಹಭಾಗಿತ್ವದಲ್ಲಿ 15 ಲಕ್ಷ ವೆಚ್ಚದಲ್ಲಿ ಅಭಿವೃದ್ಧಿಪಡಿಸಿದ್ದು ಮಂಗಳವಾರ ಲೋಕಾರ್ಪಣೆ ಮಾಡಲಾಯಿತು. ಬೆಂಗಳೂರಿನ ಕ್ಷೇಮವನ ಪ್ರಕೃತಿ ಚಿಕಿತ್ಸಾ ಕೇಂದ್ರದ ಕಾರ್ಯನಿರ್ವಹಣಾಧಿಕಾರಿ ಶ್ರದ್ಧಾ ಅಮಿತ್ ಲೋಕಾರ್ಪಣೆಗೊಳಿಸಿ ಮಾತನಾಡಿ, ಧರ್ಮಸ್ಥಳ ಸಂಸ್ಥೆಯು ತಡಗವಾಡಿ ಕೆರೆ ಸೇರಿದಂತೆ ರಾಜ್ಯದಲ್ಲಿ 731 ಕೆರೆಗಳನ್ನು ನಮ್ಮೂರು ನಮ್ಮ ಕೆರೆ ಯೋಜನೆಯಡಿ ಅಭಿವೃದ್ಧಿ ಮಾಡಿದೆ. ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಕೆರೆಗಳು ನಮ್ಮ ಪೂರ್ವಜರು ಕೊಟ್ಟ ಆಸ್ತಿ. ಭವಿಷ್ಯದಲ್ಲಿ ಜನ, ಜಾನುವಾರು, ಪಕ್ಷಿಗಳ ಅನುಕೂಲಕ್ಕಾಗಿ ಕೆರೆಗಳನ್ನು ಸಂರಕ್ಷಿಸಬೇಕು' ಎಂದು ಹೇಳಿದರು. ಮಾಜಿ ಶಾಸಕಿ ವಿಜಯಲಕ್ಷ್ಮಿ ಬಂಡಿಸಿದ್ದೇಗೌಡ ಮಾತನಾಡಿ, ತಡಗವಾಡಿ ಗ್ರಾಮದ ಕೆರೆ 30 ಎಕರೆ ವಿಸ್ತೀರ್ಣವಿದ್ದು, ಕೆರೆಯ ನೀರು ಸೋರಿಕೆಯಾಗದಂತೆ ಏರಿಯನ್ನು ಅಭಿವೃದ್ಧಿಪಡಿಸಿ ಬೇಸಿಗೆಯಲ್ಲೂ ನೀರು ನಿಲ್ಲುವಂತೆ ಮಾಡಲಾಗಿದೆ.

ತಾಲ್ಲೂಕಿನ ಇತರ ಕೆರೆಗಳ ಅಭಿವೃದ್ಧಿಗೂ ಧರ್ಮಸ್ಥಳ ಸಂಸ್ಥೆ ಆಸ್ಥೆ ವಹಿಸಬೇಕು' ಎಂದು ಕೋರಿದರು.ಕರೆಗೆ ಬಾಗಿನ ಅರ್ಪಿಸಲಾಯಿತು. ಕೆರೆ ಅಭಿವೃದ್ಧಿ ಸಮಿತಿ ಅಧ್ಯಕ್ಷ ಹೊಂಬಾಳೆಗೌಡ, ತಡಗವಾಡಿ ಗ್ರಾ.ಪಂ. ಅಧ್ಯಕ್ಷೆ ಶಶಿಕಲಾ, ಉಪಾಧ್ಯಕ್ಷ ಟಿ.ಎಲ್. ರಘು, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಪ್ರಾದೇಶಿಕ ನಿರ್ದೇಶಕ ಜಯರಾಮ ನೆಲ್ಲಿತ್ತಾಯ, ಜಿಲ್ಲಾ ನಿರ್ದೇಶಕ ಮುರಳೀಧರ್, ತಾಲ್ಲೂಕು ಯೋಜನಾಧಿಕಾರಿ ಗಣಪತಿಭಟ್, ಜನ ಜಾಗೃತಿ ಸಮಿತಿ ಸದಸ್ಯರಾದ ಕೆ.ಶೆಟ್ಟಹಳ್ಳಿ ಅಪ್ಪಾಜಿ, ಚಂದಗಾಲು ಶಿವಣ್ಣ, ಗಾಯತ್ರಿ ಇದ್ದರು.

**ಬಟ್ಟೆ ಮತ್ತು ಪಾತ್ರೆ ತೊಳೆಯಲು ಹಾಗೂ ಜಾನುವಾರುಗಳಿಗೆ ನೀರು ಕುಡಿಸಲು ಅನುಕೂಲ ಆಗುವಂತೆ ಸೋಪಾನ ಕಟ್ಟೆಯನ್ನೂ ನಿರ್ಮಿಸಲಾಗಿದೆ. ಧರ್ಮಸ್ಥಳ ಸಂಸ್ಥೆಯ 8 ಲಕ್ಷ ಅನುದಾನ, ಸಾರ್ವಜನಿಕರು ನೀಡಿದ 7 ಲಕ್ಷ ದೇಣಿಗೆಯಿಂದ ಕೆರೆ ಅಭಿವೃದ್ಧಿಯಾಗಿದೆ.**

# 2ನೇ ವಾರ್ಡ್‌ನಲ್ಲಿ ಸಮಸ್ಯೆಗಳ ರಾಶಿ

## ವಾರ್ಡ್‌ನಲ್ಲಿ ಕುಡಿಯುವ ನೀರು ಸೇರಿದಂತೆ ವಿವಿಧ ಮೂಲ ಸೌಕರ್ಯಗಳ ಕೊರತೆ

• ಉದಯವಾಹಿನಿ, ಮಾಲೂರು



ಉದಯವಾಹಿನಿ ಚಿತ್ರ

ಸುಮಾರು 700 ಮನೆಗಳನ್ನು ಹೊಂದಿರುವ ಮಾಲೂರಿನ 2ನೇ ವಾರ್ಡ್ ಹಲವು ಸಮಸ್ಯೆಗಳನ್ನು ತನ್ನ ಒಡಲಲ್ಲಿ ಇಟ್ಟುಕೊಂಡಿದೆ. 220 ವಿದ್ಯುತ್ ಹೈಟೆನ್ಷನ್ ಲೈನ್ ಸಮಸ್ಯೆ ಎದುರಿಸುವ ಜೊತೆಗೆ ಕನಿಷ್ಠ ಮೂಲಭೂತ ಸೌಕರ್ಯಗಳಿಂದ ಇಲ್ಲಿನ ನಿವಾಸಿಗಳು ವಂಚಿತರಾಗಿದ್ದಾರೆ.

ಮಾಲೂರಿನ 27 ವಾರ್ಡ್‌ಗಳ ಪೈಕಿ 2ನೇ ವಾರ್ಡ್ 2000ಕ್ಕೂ ಹೆಚ್ಚು ಮತದಾರರನ್ನು ಒಳಗೊಂಡಿದ್ದು ಬಹುತೇಕ ಕೂಲಿ ಕಾರ್ಮಿಕರೇ ಆಗಿದ್ದಾರೆ.

ಆದರೆ, ವಾರ್ಡ್‌ಲ್ಲಿ ಕುಡಿಯುವ ನೀರು ಸೇರಿದಂತೆ ವಿವಿಧ ಮೂಲ ಸೌಕರ್ಯಗಳ ಕೊರತೆ ಎದ್ದು ಕಾಣುತ್ತಿದೆ. ಇದರಿಂದ ಜನಸಾಮಾನ್ಯರಿಗೆ ತೀವ್ರ ತೊಂದರೆಯಾಗಿದೆ. ವಾರ್ಡ್ ಪುರಸಭೆ ವತಿಯಿಂದ 15 ದಿನಗಳಿಗೊಮ್ಮೆ ಅರ್ಧ ಗಂಟೆ ನೀರು ಸರಬರಾಜು ಮಾಡಲಾಗುತ್ತಿದೆ. ಉಳಿದ ದಿನಗಳಲ್ಲಿ ಈ ವಾರ್ಡ್‌ನಲ್ಲಿ ವಾಸಿಸುವ ಜನರು ಕುಡಿಯುವ ಮತ್ತು ದಿನಬಳಕೆ ನೀರಿಗಾಗಿ ಟ್ಯಾಂಕರ್ ನೀರನ್ನು ಅವಲಂಬಿಸಿದ್ದಾರೆ. ಇನ್ನು ವಾರ್ಡ್‌ಲ್ಲಿ ಸ್ವಚ್ಛತೆಯಂತೂ ಮರೀಚಿಕೆಯಾಗಿದೆ. ಬೀದಿ ದೀಪಗಳ ಅವಸ್ಥೆಯಂತೂ ಕೇಳುವವರೇ ಇಲ್ಲ ಎಂಬಂತಾಗಿದೆ. ವಾರ್ಡ್ ಯಾವುದೇ ರಸ್ತೆಯಲ್ಲಿ ಕಣ್ಣಿಗೆ ಕಸದ ರಾಶಿಗಳೇ ರಾಚುತ್ತದೆ. ರಸ್ತೆ ಬದಿಯಲ್ಲಿ ವಿದ್ಯುತ್ ಕಂಬಿಗಳಲ್ಲಿ ಹಳೆಯ ಕಾಲದಲ್ಲಿ ಹಾಕಿದ ವಿದ್ಯುತ್ ದೀಪಗಳು ಕಂಡುಬರುತ್ತವೆ. ಅವು ಹೊತ್ತಿ ಉರಿದು ತಿಂಗಳುಗಳೇ ಕಳೆದಿದ್ದು, ಅಸ್ಥಿಪಂಜರದ ರೀತಿ ವಿದ್ಯುತ್ ಕಂಬಗಳಲ್ಲಿ ನೇತಾಡುತ್ತಿರುತ್ತವೆ ಎಂದು ಸ್ಥಳೀಯರು ದೂರುತ್ತಾರೆ. 'ಹೈಟೆನ್ಷನ್ ತಂತಿಗಳಿಂದ ಆಗುವ ಅನಾಹುತದ ಬಗ್ಗೆ ಜನಸಾಮಾನ್ಯರಿಗೆ ಬೆಸ್ಕಾಂ ವತಿಯಿಂದ ಜಾಗೃತಿ ಮೂಡಿಸಬೇಕು' ಎಂದು ವಾರ್ಡ್ ಪುರಸಭೆ ಸದಸ್ಯ ಜಾಕೀರ್ ಹುಸೇನ್ ಒತ್ತಾಯಿಸುತ್ತಾರೆ.

**ಕೆಟ್ಟು ನಿಂತ ಶುದ್ಧ ಕುಡಿಯುವ ನೀರಿನ ಘಟಕ:** ಹೋಂಡಾ ಮೋಟಾರ್ ಕಂಪನಿಯಿಂದ ವಾರ್ಡ್‌ನಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಗಿತ್ತು. ಆದರೆ, ಅದು ಕೆಟ್ಟು ನಿಂತು ತಿಂಗಳುಗಳೇ ಕಳೆದಿದ್ದರೂ, ಇನ್ನೂ ದುರಸ್ತಿ ಮಾಡಿಲ್ಲ. ಇನ್ನು ಪುರಸಭೆ ವತಿಯಿಂದ 2016-17ರಲ್ಲಿ 6.50 ಲಕ್ಷ ವೆಚ್ಚದಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಿಸಲಾಗಿದೆ. ಆದರೆ, ಅವು ಈಗವರೆಗೆ ಜನಸಾಮಾನ್ಯರ ಬಳಕೆಗೆ ಮುಕ್ತವಾಗಿಲ್ಲ. ಪುರಸಭೆ ಅಧಿಕಾರಿಗಳ ನಿರ್ಲಕ್ಷದಿಂದಾಗಿ, ಈ ಶೌಚಾಲಯಗಳು ಇದೀಗ ಮತ್ತೆ ಶಿಥಿಲಾವಸ್ಥೆ ತಲುಪಿವೆ ಎಂಬುದು ನಾಗರಿಕರ ಆರೋಪ.

**220 ಹೈಟೆನ್ಷನ್ ವಿದ್ಯುತ್ ತಂತಿಗಳು ಪಟ್ಟಣದ 2ನೇ ವಾರ್ಡಿನಲ್ಲಿ ಹಾದುಹೋಗಿದೆ. ಇಲ್ಲಿನ ನಾಗರಿಕರು ಬಹಳ ಎಚ್ಚರಿಕೆಯಿಂದ ಇರಬೇಕು. 220 ಹೈಟೆನ್ಷನ್ ವಿದ್ಯುತ್ ತಂತಿಗಳ ಕೆಳಗೆ ರಸ್ತೆ ನಿರ್ಮಾಣ ಮಾಡಿರುವುದು, ಬಹಳ ಅಪಾಯಕಾರಿಯಾಗಿದೆ. ಹೆಚ್ಚು ಭಾರ ತುಂಬಿದ ಲಾರಿ ಮತ್ತು ಟ್ರಕ್‌ಗಳು ಈ ರಸ್ತೆಯಲ್ಲಿ ಓಡಾಡಬಾರದು. ವಿದ್ಯುತ್ ತಂತಿಗಳ ಅಕ್ಕಪಕ್ಕದ ಮನೆಗಳ ನಿವಾಸಿಗಳು ಯಾವುದೇ ಕಟ್ಟಡ ನಿರ್ಮಾಣ, ದುರಸ್ತಿ ಮಾಡಬೇಕಾದರೆ ಬೆಸ್ಕಾಂ ಇಲಾಖೆಗೆ ಮಾಹಿತಿ ನೀಡಬೇಕು. ಇಲ್ಲಿನ ನಾಗರಿಕರು ಹೈಟೆನ್ಷನ್ ತಂತಿಗಳಿಂದ ಕನಿಷ್ಠ 6 ಅಡಿ ಅಂತರ ಕಾಯ್ದುಕೊಳಬೇಕು. ಅನ್ಸರ್ ಪಾಷ, ಎಇಇ, ಬೆಸ್ಕಾಂ**

### ನೊಣ, ಸೊಳ್ಳೆಗಳದ್ದೇ ಕಾಟ

ರಸ್ತೆ ಪಕ್ಕದಲ್ಲಿ ಎಲ್ಲೆಂದರಲ್ಲಿ ಕಸದ ರಾಶಿಗಳನ್ನು ಹಾಕಲಾಗಿದ್ದು, ನೊಣ ಮತ್ತು ಸೊಳ್ಳೆಗಳ ಆವಾಸ ಸ್ಥಾನವಾಗಿ ಮಾರ್ಪಟ್ಟಿದೆ. ಮನೆಗಳ ಬಳಿ ಖಾಲಿ ಇರುವ ನಿವೇಶನಗಳಲ್ಲಿ ಗಿಡಗಂಟಿಗಳು ಬೆಳೆದಿದ್ದು. ಹಾವು ಸೇರಿದಂತೆ ಇನ್ನಿತರ ಹುಳು- ಹುಪ್ಪಟೆಗಳ ಕಾಟ ಹೆಚ್ಚಾಗಿದೆ. ಪ್ರತಿದಿನ ಪುರಸಭೆಯ ಕಸ ಸಂಗ್ರಹಿಸುವ ವಾಹನ ವಾರ್ಡ್‌ಗೆ ಬಾರದಿರುವುದೇ, ವಾರ್ಡ್‌ನಲ್ಲಿ ಕಸವನ್ನು ಎಲ್ಲೆಂದರಲ್ಲಿ ವಿಲೇವಾರಿ ಮಾಡಲು ಕಾರಣವಾಗಿದೆ. ವಾರಕ್ಕೆ ಒಮ್ಮೆ ಅಥವಾ ಎರಡು ವಾರಗಳಿಗೆ ಒಮ್ಮೆ ಪುರಸಭೆಯ ವಾಹನ ಕಸ ಸಂಗ್ರಹಿಸಲು ವಾರ್ಡ್‌ಗೆ ಬರುತ್ತದೆ ಎಂದು ಸ್ಥಳೀಯ ನಿವಾಸಿಗಳು ಆರೋಪಿಸುತ್ತಾರೆ.

# ಜನಸ್ಪಂದನ ಸಭೆಯಲ್ಲಿ ಸಾರ್ವಜನಿಕರ ಅಹವಾಲು ಆಲಿಸಿದ ಶಾಸಕ ಬಾಲಕೃಷ್ಣ

• ಉದಯವಾಹಿನಿ ಬಿಡದಿ



ಉದಯವಾಹಿನಿ ಚಿತ್ರ

ಪಟ್ಟಣದ ವಾರ್ಡ್ 10 ಕಲ್ಲುಗೋಪಹಳ್ಳಿಯಲ್ಲಿ 86 ಲಕ್ಷ ವೆಚ್ಚದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಕಟ್ಟಡ ನಿರ್ಮಾಣ ಹಾಗೂ ಹುಲ್ತಾರ್ ಹೊಸದೊಡ್ಡಿ (ಬಂಡೆ) ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ 19.50 ಲಕ್ಷ ವೆಚ್ಚದಲ್ಲಿ ಕಾಂಪೌಂಡ್ ನಿರ್ಮಾಣ ಕಾಮಗಾರಿಗೆ ಶಾಸಕ ಎಚ್.ಸಿ. ಬಾಲಕೃಷ್ಣ ಇತ್ತೀಚೆಗೆ ಭೂಮಿಪೂಜೆ ನೆರವೇರಿಸಿದರು.

ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ-275ನಿಂದಾಗಿ ಕಲ್ಲುಗೋಪನಹಳ್ಳಿ ಶಾಲಾ ಕಟ್ಟಡದ ಜಾಗವನ್ನು ಸಹ ಭೂಸ್ವಾಧೀನ ಮಾಡಿಕೊಳ್ಳಲಾಗಿತ್ತು. ಅದಕ್ಕೆ ಪರಿಹಾರವಾಗಿ ಸಿಕ್ಕಿದ್ದ 86 ಲಕ್ಷ ಮೊತ್ತದಲ್ಲಿ ಇದೀಗ, ಶಾಲಾ ಕಟ್ಟಡ ನಿರ್ಮಾಣಕ್ಕೆ ಚಾಲನೆ ಸಿಕ್ಕಿದೆ. ಕಾರ್ಯಕ್ರಮದಲ್ಲಿ ಬಿಡದಿ ಪುರಸಭೆ ಅಧ್ಯಕ್ಷ ಎಂ.ಎನ್. ಹರಿಪ್ರಸಾದ್, ಉಪಾಧ್ಯಕ್ಷೆ ಮಂಜುಳಾ ಗೋವಿಂದಪ್ಪ, ಸದಸ್ಯ ನಾಗರಾಜು, ಮುಖ್ಯಾಧಿಕಾರಿ ಕೆ.ಜಿ. ರಮೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ಪಿ. ಸೋಮಲಿಂಗಯ್ಯ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಿರ್ದೇಶಕ ಅಬ್ಬನಕುಪ್ಪೆ ರಮೇಶ್ ಹಾಗೂ ಇತರರು ಇದ್ದರು.

**ನಾಲೆ ಅಭಿವೃದ್ಧಿಗೆ ಶಂಕುಸ್ಥಾಪನೆ:** ಗೋಪಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಾಮನಹಳ್ಳಿ ಗ್ರಾಮದಲ್ಲಿ 1.60 ಕೋಟಿ ರೂ ವೆಚ್ಚದ ಬ್ರಾಂಚ್ ನಾಲೆ ಅಭಿವೃದ್ಧಿ ಕಾಮಗಾರಿ, 50 ಲಕ್ಷ ವೆಚ್ಚದ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿ, , ಹೊಸಕೆರೆದೊಡ್ಡಿಯಲ್ಲಿ 7.50 ಲಕ್ಷ ವೆಚ್ಚದ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ, ಆಲದಮರದದೊಡ್ಡಿ ಗ್ರಾಮದಲ್ಲಿ 25 ಲಕ್ಷ ರೂ ವೆಚ್ಚದ ಕಾಂಕ್ರೀಟ್ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಬಾಲಕೃಷ್ಣ ಅವರು ಭೂಮಿ ಪೂಜೆ ನೆರವೇರಿಸಿದರು.

ಕರಡಿಗೌಡನದೊಡ್ಡಿ, ಉರಗಹಳ್ಳಿ ಹಾಗೂ ಗೋಪಹಳ್ಳಿ ಗ್ರಾಮದಲ್ಲಿ ತಲಾ 50 ಲಕ್ಷ ವೆಚ್ಚದಲ್ಲಿ ನಿರ್ಮಿಸಿರುವ ಕಾಂಕ್ರೀಟ್ ರಸ್ತೆ ಮತ್ತು ಚರಂಡಿ ಕಾಮಗಾರಿಗಳನ್ನು ಉದ್ಘಾಟಿಸಿದ ಬಾಲಕೃಷ್ಣ, ನಂತರ ಪಂಚಾಯಿತಿ ಆವರಣದಲ್ಲಿ ಜನಸ್ಪಂದನ ಸಭೆ ನಡೆಸಿ ಅಹವಾಲು ಸ್ವೀಕರಿಸಿದರು.

**ಶಾಲಾ ಕಟ್ಟಡ ನಿರ್ಮಾಣಕ್ಕೆ ಚಾಲನೆ**

# ಮಿನಿ ನ್ಯೂಸ್

## ಮಳಿಗೆ ಹರಾಜು ಮಾಡಲು ಆಗ್ರಹ

• ಉದಯವಾಹಿನಿ, ಹಾರೋಹಳ್ಳಿ

ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಮಳಿಗೆಗಳನ್ನು ಹರಾಜು ನಡೆಸಿ ದಲಿತರಿಗೆ ಮೀಸಲಾತಿ ಕಲ್ಪಿಸದಿದ್ದರೆ ಜ.23ರಂದು ಡಿ.ಸಿ ಕಚೇರಿಗೆ ಬೈಕ್ ರಾಲಿ, 30ರಂದು ಅಹೋರಾತ್ರಿ ಧರಣೆ ನಡೆಸಲಾಗುವುದು ಎಂದು ಸಮತಾ ಸೈನಿಕ ದಳದ ರಾಜ್ಯ ಯುವ ಘಟಕದ ಅಧ್ಯಕ್ಷ ಜಿ.ಗೋವಿಂದಯ್ಯ ಎಚ್ಚರಿಸಿದರು. ಹಾರೋಹಳ್ಳಿ ಪಟ್ಟಣ ಪಂಚಾಯಿತಿ ಬಳಿ ಜಮಾಯಿಸಿದ ದಲಿತ ಸಂಘಟನೆಗಳ ಒಕ್ಕೂಟದ ಪದಧಿಕಾರಿಗಳು, ಪ.ಪಂ ವಿರುದ್ಧ ಕರಪತ್ರ ಬಿಡುಗಡೆಗೊಳಿಸಿದರು.

ಮುಖ್ಯಾಧಿಕಾರಿ ಜನರ ಹಿತ ಕಾಯುತ್ತಿಲ್ಲ. ಹಲವು ವರ್ಷಗಳಿಂದಲೂ ಮಳಿಗೆ ಹರಾಜು ನಡೆಸದೆ ಹಣವಂತರು, ಅಧಿಕಾರಿಗಳ ತಾಳಕ್ಕೆ ತಕ್ಕಂತೆ ಕುಣಿಯುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ದಲಿತ ಕ್ರಾಂತಿ ಸೇನೆ ರಾಜ್ಯಾಧ್ಯಕ್ಷ ಚಂದ್ರು ಮಾತನಾಡಿ. ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನೂರಾರು ಮಳಿಗೆಗಳಿವೆ. ಅವುಗಳನ್ನು ಹರಾಜು ನಡೆಸಿ ದಶಕಗಳೇ ಉರುಳಿವೆ. ಕೂಡಲೇ ಸಂಬಂಧಪಟ್ಟವರು ಗಮನಹರಿಸದಿದ್ದರೆ ಹೋರಾಟ ನಡೆಸಲಾಗುವುದು ಎಂದರು.

## ಬೆಳ್ಳಂಬೆಳಗ್ಗೆ ಕ್ಯಾಂಟೀನ್ ಮೇಲೆ ಕಾಡಾನೆ ದಾಳಿ: ಪಾರಾದ ದಂಪತಿ

• ಉದಯವಾಹಿನಿ, ಮಡಿಕೇರಿ

ಮರಿಯೊಂದಿಗಿದ್ದ ಕಾಡಾನೆಯೊಂದು ಕ್ಯಾಂಟೀನ್ ಮೇಲೆ ದಾಳಿ ಮಾಡಿದ ಘಟನೆ ನೆಲ್ಲಿಹುದಿಕೇರಿಯಲ್ಲಿ ಮಂಗಳವಾರ(ಜ.21) ಬೆಳಗ್ಗೆ ನಡೆದಿದೆ. ಕ್ಯಾಂಟೀನ್ ನಡೆಸುತ್ತಿದ್ದ ದಂಪತಿ ಅದೃಷ್ಟವಶಾತ್ ಕೂದಲೆಳೆ ಅಂತರದಲ್ಲಿ ಪಾರಾಗಿದ್ದಾರೆ. ನೆಲ್ಲಿಹುದಿಕೇರಿ ಸಮೀಪದ ಅತ್ತಿಮಂಗಲ ತೋಟದಿಂದ ಮರಿಯೊಂದಿಗೆ ರಸ್ತೆ ದಾಟುತ್ತಿದ್ದ ಕಾಡಾನೆ ಏಕಾಏಕಿ ಪಕ್ಕದಲ್ಲಿದ್ದ ಕ್ಯಾಂಟೀನ್ ಮೇಲೆ ದಾಳಿ ಮಾಡಿದೆ. ಕ್ಯಾಂಟೀನ್ ನಲ್ಲಿದ್ದ ವಸ್ತುಗಳು, ಪೀಠೋಪಕರಣಗಳು ಮತ್ತು ತಿಂಡಿ ತನಿಸುಗಳನ್ನು ಎಳೆದು ಬಿಸಾಡಿದ ಕಾಡಾನೆ ಪಕ್ಕದ ಬಸ್ ತಂಗುದಾಣದಲ್ಲಿದ್ದ ಗ್ರಾಮಸ್ಥರ ಕಿರುಚಾಟ ಕೇಳಿ ಅಲ್ಲಿಂದ ಕಾಲ್ಕಿತ್ತಿದೆ. ನಂತರ ನಕ್ಕರೆ ಗ್ರಾಮದ ಮಾರ್ಗವಾಗಿ ಸಂಚಾರ ಬೆಳೆಸಿದ ಕಾಡಾನೆ ಕಾರೊಂದರ ಮೇಲೂ ದಾಳಿ ನಡೆಸಲು ಯತ್ನಿಸಿದೆ ಎಂದು ತಿಳಿದು ಬಂದಿದೆ. ಕ್ಯಾಂಟೀನ್ ನಲ್ಲಿದ್ದ ಜಬ್ಬಾರ್ ಹಾಗೂ ಅವರ ಪತ್ನಿ ಕಾಡಾನೆ ದಾಳಿಯಿಂದ ತಪ್ಪಿಸಿಕೊಂಡಿದ್ದಾರೆ. ಜಬ್ಬಾರ್ ಅವರಿಗೆ ಸಣ್ಣಪುಟ್ಟ ಗಾಯಗಳಾಗಿದೆ. ಬೆಳ್ಳಂಬೆಳಗ್ಗೆ ಕಾಡಾನೆ ದಾಳಿ ನಡೆಸಿದ ಪರಿಣಾಮ ಗ್ರಾಮಸ್ಥರು, ವಿದ್ಯಾರ್ಥಿಗಳು ಹಾಗೂ ಕಾರ್ಮಿಕರು ಆತಂಕಗೊಂಡರು. ಅರಣ್ಯ ಇಲಾಖೆ ತಕ್ಷಣ ಕಾಡಾನೆಗಳನ್ನು ಕಾಡಿಗಟ್ಟುವ ಕಾರ್ಯಾಚರಣೆ ಕೈಗೊಳ್ಳಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

## ಕಣ್ಣಿನ ತಪಾಸಣಾ ಶಿಬಿರ

• ಉದಯವಾಹಿನಿ, ಗುಂಡ್ಲುಪೇಟೆ

ಪಟ್ಟಣದ ಗುರುಭವನದಲ್ಲಿ ನಡೆದ ಉಚಿತ ಶಸ್ತ್ರ ಚಿಕಿತ್ಸೆ ಕಾರ್ಯಕ್ರಮ ಹಾಗೂ ಉಚಿತ ಕಣ್ಣಿನ ತಪಾಸಣಾ ಶಿಬಿರದಲ್ಲಿ ಸುಮಾರು 250ಕ್ಕೂ ಮಂದಿ ಕಣ್ಣಿನ ತಪಾಸಣೆ ಒಳಗಾದರು. ಗುರುಭವನದಲ್ಲಿ ಜೆಎಸ್ಎಸ್ ಆಸ್ಪತ್ರೆ ಮೈಸೂರು ಮತ್ತು ರಕ್ತಧಾರೆ ಗುಂಡ್ಲುಪೇಟೆ ಹಾಗೂ ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆ ಚಾಮರಾಜನಗರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಶಿಬಿರದಲ್ಲಿ ನಂಜನಗೂಡು, ಎಚ್.ಡಿ. ಕೋಟೆ, ಚಾಮರಾಜನಗರ, ಮೈಸೂರು, ಗುಂಡ್ಲುಪೇಟೆ ಪಟ್ಟಣ ಹಾಗು ವಿವಿಧ ಗ್ರಾಮಗಳ ಜನರು ತಪಾಸಣೆ ಮಾಡಿಸಿಕೊಂಡರು. 30ಕ್ಕೂ ಹೆಚ್ಚು ಶಿಬಿರಾರ್ಥಿಗಳು ಕಣ್ಣಿನ ಪೊರೆ ಸಮಸ್ಯೆಯಿಂದ ಬಳಲುತ್ತಿದ್ದು, ಶಸ್ತ್ರ ಚಿಕಿತ್ಸೆಗಾಗಿ ಆಯ್ಕೆ ಮಾಡಿ ಆಸ್ಪತ್ರೆಗೆ ಕರೆದುಕೊಂಡು ಹೋಗಲಾಯಿತು.

ಶಿಬಿರದಲ್ಲಿ ವೈದ್ಯಾಧಿಕಾರಿಗಳ ತಂಡ ಕಣ್ಣಿನ ಪೊರೆ, ವಾರೆಗಣ್ಣು, ಹತ್ತಿರ ಮತ್ತು ದೂರ ದೃಷ್ಟಿ ದೋಷ, ನೀರು ಸೋರುವಿಕೆ, ಗ್ಲಾಕೋಮಾ, ಕಣ್ಣಿನಲ್ಲಿ ಗೀಜು ಬರುವುದು, ಕಣ್ಣಿನಲ್ಲಿ ಬಿರುಕು ಉಂಟಾಗುವುದು, ರಾತ್ರಿ ಕುರುಡು ಸೇರಿದಂತೆ ಇನ್ನಿತರ ಕಣ್ಣಿನ ಸಮಸ್ಯೆಗಳ ಕುರಿತು ಪರೀಕ್ಷೆ ನಡೆಸಿ ಕೆಲವರಿಗೆ ಕನ್ನಡಕಗಳ ಬಳಕೆಗೆ ಸಲಹೆ ನೀಡಿದರು. ಸಕ್ಕರೆ ಕಾಯಿಲೆ ತಪಾಸಣೆ ನಡೆಸಿ ಔಷಧಿಗಳನ್ನು ತೆಗೆದುಕೊಳ್ಳುವಂತೆ ಸೂಚಿಸಿದರು. ಶಿಬಿರದಲ್ಲಿ ಪುರಸಭಾ ಮುಖ್ಯಾಧಿಕಾರಿ ವಸಂತ ಕುಮಾರಿ, ಬಿಸಿಯೂಟ ಸಹಾಯಕ ನಿರ್ದೇಶಕ ಸತೀಶ್, ಚಾಮುಲ್ ಮಾಜಿ ಅಧ್ಯಕ್ಷ ನಂಜುಂಡಪ್ರಸಾದ್, ಆಯೋಜಕ ಮೂರ್ತಿ, ರಕ್ತಧಾರೆ ತಂಡದ ನಿರ್ವಾಹಕ ಮಣಿ ಮಡಹಳ್ಳಿ ನಾಗಾರ್ಜುನ್ ಕುಮಾರ್ ಪ್ರಮೋದ್ ಕವ್ವತಾರ ನಾಗೇಂದ್ರ, ಗುಂಡ್ಲುಪೇಟೆ ಸೇರಿದಂತೆ ವೈದ್ಯಾಧಿಕಾರಿಗಳ ತಂಡದವರು ಹಾಜರಿದ್ದರು.

## ಸೋಲಿಗ ಮುಖಂಡರ ಸಭೆ

• ಉದಯವಾಹಿನಿ, ಹನೂರು

ತಾಲೂಕಿನ ಮಿಣ್ಯಂ ಗ್ರಾಮ ಪಂಚಾಯತ್ ವ್ಯಾಪ್ತಿಯ ಕೊಪ್ಪ ಗ್ರಾಮದಲ್ಲಿ ಸೋಲಿಗ ಅಭಿವೃದ್ಧಿ ಸಂಘದ ವತಿಯಿಂದ ದೊಡ್ಡ ಸಿದ್ದಯ್ಯರವರ ಅಧ್ಯಕ್ಷತೆಯಲ್ಲಿ ಸೋಲಿಗ ಮುಖಂಡರ ಗ್ರಾಮ ಸಭೆ ನಡೆಯಿತು. ಸೋಲಿಗ ಜನರು ವಾಸಿಸುವ ಗ್ರಾಮಕ್ಕೆ ಬೇಕಾದ ಮೂಲಭೂತ ಸೌಕರ್ಯಗಳು ಸಮಸ್ಯೆಗಳ ಕುರಿತು ಚರ್ಚೆ ನಡೆಸಿದರು. ಅರಣ್ಯ ಹಕ್ಕು ಕಾಯ್ದೆ, ಸಂಘದ ಬಲವರ್ಧನೆ, ಮೂಲಭೂತ ಸಮಸ್ಯೆ ಕುರಿತಾಗಿ ಚರ್ಚಿಸಲಾಯಿತು.

## ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರಿಗೆ ಜ.24ರಂದು ಅಭಿನಂದನೆ

• ಉದಯವಾಹಿನಿ, ಕೆ ಆರ್ ನಗರ

ಕೇಂದ್ರ ಸಚಿವ ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಅವರಿಗೆ ಜ.24ರಂದು ನಡೆಯುವ ಅಭಿನಂದನೆ ಮತ್ತು ನಾಗರಿಕ ಸಮಾರಂಭದ ಕಾರ್ಯಕ್ರಮದ ಸ್ಥಳ ಪರಿಶೀಲನೆ ಮಾಡಿದ ಮಾಜಿ ಸಚಿವ ಸಾರಾ ಮಹೇಶ್ ಕಾರ್ಯಕ್ರಮದ ವೇದಿಕೆ ಡಾ. ರಾಜಕುಮಾರ್ ಬಾನಂಗಳ ಮತ್ತು ಕಾರ್ಯಕರ್ತರಿಗೆ ಊಟದ ವ್ಯವಸ್ಥೆ ಕೃಷ್ಣರಾಜೇಂದ್ರ ಕ್ರಿಕೆಟ್ ಸ್ಟೇಡಿಯಂ ಸೇರಿ ಎರಡು ಸ್ಥಳಗಳನ್ನು ಪರಿಶೀಲಿಸಿ ಪಕ್ಷದ ಮುಖಂಡರಿಗೆ ಮತ್ತು ವೇದಿಕೆ ನಿರ್ಮಿಸುತ್ತಿರುವ ಕಾರ್ಮಿಕರಿಗೆ ಊಟದ ವ್ಯವಸ್ಥೆ ಮಾಡುತ್ತಿರುವ ಅಡಿಗೆ ಭಟ್ಟರಿಂದ ಎಲ್ಲಾ ವ್ಯವಸ್ಥೆಯ ಪೂರ್ಣ ವಿವರವನ್ನು ಪಡೆದುಕೊಂಡರು.

ನಂತರ ಮಾತನಾಡಿದ ಮಾಜಿ ಸಚಿವ ಸಾ ರಾ ಮಹೇಶ್ ಕೇಂದ್ರ ಸಚಿವರಾದ ಕುಮಾರಸ್ವಾಮಿಯವರನ್ನು ಅನಿವಾರ್ಯ ಕಾರಣಗಳಿಂದ ಕೆ ಆರ್ ನಗರ ವಿಧಾನಸಭಾ ಕ್ಷೇತ್ರದಿಂದ ಹಾಗೂ ನಾಗರಿಕರಿಂದ ಅಭಿನಂದನೆ ಮತ್ತು ಸನ್ಮಾನ ಮಾಡಲಾಗಿರಲಿಲ್ಲ ಆದರೆ 24ರಂದು ಹೊರತುಪಡಿಸಿ ಮುಂದಿನ ತಿಂಗಳಿನಿಂದ ಕೇಂದ್ರ ಸಂಸತ್ ಅದಿವೇಶನ ನಡೆಯುವುದರಿಂದ ಅವರಿಗೆ ಬಿಡುವಿರುವುದಿಲ್ಲವೆಂಬ ಉದ್ದೇಶದಿಂದ ಈ ತಿಂಗಳ 24ರಂದು ದಿನ ನಿಗದಿ ಮಾಡಲಾಗಿದೆ ಎಂದು ತಿಳಿಸಿದರು.

ಅಂತರಾಳದಿಂದ...
EDITORIAL

# ಮಣ್ಣಿನ ಮಕ್ಕಳ ಕೊಕ್ಕೊಗೆ ವಿಶ್ವಕಪ್ ಹಿರಿಮೆ-ಗರಿಮೆ



ಭಾರತದ ಅಪ್ಪಟ ದೇಶಿ ಕ್ರೀಡೆ ಕೊಕ್ಕೊಗೆ ಈಗ ವಿಶ್ವಕಿರೀಟದ ಹೆಗ್ಗಳಿಕೆ. ನವದೆಹಲಿಯಲ್ಲಿ ಮುಕ್ತಾಯಗೊಂಡ ಕೊಕ್ಕೊ ಮೊದಲ ವಿಶ್ವಕಪ್ ಟೂರ್ನಿಯಲ್ಲಿ ಆತಿಥೇಯ ಭಾರತದ ಮಹಿಳಾ ಮತ್ತು ಪುರುಷ ತಂಡಗಳೆರಡೂ ಚಾಂಪಿಯನ್ ಪಟ್ಟಕ್ಕೇರಿವೆ. ದೇಶದ ವಿವಿಧ ಗ್ರಾಮೀಣ ಪ್ರದೇಶಗಳಿಂದ ಬಂದ ಆಟಗಾರರು ಇಂದಿರಾ ಗಾಂಧಿ ಕ್ರೀಡಾಂಗಣದಲ್ಲಿ ಚಿನ್ನದ ಪದಕಗಳನ್ನು ಕೊರಳಿಗೇರಿಸಿಕೊಂಡು ಸಂಭ್ರಮಿಸಿದ್ದು ಚಾರಿತ್ರಿಕ ಬೆಳವಣಿಗೆ. ಅದರಲ್ಲಿ ಮೈಸೂರು ಜಿಲ್ಲೆಯ ಕುರುಬೂರಿನ ಬಿ. ಚೈತ್ರಾ ಮತ್ತು ಬೆಂಗಳೂರಿನ ಎಂ.ಕೆ. ಗೌತಮ್ ಅವರೂ ಇದ್ದರು. ಇದರೊಂದಿಗೆ ಈ ಕ್ರೀಡೆಗೆ ಜಾಗತಿಕ ಮಾರುಕಟ್ಟೆಯ ಬಾಗಿಲು ತೆರೆದುಕೊಂಡಿರುವುದು ಕೂಡ ಗಮನಾರ್ಹ. ಈ ಟೂರ್ನಿಯಲ್ಲಿ 23 ದೇಶಗಳಿಗೆ ಸೇರಿದ ತಂಡಗಳು ಭಾಗವಹಿಸಿದ್ದವು.

ಏಷ್ಯಾದ ರಾಷ್ಟ್ರಗಳ ತಂಡಗಳಲ್ಲದೆ ಜರ್ಮನಿ, ನೆದರ್ಲೆಂಡ್ಸ್, ಅರ್ಜೆಂಟಿನಾ, ಆಸ್ಟ್ರೇಲಿಯಾ, ಇಂಗ್ಲೆಂಡ್, ಪೋಲೆಂಡ್, ದಕ್ಷಿಣ ಆಫ್ರಿಕಾ ಮತ್ತು ಅಮೆರಿಕದ ತಂಡಗಳೂ ಇದ್ದವು. ಪುರುಷರ ವಿಭಾಗದಲ್ಲಿ 20 ಹಾಗೂ ಮಹಿಳೆಯರ ವಿಭಾಗದಲ್ಲಿ 19 ತಂಡಗಳು ಸ್ಪರ್ಧಿಸಿದ್ದವು. ದೇಶದ ಬಹುತೇಕ ಶಾಲೆ, ಕಾಲೇಜುಗಳ ದೈಹಿಕ ಶಿಕ್ಷಣದಲ್ಲಿ ಕೊಕ್ಕೊ ಆಟಕ್ಕೆ ಪ್ರಾಶಸ್ತ್ಯ ಇದೆ. ಆದರೆ ಕ್ರಿಕೆಟ್ ಭರಾಟೆಯಲ್ಲಿ ನಗರ ಪ್ರದೇಶಗಳಲ್ಲಿ ಕೊಕ್ಕೊ ಬೇರೂರಿಲ್ಲ. ಆದ್ದರಿಂದ ಇಂದಿಗೂ ಗ್ರಾಮೀಣ ಪ್ರತಿಭೆಗಳೇ ಈ ಆಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಈ ವಿಶ್ವಕಪ್‌ನಲ್ಲಿ ಸ್ಪರ್ಧಿಸಿದ ಭಾರತ ತಂಡ


**ಆದರೆ ಈಗ ಅಂತಹ ತಪ್ಪು ಮರುಕಳಿಸದಂತೆ ನೋಡಿಕೊಳ್ಳಬೇಕು. ಸ್ವದೇಶ ಮತ್ತು ವಿದೇಶಗಳಲ್ಲಿ ಕೊಕ್ಕೊ ಅಭಿವೃದ್ಧಿಗೊಳಿಸುವತ್ತ ಕಾರ್ಯಪ್ರವೃತ್ತರಾಗಬೇಕು. ನುರಿತ ತರಬೇತುದಾರರು, ತಾಂತ್ರಿಕ ಸಲಹೆಗಾರರನ್ನು ಸಿದ್ದಗೊಳಿಸಬೇಕು. ವಿದೇಶಗಳ ಕೊಕ್ಕೊ ತಂಡಗಳಿಗೆ ತರಬೇತುದಾರರಾಗಿ ಹೋಗಲು ಭಾರತೀಯರಿಗೆ ಹೆಚ್ಚು ಅವಕಾಶ ಸಿಗುವಂತಾಗಬೇಕು. ಈ ಕ್ರೀಡೆಯಲ್ಲಿ ಗಾಯದ ಸಮಸ್ಯೆ ಹೆಚ್ಚು.**

ಗಳಲ್ಲಿದ್ದ ಹೆಚ್ಚಿನ ಸಂಖ್ಯೆಯ ಆಟಗಾರರು ಹಳ್ಳಿಗಳಿಂದ ಬಂದವರೇ ಆಗಿದ್ದರು. ಉತ್ತಮ ಆಟಗಾರ್ತಿಯಾಗಿ ಗಮನ ಸೆಳೆದ ಚೈತ್ರಾ ಅವರ ಊರು ಕುರುಬೂರಿನಲ್ಲಿ 14 ವರ್ಷಗಳಿಂದ ಕೊಕ್ಕೊ ತರಬೇತಿ ಉತ್ತುಂಗದಲ್ಲಿದೆ. ಆದರೆ ಅಲ್ಲಿ ಕೊಕ್ಕೊ ಮೈದಾನವೇ ಇಲ್ಲ. ಇಲ್ಲಿಯ ಗಣಿತ ಶಿಕ್ಷಕ ಮಂಜುನಾಥ್ ಎಂಬುವರ ಆಸಕ್ತಿಯಿಂದಾಗಿ ಹಲವಾರು ಮಕ್ಕಳು ಭಾರತ ತಂಡದಲ್ಲಿ ಸ್ಥಾನ ಪಡೆಯುವ ಮಟ್ಟಕ್ಕೆ ಬೆಳೆದಿದ್ದಾರೆ. ಈ ವಿಶ್ವಕಪ್ ಟೂರ್ನಿಯು ಕೊಕ್ಕೊ ಆಟಕ್ಕೆ ಹೊಸ ಭರವಸೆ ತುಂಬಿದೆ.

ಈ ಹಂತದಲ್ಲಿ ಭಾರತ ಕೊಕ್ಕೊ ಫೆಡರೇಷನ್ (ಕೆಕೆಎಫ್‌ಐ) ಮತ್ತು ರಾಜ್ಯ ಕೊಕ್ಕೊ ಸಂಸ್ಥೆಗಳು ಹೆಚ್ಚು ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸುವ ಅಗತ್ಯವಿದೆ. ಗ್ರಾಮೀಣ ಭಾಗದಲ್ಲಿ ಕಬಡ್ಡಿ ಮತ್ತು ಕೊಕ್ಕೊ ಎರಡೂ ಸಮಾನ ಜನಪ್ರಿಯತೆ ಹೊಂದಿದ್ದವು. ಆದರೆ ಕಬಡ್ಡಿ ಬಹುಬೇಗ ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಂಡಿತು. ಏಷ್ಯನ್ ಗೇಮ್ಸ್, ವಿಶ್ವಕಪ್ ಟೂರ್ನಿಗಳಲ್ಲಿ ಸ್ಥಾನ ಪಡೆಯಿತು. ಇವತ್ತು ವಿದೇಶಗಳಲ್ಲಿ ಭಾರತದ ತರಬೇತುದಾರರು ಕಬಡ್ಡಿ ಕಲಿಸುತ್ತಿರುವುದರಿಂದ ಸ್ಪರ್ಧೆಯ ಗುಣಮಟ್ಟ ಹೆಚ್ಚುತ್ತಿದೆ. ಅದೇ ರೀತಿ ಕೊಕ್ಕೊ ಕೂಡ ನೆಲೆ ವಿಸ್ತರಿಸಿ ಕೊಳ್ಳಬೇಕು. 1936ರ ಬರ್ಲಿನ್ ಒಲಿಂಪಿಕ್ ಕೂಟದಲ್ಲಿಯೇ ಕೊಕ್ಕೊ ಪ್ರದರ್ಶನ ಕ್ರೀಡೆಯಾಗಿತ್ತು. ಆದರೂ ಕಬಡ್ಡಿ ರೀತಿಯಲ್ಲಿ ಕೊಕ್ಕೊ ಆಟವನ್ನು ಉನ್ನತ ಸ್ಥಾನಕ್ಕೇರಿಸುವಲ್ಲಿ ಆಡಳಿತಗಾರರು ಸಫಲರಾಗಲಿಲ್ಲ. ಅದ್ದರಿಂದಲೇ ವಿಶ್ವಕಪ್ ಟೂರ್ನಿ ಆಯೋಜಿಸಲು ಇಷ್ಟು ದೀರ್ಘ ಕಾಲ ಕಾಯಬೇಕಾಯಿತು. ಆದ್ದರಿಂದ ಕ್ರೀಡಾ ವೈದ್ಯಕೀಯ ವಿಜ್ಞಾನ ಪರಿಣತರನ್ನೂ ಒಳಗೊಳ್ಳಬೇಕು. ಒಂದು ವೃತ್ತಿಪರ ವ್ಯವಸ್ಥೆ ರೂಪುಗೊಳ್ಳಬೇಕು.

ಇದರಿಂದಾಗಿ ಆಟಗಾರರಿಗೆ ಹಾಗೂ ಸಂಬಂಧಿತ ಪರಿಣತರಿಗೆ ಉದ್ಯೋಗ ಸೃಷ್ಟಿಯಾಗುತ್ತದೆ. ಕೊಕ್ಕೊ ಆಡುವ ದೇಶಗಳ ಸಂಖ್ಯೆ ಹೆಚ್ಚಾದಾಗ ಸಹಜವಾಗಿಯೇ ಏಷ್ಯನ್ ಗೇಮ್ಸ್, ಕಾಮನ್‌ವೆಲ್ತ್ ಗೇಮ್ಸ್ ಮತ್ತು ಒಲಿಂಪಿಕ್ ಕೂಟಗಳಲ್ಲಿ ಸ್ಥಾನ ಸಿಗುತ್ತದೆ. ಆದರೆ, ವಿದೇಶಗಳಲ್ಲಿ ಕೊಕ್ಕೊ ಕ್ರೀಡೆಯನ್ನು ಜನಪ್ರಿಯಗೊಳಿಸುವ ಭರಾಟೆಯಲ್ಲಿ ನಾವು ಮೈಮರೆಯಬಾರದು. ಈ ಕ್ರೀಡೆಯಲ್ಲಿ ನಾವೀನ್ಯ ಮತ್ತು ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವತ್ತಲೂ ಮುಕ್ತವಾಗಿರಬೇಕು. ಈಗ ಸಿಕ್ಕಿರುವ ಅವಕಾಶವನ್ನು ಸಮರ್ಥವಾಗಿ ಬಳಸಿಕೊಂಡರೆ ಭಾರತದ ದೇಶಿ ಕ್ರೀಡೆಯು ವಿಶ್ವಮಟ್ಟದಲ್ಲಿ ಉತ್ತುಂಗಕ್ಕೆ ಏರಬಹುದು.

# ರಾಮಾಯಣ



## ಶ್ರೀ ರಾಮನು ಪರಶು ರಾಮನನ್ನು ಜಯಿಸಿದ್ದು

• ಹಿಂದಿನ ಸಂಚಿಕೆಯಿಂದ 76ನೆಯ ಅಧ್ಯಾಯ

ಒಂದು ದಿವಸ ಕಮಲದಳಲೋಚನನೂ ಶ್ಯಾವಾವರ್ಜಿನ್ ಸಾರ್ಮಪ್ರವರ್ತಕನೂ ಮಹಾ ಪರಾಕ್ರಮಿಯೂ ಪರಸೈನ್ಯಸುಹಾರಕನೂ ವಿನಯಾದಿನಮ್ಮಣಗಳೇ ಒಂದು ದೇಹಾ ಕಾರವಾಗಿ ಅವತರಿಸಿದವೋ ಎಂಬಂತೆಯೂ ಇದ್ದ ಭರತನು ತನ್ನ ತಂದೆಯವ ದಶರಥರಾಯನಿಗೆ ನಮಸ್ಕಾರವನ್ನು ಮಾಡಬೇಕೆಂದು ಬರಲು ಆತನು ಭರತನನ್ನು ಕುರಿತು ಭರತ ಕೇಕಯರಾಯನ ಮಗನಾದ ನಿನ್ನ ಸೋದರಮಾವ ಯುರಾಜಿತ್ತುರಾಯನು ನಿನ್ನನ್ನು ಕರೆದುಕೊಂಡು ಹೋಗ ಬೇಕೆಂದು ಮಿಥಿಲಾಪಟ್ಟಣಕ್ಕೆ ಬಂದನು. ಆತನನ್ನು ವಿವಾಹವಾಗುವ ಪರ್ಯಂತ ನಿಲ್ಲಬೇಕೆಂದು ನೀನು ಆತನ ಕೂಡ ಆತನ ಊರಿಗೆ ಹೋಗಿ ಅವನ ಇಷ್ಟವನ್ನು ಸಲ್ಲಿಸು ಎಂದು ಹೇಳಿದನು. ಭರತನು ಮಹಾಪ್ರಸಾದವೆಂದು ಆ ಮಾತನ್ನು ಅಂಗೀಕರಿಸಿ ದಶರಥರಾಯನಿಗೆ ನಮಸ್ಕರಿಸಿ ತನ್ನ ಅಣ್ಣನಾದ ರಘುನಾಥನಿಗೆ ಅಭಿನಂದಿಸಿ ತಮ್ಮನಾದ ಲಕ್ಷ್ಮಣನನ್ನು ತಬ್ಬಿಕೊಂಡು ತನ್ನ ತಂದೆಯ ಅಪ್ಪಣೆಯನ್ನು ಪಡೆದು ತಮ್ಮನಾದ ಶತ್ರುಘ್ನನೊಡನೆ ಸೋದರಮಾವನ ಸಂಗಡ ತೆರಳುವುದಕ್ಕೆ ಸಿದ್ಧನಾದನು. ಆಗ ಆತನು ತನ್ನ ಸೋದರಳಿಯನಾದ ಭರತನನ್ನೂ ರಾಘ್ನನನ್ನೂ ಕರೆದುಕೊಂಡು ತನ್ನ ಪಟ್ಟಣಕ್ಕೆ ಹೋಗಿ ತನ್ನ ತಂದೆಯಾದ ಕೇಶಯರಾಯನಿಗೆ ಅಭಿವಂದಿಸಿದನು.


ಆ ರಾಯನು ತನ್ನ ಮೊಮ್ಮಕ್ಕಳಾದ ಭರತಶತ್ರುಘ್ನರನ್ನು ಕಂಡು ಅತಿಸಂತೋಷಪಟ್ಟು ಅವರಿಗೆ ಅನೇಕ ಸತ್ಕಾರಗಳನ್ನು ಮಾಡಿಕೊ0ಡಿದ್ದನು. ಇತ್ತಲಾ ಶ್ರೀರಾಮನು ತನ್ನ ತಮ್ಮನಾದ ಲಕ್ಷ್ಮಣನೊದನೆ ತನ್ನ ತಂದೆಯಾದ ದಶರಥ ರಾಯನಿಗೆ ಅಭಿನಂದಿಸಿ ಕಾಲೋಚಿತವಾದ ಸೇವಾಸತ್ಕಾರಗಳಿಂದ ಆತನಿಗೆ ಸಂತೋಷವನ್ನುಂಟು ಮಾಡಿಕೊಂಡು ಆತನ ಅಪ್ಪಣೆಯಿಂದ ಪಟ್ಟಣದ ವಾರುಪತ್ಯವನ್ನು ವಿಚಾರಿಸಿಕೊಂಡಿದ್ದನು. ಮತ್ತು ತಮ್ಮ ತಾಯಿಗಳಿಗೆ ಬೇಕಾದ ವಸ್ತುಗಳನ್ನು ತರಿಸಿಕೊಡುತ್ತ, ವಸಿಷ್ಠ ಮುನಿ ಮೊದಬಾದ ಗುರುಗಳಿಗೆ ಸತ್ಕಾರಗಳನ್ನು ಮಾಡಿಕೊಂಡು, ಶಿಷ್ಟರಾದ ಬ್ರಾಹ್ಮಣರನ್ನು ಪರಿಪಾಲಿಸಿಕೊಂಡಿದ್ದನು. ದಶರಥ ರಾಯನು ತನ್ನ ಮಕ್ಕಳಾದ ರಾಮಲಕ್ಷ್ಮಣರ ಗುಣಶೀಲಾದಿಗಳಿಂದ ಸಂತುಷ್ಟನಾಗಿದ್ದನು. ಆ ಕಾಲದಲ್ಲಿ ದಶರಥರಾಯನ ರಾಜ್ಯದಲ್ಲಿದ್ದ ಸಮಸ್ತ ಜನರೂ ಭೂಲೋಕಕ್ಕೆ ಬ್ರಹ್ಮದೇವನೇ ಪ್ರಜಾಪಾಲನಾರ್ಥವಾಗಿ ರಾಮಾವತಾರವಾಗಿ ಅವತರಿಸಿದನು ಎಂದು ಹರ್ಷದಿಂದ ಸುಖವಾಗಿದ್ದರು. ಈ ರೀತಿಯಲ್ಲಿ ಶ್ರೀರಾಮನು ಸಮಸ್ತ ಪ್ರಜೆಗಳನ್ನೂ ರಕ್ಷಿಸಿಕೊಂಡು ಸೀತಾಸಮೇತನಾಗಿ ಅನೇಕ ಸನ್ನಥಾವಿನೋದಗಳಿಂದ ಸೀತೆಯನ್ನು ಸಂತೋಷಪಡಿಸುತ್ತ ಅವಳ ಮನಸ್ಸಿನಲ್ಲಿದ್ದ ಇಷ್ಟ ವಸ್ತುಗಳನ್ನು ತರಿಸಿಕೊಡುತ್ತಿದ್ದನು. ಸೀತಾದೇವಿಯು ರೂಪಲಾವಣ್ಯ ವಿನಯಾದಿ ಗುಣಗಳಿಂದ ಸಂಪನ್ನನಾದ ರಘುನಾಥನಿಗೆ ತನ್ನ ತಂದೆಯು ತನ್ನನ್ನು ಕೊಟ್ಟು ವಿದಾಸಮಾಡಿದ್ದಕ್ಕೆ ಮನಸ್ಸಿನಲ್ಲಿ ಅತ್ಯಂತ ಪ್ರೀತಿಯನ್ನು ಪಡೆದಳು. ತನ್ನ ಪತಿಗೆ ನಿತ್ಯವೂ ಹರ್ಷವನ್ನುಂಟುಮಾಡುತ್ತೆ ಆತನ ಮನಃಪ್ರೀತಿಯನ್ನು ತನ್ನ ಅಂತರಂಗದಲ್ಲಿ ತಿಳಿದು ವರಮವುರುಷನಿಗೆ ಮಹಾಲಕ್ಷ್ಮಿಯು ಸೇವೆ ಮಾಡುವ ರೀತಿಯಲ್ಲಿ ವರ್ಷದಿಂದ ಪತಿಸೇವೆಯನ್ನು ಮಾಡಿಕೊಂಡಿದ್ದಳು. ರಘುನಾಥನು ಕ್ಷತ್ರಿಯೋತ್ತಮನಾದ ಜನಕರಾಯನ ಮಗಳಾದ ಮಹಾಮನೋಹರೆಯಾದ ಸೀತಾದೇವಿಯೊಡನೆ ಕೂಡಿ ಲಕ್ಷ್ಮೀಸಮೇತನಾದ ನಾರಾಯಣನಂತೆ ಅತ್ಯಂತ ಮನೋಹರನಾಗಿ ಒಪ್ಪುತ್ತಿದ್ದನು.

ಮುಂದುವರಿಯುವುದು...

# ರಾಮ ನಾಮವೆಂಬ ನೌಕೆ



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ



ಕಲಿಯುಗದಲ್ಲಿ ಭವಸಾಗರ ದಾಟಲು, ಯೋಗ ಜ್ಞಾನ, ತ್ಯಾಗ, ಪೂಜೆ ಅರ್ಚನೆ ಇದೆಲ್ಲಕ್ಕಿಂತ ಮಿಗಿಲಾದ ಸುಲಭ ಮಾರ್ಗ ವೆಂದರೆ 'ರಾಮ ನಾಮ' ಎಂಬ ನೌಕೆ. ಇದು ಅತ್ಯಂತ ಸುಲಭ ಮಾರ್ಗವಾಗಿದೆ. ರಾಮನ ಭಕ್ತರಾಗಲು, ಹನುಮನ ಕೃಪೆ ಬೇಕು. ಆಂಜನೇಯನ ಪಡೆಯಲು ರಾಮನ ಮೇಲೆ ಭಕ್ತಿ ಬೇಕು. ಯಾರೇ ಒಬ್ಬ ಭಕ್ತ, ಉಳಿದೆಲ್ಲಾ ನಂಬಿಕೆಗಳನ್ನು ಬಿಟ್ಟು, 'ರಾಮ ನಾಮ' ವೆಂಬ ಕಲ್ಲುಸಕ್ಕರೆಯ ತಾರಕ ಮಂತ್ರವನ್ನು ಜಪಿಸಿದರೆ 'ರಾಮ ಧಾಮ' ವನ್ನು ಅವಶ್ಯ ಹೊಂದುತ್ತಾನೆ.

ಒಮ್ಮೆ ನಾರದರು, ಹಾಸ್ಯದಿಂದ ಹನುಮಂತನಿಗೆ, ಹೇ ಅಂಜನಾಸುತಾ ನೀನು ಮಾಡುವ ರಾಮ ಕಾರ್ಯಗಳನ್ನು ನೋಡಿದಾಗ ನನ್ನ ಮೈ ಕಂಪಿಸುತ್ತದೆ. ರಾಮ ಭಕ್ತನೆಂದು ಓಡಾಡುವ ನಿನ್ನಲ್ಲಿ ಭಕ್ತನಿಗಿರಬೇಕಾದ ಸಾತ್ವಿಕ ಗುಣಗಳೇ ಇಲ್ಲ ಎಂದರು. ಕಲ್ಪನೆಗೂ ಊಹಿಸದ ಆಂಜನೇಯನಿಗೆ ಆಶ್ಚರ್ಯವಾಯಿತು. ಆತ ಕೇಳಿದ, ದೇವರ್ಷಿಗಳೇ ನೀವು ಮಹಾ ಜ್ಞಾನಿಗಳು, ನಿಮ್ಮ ಮಾತಿನ ಗೂಡಾರ್ಥ ಏನು ಎಂಬುದನ್ನು ನೀವೇ ಸ್ಪಷ್ಟವಾಗಿ ತಿಳಿಸಿ ಎಂದು ವಿನಯವಾಗಿ ಬೇಡಿಕೊಂಡ. ದೇವರ್ಷಿಗಳು ಹೇಳಿದರು. ನನಗನ್ನಿಸಿತು, ರಾಮನ ಭಕ್ತನಾದ ನೀನು ಉಗ್ರ, ಆಕ್ರಮಣಕಾರಿ ಮನೋಭಾವದವನು. ಪರರ ಸ್ವತ್ತಿಗೆ ಕೈ ಹಾಕುವುದೇ ತಪ್ಪು ಅಂತ ದ್ದರಲ್ಲಿ, ಸುವರ್ಣ ಲಂಕೆ ಸುಟ್ಟು ಬೂದಿ ಮಾಡಿದೆ. ಎಂಥಾ ಕ್ರೌರ್ಯ ಮನಸ್ಸು. ವೇದಗಳಲ್ಲಿ ಆರು ಬಗೆಯ ಆಕ್ರಮಣ ಮನೋಭಾವ ಉಲ್ಲೇಖಿಸಿದ್ದಾರೆ. ಅದರಲ್ಲಿ ನೀನೂ ಒಬ್ಬನಾಗಿರುವೆ. ಇತರರ ಮನೆಗಳಿಗೆ ಬೆಂಕಿ ಹಚ್ಚುವುದು. ಇಂಥ ಹಿಂಸೆ ಮಾಡುವ ವ್ಯಕ್ತಿ ರಾಮನ ಭಕ್ತನಾಗಲು ಹೇಗೆ ಸಾಧ್ಯ? ಇದು ಸಾಧ್ಯವಿಲ್ಲ ಎಂದರು. ಈಗ ಹನುಮಂತನಿಗೆ ಸ್ಪಷ್ಟವಾಗಿ ಅರ್ಥವಾಯಿತು, ಮುಗುಳ್ನಕ್ಕು, ಹಾಸ್ಯದಿಂದ ಆಧ್ಯಾತ್ಮಿಕಕಥೆಗಳು ಮಹರ್ಷಿಗಳಿಗೆ ರಾಮ ಭಕ್ತಿಯ ರಸಾಸ್ವಾದ ಮಾಡಲು ಸಜ್ಜಾದ. ನಾರದರೇ, ಇಂಥ ಆಕ್ರಮಣಕಾರಿ ಭಾವ ಭಕ್ತರಿಗೆ ಶೋಭೆ ಯಲ್ಲ ಎಂದಿರಿ. ಆದರೆ ಇದು ಪ್ರಾಮಾಣಿಕ ಭಕ್ತನು ಮಾಡಬೇಕಾದ ಕರ್ತವ್ಯ ಎಂಬುದು ನನ್ನ ವಿಶ್ವಾಸ. ಭಕ್ತವತ್ಸಲನಾದ ಶ್ರೀರಾಮನ ಭಕ್ತರ ಅನಾಥ ಮೃತ ದೇಹಗಳಿಗೆ ಅಂತಿಮ ಸಂಸ್ಕಾರ ಮಾಡುವುದು ನನ್ನ ಕರ್ತವ್ಯವಾಗಿದೆ. ಇದರಿಂದ ಆ ದೇಹಗಳು ಮುಂದಿನ ಜನ್ಮದಲ್ಲಿ ಉತ್ತಮ ಜೀವನ ಪಡೆಯುತ್ತವೆ. ಮಹರ್ಷಿಗಳು ಆಶ್ಚರ್ಯದಿಂದ, ಅನಾಥ ಮೃತ ದೇಹಗಳು ಲಂಕೆಯಲ್ಲಿ ಇದ್ದವೇ, ಹಾಗೆಂದರೆ?, ಹನುಮ ಹೇಳಿದ ಹೃದಯದಲ್ಲಿ ಹರಿಭಕ್ತಿ ಇಲ್ಲದವರು, ನಾಮ ಸ್ಮರಣೆ, ಭಜನೆ, ಕಥಾಶ್ರವಣ ಹಾಗೂ, ರಾಮನ ಕೈಂಕರ್ಯ ಮಾಡದೇ ಇರುವ ಜೀವಿಗಳೆಲ್ಲ ಮೃತ ದೇಹಕ್ಕೆ ಸಮಾನ. ಅವು ಬದುಕಿದ್ದು ಸತ್ತಂತೆ. ನಾನು ಅಂಥ ಮೃತ ದೇಹಗಳನ್ನು ಲಕ್ಷಗಟ್ಟಲೆ ನೋಡಿದೆ. ಸಾಮೂಹಿಕ ವಾಗಿ ಅವುಗಳನ್ನು ಅಗ್ನಿ ದೇವನಿಗೆ ಅರ್ಪಿಸಿದೆ. ಇದರಿಂದ ಆ ಜೀವಿಗಳು ಮುಂದಿನ ಜನ್ಮದಲ್ಲಿ ಉತ್ತಮ ಜೀವನ ಪಡೆಯುತ್ತವೆ ಎಂದನು. ಆದರೆ ಇಂಥ ಲಂಕೆಯಲ್ಲೂ ಒಂದು ಸ್ಥಳದಲ್ಲಿ ಜೀವಂತವಾಗಿರುವ ರಾಮ ಭಕ್ತನ ಕಂಡೆ. ಆತನ ಮನೆಯ ಸುತ್ತ ರಾಮನ ಪೂಜೆ ಭಜನೆ ಹಾಗೂ ರಾಮ ನಾಮ ಸ್ಮರಣೆಯ ತರಂಗಗಳು ಎಲ್ಲೆಲ್ಲೂ ಅಲೆ ಅಲೆಯಾಗಿ ಕೇಳಿ ಬರುತ್ತಿತ್ತು. ನಾರದರು, ರಾಮನ ಭಕ್ತ ಲಂಕೆಯಲ್ಲಿ ಇದ್ದನೇ ಯಾರದು? ಎಂದು ಕೇಳಿದಾಗ, ಹನುಮಂತ ಹೇಳಿದ ಹೌದು ಅಂತ ರಾಮ ಭಕ್ತನೇ 'ವಿಭೀಷಣ' ಅವನಿರುವ ಪವಿತ್ರ ಜಾಗವನ್ನು ಹಾನಿ ಮಾಡಲಿಲ್ಲ. ಈಗ ಹೇಳಿ, ಮಹರ್ಷಿಗಳೇ, ನಾನು ಉಗ್ರ ಆಕ್ರಮಣ ಕಾರನೇ, ಕ್ರೂರಿಯೇ ಎಂಬುದನ್ನು ನೀವೇ ಹೇಳಿ ಎಂದನು. ನಾರದರು ಮಾತನಾಡಲಿಲ್ಲ ಹನುಮಂತನ ತರ್ಕ ನಿಜವಾಗಿಯೂ ಸರಿಯಾಗಿ ಇದೆ ಎಂದು ಮನದಲ್ಲೇ ಆಂಜನೇಯನ ರಾಮ ಭಕ್ತಿ ಕಂಡು ಬೆರಗಾಗಿ ಚಿಂತನೆಯಲ್ಲಿ ಇದ್ದರು. ಹೀಗೆ ಮೈ ಮರೆತಿದ್ದ ನಾರದರಿಗೆ ಮತ್ತೆ ಹನುಮಂತ ಹೇಳಿದ, ಹೇ ಮಹರ್ಷಿಗಳೇ, ನಾನು ನಿಮಗೆ ಇನ್ನೂ ಒಂದು ಕುಕೃತ್ಯ ಸಂಗತಿಯನ್ನು ತಿಳಿಸಬೇಕು. ಅದು ಇದಕ್ಕಿಂತಲೂ, ಹಿಂಸೆ, ಕ್ರೂರ ಅತ್ಯಂತ ನೀಚ, ಪಾಪ ಕೃತ್ಯ, ಎಂದು ಗಂಭೀರವಾಗಿ ತಿಳಿಯುವಿರಿ, ಅಲ್ಲದೆ ರಾಕ್ಷಸರ ಸಂಹಾರಕ್ಕಿಂತಲೂ ಅತ್ಯಂತ ಘೋರ ಅಪರಾಧ ಎಂದು ಅನಿಸುತ್ತದೆ. ಇದನ್ನು ಕೇಳಿದ ನಾರದರು ಸ್ತಂಭೀಭೂತರಾಗಿ ಹನುಮಂತ ಮುಂದೆ ಏನು ಹೇಳುವನೊ ಎಂದು ಅವನನ್ನೇ ನೋಡುತ್ತಿದ್ದರು.

**ಹನುಮಂತ ಹೇಳಿದ ಮಹರ್ಷಿಗಳೇ ನಾನು ರಾಕ್ಷಸರ ಸಮೇತ ಸಾಮ್ರಾಜ್ಯವನ್ನು ಸುಡುವಾಗ, ಅಟ್ಟಹಾಸದಿಂದ ಕೇಕೆ ಹಾಕಿ ಜೋರಾಗಿ ಘರ್ಜಿಸುತ್ತಿದ್ದೆ. ನನ್ನ ಈ ಘರ್ಜನೆಗೆ ಇಡೀ ಲಂಕಾ ನಗರವೇ ತಲ್ಲಣಗೊಂಡಿತು. ಹೆದರಿ ಗರ್ಭದಲ್ಲಿ ಬೆಳೆಯುತ್ತಿದ್ದ ರಾಕ್ಷಸರ ಬೀಜಗಳು ನಾಶವಾದವು. ನನ್ನ ಈ ಭಯಂಕರವಾದ ಆರ್ಭಟಕ್ಕೆ ತರಗುಟ್ಟಿದ ಗರ್ಭಿಣಿ ಸ್ತ್ರೀಯರ ಗರ್ಭಗಳು ಗರ್ಭಪಾತವಾಯಿತು. ಇದರಿಂದಾಗಿ ಮುಂದೆ ವೃದ್ಧಿಸುವ ರಾಕ್ಷಸರ ಎಲ್ಲಾ ಸಂತತಿಗಳು ಹೇಳ ಹೆಸರಿಲ್ಲದಂತೆ ಅಳಿಸಿ ಹೋಯಿತು.**

ಇನ್ನು ನನ್ನ ಭಗವಂತನಾದ ರಾಮನ ಶಾಂತಿಯುತ ರಾಜ್ಯದಲ್ಲಿ, ಯಾರು ವಿಘ್ನವನ್ನು ತಂದೊಡ್ಡುವ ರಾಕ್ಷಸ ಸಂತತಿಗಳೇ ಇಲ್ಲ. ಮುಂದಿನ ಭವಿಷ್ಯದಲ್ಲಿ ನನ್ನ ರಾಮನ ಶಾಂತಿಯುತ ರಾಜ್ಯದಲ್ಲಿ ಯಾವ ದುಷ್ಟ ಶಕ್ತಿಗಳು ತಲೆ ಎತ್ತುವುದಿಲ್ಲ. ನನ್ನ ರಾಮನ ರಾಮ ರಾಜ್ಯ ಅಚಂದ್ರಾರ್ಕವಾಗಿ ವಿಜೃಂಭಿಸುತ್ತದೆ. ಇದನ್ನು ಕೇಳಿದ ನಾರದರು, ರಾಮನ ಮೇಲಿನ ಆಂಜನೇಯನ ಭಕ್ತಿಯ ಮಾತುಗಳನ್ನು ಕೇಳಿ ಆನಂದಿತರಾಗಿ ಹನುಮಂತನನ್ನು ಆಲಂಗಿಸಿಕೊಂಡರು. ಮತ್ತೆ ಹೇಳಿದರು ಹೇ ಹನುಮಂತ ನೀನು ಕೇವಲ ಭಕ್ತ ಮಾತ್ರ ನಲ್ಲ ಭಕ್ತರ ಭಕ್ತ ಶಿರೋಮಣಿ. ಏಕೆಂದರೆ ನಿನ್ನ ಹಿಂಸೆಯಲ್ಲಿ ಲೋಕಕಲ್ಯಾಣವೇ ಅಡಗಿದೆ. ನೀನು ನಿನ್ನ ರಾಮನ ಕಾರ್ಯವನ್ನು ಚಾಚು ತಪ್ಪದೇ ಪೂರೈಸುವೆ ಎಂದು ಹೆಮ್ಮೆಯಿಂದ ಹೇಳಿದರು.

## ದಿನಕ್ಕೊಂದು ಮುಕ್ತಕ -73



ಹೆಚ್.ಎಸ್. ಪ್ರತಿಮಾ
• ಉದಯವಾಹಿನಿ, ವಿಶೇಷ


**ಒಲುಮೆಯಲಿ ಕೂಡಿದರೆ ಎಲೆ ಅಡಕೆ ಸುಣ್ಣ ಬಾ**
**ಯೊಳಗಿರಿಸಿ ಜಿಗಿದು ಕಂಪೆಸೆಯುವಂತೆ**
**ಒಲಿಯದಲೆ ಕೂಡಿದರೆ ಬರಿ ಅಡಕೆ ಜಿಗಿದಂತೆ**
**ಒಲಿದು ಮುದ್ದಿಸು ಗೆಳತಿ ಲಕ್ಷ್ಮಿದೇವಿ...**

**ಭಾವಾರ್ಥ:** ಮನುಜನಾಗಿ ಹುಟ್ಟಿದ ಮೇಲೆ ಸಂಬಂಧಗಟ್ಟಿರಬೇಕು. ಗಟ್ಟಿತನಕ್ಕೆ ಬಹಳ ಬೆಲೆ ಇದೆ. ಹೊಂದಾಣಿಕೆಯ ಬದುಕು ಪ್ರತಿಯೊಬ್ಬರಿಗೂ ಅನಿವಾರ್ಯ ಎಂಬುದು ಅರಿತು ಬಾಳಬೇಕು. ಯಾವ ರೀತಿ ಎಂದರೆ ಅದು ಎಲೆ ಅಡಿಕೆ ಸುಣ್ಣದಂತೆ ಬೆರತಿರಬೇಕು. ಅದು ಕೆಂಪು ಏರಿದಂತೆ ಮನುಜನಲ್ಲೂ ಸಂಬಂಧವು ಹೊಂದಾಣಿಕೆಯಲ್ಲಿ ಕೂಡಿರಬೇಕು. ಹೊಂದಾಣಿಕೆಯಲ್ಲಿ ಕೂಡದಿದ್ದರೆ ಎಲೆ ಅಡಿಕೆ ಜಿಗಿದರು ಕೆಂಪೇರದೇ ಹೋಗುತ್ತದೆ. ಅದೆಲ್ಲವನ್ನು ಬಿಟ್ಟು ಹೊಂದಾಣಿಕೆಯ ಭಾವದಲಿ ಸ್ನೇಹದಿ ಮುದ್ದಿಸುತ ಸಾಗುತ್ತಿರಬೇಕು ಗೆಳತಿ ಭಾವವು ಪ್ರೀತಿಯಿಂದ ಇರಬೇಕು ಎಂಬುದನ್ನು ಈ ಮೇಲಿನ ಮುಕ್ತಕ ಭಾವಾರ್ಥದಲ್ಲಿ ತಿಳಿಯ ಬಹುದು

# ರೊಬೋಟಿಕ್ ಹಿಪ್ ರಿಪ್ಲೇಸ್‌ಮೆಂಟ್ ಸರ್ಜರಿ

• ಉದಯವಾಹಿನಿ, ಬೆಂಗಳೂರು

ದೀರ್ಘಕಾಲದ ಸೊಂಟ ನೋವಿನಿಂದ ಬಳಲುತ್ತಿದ್ದ ಮಲ್ಲೇಷ್ಯಾ ಮೂಲದ 53 ವರ್ಷದ ಸಾಫ್ಟ್‌ವೇರ್ ಇಂಜಿನಿಯರ್‌ಗೆ ಬನ್ನೇರುಘಟ್ಟ ಫೋರ್ಟಿಸ್ ಆಸ್ಪತ್ರೆಯ ವೈದ್ಯರ ತಂಡ ಯಶಸ್ವಿಯಾಗಿ ರೋಬೋಟ್ ಸಹಾಯದ ಮೂಲಕ ಹಿಪ್ ಬದಲಿ ಶಸ್ತ್ರಚಿಕಿತ್ಸೆಯನ್ನು ನಡೆಸಲಾಯಿತು. ಬನ್ನೇರುಘಟ್ಟ ರಸ್ತೆಯ ಫೋರ್ಟಿಸ್ ಆಸ್ಪತ್ರೆಯ ಮೂಳೆಚಿಕಿತ್ಸಾ ವಿಭಾಗದ ಪ್ರಧಾನ ನಿರ್ದೇಶಕ ನಾರಾಯಣ್ ಹುಲ್ಸೆ ಅವರ ತಂಡ ಈ ಶಸ್ತ್ರಚಿಕಿತ್ಸೆ ನಡೆಸಿದ್ದು, ಶಸ್ತ್ರಚಿಕಿತ್ಸೆ ಬಳಿಕವೇ ರೋಗಿಯು ನಡೆಯಲು ಸಶಕ್ತರಾಗಿದ್ದರು. ಈ ಕುರಿತು ಮಾತನಾಡಿದ ಡಾ. ನಾರಾಯಣ್ ಹುಲ್ಸೆ, ಮಲ್ಲೇಷ್ಯಾ ಮೂಲದ 53 ವರ್ಷದ ಸಾಫ್ಟ್‌ವೇರ್ ಇಂಜಿನಿಯರ್ ಆಗಿದ್ದ ರೋಗಿಯು ಮೂರು ವರ್ಷದ ಹಿಂದೆ ಕೋವಿಡ್ ಸೋಂಕಿಗೆ ಒಳಗಾಗಿ, ಅದರ ಅಡ್ಡಪರಿಣಾಮದಿಂದ ಅವಾಸ್ಕುಲರ್ ನೆಕ್ರೋಸಿಸ್‌ಗೆ ಒಳಗಾಗಿ, ದೀರ್ಘಕಾಲದ ಸೊಂಟದ ನೋವಿನಿಂದ ಬಳಲುತ್ತಿದ್ದರು.




ವಿಶ್ವಾದ್ಯಂತ ಅನೇಕ ಆಸ್ಪತ್ರೆಗಳಿಗೆ ತೆರಳಿ ಚಿಕಿತ್ಸೆ ಪಡೆದಿದ್ದರೂ ಎಲ್ಲಿಯೂ ಸಫಲ ಕಾಣಲಿಲ್ಲ, ಅಷ್ಟೆ ಅಲ್ಲದೆ, ಎರಡು ವಿಫಲ ಶಸ್ತ್ರಚಿಕಿತ್ಸೆಗೂ ಒಳಗಾಗಿದ್ದರು. ಬಳಿಕ ಅವರು ಫೋರ್ಟಿಸ್ ಆಸ್ಪತ್ರೆಗೆ ದಾಖಲಾದರು. ಇಲ್ಲಿ ನಮ್ಮ ತಂಡ ಅವರನ್ನು ಸಂಪೂರ್ಣ ತಪಾಸಣೆಗೆ ಒಳಪಡಿಸಿದ ಬಳಿಕ ಅವರು ಎರಡೂ ಭಾಗದಲ್ಲೂ ಸೊಂಟ ಸರಿಪಡಿಸುವ ಶಸ್ತ್ರಚಿಕಿತ್ಸೆಯ ಅಗತ್ಯವಿದೆ ಎಂದು ನಿರ್ಧರಿಸಲಾಯಿತು, ಅತ್ಯಾಧುನಿಕ ರೋಬೋಟ್ ಸಹಾಯದಿಂದ ಅವರಿಗೆ ಹಿಪ್ ಬದಲಿ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ಮಾಡಲಾಯಿತು, ರೋಗಿಯು ಶಸ್ತ್ರಚಿಕಿತ್ಸೆಗೆ ಒಳಗಾದ ಅದೇ ದಿನವೇ ನಡೆದಾಡಲು ಸಾಧ್ಯವಾಯಿತು ಎಂದು ವಿವರಿಸದರು.

**ಬೆಂಗಳೂರಿನ ಫೋರ್ಟಿಸ್ ಹಾಸ್ಪಿಟಲ್ಸ್‌ನ ಬಿಸಿನೆಸ್ ಹೆಡ್ ಶ್ರೀ ಅಕ್ಷಯ್ ಒಲೇಟಿ, ''ಫೋರ್ಟಿಸ್‌ನಲ್ಲಿ, ಇತ್ತೀಚಿನ ರೊಬೊಟಿಕ್ ತಂತ್ರಜ್ಞಾನವನ್ನು ಬಳಸಿಕೊಳ್ಳುವ ಅತ್ಯಾಧುನಿಕ ಚಿಕಿತ್ಸೆಯನ್ನು ಒದಗಿಸಲು ನಾವು ಹೆಮ್ಮೆಪಡುತ್ತೇವೆ. ಇದು ಹೆಚ್ಚು ನಿಖರವಾದ, ಕನಿಷ್ಠ ಆಕ್ರಮಣಕಾರಿ ಶಸ್ತ್ರಚಿಕಿತ್ಸೆಗಳನ್ನು ನೀಡಲು ನಮಗೆ ಅನುವು ಮಾಡಿಕೊಡುತ್ತದೆ, ಇದು ವೇಗವಾಗಿ ಚೇತರಿಸಿಕೊಳ್ಳಲು ಮತ್ತು ಉತ್ತಮ ಒಟ್ಟಾರೆ ರೋಗಿಯ ಅನುಭವವನ್ನು ಉತ್ತೇಜಿಸುತ್ತದೆ. ನಮ್ಮ ರೋಗಿಗಳ ಜೀವನದ ಗುಣಮಟ್ಟವನ್ನು ಸುಧಾರಿಸಲು ನವೀನ ತಂತ್ರಜ್ಞಾನಗಳನ್ನು ನಿರಂತರವಾಗಿ ಸಂಯೋಜಿಸಲು ನಾವು ಬದ್ಧರಾಗಿದ್ದೇವೆ ಎಂದರು.**

# ಮಹಾಕುಂಭ ಮೇಳದಲ್ಲಿ ಆರ್‌ಸಿಬಿ ಜೆರ್ಸಿಗೂ ಪವಿತ್ರ ಸ್ನಾನ

• ಉದಯವಾಹಿನಿ, ಬೆಂಗಳೂರು

ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಅಂದ್ರೆ, ಬರೀ ಹೆಸರಲ್ಲ, ಅದೊಂದು ಎಮೋಷನ್ ಅಂತಾರೆ ಕ್ರಿಕೆಟ್ ಅಭಿಮಾನಿಗಳು. ಇನ್ನು ಐಪಿಎಲ್ ಲೋಕದಲ್ಲಂತೂ ಆರ್‌ಸಿಬಿಗೆ ದೊಡ್ಡ ಹವಾನೇ ಇದೆ. ಬೇರೆ ಯಾವ ಟೀಂಗೂ ಇಲ್ಲದಷ್ಟು ಕ್ರೇಜ್ ಆರ್‌ಸಿಬಿಗೆ ಇದೆ. ಸದ್ಯ ಉತ್ತರಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲೂ ಆರ್‌ಸಿಬಿ ಸದ್ದು ಮಾಡುತ್ತಿದೆ. ಹೌದು ಭಕ್ತಸಾಗರಕ್ಕೆ ಸಾಕ್ಷಿಯಾಗಿರುವ ಮಹಾಕುಂಭ ಮೇಳದಲ್ಲೂ ಆರ್‌ಸಿಬಿ....ಆರ್‌ಸಿಬಿ...ಸದ್ದು ಮಾಡಿದೆ. ಇಲ್ಲಿನ ಗಂಗಾ, ಯಮುನಾ, ನದಿಗಳು ಸೇರುವ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದರೆ ಎಲ್ಲಾ ಪಾಪಗಳು ಕೂಡ ಕಳೆದು ಹೋಗುತ್ತವೆ ಎನ್ನುವ ಧಾರ್ಮಿಕ ನಂಬಿಕೆ ಇದೆ. ಈ ಹಿನ್ನೆಲೆ ಮಹಾಕುಂಭ ಮೇಳಕ್ಕೆ ಹೋಗಿರುವವರು ಇಲ್ಲಿ ಪವಿತ್ರ ಸ್ನಾನ ಮಾಡಿಯೇ ವಾಪಸ್ ಆಗುತ್ತಾರೆ.





ಆರ್ ಸಿಬಿ ಅಭಿಮಾನಿಯೊಬ್ಬರು ಕೂಡ ಮಹಾಕುಂಭಮೇಳಕ್ಕಾಗಿ ಪ್ರಯಾಗ್‌ರಾಜ್‌ಗೆ ತೆರಳಿದ್ದಾರೆ. ಈ ಅವರು ಕೂಡ ಸಂಗಮದಲ್ಲಿ ಸ್ನಾನ ಮಾಡಿದ್ದಾರೆ. ಆದರೆ ಪ್ರಯಾಗ್‌ರಾಜ್‌ನಲ್ಲಿ ಆರ್‌ಸಿಬಿ ಜೆರ್ಸಿ ತೊಟ್ಟ ಹೋಗಿದ್ದ ಆತ, ಜೆರ್ಸಿಯನ್ನೂ ಕೂಡ ಮೂರು ಬಾರಿ ನೀರಿನಲ್ಲಿ ಮುಳುಗಿಸುವ ಮೂಲಕ ಪವಿತ್ರ ಸ್ನಾನ ಮಾಡಿಸಿದ್ದಾರೆ. ಅಲ್ಲಿನ ಸಾಧುವೊಬ್ಬರ ಕೈಯಲ್ಲಿ ಜೆರ್ಸಿಗೆ ಧಾರ್ಮಿಕವಾಗಿ ವಿಧಿವಿಧಾನದ ಮೂಲಕ ಪವಿತ್ರ ಸ್ನಾನ ಮಾಡಿಸಿದ್ದಾರೆ.







**ಮಹಾಕುಂಭ ಮೇಳದಲ್ಲಿ ಧಾರ್ಮಿಕ ಭಾವನೆಯೊಂದಿಗೆ ಭಕ್ತರ ದಂಡು ಸೇರಿದೆ. ಎಲ್ಲರೂ ತಮ್ಮ ಶ್ರೇಯಸ್ಸು, ಒಳಿತಿಗಾಗಿ ಅಲ್ಲಿ ಪವಿತ್ರ ಸ್ನಾನ ಮಾಡಿಕೊಂಡು ಪ್ರಾರ್ಥಿಸುತ್ತಿದ್ದಾರೆ. ಆದರೆ ಆರ್‌ಸಿಬಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದ ಸಂಗತಿ ನಡೆದಿರಲಿಲ್ಲ. ಇಂದು ಆರ್‌ಸಿಬಿ ಅಭಿಮಾನಿ ಮಾಡಿರುವ ಈ ಕೆಲಸಕ್ಕೆ ಆರ್‌ಸಿಬಿ ಬಳಗವೆಲ್ಲ ಫಿದಾ ಆಗಿದೆ. ಇನ್ನೇನು ಕೆಲವೇ ದಿನಗಳಲ್ಲಿ ಶುರುವಾಗಲಿರುವ ಐಪಿಎಲ್ ಸೀಸನ್ ಹಿನ್ನೆಲೆ ಆರ್‌ಸಿಬಿ ಮೇಲೆ ಭರವಸೆಯನ್ನೂ ಹುಟ್ಟಿಸಿದೆ. ಈ ಸಲ ಕಪ್ ನಮ್ದೆ ಆಗುತ್ತಾ ನೋಡೋಣ.**



## ಪ್ರತಿ ವರ್ಷವೂ ಆರ್‌ಸಿಬಿಗೆ ಸಾಥ್

**ಕಳೆದ ಬಾರಿಯ ಐಪಿಎಲ್ ಸೀಸನ್ ನಲ್ಲಿ ಕಿಂಗ್ ವಿರಾಟ್ ಕೊಹ್ಲಿ ಅವರು ಇದು ಹೊಸ ಅಧ್ಯಾಯ ಎನ್ನುವ ಮೂಲಕ ಆರ್‌ಸಿಬಿ ಅಭಿಮಾನಿಗಳಿಗೆ ಎನರ್ಜಿ ತುಂಬಿದ್ದರು. ಆದರೆ, ಎಂದಿನಂತೆ ಕಪ್ ಆರ್‌ಸಿಬಿ ಕೈಸೇರಲೇ ಇಲ್ಲ. ಆದರೂ ಕ್ರೇಜ್ ಎಂದಿಗೂ ಕಡಿಮೆ ಆಗ್ತಿಲ್ಲ ಅನ್ನುತ್ತಿದ್ದಾರೆ ಆರ್‌ಸಿಬಿ ಕಟ್ಟಾಭಿಮಾನಿಗಳು ಕಪ್ ಗೆಲ್ಲುವುದಕ್ಕಿಂತ ನಮ್ಮ ತಂಡ ಎನ್ನುವುದೇ ಹೆಮ್ಮೆ ಎಂಬ ಭಾವನೆಯಲ್ಲೇ ಅಭಿಮಾನಿಗಳು ಪ್ರತಿ ವರ್ಷವೂ ಆರ್‌ಸಿಬಿಗೆ ಸಾಥ್ ನೀಡುತ್ತಿದ್ದಾರೆ.**


ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಆರ್‌ಸಿಬಿ ಅಭಿಮಾನಿಗಳು ಈ ವಿಡಿಯೋ ಶೇರ್ ಮಾಡಿಕೊಂಡಿದ್ದು ನಮ್ಮ ತಂಡಕ್ಕೆ ಅಂಟಿದ್ದ ಕಳಂಕವೆಲ್ಲ ತೊಲಗಿದೆ.

ಈ ಸಲ ಕಪ್ ನಮ್ದೆ ಎಂದು ಘೋಷಣೆಗಳನ್ನು ಕೂಗಿದ್ದಾರೆ. ಆರ್‌ಸಿಬಿ ತಂಡಕ್ಕಿರುವ ಫ್ಯಾನ್ ಫಾಲೋಯಿಂಗ್ ಕಂಡು ಹಲವರು ಕೆಟ್ಟ ದೃಷ್ಟಿ ಬಿದ್ದಿತ್ತು. ಮಹಾಕುಂಭ ಮೇಳದ ವೇಳೆ ಈ ಪವಿತ್ರ ನೀರಿನಲ್ಲಿ ಮುಳುಗಿದರೆ ಎಲ್ಲಾ ಪಾಪ ಕರ್ಮಗಳು ದೂರವಾಗುತ್ತೆ ಅಂತಾರೆ. ಆರ್‌ಸಿಬಿ ಜೆರ್ಸಿ ಕೂಡ ಈ ತ್ರಿವೇಣಿ ಸಂಗಮದಲ್ಲಿ ಮುಳುಗೆದಿದೆ. ಹಾಗಾಗಿ ಈ ಸಲ ಕಪ್ ನಮ್ದೆ ಎನ್ನುತ್ತಿದ್ದಾರೆ.

# ಸ್ಟಾರ್ ಪ್ರಚಾರಕರ ಪಟ್ಟಿಯಲ್ಲಿ ಸಿದ್ದು ಔಟ್, ಡಿಕೆಶಿ ಇನ್

## • ದೆಹಲಿ ವಿಧಾನಸಭೆ ಚುನಾವಣೆಯ ಸ್ಟಾರ್ ಪ್ರಚಾರಕರ ಪಟ್ಟಿ ಬಿಡುಗಡೆ, ಎರಡು ವಾರಗಳು ಮಾತ್ರ ಬಾಕಿ

• ಉದಯವಾಹಿನಿ, ಬೆಂಗಳೂರು



ಕರ್ನಾಟಕದಲ್ಲಿ ಮುಖ್ಯಮಂತ್ರಿಯನ್ನು ಬದಲಾವಣೆ ಮಾಡಬೇಕು ಎನ್ನುವ ಚರ್ಚೆ ಜೋರಾಗಿರುವ ಸಂದರ್ಭದಲ್ಲಿಯೇ ಮಹತ್ವದ ಬೆಳವಣಿಗೆ ಆಗಿದ್ದು, ಚರ್ಚೆಗೆ ಗ್ರಾಸವಾಗಿದೆ. ಹೌದು ರಾಜ್ಯದಲ್ಲಿ ಕಳೆದ ಕೆಲವು ದಿನಗಳಿಂದ ಬಿಜೆಪಿ, ಕಾಂಗ್ರೆಸ್ ಎರಡೂ ಪಕ್ಷದಲ್ಲೂ ಬಣ ರಾಜಕೀಯ ಜೋರಾಗಿದೆ. ಬಿಜೆಪಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ಆಗಬೇಕು ಅಂತ ಕೆಲವರು ಪಟ್ಟು ಹಿಡಿದಿದ್ದರೆ.

ಇನ್ನು ಕಾಂಗ್ರೆಸ್‌ನಲ್ಲೂ ಮುಖ್ಯಮಂತ್ರಿ ಬದಲಾವಣೆ ಆಗಬೇಕು, ಉಪ ಮುಖ್ಯಮಂತ್ರಿ ಬದಲಾವಣೆ ಆಗಬೇಕು ಎನ್ನುವ ವಿಚಾರವಾಗಿ ಭಾರೀ ಚರ್ಚೆ ನಡೆದಿದೆ. ಬಿಜೆಪಿಯಲ್ಲಿ ರಾಜ್ಯಾಧ್ಯಕ್ಷರ ಬದಲಾವಣೆಗೆ ಚುನಾವಣೆಯಂತಹ ಕ್ರಮಗಳ ಬಗ್ಗೆ ಚರ್ಚೆ ನಡೆದಿದ್ದರೆ. ಕಾಂಗ್ರೆಸ್‌ನಲ್ಲಿ ಸದ್ದಿಲ್ಲದೆ ಬೆಳವಣಿಗೆಯೊಂದು ನಡೆದಿದ್ದು, ಸಿಎಂ ಸಿದ್ದರಾಮಯ್ಯ ಅವರನ್ನು ಸೈಡ್‌ಲೈನ್ ಮಾಡಲಾಗುತ್ತಿದೆಯೇ ಎನ್ನುವ ಪ್ರಶ್ನೆ ಎದುರಾಗಿದೆ. ಹೌದು ಈ ಪ್ರಶ್ನೆಗೆ ಕಾರಣವೂ ಇದೆ.

ಕರ್ನಾಟಕ ಕಾಂಗ್ರೆಸ್‌ನಲ್ಲಿ ಸಿಎಂ ಬದಲಾವಣೆಯ ಬಗ್ಗೆ ಚರ್ಚೆ ಜೋರಾಗಿದೆ. ಈಚೆಗಷ್ಟೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಎಲ್ಲರೂ ಬಾಯಿ ಮುಚ್ಚಿಕೊಂಡು ಇರಬೇಕು.

ಯಾವಾಗ ಏನು ಮಾಡಬೇಕು ಎನ್ನುವುದು ಕಾಂಗ್ರೆಸ್ ಹೈಕಮಾಂಡ್‌ಗೆ ಚೆನ್ನಾಗಿ ಗೊತ್ತಿದೆ ಎಂದು ಹೇಳಿದ್ದರು. ಖರ್ಗೆ ಅವರು ರಾಜ್ಯ ಕಾಂಗ್ರೆಸ್ ನಾಯಕರಿಗೆ ಖಡಕ್ ಸೂಚನೆ ಕೊಟ್ಟ ಮೇಲೆ ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ಬಹಿರಂಗವಾಗಿ ಚರ್ಚೆ ಮಾಡುವುದನ್ನು ರಾಜ್ಯ ಕಾಂಗ್ರೆಸ್ ನಾಯಕರು ಬಿಟ್ಟಿದ್ದಾರೆ. ಆದರೆ, ಕಾಂಗ್ರೆಸ್‌ನಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನೇ ಸೈಡ್‌ಲೈನ್ ಮಾಡುವ ಪ್ರಯತ್ನ ನಡೆದಿದೆಯೇ ಎನ್ನುವ ಬಗ್ಗೆ ಚರ್ಚೆ ಶುರುವಾಗಿದೆ. ಇದಕ್ಕೆ ಸ್ಟಾರ್ ಪ್ರಚಾರಕರ ಪಟ್ಟಿ. ದೆಹಲಿ ಚುನಾವಣೆಗೆ ಇನ್ನೇನು ಕೇವಲ ಎರಡು ವಾರಗಳು ಮಾತ್ರ ಬಾಕಿ ಉಳಿದಿವೆ. ಈ ರೀತಿ ಇರುವಾಗಲೇ ದೆಹಲಿ ವಿಧಾನಸಭೆ ಚುನಾವಣೆಯ ಸ್ಟಾರ್ ಪ್ರಚಾರಕರ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ. ಆದರೆ ಈ ಪಟ್ಟಿಯಲ್ಲಿ ಸಿದ್ದರಾಮಯ್ಯ ಅವರ ಹೆಸರೇ ಇಲ್ಲ ಎಂದು ಬಿಜೆಪಿ ಹಾಸ್ಯ ಮಾಡಿದೆ.

ಹೌದು ಈ ಸಂಬಂಧ ಸೋಷಿಯಲ್ ಮೀಡಿಯಾದಲ್ಲಿ ಟೀಟ್ ಮಾಡಿರುವ ಬಿಜೆಪಿ ಕಾಂಗ್ರೆಸ್‌ನಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ಸೈಡ್‌ಲೈನ್ ಮಾಡಲಾಗುತ್ತಿದೆ ಎಂದು ಹೇಳಿದೆ.



## ಸ್ಪರ್ಧೆ ಸಾಧ್ಯತೆ ಕಡಿಮೆ

**ದೆಹಲಿ ಚುನಾವಣೆ ಫೆಬ್ರವರಿ 5ರಂದು ನಡೆಯಲಿದ್ದು ಫೆಬ್ರವರಿ 8ಕ್ಕೆ ದೆಹಲಿ ಚುನಾವಣೆ ಫಲಿತಾಂಶ ಪ್ರಕಟವಾಗಲಿದೆ. ದೆಹಲಿಯಲ್ಲಿ ಒಟ್ಟು 70 ವಿಧಾನಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಇನ್ನು ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ, ಎಎಪಿ ನಡುವೆ ತೀವ್ರ ಪೈಪೋಟಿ ಇದೆ. ಇಲ್ಲಿ ಕಾಂಗ್ರೆಸ್ ಇದ್ದರೂ ಕಾಂಗ್ರೆಸ್ ಇಲ್ಲಿ ಪ್ರಬಲವಾಗಿಲ್ಲ. ಹೀಗಾಗಿ ತ್ರಿಕೋನ ಸ್ಪರ್ಧೆ ಸಾಧ್ಯತೆ ಕಡಿಮೆ ಎಂದೇ ಹೇಳಲಾಗುತ್ತಿದೆ.**

**ಕಾಂಗ್ರೆಸ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಗೇಟ್ ಪಾಸ್ ಕೊಟ್ಟದೆ. ದೆಹಲಿ ಚುನಾವಣೆಗೆ ಎಐಸಿಸಿ ಹೊರಡಿಸಿರುವ ಸ್ಟಾರ್ ಪ್ರಚಾರಕರ ಪಟ್ಟಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸ್ಥಾನವೇ ಇಲ್ಲ ಎಂದು ಹೇಳಿದೆ. ಕಾಂಗ್ರೆಸ್ ಸಿಎಂ ಸಿದ್ದರಾಮಯ್ಯ ಅವರ ಕೈ ಬಿಟ್ಟು ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಸ್ಟಾರ್ ಪ್ರಚಾರಕರ ಪಟ್ಟಿಯಲ್ಲಿ ಸ್ಥಾನ ಕೊಟ್ಟದೆ. ಇದನ್ನು ನೋಡಿದರೆ ಕಾಂಗ್ರೆಸ್‌ನಲ್ಲಿ ಸಿದ್ದರಾಮಯ್ಯ ಅವರ ರಾಜಕೀಯ ನಿವೃತ್ತಿ ಬಹುತೇಕ ಖಚಿತ-ನಿಶ್ಚಿತ-ಖಂಡಿತ ಎಂದು ವ್ಯಂಗ್ಯವಾಡಿದೆ.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಉತ್ತಮ ಜೀವನಕ್ಕಾಗಿ ನಿಮ್ಮ ಆರೋಗ್ಯ ಮತ್ತು ಒಟ್ಟಾರೆ ವ್ಯಕ್ತಿತ್ವವನ್ನು ಸುಧಾರಿಸಲು ಪ್ರಯತ್ನಿಸಿ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ.

**ವೃಷಭ** ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ.

**ಮಿಥುನ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದು ಹಾಗೂ ಕೆಟ್ಟದ್ದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ.

**ಕರ್ಕಾಟಕ** ನಿಮ್ಮ ಅನಿರೀಕ್ಷಿತ ಸ್ವಭಾವ ನಿಮ್ಮ ವೈವಾಹಿಕ ಸಂಬಂಧವನ್ನು ಹಾಳು ಮಾಡಲು ಬಿಡಬೇಡಿ. ಇದನ್ನು ತಡೆಯುವುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ನಂತರ ವಿಷಾದಪಡಬಹುದು.

**ಸಿಂಹ** ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭಗಳಿಸಲು ನಿಮಗೆ ಸಲಹೆ ನೀಡಬಹುದು, ನೀವು ಈ ಸಲಹೆಯನ್ನು ಅನುಸರಿಸಿದರೆ, ನೀವು ಖಂಡಿತವಾಗಿಯೂ ಹಣವನ್ನು ಗಳಿಸುವಿರಿ.

**ಕನ್ಯಾ** ನಿಮ್ಮ ಬಗ್ಗೆ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಇಂದು ಮನೆಯ ಯಾವುದೇ ಎಲೆಕ್ಟ್ರಾನಿಕ್ ಸರಕುಗಳ ಕೆಟ್ಟು ಹೋಗುವ ಕಾರಣದಿಂದಾಗಿ ನಿಮ್ಮ ಹಣ ಖರ್ಚಾಗಬಹುದು.

**ತುಲಾ** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಲಿದೆ.

**ವೃಶ್ಚಿಕ** ನಿಮ್ಮ ಒತ್ತಡ ನಿವಾರಿಸಲು ಕುಟುಂಬದ ಸದಸ್ಯರ ಬೆಂಬಲ ಪಡೆಯಿರಿ. ಅವರ ಸಹಾಯವನ್ನು ಗೌರವದಿಂದ ಸ್ವೀಕರಿಸಿ. ನೀವು ಭಾವನೆಗಳನ್ನು ಮತ್ತು ಒತ್ತಡಗಳನ್ನು ಒಳಗೆ ಅದುಮಿಡಬಾರದು.

**ಧನಸ್ಸು** ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡ ಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯೆಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ.

**ಮಕರ** ನಿಮ್ಮ ಆಹಾರಕ್ರಮದ ಬಗ್ಗೆ, ವಿಶೇಷವಾಗಿ ಮೈಗ್ರೇನ್ ರೋಗಿಗಳು ಸೂಕ್ತ ಎಚ್ಚರ ತೆಗೆದುಕೊಳ್ಳಬೇಕು. ಅವರು ತಮ್ಮ ಊಟ ತಪ್ಪಿಸಿಕೊಂಡಲ್ಲಿ ಅದು ಅವರಿಗೆ ಅನಗತ್ಯ ಭಾವನಾತ್ಮಕ ಒತ್ತಡವನ್ನು ಉಂಟುಮಾಡಬಹುದು.

**ಕುಂಭ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ- ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು.

**ಮೀನ** ಮಾನಸಿಕ ಶಾಂತಿಗಾಗಿ ನಿಮ್ಮ ಒತ್ತಡವನ್ನು ಪರಿಹರಿಸಿ. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ.

# ಬಿಚಗೋಡು: ಕುಡಿಯಲು ಇಲ್ಲಿ ಕಲುಷಿತ ನೀರೇ ಬಳಕೆ

## ಪರ್ಯಾಯ ವ್ಯವಸ್ಥೆ ಇಲ್ಲದ ಕಾರಣ, ಬಿಂದಿಗೆಗೆ ಬಟ್ಟೆ ಕಟ್ಟಿ ಕಲುಷಿತ ನೀರನ್ನೇ ಸೋಸಿ ಕುಡಿಯುವಂತಹ ಶೋಚನೀಯ ಸ್ಥಿತಿ

• ಉದಯವಾಹಿನಿ ತುಮರಿ

ಸರ್ಕಾರ ಗ್ರಾಮೀಣ ಪ್ರದೇಶದಲ್ಲಿನ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಪ್ರತಿ ವರ್ಷ ಕೋಟ್ಯಂತರ ರೂಪಾಯಿ ಮೀಸಲಿಡುತ್ತಿದ್ದರೂ ಯೋಜನೆಗಳ ಸಮರ್ಪಕ ಅನುಷ್ಠಾನ ಆಗುತ್ತಿಲ್ಲ. ಇದರಿಂದಾಗಿ ಜನರ ಶುದ್ಧ ಕುಡಿಯುವ ನೀರಿನ ಕನಸು ಸಾಕಾರಗೊಂಡಿಲ್ಲ. ಸಮೀಪದ ಬಿಚಗೋಡು ಗ್ರಾಮಸ್ಥರು ನಿತ್ಯ ಕುಡಿಯುವುದಕ್ಕೆ ಕಲುಷಿತ ನೀರನ್ನೇ ಬಳಕೆ ಮಾಡುತ್ತಿದ್ದಾರೆ.

ಯೋಜನೆಗಳ ಸಮರ್ಪಕ ಅನುಷ್ಠಾನ ಆಗುತ್ತಿಲ್ಲ

ಕರೂರು ಹೋಬಳಿಯ ಕುದರೂರು ಗ್ರಾಮ ಪಂಚಾಯಿತಿ ಕಾರ್ಯಾಲಯದಿಂದ ಕೇವಲ 3 ಕಿಲೋ ಮೀಟರ್ ಅಂತರದಲ್ಲಿರುವ ಗ್ರಾಮ ಬಿಚಗೋಡು. ಇಲ್ಲಿ 11 ಕುಟುಂಬಗಳು ನೆಲೆಸಿವೆ. ಮೂರು ದಶಕಗಳು ಉರುಳಿದರೂ ಈ ಗ್ರಾಮಕ್ಕೆ ಶುದ್ಧ ನೀರು ಪೂರೈಕೆಯಾಗಿಲ್ಲ. 'ಚುನಾವಣೆ ಬಂದಾಗ ಸಮಸ್ಯೆ ಪರಿಹರಿಸುವ ಭರವಸೆ ನೀಡುವ ಜನಪ್ರತಿನಿಧಿಗಳು, ಚುನಾವಣೆ ಮುಗಿದ ಬಳಿಕ ಗ್ರಾಮದತ್ತ ತಿರುಗಿಯೂ ನೋಡುವುದಿಲ್ಲ. ಅಧಿಕಾರಿಗಳೂ ಸಮಸ್ಯೆ ಪರಿಹರಿಸಲು ಕ್ರಮ ಕೈಗೊಂಡಿಲ್ಲ' ಎಂದು ಗ್ರಾಮಸ್ಥರು ಆರೋಪಿಸುತ್ತಾರೆ. 'ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುವುದರಿಂದ ತೋಟದ ಚೌಗು ಪ್ರದೇಶದಲ್ಲಿ ಹರಿಯುತ್ತಿರುವ ಕಲುಷಿತ ನೀರು ತಂದು, ಅದನ್ನೇ ಬಸಿದು ಬಳಕೆ ಮಾಡುತ್ತಿದ್ದಾರೆ. ಪರ್ಯಾಯ ವ್ಯವಸ್ಥೆ ಇಲ್ಲದ ಕಾರಣ, ಬಿಂದಿಗೆಗೆ ಬಟ್ಟೆ ಕಟ್ಟಿ ಕಲುಷಿತ ನೀರನ್ನೇ ಸೋಸಿ ಕುಡಿಯುವಂತಹ ಶೋಚನೀಯ ಸ್ಥಿತಿ ನಿರ್ಮಾಣವಾಗಿದೆ. ಗ್ರಾಮ ಪಂಚಾಯಿತಿ ಆಡಳಿತವು ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಪ್ರಯತ್ನ ಮಾಡಬೇಕು' ಎಂಬುದು ಸ್ಥಳೀಯರಾದ ರಾಜೀವ್ ಬಿ.ಎನ್. ಅವರ ಆಗ್ರಹ.'

ಗ್ರಾಮದಲ್ಲಿ ಬಳಸುತ್ತಿರುವ ಕೆರೆಯ ನೀರು ಕುಡಿಯುವುದಕ್ಕೆ ಯೋಗ್ಯವಾಗಿಲ್ಲ. ಇಂತಹ ನೀರನ್ನು ಸೇವಿಸಬಾರದು ಎಂದು ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿ ಸಲಹೆ ನೀಡಿದ್ದಾರೆ. ಸಮೀಪದ ಸಸಿಗೊಳ್ಳಿ ವೃತ್ತದಲ್ಲಿರುವ ಬೋರ್‌ವೆಲ್ ಮೂಲಕ ದೂರದ ಹಳ್ಳಿಗಳಿಗೆ ನೀರು ಪೂರೈಕೆ ಆಗುತ್ತಿದೆ. ಆದರೆ ಮಧ್ಯೆ ಇರುವ ನಮ್ಮ ಗ್ರಾಮಕ್ಕೆ ನೀರು ಸರಬರಾಜು ಮಾಡಲು ಗ್ರಾಮ ಪಂಚಾಯಿತಿ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಿದ್ದಾರೆ' ಎಂದು ಗ್ರಾಮಸ್ಥರು ದೂರಿದ್ದಾರೆ. ಜನರ ಅನುಕೂಲಕ್ಕಾಗಿ ಟ್ಯಾಂಕ್ ನಿರ್ಮಿಸಿ, ಪೈಪ್‌ಲೈನ್ ಮೂಲಕ ಅದಕ್ಕೆ ನೀರು ತುಂಬಿಸಬೇಕು. ಅಥವಾ ಜಲಜೀವನ್ ಮಿಷನ್ ಯೋಜನೆಯನ್ನು ನಮ್ಮ ಗ್ರಾಮದಲ್ಲೂ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಶಾಸಕರು ಈ ಬಗ್ಗೆ ಗಮನ ಹರಿಸದಿದ್ದರೆ ಪ್ರತಿಭಟನೆ ಅನಿವಾರ್ಯ' ಎನ್ನುತ್ತಾರೆ ಗ್ರಾಮಸ್ಥರಾದ ರಾಜು ಹಾಗೂ ರವಿ ಬಿಚಗೋಡು. 'ಪಂಚಾಯಿತಿಯವರು ತೆರಿಗೆ ಕಟ್ಟಿಸಿಕೊಳ್ಳುವುಕ್ಕೆ ತೋರಿಸುವಷ್ಟು ಕಾಳಜಿಯನ್ನು ಜನರಿಗೆ ಕುಡಿಯುವ ನೀರು ಪೂರೈಸುವುಕ್ಕೆ ತೋರಿಸುತ್ತಿಲ್ಲ. 30 ವರ್ಷಗಳಿಂದ ಮನೆಯ ಕರ ಪಾವತಿ ಮಾಡುತ್ತಿದ್ದೇವೆ. ಇಷ್ಟು ವರ್ಷ ಕಂದಾಯ ಕಟ್ಟಿದ್ದರೂ ಯಾವ ಜನೋಪಯೋಗಿ ಕೆಲಸವೂ ಆಗಿಲ್ಲ. ಕಂದಾಯ ಕಟ್ಟಿದವರಿಗೆ ಅದರಿಂದ ಉಪಯೋಗವೂ ಆಗಿಲ್ಲ' ಎಂದು ಗ್ರಾಮದ ನಿವಾಸಿಗಳಾದ ಸರೋಜಾ, ಶಶಿಕಲಾ ಅಳಲು ತೋಡಿಕೊಂಡರು.


ಉದಯವಾಹಿನಿ ಚಿತ್ರ

ಸ್ನಾನ, ಬಟ್ಟೆ, ಮನೆ ಸ್ವಚ್ಛತೆ, ಶೌಚಾಲಯ ಸೇರಿದಂತೆ ದಿನನಿತ್ಯದ ಬಳಕೆಗೆ ಬೇಕಾಗುವಷ್ಟು ನೀರು ಸಿಗುವುದೇ ಇಲ್ಲ ಪಂಚಾಯಿತಿಯಲ್ಲಿ ಅಷ್ಟೊಂದು ಹಣ ಇಲ್ಲ ವಿಶ್ವನಬಿಚಗೋಡು ಗ್ರಾಮಕ್ಕೆ ಕುಡಿಯುವ ನೀರು ಪೂರೈಸಲು ಶಾಶ್ವತ ಕಾಮಗಾರಿ ಕೈಗೊಳ್ಳಬೇಕು. ಇದಕ್ಕೆ ಸಾಕಷ್ಟು ಅನುದಾನ ಬೇಕಿದೆ.

-ಗ್ರಾಮ ಪಾಥ ಪಟ್ಟಣಶೆಟ್ಟಿ, ಪಿಡಿಒ, ಕುದರೂರು

### ಅನುದಾನ ಇಲ್ಲ

ಹೊಸದಾಗಿ ನೀರಿನ ಸಂಪರ್ಕ ಕಲ್ಪಿಸಲು ಹೆಚ್ಚಿನ ಅನುದಾನ ಬೇಕಿದೆ. ಕೊಳವೆಬಾವಿ ಕೊರೆಯಿಸಿ ರೈಸಿಂಗ್ ಪೈಪ್‌ಲೈನ್ ಹಾಕಬೇಕಾಗಿರುತ್ತದೆ. ಜೊತೆಗೆ ನೀರನ್ನು ಟ್ಯಾಂಕ್‌ಗೆ ಪಂಪ್ ಮಾಡಬೇಕಿದೆ. ಅದಕ್ಕಾಗಿ ಅಂದಾಜು ಪಟ್ಟಿ ತಯಾರಿಸಿ ಕಳುಹಿಸುವ ಬಗ್ಗೆ ಗ್ರಾಮ ಪಂಚಾಯಿತಿ ಸದಸ್ಯರ ಜೊತೆ ಚರ್ಚಿಸಲಾಗುವುದು' ಎನ್ನುತ್ತಾರೆ ಕುದರೂರು ಗ್ರಾಮ ಪಂಚಾಯಿತಿ ಪಿಡಿಒ ವಿಶ್ವನಾಥ್ ಪಟ್ಟಣ ಶೆಟ್ಟಿ.

# ಆಹಾರ ಇಲಾಖೆ ಜಂಟಿ ನಿರ್ದೇಶಕರ ವಿರುದ್ಧ ನ್ಯಾಯಬೆಲೆ ಅಂಗಡಿ ಮಾಲೀಕರು ಜಿಲ್ಲಾಧಿಕಾರಿಗೆ ದೂರು

• ಉದಯವಾಹಿನಿ, ಹಾಸನ


ಆಹಾರ ಇಲಾಖೆಯಲ್ಲಿ ವ್ಯಾಪಕ ಭ್ರಷ್ಟಾಚಾರ ಹೆಚ್ಚಾಗಿದ್ದು ಇಲಾಖೆ ಜಂಟಿ ನಿರ್ದೇಶಕರು ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಕಿರುಕುಳ ನೀಡುತ್ತಿದ್ದಾರೆ ಮತ್ತು ಹಣಕ್ಕಾಗಿ ಪೀಡಿಸುತ್ತಿದ್ದಾರೆ ಎಂದು ರಾಜ್ಯ ಪಡಿತರ ವಿತರಕರ ಸಂಘದ ಅಧ್ಯಕ್ಷರು ಹಾಗೂ ರಾಷ್ಟ್ರೀಯ ಕಾರ್ಯಾಧ್ಯಕ್ಷರಾದ ಕೃಷ್ಣಪ್ಪ ಹಾಸನ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು.

ತಪಾಸಣೆಯ ನೆಪವಡ್ಡಿ ಹಣ ವಸೂಲಿ

ನಂತರ ಮಾತನಾಡಿದ ಕೃಷ್ಣಪ್ಪ, ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಆಹಾರ ಇಲಾಖೆ ಉಪ ನಿರ್ದೇಶಕರು ಜಂಟಿ ನಿರ್ದೇಶಕರುಗಳು ಲಂಚದ ದಂದಿಗೆ ಕೈಹಾಕಿದ್ದು ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ನೋಟಿಸ್ ನೀಡಿ ಪದೇಪದೇ ನ್ಯಾಯಬೆಲೆ ಅಂಗಡಿಗಳಿಗೆ ತಪಾಸಣೆಯ ನೆಪವೊಡ್ಡಿ ಹಣ ವಸೂಲಿ ಮಾಡುತ್ತಿದ್ದಾರೆ ಇದಕ್ಕೆ ಹಾಸನ ಜಿಲ್ಲೆಯ ಜಿಲ್ಲಾಧಿಕಾರಿಗಳು ಇವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಮತ್ತು ತನಿಖೆ ನಡೆಸಬೇಕೆಂದು ಒತ್ತಾಯಿಸಿದರು. ಈಗಾಗಲೇ ಚಿತ್ರದುರ್ಗ ಜಿಲ್ಲೆಯಲ್ಲಿ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದು ತನಿಖೆ ನಡೆಯುತ್ತಿದೆ ಇದೇ ರೀತಿ ಹಾಸನ ಜಿಲ್ಲೆಯಲ್ಲಿಯೂ ಸಹ ಪಡಿತರ ವಿತರಕರಿಗೆ ತೊಂದರೆ ನೀಡಿದ್ದೆ ಆದಲ್ಲಿ ಇಲ್ಲಿಯೂ ಸಹ ಲೋಕಾಯುಕ್ತರಿಗೆ ದೂರು ನೀಡಲಾಗುವುದೆಂದರು.

ನ್ಯಾಯ ಬೆಲೆ ಅಂಗಡಿ ಮಾಲೀಕರು ಈ ಹಿಂದೆ ಇದೆ ಈ ಕೆ ವೈ ಸಿ ಮಾಡಿರುವ ಹಣ ಇದುವರೆಗೂ ಪಡಿತರ ವಿತರಕರ ಖಾತೆಗೆ ಬಂದಿರುವುದಿಲ್ಲ.

ಪಡಿತರ ವಿತರಕರು ನಿರಂತರವಾಗಿ ಎದುರಿಸುವ ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಜಂಟಿ ನಿರ್ದೇಶಕರು ಒಂದೇ ಒಂದು ಪತ್ರವನ್ನು ಸಹ ಬರೆದಿಲ್ಲ ಸುಖ ಸುಮ್ಮನೆ ತಪಾಸಣೆಯ ನೆಪವೊಡ್ಡಿ ಪಡಿತರ ವಿತರಕರಿಗೆ ನಿರಂತರವಾಗಿ ಕಿರುಕುಳ ಉಂಟು ಮಾಡುತ್ತಿದ್ದಾರೆ. ಇದು ಇದೇ ರೀತಿ ಮುಂದುವರೆದಲ್ಲಿ ಲೋಕಾಯುಕ್ತಕ್ಕೆ ದೂರು ನೀಡಿ ಸಚಿವರು ಮತ್ತು ಮುಖ್ಯಮಂತ್ರಿಗಳ ಗಮನಕ್ಕೂ ಸಹ ದೂರು ನೀಡಲಾಗುವುದೆಂದು. ರಾಜ್ಯಾಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯ ಅಧ್ಯಕ್ಷ ಕೃಷ್ಣಪ್ಪ ಹೇಳಿದರು. ಹಾಸನ ನಗರದ ಪ್ರವಾಸಿ ಮಂದಿರದ ಆವರಣದಲ್ಲಿ ನ್ಯಾಯಬೆಲೆ ಅಂಗಡಿ ಮಾಲೀಕರೊಂದಿಗೆ ಹಲವಾರು ಸಮಸ್ಯೆಗಳ ಬಗ್ಗೆ ಚರ್ಚಿಸಿ ನಂತರ ಮೆರವಣಿಗೆಯೊಂದಿಗೆ ಜಿಲ್ಲಾಧಿಕಾರಿಗಳಿಗೆ. ಮನವಿ ಸಲ್ಲಿಸಿದರು.




ಉದಯವಾಹಿನಿ ಚಿತ್ರ

### ಬರುವ ಬಜೆಟ್ ಅಧಿವೇಶನದಲ್ಲಿ ಹೆಚ್ಚುವರಿ ಐದು ಕೆಜಿ ಅಕ್ಕಿ ನೀಡುವಂತೆ ಕೃಷ್ಣಪ್ಪ ಆಗ್ರಹ

ಮುಖ್ಯಮಂತ್ರಿ ಸಿದ್ದರಾಮಯ್ಯನವರು. ಅನ್ನ ರಾಮಯ್ಯ ಎಂಬ ಬಿರುದು ಪಡೆದಿದ್ದು ಕೇಂದ್ರ ಸರ್ಕಾರ ಕಮ್ಮಿ ಬೆಲೆಗೆ ಅಕ್ಕಿಯನ್ನು ನೀಡಲು ಸಿದ್ಧವಾಗಿದ್ದು ರಾಜ್ಯ ಸರ್ಕಾರ ಡಿ ಬಿ ಟಿ ಮುಖಾಂತರ ನೀಡುತ್ತಿರುವ ಹಣವನ್ನು ನಿಲ್ಲಿಸಿ ಬದಲಾಗಿ ಹೆಚ್ಚುವರಿ 5 ಕೆಜಿ ಅಕ್ಕಿನೀಡುವಂತೆ ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿದರಲ್ಲದೆ ಪಡಿತರ ಕಾಡುದಾರರಿಗೆ ದಿನಬಳಕೆ ವಸ್ತುಗಳಾದ ಬೇಳೆಕಾಳುಗಳನ್ನು ಸಹ ನೀಡಬೇಕೆಂದು ರಾಷ್ಟ್ರೀಯ ಕಾರ್ಯಧ್ಯಕ್ಷ ಹಾಗೂ ರಾಜ್ಯ ಪಡಿತರ ವಿತರಕರ ಸಂಘದ ಅಧ್ಯಕ್ಷ ಕೃಷ್ಣಪ್ಪ ಮಾಧ್ಯಮದವರೊಂದಿಗೆ ಒತ್ತಾಯಿಸಿದರು

# ದಯಾಮರಣ ಅರ್ಜಿ ಸಲ್ಲಿಸಿ ಬ್ಲಾಕ್‌ಮೇಲ್


• ಉದಯವಾಹಿನಿ, ಯಾದಗಿರಿ

ತಾಲ್ಲೂಕಿನ ಕಿಲ್ಲನಕೇರಾ ಗ್ರಾಮದ ಬೀರಲಿಂಗಪ್ಪ ಉದ್ದೇಶಪೂರ್ವಕವಾಗಿ ಶಾಸಕ ಶರಣಗೌಡ ಕಂದಕೂರ ಅವರ ತೇಜೋವಧೆ ಮಾಡಲು ದಯಾಮರಣ ಅರ್ಜಿ ಸಲ್ಲಿಸಿ ಬ್ಲಾಕ್‌ಮೇಲ್ ಮಾಡುತ್ತಿದ್ದಾರೆ ಎಂದು ಆರೋಪಿಸಿ ಜಾತ್ಯತೀತ ಜನತಾದಳದಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ಸಲ್ಲಿಸಲಾಗಿದೆ.

ಕಿಲ್ಲನಕೇರಾ ಗ್ರಾಮದ ಬೀರ ಲಿಂಗಪ್ಪ ಎಂಬುವವರು ಗುರುಮಠಕಲ್ ಮತ ಕ್ಷೇತ್ರದ ಉದ್ದೇಶದೊಂದಿಗೆ ಶಾಸಕರ ಕಿರುಕುಳದಿಂದ ಮನನೊಂದ ಹಿನ್ನೆಲೆಯಲ್ಲಿ ದಯಾಮರಣ ನೀಡಲು ಕೋರಿ ಅರ್ಜಿ ಸಲ್ಲಿಸುವ ನಾಟಕವಾಡಿ ಬ್ಲಾಕ್‌ಮೇಲ್ ಮಾಡುತ್ತಿರುವುದು ಮಾಧ್ಯಮದ ಮೂಲಕ ಗಮನಕ್ಕೆ ಬಂದಿರುತ್ತದೆ. ಶರಣಗೌಡ ಕಂದಕೂರ ಹೆಸರಿಗೆ ಚ್ಯುತಿ ತರುವ ಉದ್ದೇಶದೊಂದಿಗೆ ನಾಟಕವಾಡುತ್ತಿದ್ದಾನೆ ಎಂದು ದೂರಿದ್ದಾರೆ.

ಶಾಸಕರ ವಿರುದ್ಧ ಬಂದಿರುವ ಆರೋಪಗಳು ನಿರಾಧರ. ಗ್ರಾಮದ ಲಕ್ಷ್ಮೀದೇವಸ್ಥಾನಕ್ಕೆ ಮುಜರಾಯಿ ಇಲಾಖೆಯಿಂದ 3.98 ಲಕ್ಷ ಅನುದಾನ ಮಂಜೂರಾಗಿದ್ದು, ದೇವಸ್ಥಾನದ ಅನುದಾನವನ್ನು ಇದೇ ಬೀರ ಲಿಂಗಪ್ಪ ಎಂಬುವವರು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆಂದು ಗ್ರಾಮದ ಮುಖಂಡರು ಹಾಗೂ ಲಕ್ಷ್ಮೀದೇವಸ್ಥಾನ ಸಮಿತಿ ಅಧ್ಯಕ್ಷರು ಶಾಸಕರ ಗಮನಕ್ಕೆ ತಂದಿದ್ದಾರೆ. ತಾವು ಈಗಾಗಲೇ ದೇವ ಸ್ಥಾನದ ಜೀರ್ಣೋದ್ಧಾರಕ್ಕೆಂದು ಭಕ್ತರಿಂದ ದೇಣಿಗೆ ಸಂಗ್ರಹ ಮಾಡಿದ್ದಾರೆ. ಹೀಗಾಗಿ ಅನುದಾನವನ್ನು ಬೇರೆ ಕಾಮಗಾರಿಗೆ ಬಳಕೆ ಆಗುವಂತೆ ಕಾಮಗಾರಿಯನ್ನು ಬದಲಾವಣೆ ಮಾಡಿರುತ್ತಾರೆ ಎಂದು ಸ್ಪಷ್ಟನೆ ನೀಡಿದ್ದಾರೆ.

ಈ ವಿಷಯವನ್ನು ತಿರುಚಿ ಶಾಸಕರ ಹೆಸರಿಗೆ ಚ್ಯುತಿ ತರುವ ದುರುದ್ದೇಶದೊಂದಿಗೆ ದೇವಸ್ಥಾನಕ್ಕೆ ಮಂಜುರಾದ ಕಾಮಗಾರಿಯನ್ನು ಬೇರೆ ಕಾಮಗಾರಿಯನ್ನಾಗಿ ಮಾಡಲಾಗಿದೆಯೆಂದು ಸುಳ್ಳು ಆರೋಪ ಮಾಡಿ ಶಾಸಕರ ಭಾವಚಿತ್ರಕ್ಕೆ ಚಪ್ಪಲಿ ಇಟ್ಟು ಸಾಮಾಜಿಕ ಜಾಲಾತಾಣಗಳಲ್ಲಿ ಹರಿಬಿಟ್ಟಿರುವ ಈತನ ಹೇಯ ಕೃತ್ಯದಿಂದ ಬೇಸರಗೊಂಡ ಗ್ರಾಮಸ್ಥರು ಈತನ ಮೇಲೆ ಸೈದಾಪುರ ಪೊಲೀಸ್ ಠಾಣೆಯಲ್ಲಿ ದೂರು ನೀಡಿ ಕ್ರಮಕ್ಕೆ ಆಗ್ರಹಿಸಿರುತ್ತಾರೆ ಎಂದು ತಿಳಿಸಿದ್ದಾರೆ.


ದೂರು
ಉದಯವಾಹಿನಿ ಚಿತ್ರ

# ಕೃಷ್ಣಕುಮಾರ್ ಹಾಗೂ ಮಾತೃಶ್ರೀ ಯವರಿಗೆ 2025ರ ಪಬ್ಲಿಕ್ ಫೈಲ್ ಸಾಧಕ ಪ್ರಶಸ್ತಿ

• ಉದಯವಾಹಿನಿ ಉಡುಪಿ

ಪಬ್ಲಿಕ್ ಫೈಲ್ ಕನ್ನಡ ಪಾಕ್ಷಿಕ ಪತ್ರಿಕೆ ಹಾಗೂ ಪಬ್ಲಿಕ್ ಫೈಲ್ ನ್ಯೂಸ್ ನೆಟ್ವರ್ಕ್ ದ್ವಿತೀಯ ವರ್ಷದ ಸಾಧಕರ ಸಂಗಮ- 2025ರ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹಲವು ಪ್ರತಿಭೆಗಳನ್ನು ಉಡುಪಿಯ ಇನ್ಫೋಸಿಸ್ ಯಕ್ಷಗಾನ ಕಲಾರಂಗದಲ್ಲಿ ಸನ್ಮಾನಿಸಲಾಯಿತು. ತಂದೆ ಕೊಡಿಸಿದ ಸ್ಕೂಟರಿನಲ್ಲಿ ಹೆತ್ತ ತಾಯಿಯನ್ನು ಹೊತ್ತು 88,982 ಕಿಲೋಮೀಟರ್ಗಳ ಯಾತ್ರೆಯನ್ನು ಯಶಸ್ವಿಯಾಗಿ ಪೂರೈಸಿದ ಮೈಸೂರಿನ ಕೃಷ್ಣಕುಮಾರ್ ಹಾಗೂ ಮಾತೃಶ್ರೀ ಚೂಡಾ ರತ್ನಮ್ಮನವರನ್ನು ಅಭಿಮಾನ ಪೂರ್ವಕವಾಗಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ವಿಶೇಷ ಪ್ರಧಾನ ವರದಿಗಾರರಾದ ಸಂತೋಷ್ ಶೆಟ್ಟಿ ಮೊಳಹಳ್ಳಿಯವರು ತಂದೆ ತಾಯಿಯನ್ನು ವೃದ್ಧಾಶ್ರಮಕ್ಕೆ ಸೇರಿಸುವ ಇಂದಿನ ಕಾಲದಲ್ಲಿ ಬ್ರಹ್ಮಚಾರಿಯಾಗಿ, ತನ್ನ ಜೀವನವನ್ನೇ ಮುಡಿಪಾಗಿಟ್ಟು ತಾಯಿಯ ಆಸೆ ಪೂರೈಸಿದ ಇವರ ಸಾಧನೆ ಇಡೀ ಸಮಾಜಕ್ಕೆ ಮಾದರಿ,ಇಂದಿನ ಯುವ ಜನಾಂಗ ಇಂತಹ ವ್ಯಕ್ತಿಗಳಿಂದ ಸಾಕಷ್ಟು ಕಲಿಯುವುದಿದೆ ಎಂದರು. ತಾಯಿ ಪುತ್ರರೀರ್ವರೂ ಫೈಲ್‌ನ ಗೌರವ ಸಂಪಾದಕರಿಗೆ, ಎಲ್ಲಾ ಪದಾಧಿಕಾರಿಗಳು ಪತ್ರಿಕೆಯ ಅಭಿಮಾನಿಗಳಿಗೆ ಧನ್ಯವಾದಗಳನ್ನು ತಿಳಿಸಿದರು.



ಉದಯವಾಹಿನಿ ಚಿತ್ರ

# ಬಸ್ ಚಕ್ರದಡಿ ಮಲಗಿ ವ್ಯಕ್ತಿ ಆತ್ಮಹತ್ಯೆ

• ಉದಯವಾಹಿನಿ ಧಾರವಾಡ

ಏಕಾಏಕಿ ಓಡಿಬಂದು ಬಸ್ ಚಕ್ರದಡಿ ಮಲಗಿ ವ್ಯಕ್ತಿಯೋರ್ವ ಆತ್ಮಹತ್ಯೆಗೆ ಶರಣಾದ ಘಟನೆ ಧಾರವಾಡ ಕೇಂದ್ರೀಯ ಬಸ್ ನಿಲ್ದಾಣದಲ್ಲಿ ನಡೆದಿದೆ. ಬಸ್‌ವೊಂದು ಬಸ್ ನಿಲ್ದಾಣಕ್ಕೆ ಬರುತ್ತಿದ್ದ ವೇಳೆ ಏಕಾಏಕಿ ವ್ಯಕ್ತಿಯೊಬ್ಬ ಬಸ್ ನ ಹಿಂದಿನ ಚಕ್ರದಡಿ ಮಲಗಿದ್ದಾನೆ. ಬಸ್ ವ್ಯಕ್ತಿಯ ಮೇಲೆ ಹರಿದುಹೋಗಿದೆ. ಆರಂಭದಲ್ಲಿ ಬಸ್ ಪಾದಚಾರಿ ಮೇಲೆ ಹರಿದಿದೆ ಎಂದು ಹೇಳಲಾಗಿತ್ತು ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣವೂ ದಾಖಲಾಗಿತ್ತು. ಆದರೆ ಸಿಸಿಟಿವಿ ಕ್ಯಾಮರಾ ಪರಿಶೀಲನೆ ನಡೆಸಿದಾಗ ವ್ಯಕ್ತಿ ತಾನೇ ಬಸ್ ನಡಿ ಮಲಗಿ ಆತ್ಮಹತ್ಯೆ ಮಡಿಕೊಂಡಿರುವುದು ದೃಢವಾಗಿದೆ. ಪ್ರಕರಣವನ್ನು ಧಾರವಾಡ ಉಪನಗರ ಠಾಣೆಗೆ ವರ್ಗಾವಣೆ ಮಾಡಲಾಗಿದೆ. ವ್ಯಕ್ತಿ ಯಾರು? ಆತ್ಮಹತ್ಯೆಗೆ ನಿಖರ ಕಾರಣವೇನು ತಿಳಿದುಬಂದಿಲ್ಲ.

# ದಾಸೋಹ ದಿನ ಆಚರಿಸಲು ಮನವಿ

• ಉದಯವಾಹಿನಿ ಕಲಬುರಗಿ

ತುಮಕೂರಿನ ಶಿವಕುಮಾರ ಸ್ವಾಮಿಗಳ ಶಿವೈಕ್ಯರಾದ ದಿನವಾದ ಜನವರಿ 21ರಂದು ಸರ್ಕಾರದಿಂದಲೇ ದಾಸೋಹ ದಿನವನ್ನು ಆಚರಿಸಲು ಕ್ರಮ ಕೈಗೊಳ್ಳಬೇಕು ಎಂದು ಕಲಬುರಗಿ-ಬೀದರ್‌ನ ಸಿದ್ಧಗಂಗಾ ಹಳೇ ವಿದ್ಯಾರ್ಥಿ ಹಾಗೂ ಹಿತೈಷಿಗಳ ಸಂಘ ಮನವಿ ಮಾಡಿದೆ. ಈ ಕುರಿತು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಪ್ರಧಾನ ಕಾರ್ಯದರ್ಶಿ ಹಾಗೂ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿದ ನಿಯೋಗವು, 'ಮಹಾನ್ ಸಂತ ಶಿವಕುಮಾರ ಶ್ರೀಗಳ ಆಶೀರ್ವಾದದಿಂದ ಇಂದಿಗೂ ಮಠದಲ್ಲಿ 10 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. ಇಂತಹ ಶ್ರೇಷ್ಠ ಸಂತ ಶಿವೈಕ್ಯರಾದ ಪುಣ್ಯ ದಿನವನ್ನು ಸರ್ಕಾರ ದಾಸೋಹ ದಿನ ಎಂದು ಘೋಷಣೆ ಮಾಡಿದೆ. ಆದರೆ ಕಳೆದ ವರ್ಷ ಸರ್ಕಾರ ಆಚರಣೆ ಮಾಡದ ಕಾರಣ ಲಕ್ಷಾಂತರ ಭಕ್ತರು ಮತ್ತು ಹಳೇ ವಿದ್ಯಾರ್ಥಿಗಳಿಗೆ ನೋವುಂಟಾಗಿದೆ. ಹೀಗಾಗಿ ಈ ದಿನವನ್ನು ಸರ್ಕಾರವೇ ಆಚರಿಸುವ ಮೂಲಕ ಲಕ್ಷಾಂತರ ಭಕ್ತರ ಭಾವನೆಗೆ ಸ್ಪಂದಿಸಬೇಕು' ಎಂದು ಮನವಿ ಮಾಡಿತು. ಮನವಿ ಸ್ವೀಕರಿಸಿದ ಸಚಿವ ಈಶ್ವರ ಖಂಡ್ರೆ, ಈ ವಿಷಯ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಬೇಡಿಕೆ ಈಡೇರಿಸುವುದಾಗಿ ಭರವಸೆ ನೀಡಿದರು.

# ನೇರ ಫೋನ್ ಇನ್ ಕಾರ್ಯಕ್ರಮ

• ಉದಯವಾಹಿನಿ, ಚಿತ್ರದುರ್ಗ

ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಉನ್ನತೀಕರಣದ ಹಿನ್ನಲೆಯಲ್ಲಿ ನುರಿತ ವಿಷಯ ತಜ್ಞರಿಂದ ವಿಷಯವಾರು ಪರೀಕ್ಷೆಗೆ ಸಂಬಂಧಿಸಿದ ಮಾಹಿತಿ ನೀಡಲು ಮತ್ತು ಮಕ್ಕಳ ಪ್ರಶ್ನೆಗಳಿಗೆ ಉತ್ತರಿಸಲು ನೇರ ಫೋನ್ ಇನ್ ಕಾರ್ಯಕ್ರಮ ರೂಪಿಸಲಾಗಿದೆ. ಇದೇ ಜ.24ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ಆಕಾಶವಾಣಿಯ ನೇರ ಫೋನ್ ಇನ್ ಕಾರ್ಯಕ್ರಮದ ಚರ್ಚೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಎಂ. ಆರ್.ಮಂಜುನಾಥ್, ಶಿಕ್ಷಣಾಧಿಕಾರಿ ಬಿ.ಸಿ.ಸಿದ್ದಪ್ಪ, ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿ ಎನ್. ಆರ್. ತಿಪ್ಪೇಸ್ವಾಮಿ, ಶಿಕ್ಷಣ ಉಪಯೋಜನ ಸಮನ್ವಯಾಧಿಕಾರಿ ಸಿ. ವೆಂಕಟೇಶ್ ಹಾಗೂ ವಿಷಯ ಪರಿವೀಕ್ಷಕ ಕೆ.ಜಿ.ಪ್ರಶಾಂತ್ ಕೆ.ಜಿ ಭಾಗವಹಿಸುವರು. 2025ನೇ ಮಾರ್ಚ್ ಮಾಹೆಯಲ್ಲಿ ನಡೆಯುವ ಎಸ್ ಎಸ್‌ಎಲ್‌ಸಿ ಪರೀಕ್ಷೆಗೆ ಜಿಲ್ಲೆಯ ಎಲ್ಲಾ ಮಕ್ಕಳನ್ನು ಉತ್ತಮವಾಗಿ ತಯಾರಿ ಮಾಡಲು ಆಕಾಶವಾಣಿ ಮೂಲಕ ಎಸ್‌ಎಸ್‌ಎಲ್‌ಸಿ ಪೂರ್ವಭಾವಿ ಪರೀಕ್ಷಾ ಸಿದ್ಧತೆ, ಪ್ರಾಯೋಜಿತ ನೇರ ಫೋನ್ ಇನ್ ಸರಣಿ ಕಾರ್ಯಕ್ರಮ ಪ್ರತಿ ಬುಧವಾರ ಬೆಳಿಗ್ಗೆ 10 ರಿಂದ 11 ರವರೆಗೆ ಪ್ರಸಾರವಾಗುವುದು.

ಈ ಸರಣಿ ಕಾರ್ಯಕ್ರಮವು ಇದೇ ಜನವರಿ 29 ರಿಂದ ಆರಂಭವಾಗಿ ಮಾರ್ಚ್ 19 ರವರೆಗೆ ಬಿತ್ತರವಾಗುವುದು. ಈ ಸರಣಿ ಕಾರ್ಯಕ್ರಮವು 102.6 ಮೆಗಾ ಹರ್ಡ್ಜ್‌ಗಳ ತರಂಗಾಂತಗಳಲ್ಲಿ ಆಕಾಶವಾಣಿ ಚಿತ್ರದುರ್ಗ ಕೇಂದ್ರದಿಂದ ಪ್ರಸಾರವಾಗುವುದು. ಈ ಕಾರ್ಯಕ್ರಮವನ್ನು ಜಗತ್ತಿನಾದ್ಯಂತ Aakashavani Chitradurga Live streaming ಮತ್ತು prasara bharathi news on air app ನಲ್ಲಿ ಪ್ರಸಾರ ಸಮಯದಲ್ಲಿ ಕೇಳಬಹುದು ಎಂದು ಆಕಾಶವಾಣಿ ನಿಲಯದ ಕಾರ್ಯಕ್ರಮದ ಮುಖ್ಯಸ್ಥ ಎಸ್.ಆರ್. ಭಟ್ ಮತ್ತು ಪ್ರಸಾರ ಕಾರ್ಯ ಮುಖ್ಯಸ್ಥ ಡಿ.ಆರ್.ಶಿವಪ್ರಕಾಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಬಿಗರ ಚೌಡಯ್ಯ ಕೇವಲ ಕೋಲಿ ಸಮಾಜಕ್ಕೆ ಮಾತ್ರ ಸೀಮಿತವಲ್ಲ

• ಉದಯವಾಹಿನಿ, ಯಾದಗಿರಿ

ನಗರದ ಟೋಕ್ರೆ ಕೋಲಿ ಸಮಾಜದ ಜಿಲ್ಲಾ ಕಚೇರಿಯಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಜಯಂತಿ ಕಾರ್ಯಕ್ರಮ ಉದ್ಘಾಟಿಸಿದ ಅಖಿಲ ಭಾರತ ಕರ್ನಾಟಕ ಪ್ರದೇಶ ಕೋಲಿ ಸಮಾಜದ ಸಂಘಟನಾ ಕಾರ್ಯದರ್ಶೀ ಉಮೇಶ ಕೆ. ಮುದ್ದಾಳ ಮಾತನಾಡಿ, ಸಮಾಜ ಏಳ್ಗೆ ಹೊಂದಬೇಕೆಂದರೆ ಚೌಡಯ್ಯನವರ ತತ್ವ ಆದರ್ಶಗಳನ್ನು ಸಮಾಜದ ಪ್ರತಿಯೊಬ್ಬರು ಪಾಲಿಸಬೇಕು.

ಚೌಡಯ್ಯನವರ ಜೀವನ ಚರಿತ್ರೆ ಮತ್ತು ಅವರ ವಚನಗಳು ಎಂದಿಗೂ ಎಲ್ಲರಿಗೂ ಮಾರ್ಗದರ್ಶಿಯಾಗಿದ್ದು, 12ನೇ ಶತಮಾನದಲ್ಲಿಯೇ ಮೌಡ್ಯಾ,ಚರಣೆ, ಕಂದಾಚಾರಗಳನ್ನು ತೊರೆದು ವಾಸ್ತವಿಕ ನೆಲೆಗಟ್ಟಿನಲ್ಲಿ ಬದುಕು ಕಟ್ಟಿಕೊಳ್ಳಬೇಕೆಂದು ಶರಣರು ಸಂತರು ತಮ್ಮ ಹರಿತವಾದ ವಚನಗಳ ಮೂಲಕ ಜಾಗೃತಿ ಮೂಡಿಸಿದ್ದಾರೆ. ಚೌಡಯ್ಯನವರು ಕೇವಲ ಕೋಲಿ ಸಮಾಜಕ್ಕೆ ಮಾತ್ರ ಸೀಮಿತವಲ್ಲ ಅವರು ಎಲ್ಲಾ ಸಮುದಾಯಕ್ಕೆ ಸೇರಿದ ಆಸ್ತಿ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಪಿ.ಎಸ್.ಐ 545 ರ‍್ಯಾಂಕ್ 212 ಬೆಂಗಳೂರು ಸೀಟಿ ನೂತನ ಪಿ.ಎಸ್.ಐ ಗೆ ಆಯ್ಕೆಯಾದ ಜೈನಾರಾಯಣ ತಂ/ ಶಾಂತವೀರ ಕಟ್ಟಿಗಿ ಶಹಾಪೂರ ಇವರಿಗೆ ವಿಶೇಷ ಸನ್ಮಾನಿಸಿ ಗೌರವಿಸಲಾಯಿತು.

ಹಿಂದೆ ಸಮಾಜ ಕಟ್ಟಿ ಬೆಳೆಸಿದ ಸಮಾಜದ ನಾಯಕರಾದ ವಿಠಲ್ ಹೇರೂರು ಅವರಿಂದಲೇ ಅಂಬಿಗರ ಚೌಡಯ್ಯನವರು ಜ್ಯೋತಿ ಯಾತ್ರಾ ಮಾಡುವುದರ ಮೂಲಕ ರಾಜ್ಯದ ಮೂಲೆಮೂಲೆಗೆ ಜ್ಯೋತಿ ಯಾತ್ರಾ ಸಂಚರಿಸಿ ಸಮಾಜ ಬಾಂಧವರಿಗೆ ಮಾರ್ಗದರ್ಶನದಲ್ಲಿ ನಡೆದ ಪರಿಣಾಮ ಇಂದು ರಾಜ್ಯ ಸರ್ಕಾರ ಚೌಡಯ್ಯನವರ ಜಯಂತಿ ಆಚರಿಸುವಂತಾಗಿದೆ ಎಂದರು.ಇದೇ ರೀತಿ ಸಾಗಿದಾಗ ಮಾತ್ರ ಸಮಾಜವನ್ನು ಎಸ್ಟಿಗೆ ಸೇರಿಸುವ ದಿನಗಳು ದೂರವಿಲ್ಲ, ಸಮಾಜ ಒಗ್ಗಟ್ಟಿನಿಂದ ಮುನ್ನುಗ್ಗಬೇಕಿದೆ. ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ನಮ್ಮ ಸಮಾಜವನ್ನು ನಿರ್ಲಕ್ಷಿಸುತ್ತಿದ್ದು, ಈ ಕುರಿತು ಸರ್ಕಾರದ ಗಮನ ಸೆಳೆಯವಂತ ಹೋರಾಟ ರೂಪಿಸಬೇಕಿದೆ. ಆ ನಿಟ್ಟಿನಲ್ಲಿ ಸಮಾಜದ ಯುವ ಸಮೂಹ ಜವಾಬ್ದಾರಿಯುತವಾಗಿ ಸಂಘಟನಾತ್ಮಕವಾಗಿ ಕೆಲಸ ಮಾಡಬೇಕು ಎಂದು ಕರೆ ನೀಡಿದರು. ನಿಜಶರಣ ಅಂಬಿಗರ ಸಂಘದ ಪದಾಧಿಕಾರಿಗಳು, ವಿಠ್ಠಲ್ ಹೇರೂರ ಅಭಿಮಾನಿಗಳ ಬಳಗ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

ಅಂಬಿಗರ ಚೌಡಯ್ಯನವರ ಜಯಂತಿ

# ವರದಕ್ಷಿಣೆಗಾಗಿ ಕಿರುಕುಳ: ಮಹಿಳೆ ಆತ್ಮಹತ್ಯೆ

• ಉದಯವಾಹಿನಿ, ಹಾಸನ

ವರದಕ್ಷಿಣೆ ಕಿರುಕುಳದಿಂದ ಮನನೊಂದು ಮಹಿಳೆ ನೇಣುಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಜಿಲ್ಲೆಯ ಆಲೂರು ತಾಲ್ಲೂಕಿನ ಹಳ್ಳಿಯೂರು ಗ್ರಾಮದಲ್ಲಿ ನಡೆದಿದೆ. ಮೃತ ಮಹಿಳೆಯನ್ನು ಮೂಲತಃ ಸಕಲೇಶಪುರ ತಾಲ್ಲೂಕಿನ ಬ್ಯಾಕರೆಗಡಿ ಗ್ರಾಮದ ಧನ್ಯಶ್ರೀ (20) ಎಂದು ಗುರುತಿಸಲಾಗಿದೆ.ಎರಡು ವರ್ಷದ ಹಿಂದೆ ಧನ್ಯಶ್ರೀ ಹಾಗೂ ಪ್ರೇಮ್‌ಕುಮಾರ್ ಪ್ರೀತಿಸಿ ಮದುವೆಯಾಗಿದ್ದರು. ಕಳೆದ ಒಂದು ವರ್ಷದಿಂದ ಪ್ರೇಮ್‌ಕುಮಾರ್ ಆಕೆಗೆ ವರದಕ್ಷಿಣೆ ತರುವಂತೆ ಪೀಡಿಸುತ್ತಿದ್ದ. ತವರು ಮನೆಗೆ ಹೋಗಿದ್ದ ಧನ್ಯಶ್ರೀ ಭಾನುವಾರ ಅತ್ತೆ ಮನೆಗೆ ವಾಪಸ್ ಬಂದಿದ್ದಳು. ಆ ವೇಳೆ ಯಾಕೆ ವರದಕ್ಷಿಣೆ ತಂದಿಲ್ಲ ಎಂದು ಜಗಳ ಮಾಡಿ ಆಕೆಯ ಮೇಲೆ ಹಲ್ಲೆ ಮಾಡಿದ್ದ. ಇದೇ ಸಮಯದಲ್ಲಿ ಪತಿಯೊಂದಿಗೆ ಅತ್ತೆ ಭವಾನಿ, ಮಾವ ಪ್ರದೀಪ್ ಕೂಡ ಆಕೆಯ ಮೇಲೆ ಹಲ್ಲೆ ನಡೆಸಿದ್ದರು. ಇದರಿಂದ ಮನನೊಂದ ಮಹಿಳೆ ಮನೆಯಲ್ಲಿಯೇ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

# ಸಂವಿಧಾನದ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ: ಮಲ್ಲಿಕಾರ್ಜುನ ಖರ್ಗೆ

## ಸಂವಿಧಾನ, ಪ್ರಜಾತಂತ್ರ ವ್ಯವಸ್ಥೆ ಇರದಿದ್ದರೆ ದೇಶದಲ್ಲಿ ಅರಾಜಕತೆ ಸೃಷ್ಟಿಯಾಗುತ್ತಿತ್ತು, ಗಾಂಧೀಜಿ ಸ್ವಾತಂತ್ರ್ಯ ತಂದುಕೊಟ್ಟರು

• ಉದಯವಾಹಿನಿ ಬೆಳಗಾವಿ

ಸಂವಿಧಾನ, ಪ್ರಜಾತಂತ್ರ ವ್ಯವಸ್ಥೆ ಇರದಿದ್ದರೆ ದೇಶದಲ್ಲಿ ಅರಾಜಕತೆ ಸೃಷ್ಟಿಯಾಗುತ್ತಿತ್ತು. ಗಾಂಧೀಜಿ ನಮಗೆ ಸ್ವಾತಂತ್ರ್ಯ ತಂದುಕೊಟ್ಟರು. ಸ್ವಾತಂತ್ರ್ಯದ ನಂತರದಲ್ಲಿ ಜವಾಹರಲಾಲ್ ನೆಹರು ಮತ್ತು ಅಂಬೇಡ್ಕರ್ ಸಂವಿಧಾನ ನೀಡಿದರು. ಸಂವಿಧಾನ ರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ' ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕರೂ ಆಗಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.



ಸಂವಿಧಾನವನ್ನು ದುರ್ಬಲಗೊಳಿಸಲು ಪ್ರಯತ್ನ


1924ರಲ್ಲಿ ಗಾಂಧೀಜಿ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ನೆನಪಿಗಾಗಿ, ಇಲ್ಲಿನ ಸುವರ್ಣ ವಿಧಾನಸೌಧ ಆವರಣದಲ್ಲಿ ಪ್ರತಿಷ್ಠಾಪಿಸಿದ ಗಾಂಧಿ ಪ್ರತಿಮೆಯನ್ನು ಮಂಗಳವಾರ ಚರಕ ತಿರುಗಿಸುವ ಮೂಲಕ ಅನಾವರಣಗೊಳಿಸಿ ಅವರು ಮಾತನಾಡಿದರು. ಗಾಂಧೀಜಿ ತಮ್ಮ ಬದುಕಿನಲ್ಲಿ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದು ಬೆಳಗಾವಿಯಲ್ಲಿ ಮಾತ್ರ. ಈಗ ಸೌಧದ ಆವರಣದಲ್ಲಿ ಗಾಂಧೀಜಿ ಪ್ರತಿಮೆ ಪ್ರತಿಷ್ಠಾಪನೆ ಮೂಲಕ ಬೆಳಗಾವಿಗೆ ಮಾತ್ರವಲ್ಲ, ಇಡೀ ರಾಜ್ಯಕ್ಕೆ ಗೌರವ ತರುವ ಕೆಲಸವಾಗಿದೆ. ದೇಶಕ್ಕೆ ಗಾಂಧಿ ಮಾಡಿರುವ ಸಾಧನೆಗಳು, ತ್ಯಾಗಗಳು ಮತ್ತು ಅವರ ಕೊಡುಗೆಗಳ ಬಗ್ಗೆ ಮಾತನಾಡಲು ನಾವು ಹೆಚ್ಚು ಸಮಯ ನೀಡಬೇಕಿದೆ' ಎಂದರು.

'ಇಂದು ಜಗತ್ತಿನಾದ್ಯಂತ ನಾಯಕರು ಮಹಾತ್ಮ ಗಾಂಧಿ ಅವರ ಕೊಡುಗೆಗಳನ್ನು ಸ್ಮರಿಸುತ್ತಿದ್ದಾರೆ. ನಮ್ಮ ಸಂವಿಧಾನ ಮತ್ತು ಅದರ ಜವಾಬ್ದಾರಿಗಳನ್ನು ಪ್ರತಿಯೊಬ್ಬರೂ ರಕ್ಷಿಸುವ ಕೆಲಸವಾಗಬೇಕಿದೆ' ಎಂದು ಹೇಳಿದರು. 'ಬೆಳಗಾವಿಯ ಅಧಿವೇಶನದಲ್ಲಿ ಗಾಂಧಿ ಅವರು, ಮಹಿಳಾ ಸಬಲೀಕರಣ, ಅಸ್ಪೃಶ್ಯತೆ ನಿವಾರಣೆಯಂಥ ಸಂದೇಶಗಳನ್ನು ನೀಡಿದ್ದರು. ಸ್ವಾತಂತ್ರ್ಯ ಚಳುವಳಿಗೆ ಹೊಸ ದಿಕ್ಕು ತೋರಿದ್ದರು. ಅವರು ಅಧಿವೇಶನದ ಅಧ್ಯಕ್ಷತೆ ವಹಿಸಿದ್ದ ಸ್ಥಳದಲ್ಲೇ ಇತ್ತೀಚೆಗೆ ಕಾಂಗ್ರೆಸ್ ಪಕ್ಷದ ಕಾರ್ಯಕಾರಿ ಸಮಿತಿಯ ವಿಸ್ತ್ರತ ಸಭೆ ನಡೆಸಿದ್ದೆವು. ಈಗ ಬೆಳಗಾವಿಯಲ್ಲೇ ಪ್ರತಿಮೆ ಅನಾವರಣಗೊಳಿಸುತ್ತಿರುವುದು ಖುಷಿ ತಂದಿದೆ' ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಬಿಜೆಪಿಯವರು ಬಿಂಬಿಸಿರುವಂತೆ ಗಾಂಧೀಜಿ ಹಿಂದೂ ವಿರೋಧಿ ಆಗಿರಲಿಲ್ಲ. ಅದು ನೂರಕ್ಕೆ ನೂರರಷ್ಟು ಸುಳ್ಳು. ಬಿಜೆಪಿ ಕುಟುಂಬದ ನಾಥರಾಮ್ ಗೋಡ್ಸೆ ಗಾಂಧಿ ಹತ್ಯೆ ಮಾಡಿದಾಗ, 'ಹೇ ರಾಮ್' ಎನ್ನುತ್ತ ಜೀವಬಿಟ್ಟರು. ಆದರೆ, ಅವರು ಸಮಾಜ ಸುಧಾರಣೆ ಬಯಸಿದ್ದರು. ಹಿಂದೂ-ಮುಸ್ಲಿಮರು ಸಹೋದರರಂತೆ ಬದುಕಬೇಕು ಎಂಬುದು ಅವರ ಆಶಯವಾಗಿತ್ತು' ಎಂದರು. ಇದೇವೇಳೆ, ಗದುಗಿನ 'ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ'ದ ಹೆಸರನ್ನು 'ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ' ಎಂದು ಮರುನಾಮಕರಣ ಮಾಡಲಾಯಿತು. ಅದರ ಲೋಗೊ ಅನಾವರಣಗೊಳಿಸಲಾಯಿತು.

ಅಲ್ಲದೆ, ವಿಶೇಷ ಅಂಚೆ ಲಕೋಟೆಗಳನ್ನು ಬಿಡುಗಡೆ ಮಾಡಲಾಯಿತು.

ಎಐಸಿಸಿ ಪ್ರಧಾನ ಕಾರ್ಯದರ್ಶಿ ಎಂ.ಪಿ. ಪ್ರಿಯಾಂಕಾ ಗಾಂಧಿ ವಾದ್ರಾ, ಪ್ರಧಾನ ಕಾರ್ಯದರ್ಶಿ(ಸಂಘಟನೆ) ಕೆ.ಸಿ.ವೇಣುಗೋಪಾಲ, ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಜಿ.ಪರಮೇಶ್ವರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉಪಸ್ಥಿತರಿದ್ದರು. ಅಧಿವೇಶನದ ಶತಮಾನೋತ್ಸವ ಸಮಿತಿ ಅಧ್ಯಕ್ಷ ಎಚ್.ಕೆ.ಪಾಟೀಲ ಸ್ವಾಗತಿಸಿದರು. ವಿಧಾನಸಭೆ ಅಧ್ಯಕ್ಷ ಯು.ಟಿ.ಖಾದರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ವಂದಿಸಿದರು.


ಉದಯವಾಹಿನಿ ಚಿತ್ರ

ಉತ್ತರ ಪ್ರದೇಶದ ನೋಯ್ಡಾದಲ್ಲಿ ಪ್ರತಿಮೆ ಪ್ರತಿಷ್ಠಾಪನೆಗೆ ಬಯಸುತ್ತಿರುವ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಅವರು, ಇಬ್ಬರು ಮಕ್ಕಳೊಂದಿಗೆ ಮಹಾತ್ಮ ಗಾಂಧಿ ನಿಂತಿರುವ ಚಿತ್ರ ಇಷ್ಟಪಟ್ಟಿದ್ದಾರೆ. ಅಂಥದ್ದೇ ಪ್ರತಿಮೆಯನ್ನು ಕಲಬುರಗಿಯಲ್ಲಿ ಸಹ ಪ್ರತಿಷ್ಠಾಪಿಸಲಾಗುವುದು' ಎಂದರು.

### ಕಾಂಗ್ರೆಸ್ ಸಂವಿಧಾನದ

ಇಂದು ಸಮಾಜದಲ್ಲಿ ಒಡಕು ಮೂಡಿಸಿ, ಜಾತಿ-ಜಾತಿಗಳ ಮಧ್ಯೆ ಬಿಜೆಪಿಯವರು ಸಂಘರ್ಷ ಉಂಟು ಮಾಡುತ್ತಿದ್ದಾರೆ. ಅವರು ಮನುವಾದಿಗಳು, ಕಾಂಗ್ರೆಸ್‌ನವರು ಸಂವಿಧಾನದ ಪರವಾಗಿ ಇರುವವರು. ಬಿಜೆಪಿಯವರು ನಮ್ಮ ವಿರೋಧಿಗಳು. ಸಂವಿಧಾನವನ್ನು ದುರ್ಬಲಗೊಳಿಸಲು ಬಿಜೆಪಿಯವರು ಪ್ರಯತ್ನಿಸುತ್ತಲೇ ಇದ್ದಾರೆ. ಅದಕ್ಕೆ ಎಂದಿಗೂ ಆಸ್ಪದ ಕೊಡಬೇಡಿ' ಎಂದು ತಿಳಿಸಿದರು.

# ನಕ್ಸಲ್ ಮುಕ್ತ ಭಾರತ ನಿರ್ಮಾಣದ ಗುರಿ ಸಮೀಪಿಸುತ್ತಿದೆ: ಶಾ


## ಛತ್ತೀಸ್‌ಗಢ ಎನ್‌ಕೌಂಟರ್; ನಕ್ಸಲ್ ಮುಕ್ತ ಭಾರತ ನಿರ್ಮಾಣದ ಸಂಕಲ್ಪ ಮತ್ತಷ್ಟು ಸದೃಢ ಎಂದ ಅಮಿತ್ ಶಾ

**ಹೊಸದಿಲ್ಲಿ:** ಕಳೆದ ರಾತ್ರಿ ಛತ್ತೀಸ್‌ಗಢದ ಗರಿಯಾಬಂದ್ ಜಿಲ್ಲೆಯಲ್ಲಿ ನಡೆದ ನಕ್ಸಲ್ ವಿರೋಧಿ ಎನ್‌ಕೌಂಟರ್‌ನ್ನು ಸ್ವಾಗತಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಇದು ನಕ್ಸಲೀಯವಾದಕ್ಕೆ ನೀಡಿದ ಬಹುದೊಡ್ಡ ಪೆಟ್ಟು ಎಂದು ಬಣ್ಣಿಸಿದ್ದಾರೆ.

ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ಅಮಿತ್ ಶಾ, ಕಾರ್ಯಾಚರಣೆಯನ್ನು ನಕ್ಸಲ್ ವಿರೋಧಿ ಹೋರಾಟದಲ್ಲಿ ದೊರೆತ ಪ್ರಮುಖ ಯಶಸ್ಸು ಎಂದು ಕರೆದಿದ್ದಾರೆ. ಅದರಲ್ಲೂ ಒಂದು ಕೋಟಿ ರೂ. ಬಹುಮಾನ ಹೊಂದಿದ್ದ ನಕ್ಸಲೀಯ ನಾಯಕ ಛಲಪತಿ ಎನ್‌ಕೌಂಟರ್‌ನಲ್ಲಿ ಹತನಾಗಿರುವುದು, ಬಸ್ತರ್ ಭಾಗದಲ್ಲಿ ನಕ್ಸಲ್ ಚಟುವಟಿಕೆಗೆ ಬಹುದೊಡ್ಡ ಹೊಡೆತ ಎಂದು ಅಮಿತ್ ಶಾ ಹೇಳಿದ್ದಾರೆ.

**ಅಮಿತ್ ಶಾ ಟ್ವೀಟ್‌ನಲ್ಲೇನಿದೆ?:** ಛತ್ತೀಸ್‌ಗಢ ದಲ್ಲಿ ನಡೆದ ಎನ್‌ಕೌಂಟರ್ ನಕ್ಸಲಿಸಂಗೆ ನೀಡಿದ ಮತ್ತೊಂದು ಪ್ರಬಲ ಹೊಡೆತವಾಗಿದೆ. ನಕ್ಸಲ್ ಮುಕ್ತ ಭಾರತ ನಿರ್ಮಾಣ ಗುರಿಯಲ್ಲಿ ನಮ್ಮ ಭದ್ರತಾ ಪಡೆಗಳು ಪ್ರಮುಖ ಯಶಸ್ಸನ್ನು ಸಾಧಿಸಿವೆ. ಒಡಿಶಾ-ಛತ್ತೀಸ್‌ಗಢ ಗಡಿಯಲ್ಲಿ ನಡೆದ ಜಂಟಿ ಕಾರ್ಯಾಚರಣೆಯಲ್ಲಿ, 14 ನಕ್ಸಲೀಯರನ್ನು ತಟಸ್ಥಗೊಳಿಸಲಾಗಿದೆ. ನಕ್ಸಲ್ ಮುಕ್ತ ಭಾರತಕ್ಕಾಗಿ ನಮ್ಮ ಸಂಕಲ್ಪ, ನಮ್ಮ ಭದ್ರತಾ ಪಡೆಗಳ ಜಂಟಿ ಪ್ರಯತ್ನದಿಂದ ನಕ್ಸಲೀಯವಾದವು ಇಂದು ಕೊನೆಯುಸಿರೆಳೆದಿದೆ ಎಂದು ಅಮಿತ್ ಶಾ ಟ್ವೀಟ್ ಮಾಡಿದ್ದಾರೆ.

ಮಾರ್ಚ್ 2026ರೊಳಗೆ ದೇಶದಿಂದ ಮಾವೋವಾದವನ್ನು ನಿರ್ಮೂಲನೆ ಮಾಡುವ ಪ್ರತಿಜ್ಞೆ ಮಾಡಿರುವ ಅಮಿತ್ ಶಾ, ಛತ್ತೀಸ್‌ಗಢ ಎನ್‌ಕೌಂಟರ್‌ನ್ನು ನಕ್ಸಲಿಸಂಗೆ ನೀಡಿದ ಮತ್ತೊಂದು ಪ್ರಬಲ ಹೊಡೆತ ಎಂದು ಕರೆದಿದ್ದಾರೆ.



**ಸಿಎಂ ಶಹಬ್ಬಾಸಗಿರಿ:** ಇನ್ನು ನಕ್ಸಲ್ ಎನ್‌ಕೌಂಟರ್‌ಗೆ ಭದ್ರತಾ ಪಡೆಗಳನ್ನು ಶ್ಲಾಘಿಸಿರುವ ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣು ದೇವ ಸಾಯಿ, ಡಬಲ್ ಇಂಜಿನ್ ಸರ್ಕಾರದ ಅಡಿಯಲ್ಲಿ (ಕೇಂದ್ರ, ರಾಜ್ಯ ಬಿಜೆಪಿ ಸರ್ಕಾರ), ಛತ್ತೀಸ್‌ಗಢ ರಾಜ್ಯವು ಮಾರ್ಚ್ 2026ರ ವೇಳೆಗೆ ಮಾವೋವಾದಿಗಳನ್ನು ತೊಡೆದುಹಾಕುತ್ತದೆ ಎಂದು ಭರವಸೆ ವ್ಯಕ್ತಪಡಿಸಿದ್ದಾರೆ.

ನಕ್ಸಲೀಯರ ವಿರುದ್ಧ ಭದ್ರತಾ ಪಡೆಗಳು ನಿರಂತರವಾಗಿ ಯಶಸ್ಸನ್ನು ಸಾಧಿಸುತ್ತಿವೆ. ನಕ್ಸಲ್ ಮುಕ್ತ ಛತ್ತೀಸ್‌ಗಢ ನಿರ್ಮಾಣ ಮಾಡುವ ನಮ್ಮ ಗುರಿಯತ್ತ ನಾವು ವೇಗವಾಗಿ ಚಲಿಸುತ್ತಿದ್ದೇವೆ. ಭದ್ರತಾ ಪಡೆಗಳ ಶೌರ್ಯಕ್ಕೆ ನಾನು ವಂದಿಸುತ್ತೇನೆ.. ಎಂದು ವಿಷ್ಣು ದೇವ್ ಸಾಯಿ ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿದ್ದಾರೆ.

**ಹೇಗಿತ್ತು ಕಾರ್ಯಾಚರಣೆ?:** ಜಿಲ್ಲಾ ರಿಸರ್ವ್ ಗಾರ್ಡ್, ಕೇಂದ್ರೀಯ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್), ಛತ್ತೀಸ್‌ಗಢದ ಕೋಬ್ರಾ ಪಡೆ, ಒಡಿಶಾದ ವಿಶೇಷ ಕಾರ್ಯಾಚರಣೆ ಪಡೆ(ಎಸ್‌ಒಜಿ)ಯ ಜಂಟಿ ತಂಡವು, ಒಡಿಶಾ ದನುವಾಪಾದ ಜಿಲ್ಲೆಯ ಗಡಿಯಿಂದ ಕೇವಲ ಐದು ಕಿಲೋಮೀಟರ್ ದೂರದಲ್ಲಿರುವ ಛತ್ತೀಸ್‌ಗಢದ ಕುಲಾರಿಘಾಟ್ ಮೀಸಲು ಅರಣ್ಯದಲ್ಲಿ ಯಶಸ್ವಿ ಎನ್‌ಕೌಂಟರ್ ನಡೆಸಿದೆ. ಈ ಭಾಗದಲ್ಲಿ ಮಾವೋವಾದಿಗಳ ಉಪಸ್ಥಿತಿಯ ಬಗ್ಗೆ ಗುಪ್ತಚರ ಮಾಹಿತಿ ದೊರೆಯುತ್ತಿದ್ದಂತೇ ಕಾರ್ಯಪ್ರವೃತ್ತರಾದ ಜಂಟಿ ಪಡೆ, ಏಕಕಾಲಕ್ಕೆ ದಾಳಿ ನಡೆಸಿ ಮಾವೋವಾದಿ ನಾಯಕ ಛಲಪತಿ ಸೇರಿದಂತೆ ಒಟ್ಟು 14 ನಕ್ಸಲೀಯರನ್ನು ಹತ್ಯೆಗೈದಿದೆ. ಎನ್‌ಕೌಂಟರ್ ಸ್ಥಳದಿಂದ ದೊಡ್ಡ ಪ್ರಮಾಣದಲ್ಲಿ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಈ ಪ್ರದೇಶದಲ್ಲಿ ಭಾರೀ ಶೋಧ ಕಾರ್ಯಾಚರಣೆಗೆ ಚಾಲನೆ ನೀಡಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿ ಮಾಹಿತಿ ನೀಡಿದ್ದಾರೆ.

ಈ ವರ್ಷ ಛತ್ತೀಸ್‌ಗಢದಲ್ಲಿ ನಡೆದ ಪ್ರತ್ಯೇಕ ಎನ್‌ಕೌಂಟರ್‌ಗಳಲ್ಲಿ ಇದುವರೆಗೆ ಸುಮಾರು 40 ಮಾವೋವಾದಿಗಳು ಹತರಾಗಿದ್ದಾರೆ.

### ಮಾವೋವಾದವನ್ನು ನಿರ್ಮೂಲನೆ

**ಛತ್ತೀಸ್‌ಗಢ ಯಶಸ್ವಿ ನಕ್ಸಲ್ ಎನ್‌ಕೌಂಟರ್‌ಗೆ ಭದ್ರತಾ ಪಡೆಗಳಳನ್ನು ಅಭಿನಂದಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಈ ಕಾರ್ಯಾಚರಣೆಯು ನಕ್ಸಲೀಯವಾದಕ್ಕೆ ಬಹುದೊಡ್ಡ ಪೆಟ್ಟು ನೀಡಿದೆ ಎಂದು ಹೇಳಿದ್ದಾರೆ. ನಕ್ಸಲ್ ಮುಕ್ತ ಭಾರತ ನಿರ್ಮಾಣ ಗುರಿಯಲ್ಲಿ ನಮ್ಮ ಭದ್ರತಾ ಪಡೆಗಳು ಪ್ರಮುಖ ಯಶಸ್ಸನ್ನು ಸಾಧಿಸಿವೆ ಎಂದಿರುವ ಗೃಹ ಸಚಿವ ಅಮಿತ್ ಶಾ, 2026ರೊಳಗೆ ದೇಶದಿಂದ ಮಾವೋವಾದವನ್ನು ನಿರ್ಮೂಲನೆ ಮಾಡುವುದು ಶತಸಿದ್ಧ ಎಂದು ಭರವಸೆ ವ್ಯಕ್ತಪಡಿಸಿದ್ದಾರೆ.**

- ಛತ್ತೀಸ್‌ಗಢದಲ್ಲಿ ಯಶಸ್ವಿ ನಕ್ಸಲ್ ವಿರೋಧಿ ಎನ್‌ಕೌಂಟರ್?
- ಭದ್ರತಾ ಪಡೆಗಳ ಕಾರ್ಯ ಶ್ಲಾಘಿಸಿದ ಕೇಂದ್ರ ಗೃಹ ಸಚಿವ
- ನಕ್ಸಲೀಯವಾದಕ್ಕೆ ಬಹುದೊಡ್ಡ ಪೆಟ್ಟು ಎಂದ ಅಮಿತ್ ಶಾ

## ನಿಷೇಧಿತ ಸಂಘಟನೆಯ ನಾಲ್ವರ ಸೆರೆ

**ಇಂಫಾಲ:** ಮಣಿಪುರದ ತೆಂಗನೌಪಾಲ್ ಜಿಲ್ಲೆಯ ಭಾರತ-ಮ್ಯಾನ್ಮಾರ್ ಗಡಿಯಲ್ಲಿ ನಿಷೇಧಿತ ಸಂಘಟನೆಯಾದ ಸೋಷಿಯಲಿಸ್ಟ್ ರೆವಲ್ಯೂಷನ್ ಪಾರ್ಟಿ ಆಫ್ ಕಂಗ್ಲೀಪಾಕ್‌ನ ನಾಲ್ವರು ಸದಸ್ಯರನ್ನು ಬಂಧಿಸಲಾಗಿದೆ.

ಮೋರೆ ಪೊಲೀಸ್ ಠಾಣೆ ವ್ಯಾಪ್ತಿಯ ಪಂಗಲ್ ಬಸ್ತಿಯಲ್ಲಿ ಗಡಿ ಪಿಲ್ಲರ್ 79 ರಿಂದ ಅವರನ್ನು ಬಂಧಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅವರ ವಶದಿಂದ ಮೂರು ಸಿಮ್ ಕಾರ್ಡ್‌ಗಳನ್ನು ಹೊಂದಿರುವ ಒಂದು ಸಾರ್ಟ್ ಫೋನ್ ಅನ್ನು ವಶಪಡಿಸಿಕೊಳ್ಳಲಾಗಿದೆ ಮತ್ತು ಹೆಚ್ಚಿನ ತನಿಖೆಗಾಗಿ ಪ್ರಕರಣವನ್ನು ದಾಖಲಿಸಲಾಗಿದೆ ಎಂದು ಅವರು ಹೇಳಿದರು.

ಬಂಧಿತ ಸಂಘಟನೆಯ ಕಾರ್ಯಕರ್ತರನ್ನು ಲೀಶಾಂಗ್ಥೆಮ್ ಸೊಮೋರ್ಜಿತ್ ಸಿಂಗ್ (34), ಪೆಬಮ್ ಮಾಲೆಮ್‌ಗಂಬ ಸಿಂಗ್ (18), ಲೈಶ್ರಾಮ್ ನೆಲ್ಸನ್ ಸಿಂಗ್ (22) ಮತ್ತು ನಿಂಗ್‌ತೌಜಮ್ ಮಿಲನ್ ಮೈತೆ (25) ಎಂದು ಗುರುತಿಸಲಾಗಿದೆ. ಕಾಂಗ್‌ಪೊಕ್ಪಿ ಮತ್ತು ಚುರಾಚಂದ್‌ಪುರ ಜಿಲ್ಲೆಗಳಲ್ಲಿ ಪ್ರತ್ಯೇಕ ಶೋಧ ಕಾರ್ಯಾಚರಣೆಯಲ್ಲಿ ಎಂಟು ಬಂದೂಕುಗಳನ್ನು ವಶ ಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಚುರಾಚಂದ್‌ಪುರ ಪೊಲೀಸ್ ಠಾಣೆ ವ್ಯಾಪ್ತಿಯ ತೊರ್ಬುಂಗ್‌ನ ಪಿಕೆ ಪಾರ್ಕ್‌ನಲ್ಲಿ ನಡೆದ



ಶೋಧ ಕಾರ್ಯಾಚರಣೆಯಲ್ಲಿ ಭದ್ರತಾ ಸಿಬ್ಬಂದಿಯ ತಂಡವು ಐದು ಬಂದೂಕುಗಳು ಮತ್ತು ಎಂಟು ಗ್ರೆನೇಡ್‌ಗಳನ್ನು ವಶಪಡಿಸಿಕೊಂಡಿದೆ ಎಂದು ಇನ್ನೊಬ್ಬ ಅಧಿಕಾರಿ ತಿಳಿಸಿದ್ದಾರೆ.

ಕಾಂಗ್ಪೊಕ್ಪಿ ಪೊಲೀಸ್ ಠಾಣೆ ವ್ಯಾಪ್ತಿಯ ಮಾಹಿಂಗ್ ಗ್ರಾಮ ದಲ್ಲಿ ನಡೆದ ಮತ್ತೊಂದು ಶೋಧ ಕಾರ್ಯಾಚರಣೆಯಲ್ಲಿ ಮೂರು ಪಿಸ್ತೂಲ್‌ಗಳು, ಮದ್ದುಗುಂಡುಗಳನ್ನು ವಶಪ ಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ಹಿಂಸಾಚಾರ ಪೀಡಿತ ಮಣಿಪುರದಲ್ಲಿ ಈ ಕಾರ್ಯಾಚರಣೆಗಳನ್ನು ನಿಯಮಿತವಾಗಿ ನಡೆಸಲಾಗುತ್ತಿದೆ. ಮೇ 2023 ರಿಂದ ಈಶಾನ್ಯ ರಾಜ್ಯದಲ್ಲಿ ಜನಾಂಗೀಯ ಹಿಂಸಾಚಾರದಲ್ಲಿ 250 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಮತ್ತು ಸಾವಿರಾರು ಜನರು ನಿರಾಶ್ರಿತರಾಗಿದ್ದಾರೆ.

## ಕುಂಭಮೇಳದಲ್ಲಿ ಸಚಿವ ಸಂಪುಟ ಸಭೆ ಇಂದು

**ಮಹಾಕುಂಭನಗರ:** ಯೋಗಿ ಆದಿತ್ಯನಾಥ್ ನೇತೃತ್ವದ ಸಚಿವ ಸಂಪುಟ ಸಭೆಯು ಬುಧವಾರ ಮಹಾಕುಂಭ ಮೇಳದಲ್ಲಿ ನಡೆಯಲಿದೆ. ಉತ್ತರ ಪ್ರದೇಶ ಸರ್ಕಾರದ ಎಲ್ಲ 54 ಸಚಿವರನ್ನು ಆಹ್ವಾನಿಸಲಾಗಿದ್ದು, ಹಲವು ಮಹತ್ವದ ಪ್ರಸ್ತಾಪಗಳು ಹಾಗೂ ಯೋಜನೆಗಳನ್ನು ಅನುಮೋದಿಸುವ ನಿರೀಕ್ಷೆಯಿದೆ ಎನ್ನಲಾಗಿದೆ.

ಅರೈಲ್‌ನ ತ್ರಿವೇಣಿ ಸಂಕುಲ್‌ನಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯ ನಂತರ ಮುಖ್ಯಮಂತ್ರಿ ಆದಿತ್ಯನಾಥ್ ಮತ್ತು ಅವರ ಸಂಪುಟ ಸಹೋದ್ಯೋಗಿಗಳು ಸಂಗಮದಲ್ಲಿ ಪವಿತ್ರ ಸ್ನಾನ ಮಾಡಲಿದ್ದಾರೆ ಎಂದು ಹೇಳಿಕೆ ತಿಳಿಸಿದೆ. 2019ರಲ್ಲೂ ಯೋಗಿ ಆದಿತ್ಯನಾಥ ಸಂಪುಟ ಸಹೋದ್ಯೋಗಿಗಳೊಂದಿಗೆ ಪವಿತ್ರ ಸ್ನಾನ ಮಾಡಿದ್ದರು.



## ವಿಶ್ವ ಆರೋಗ್ಯ ಸಂಸ್ಥೆಯಿಂದ ಹೊರಬಂದ ಅಮೆರಿಕ


**ವಾಷಿಂಗ್ಟನ್:** ಅಮೆರಿಕದ ನೂತನ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಅಧಿಕಾರ ಸ್ವೀಕರಿಸಿದ ಕ್ಷಣವೇ ವಿಶ್ವ ಆರೋಗ್ಯ ಸಂಸ್ಥೆಯಿಂದ ಹೊರ ಬಂದಿದ್ದಾರೆ. ಅಧ್ಯಕ್ಷರಾಗಿ ಆಯ್ಕೆಯಾಗುವ ಮುನ್ನ ವಿಶ್ವ ಆರೋಗ್ಯ ಸಂಸ್ಥೆ ವಿರುದ್ಧ ವಾಗ್ದಾಳಿ ನಡೆಸುತ್ತಿದ್ದ ಟ್ರಂಪ್ ಅವರು ಇದೀಗ ಅಧಿಕಾರ ವಹಿಸಿಕೊಂಡ ಮೊದಲ ದಿನವೇ ಅಮೆರಿಕಾವನ್ನು ವಿಶ್ವ ಆರೋಗ್ಯ ಸಂಸ್ಥೆಯಿಂದ ಹೊರ ಬರುವಂತಹ ನಿರ್ಧಾರಕ್ಕೆ ಸಹಿ ಹಾಕಿದ್ದಾರೆ. ಕೊರೋನಾ ಸಮಯದಲ್ಲಿ ಟ್ರಂಪ್ ವಿಶ್ವ ಆರೋಗ್ಯ ಸಂಸ್ಥೆ ಮೇಲೆ ತೀವ್ರ ದಾಳಿ ನಡೆಸುತ್ತಿದ್ದರು. ಶ್ವೇತ ಭವನದಲ್ಲಿ ಆದೇಶಕ್ಕೆ ಸಹಿ ಹಾಕಿದ ಟ್ರಂಪ್ ವಿಶ್ವ ಆರೋಗ್ಯ ಸಂಸ್ಥೆಯು ಅಮೆರಿಕದ ವಿರುದ್ಧ ಪಕ್ಷಪಾತ ಮಾಡುತ್ತಿದೆ. ಇಲ್ಲಿ ಚೀನಾಗೆ ಹೆಚ್ಚು ಪ್ರಾಮುಖ್ಯತೆ ನೀಡಲಾಗುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆ ನಮಗೆ ಮೋಸ ಮಾಡಿದೆ ಎಂದು ಹೇಳಿದ್ದಾರೆ.

ಟ್ರಂಪ್ ಪ್ರಮಾಣ ವಚನ ಸಮಾರಂಭದಲ್ಲಿ ವಿಶ್ವದ ಬಹತ್ ತಂತ್ರಜ್ಞಾನ ಕಂಪನಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು. ಮೆಟಾ ಸಿಇಒ ಮಾರ್ಕ್ ಜುಕರ್‌ಬರ್ಗ್ ಮತ್ತು ಅವರ ಪತ್ನಿ ಪ್ರಿಸ್ಸಿಲ್ಲಾ ಚಾನ್, ಅಮೆಜಾನ್ ಸಿಇಒ ಜೆಫ್ ಬೆಜೋಸ್ ಮತ್ತು ಅವರ ಪ್ರೇಯಸಿ ಲಾರೆನ್ ಸ್ಯಾಂಚೆಜ್, ಗೂಗಲ್ ಸಿಇಒ ಸುಂದರ್ ಪಿಚೈ ಮತ್ತು ಟ್ರಂಪ್ ಅವರ ಆಪ್ತ ಸಲಹೆಗಾರರಲ್ಲಿ ಒಬ್ಬರಾದ ಎಲಾನ್ ಮಸ್ಕ್ ಕೂಡ ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಆ್ಯಪಲ್ ಸಿಇಒ ಟಿಮ್ ಕುಕ್ ಮತ್ತು ಟಿಕ್‌ಟಾಕ್ ಸಿಇಒ ಶೌ ಜಿ ಚೆವ್ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಈ ಹಿಂದೆ, ಪ್ರಮಾಣ ವಚನ ಸ್ವೀಕರಿಸಿದ ಕೂಡಲೇ ಪ್ಯಾರಿಸ್ ಹವಾಮಾನ ಒಪ್ಪಂದದಿಂದ ಅಮೆರಿಕ ಹಿಂದೆ ಸರಿಯುವುದಾಗಿ ಟ್ರಂಪ್ ಘೋಷಿಸಿದ್ದರು. ಅಧ್ಯಕ್ಷ ಟ್ರಂಪ್ ಮತ್ತೊಮ್ಮೆ ಅಮೆರಿಕವನ್ನು ಪ್ಯಾರಿಸ್ ಹವಾಮಾನ ಒಪ್ಪಂದದಿಂದ ಹಿಂದೆಗೆದುಕೊಳ್ಳಲಿದ್ದಾರೆ ಎಂದು ಶ್ವೇತಭವನವು ಹೇಳಿಕೆ ನೀಡಿದೆ. ಟ್ರಂಪ್ ಪ್ರಮಾಣ ವಚನ ಸ್ವೀಕರಿಸಿದ ಕೆಲವೇ ಗಂಟೆಗಳ ನಂತರ ಕ್ಯಾಪಿಟಲ್ ಒನ್ ಅರೆನಾದಲ್ಲಿ ತಮ ಮೊದಲ ಕಾರ್ಯಕಾರಿ ಆದೇಶಗಳಿಗೆ ಸಹಿ ಹಾಕಿದರು.

ಈ ಸಮಯದಲ್ಲಿ, ಪ್ಯಾರಿಸ್ ಹವಾಮಾನ ಒಪ್ಪಂದದಿಂದ ಹಿಂದೆ ಸರಿಯಲು ಕಾರ್ಯಕಾರಿ ಆದೇಶಕ್ಕೆ ಸಹಿ ಹಾಕಲಾಯಿತು. ಅಧ್ಯಕ್ಷ ಟ್ರಂಪ್ ವಿಶ್ವ ಆರೋಗ್ಯ ಸಂಸ್ಥೆಯಿಂದ ಅಮೆರಿಕವನ್ನು ಹಿಂತೆಗೆದು ಕೊಳ್ಳಲು ತ್ವರಿತ ಕ್ರಮಗಳನ್ನು ತೆಗೆದುಕೊಂಡರು. ಸಾರ್ವಜನಿಕ ಆರೋಗ್ಯ ತಜ್ಞರು ಹೇಳುವ ಒಂದು ಕ್ರಮವು ಜಾಗತಿಕ ಆರೋಗ್ಯ ನಾಯಕನಾಗಿ ದೇಶದ ಸ್ಥಾನವನ್ನು ದುರ್ಬಲಗೊಳಿಸುತ್ತದೆ ಮತ್ತು ಮುಂದಿನ ಸಾಂಕ್ರಾಮಿಕ ರೋಗದ ವಿರುದ್ಧ ಹೋರಾಡಲು ಕಷ್ಟವಾಗುತ್ತದೆ.

## ಶಾಗೆ ಹೊರ ಗುತ್ತಿಗೆ ನೀಡಿರುವುದು ವಿನಾಶಕಾರಿ ಬೆಳವಣಿಗೆ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಮಣಿಪುರವನ್ನು ಕೇಂದ್ರ ಗಹ ಸಚಿವ ಅಮಿತ್ ಶಾ ಅವರಿಗೆ ಹೊರಗುತ್ತಿಗೆ ನೀಡುವುದು ಪ್ರಧಾನ ಮಂತ್ರಿ ಜವಾಬ್ದಾರಿಯಿಂದ ವಿನಾಶಕಾರಿ ಬೆಳವಣಿಗೆ ಎಂದು ಕಾಂಗ್ರೆಸ್ ಆರೋಪಿಸಿದೆ. ತ್ರಿಪುರಾ, ಮೇಘಾಲಯ ಮತ್ತು ಮಣಿಪುರದ ಜನರಿಗೆ ಅವರ ರಾಜ್ಯೋತ್ಸವ ದಿನದಂದು ಪ್ರಧಾನಿ ಮೋದಿ ಶುಭಾಶಯ ಕೋರಿದ ನಂತರ ವಿರೋಧ ಪಕ್ಷದ ಈ ದಾಳಿ ನಡೆದಿದೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಂವಹನದ ಉಸ್ತುವಾರಿ ಜೈರಾಮ್ ರಮೇಶ್ ಅವರು



**ಇದು ಅವರ ಕಾಳಜಿಯನ್ನು ತೋರಿಸಲು ಅವರು ಮಾಡಬಹುದಾದ ಕನಿಷ್ಠ ಕೆಲಸವಾಗಿದೆ. ಮಣಿಪುರವನ್ನು ಕೇಂದ್ರ ಗಹ ಸಚಿವರಿಗೆ ಹೊರಗುತ್ತಿಗೆ ನೀಡುವುದು ಪ್ರಧಾನ ಮಂತ್ರಿ ಜವಾಬ್ದಾರಿಯಿಂದ ದೂರವಿರುವುದು ಮತ್ತು ವಿನಾಶಕಾರಿ ಎಂದು ಸಾಬೀತಾಗಿದೆ**

ಪ್ರಧಾನ ಮಂತ್ರಿ, ಮಣಿಪುರದ ಜನರಿಗೆ ಅವರ ರಾಜ್ಯೋತ್ಸವ ದಿನ ದಂದು ಸಾಮಾಜಿಕ ಮಾಧ್ಯಮದ ಮೂಲಕ ಶುಭಾಶಯಗಳನ್ನು ಕಳುಹಿಸಿದ್ದಾರೆ. ಮಣಿ ಪುರದ ಸಂಕಟವು ಮೇ 3, 2023 ರಂದು ಪ್ರಾರಂಭವಾದಾಗಿನಿಂದ ಅವರು ಮಣಿಪುರಕ್ಕೆ ಭೇಟಿ ನೀಡಲು ಮೊಂಡು ತನದಿಂದ ನಿರಾ ಕರಿಸುತ್ತಿರುವುದು ಯಾವ ಪುರುಷಾರ್ಥಕ್ಕೆ ಎಂದು ಎಕ್ಸ್‌ನಲ್ಲಿ ಪ್ರಶ್ನಿಸಿದ್ದಾರೆ. ಅವರು ಪ್ರಪಂಚ ದಾದ್ಯಂತ ಹೋಗಿದ್ದಾರೆ ಆದರೆ ಇಂಫಾಲ್, ಇತರ ಸ್ಥಳಗಳಲ್ಲಿ ರಾಜ್ಯದ ಜನರನ್ನು ತಲುಪಲು ಸಮಯ ಅಥವಾ ಒಲವು ಕಂಡುಬಂದಿಲ್ಲ ಎಂದು ಅವರು ಹೇಳಿದರು. ರಾಜ್ಯದಲ್ಲಿ ತಮದೇ ಪಕ್ಷದ ಶಾಸಕರನ್ನು ಭೇಟಿಯಾಗಲು ಮೋದಿ ಮೊಂಡು ತನದಿಂದ ನಿರಾಕರಿಸಿದ್ದಾರೆ ಸಿಎಂ ಜೊತೆ ಒಬ್ಬರ ಮೇಲೊಬ್ಬರು ಭೇಟಿ ಮಾಡಿಲ್ಲ, ಸಂಸದರು, ರಾಜಕೀಯ ಮುಖಂಡರು.

ರಾಜ್ಯದ ನಾಗರಿಕ ಸಮಾಜ ಸಂಘಟನೆಗಳನ್ನು ಭೇಟಿ ಮಾಡಿಲ್ಲ ಎಂದು ರಮೇಶ್ ಹೇಳಿದರು. ಅವರ ರಾಜ್ಯೋತ್ಸವ ದಿನದ ಶುಭಾಶಯಗಳು ಟೊಳ್ಳಾಗಿದೆ ಮತ್ತು ಅವರ ಬೂಟಾಟಿಕೆಯನ್ನು ಪ್ರತಿ ಬಿಂಬಿಸುತ್ತದೆ ಇದು ಯಾವುದೇ ಮಿತಿಗಳನ್ನು ತಿಳಿದಿಲ್ಲ ಎಂದು ಕಾಂಗ್ರೆಸ್ ನಾಯಕ ಹೇಳಿದರು. ಕಾಂಗ್ರೆಸ್ ಅವರು ತಕ್ಷಣವೇ ಮಣಿಪುರಕ್ಕೆ ಭೇಟಿ ನೀಡಬೇಕೆಂದು ಒತ್ತಾಯಿಸುತ್ತದೆ.

## ಸೈಫ್ ಮೇಲಿನ ಹಲ್ಲೆ ಘಟನೆಯನ್ನು ಮರುಸೃಷ್ಟಿಸಿ ಪೊಲೀಸರ ತನಿಖೆ

**ಮುಂಬೈ:** ಮುಂಬೈ ಪೊಲೀಸರು ಮಂಗಳವಾರ ಸೈಫ್ ಅಲಿಖಾನ್ ಅವರ ನಿವಾಸದಲ್ಲಿ ಬಂಧಿತ ಆರೋಪಿಯೊಂದಿಗೆ ಸೈಫ್ ಮೇಲಿನ ಹಲ್ಲೆ ನಡೆಸಿದ ದಶ್ಯವನ್ನು ಮರುಸಷ್ಟಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

20 ಅಧಿಕಾರಿಗಳ ತಂಡವು ನಾಲ್ಕು ಪೊಲೀಸ್ ವ್ಯಾನ್‌ಗಳಲ್ಲಿ ಬೆಳಿಗ್ಗೆ 5.30 ರ ಸುಮಾರಿಗೆ ಸದ್ಗುರು ಶರಣ್ ಕಟ್ಟಡವನ್ನು ತಲುಪಿತು ಮತ್ತು ಒಂದು ಗಂಟೆ ಕಾಲ ಆವರಣದಲ್ಲಿದ್ದರು ಎಂದು ಅಧಿಕಾರಿ ಹೇಳಿದರು. ಆರೋಪಿ ಶರೀಫುಲ್ ಇಸ್ಲಾಂ ಶೆಹಜಾದ್ ಮೊಹಮದ್ ರೋಹಿಲ್ಲಾ ಅಮೀನ್ ಫಕೀರ್ ಅವರೊಂದಿಗೆ ಪೊಲೀಸ್ ತಂಡ ಮುಂಭಾಗದ ಗೇಟ್ ಮೂಲಕ ಕಟ್ಟಡವನ್ನು ಪ್ರವೇಶಿಸಿತು ಎಂದು ಅವರು ಹೇಳಿದರು. ನಂತರ, ಅವರು ಅವನನ್ನು ಬಾಂದ್ರಾ ರೈಲು ನಿಲ್ದಾಣಕ್ಕೆ ಕರೆದೊಯ್ದರು, ಅಲ್ಲಿಂದ ಅವನು ದಾದರ್‌ಗೆ ರೈಲಿ ನಲ್ಲಿ ಹೋಗಿದ್ದನು ಮತ್ತು ದಾಳಿಯ ನಂತರ ಅವನು ಮಲಗಿದ್ದ ಉದ್ಯಾನವನದ ಹೊರಗಿನ ಸ್ಥಳಗಳಿಗೂ ಆರೋಪಿಯನ್ನು ಕರೆದೊಯ್ಯಲಾಗುತ್ತಿದೆ.

ಖಾನ್ (54) ಅವರು ಜನವರಿ 16 ರಂದು ಕಟ್ಟಡದ 12 ಮಹಡಿಗಳ ಅಪಾರ್ಟ್‌ಮೆಂಟ್‌ನೊಳಗೆ ಒಳನುಗ್ಗುವವರಿಂದ



ಪದೇ ಪದೇ ಇರಿದಿದ್ದು, ಶಸ್ತ್ರಚಿಕಿತ್ಸೆಯ ಅಗತ್ಯವಿತ್ತು.

ವಿಜಯ್ ದಾಸ್ ಎಂದು ಹೆಸರು ಬದಲಿಸಿಕೊಂಡು ಅಕ್ರಮವಾಗಿ ಭಾರತದಲ್ಲಿ ನೆಲೆಸಿದ್ದ ಬಾಂಗ್ಲಾದೇಶದ ಪ್ರಜೆ ಫಕೀರ್ ಎಂಬಾತನನ್ನು ಪೊಲೀಸರು ಭಾನುವಾರ ನೆರೆಯ ಥಾಣೆ ನಗರದಲ್ಲಿ ಬಂಧಿಸಿದ್ದರು.

ಅಪರಾಧದ ದಶ್ಯವನ್ನು ಮರುಸಷ್ಟಿಸಿದ ನಂತರ ಮತ್ತು ಆರೋಪಿಗಳು ಓಡಿಹೋಗುವಾಗ ಭೇಟಿ ನೀಡಿದ ಸ್ಥಳಗಳಿಗೆ ಹೋದ ನಂತರ, ಫಕೀರ್‌ನನ್ನು ಬಾಂದ್ರಾ ಪೊಲೀಸ್ ಠಾಣೆಗೆ ಮರಳಿ ಕರೆತರಲಾಯಿತು, ಅಲ್ಲಿ ಅಧಿಕಾರಿಗಳು ಅವನನ್ನು ವಿಚಾರಣೆ ನಡೆಸುತ್ತಾರೆ ಎಂದು ಅಧಿಕಾರಿ ಹೇಳಿದರು. ಬಾಂದ್ರಾದ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಆರೋಪಿಯನ್ನು ಐದು ದಿನಗಳ ಪೊಲೀಸ್ ಕಸ್ಟಡಿಗೆ ನೀಡಿದೆ.

## ಬಿಜೆಪಿಯ ನೀತಿಗಳು ಅಂಬೇಡ್ಕರ್‌ರ ಸಿದ್ಧಾಂತಗಳನ್ನು ಪ್ರತಿಬಿಂಬಿಸುತ್ತವೆ

**ಭುವನೇಶ್ವರ:** ನರೇಂದ್ರ ಮೋದಿ ಸರ್ಕಾರವು ಭಾರತೀಯ ಸಂವಿಧಾನದ ಶಿಲ್ಪಿ ಅವರ ತತ್ವಗಳ ಆಧಾರದ ಮೇಲೆ ರಾಷ್ಟ್ರವನ್ನು ನಿರ್ಮಿಸುವಲ್ಲಿ ನಿರತವಾಗಿದೆ ಎಂದು ಬಿಜೆಪಿಯ ಹಿರಿಯ ಸಂಸದ ಅನುರಾಗ್ ಠಾಕೂರ್ ಹೇಳಿದ್ದಾರೆ.

ವಿರೋಧ ಪಕ್ಷದ ಕಾಂಗ್ರೆಸ್ ವಿರುದ್ಧ ಟೀಕಾ ಪ್ರಹಾರ ನಡೆಸಿದ ಠಾಕೂರ್, ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ಡಾ. ಅಂಬೇಡ್ಕರ್ ಅವರ ಸಿದ್ಧಾಂತಗಳಿಂದ ಪ್ರಭಾವಿತವಾಗಿದೆ ಅಲ್ಲದೆ ಏಕರೂಪ ನಾಗರಿಕ ಸಂಹಿತೆ (ಯುಸಿಸಿ) ಅನ್ನು ಜಾರಿಗೆ ತರಲು ಪ್ರಯತ್ನಿಸುತ್ತಿದೆ ಎಂದು ಹೇಳಿದರು.

ನಮ್ಮ ಪಕ್ಷದ ನೀತಿಯೂ ಕೂಡ ಅಂಬೇಡ್ಕರ್ ಅವರ ಸಿದ್ಧಾಂತಗಳ ಪ್ರತಿಬಿಂಬಗಳಾಗಿವೆ ಎಂದು ತಿರುಗೇಟು ನೀಡಿದರು. ಯುಸಿಸಿ ಎಲ್ಲಾ ಸಮುದಾಯಗಳಿಗೆ ಸಮಾನತೆಯನ್ನು ಖಚಿತಪಡಿಸುತ್ತದೆ. ಯುಸಿಸಿ ಮದುವೆ, ವಿಚ್ಛೇದನ, ದತ್ತು ಮತ್ತು ಉತ್ತರಾಧಿಕಾರ ನಿಯಮಗಳ ಮೇಲಿನ ಧರ್ಮ-ಕೇಂದ್ರಿತ ಕಾನೂನುಗಳನ್ನು ಕೊನೆಗೊಳಿಸುತ್ತದೆ ಮತ್ತು ಎಲ್ಲರಿಗೂ ಏಕರೂಪದ ಕಾನೂನುಗಳನ್ನು ಒದಗಿಸುತ್ತದೆ ಎಂದು ಅವರು ಹೇಳಿದರು. ಭಾರತೀಯ ಸಂವಿಧಾನದ 75 ವರ್ಷಗಳನ್ನು ಸರಿಸಲು ಮತ್ತು ಅಂಬೇಡ್ಕರ್ ಅವರನ್ನು ಗೌರವಿಸಲು ಬಿಜೆಪಿ ಹಮ್ಮಿಕೊಂಡಿರುವ ಎರಡು ವಾರಗಳ ಸಂವಿಧಾನ್ ಗೌರವ ಅಭಿಯಾನದಲ್ಲಿ ಭಾಗವಹಿಸಿದ್ದ ಠಾಕೂರ್ ಸುದ್ದಿಗಾರರಿಗೆ ಈ ವಿಷಯ ತಿಳಿಸಿದರು. ಕಾಂಗ್ರೆಸ್ ತನ್ನ ರಾಜಕೀಯ ಲಾಭಕ್ಕಾಗಿ ಹಲವಾರು ಬಾರಿ



ಸಂವಿಧಾನವನ್ನು ತಿದ್ದುಪಡಿ ಮಾಡಿದೆ,ದೇಶದಲ್ಲಿ ಕಾಂಗ್ರೆಸ್ ಸರ್ಕಾರಗಳು ಇದ್ದಾಗ 75 ಬಾರಿ ಸಂವಿಧಾನವನ್ನು ತಿದ್ದುಪಡಿ ಮಾಡಿದ್ದಾರೆ. ರಾಹುಲ್ ಗಾಂಧಿ ಅವರು ಸಂವಿಧಾನದ ಹೆಸರಿನಲ್ಲಿ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಒಡಿಶಾ ಬಿಜೆಪಿ ಅಧ್ಯಕ್ಷ ಮನಮೋಹನ್ ಸಮಲ್ ಅವರು, ಸಂವಿಧಾನದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು, ಸಾಂವಿಧಾನಿಕ ಮೌಲ್ಯಗಳನ್ನು ದುರ್ಬಲಗೊಳಿಸುವ ಬಗ್ಗೆ ಕಾಂಗ್ರೆಸ್ ಪ್ರಾರಂಭಿಸಿದ ಆರೋಪಗಳನ್ನು ಎದುರಿಸಲು ಪಕ್ಷವು 50 ಸ್ಥಳಗಳಲ್ಲಿ ವಿಚಾರ ಸಂಕಿ ರಣಗಳು, ಬೌದ್ಧಿಕ ಸಭೆಗಳನ್ನು ಆಯೋಜಿಸಲಿದೆ ಹೇಳಿದರು.

**ಜನರನ್ನು ದಾರಿ ತಪ್ಪಿಸುತ್ತಿದ್ದಾರೆ**

### ಅಂಬೇಡ್ಕರ್ ಅವರನ್ನು ಅವಮಾನಿಸಿದೆ


**ಪಂಡಿತ್ ನೆಹರೂ ಅವರಿಂದ ಹಿಡಿದು ಇಂದಿರಾ ಗಾಂಧಿ ಮತ್ತು ಸೋನಿಯಾ ಗಾಂಧಿಯವರವರೆಗೆ ಕಾಂಗ್ರೆಸ್ ಪಕ್ಷವು ಬುಡಕಟ್ಟು ಜನಾಂಗದವರು, ದಲಿತರು, ಇತರ ಹಿಂದುಳಿದ ಜಾತಿ ಸಮುದಾಯಗಳ ಹಕ್ಕುಗಳಿಗಾಗಿ ತಮ್ಮ ಜೀವನದುದ್ದಕ್ಕೂ ಹೋರಾಡಿದ ಡಾ. ಅಂಬೇಡ್ಕರ್ ಅವರನ್ನು ಅವಮಾನಿಸಿದೆ ಎಂದು ಟೀಕಿಸಿದರು.**

# ಟ್ರಂಪ್ ಅಧಿಕಾರ ವಹಿಸಿಕೊಂಡ ಬೆನ್ನಲ್ಲೇ ಹುದ್ದೆಯಿಂದ ಹೊರನಡೆದ ವಿವೇಕ್

## ಟ್ರಂಪ್ ಎರಡನೇ ಅವಧಿಗೆ ಅಧ್ಯಕ್ಷರಾಗಿ ಪ್ರಮಾಣ ಸ್ವೀಕರಿಸಿದ ಬೆನ್ನಲ್ಲೇ, ವಿವೇಕ್ ರಾಮಸ್ವಾಮಿ ರಾಜೀನಾಮೆ

**ವಾಷಿಂಗ್ಟನ್:** ಅಮೆರಿಕಾದ 47ನೇ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಅಧಿಕಾರ ವಹಿಸಿಕೊಂಡಿದ್ದಾರೆ. ಇವರ ಜೊತೆಗೆ, ಉಪಾಧ್ಯಕ್ಷರಾಗಿ ಜೆ.ಡಿ.ವ್ಯಾನ್ಸ್ ಕೂಡಾ ಪ್ರಮಾಣವಚನ ಸ್ವೀಕರಿಸಿದ್ದಾರೆ. ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಟ್ರಂಪ್ ರಾಷ್ಟ್ರವನ್ನು ಉದ್ದೇಶಿಸಿ ಭಾಷಣ ಮಾಡಿದ್ದಾರೆ.

ಟ್ರಂಪ್ ಎರಡನೇ ಅವಧಿಗೆ ಅಧ್ಯಕ್ಷರಾಗಿ ಪ್ರಮಾಣ ಸ್ವೀಕರಿಸಿದ ಬೆನ್ನಲ್ಲೇ, ಭಾರತೀಯ ಮೂಲದ ವಿವೇಕ್ ರಾಮಸ್ವಾಮಿ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ. 39 ವರ್ಷದ ರಾಮಸ್ವಾಮಿ, ರಿಪಬ್ಲಿಕನ್ ಅಭ್ಯರ್ಥಿಯಾಗಿ ಅಧ್ಯಕ್ಷ ಚುನಾವಣೆ ರೇಸಿನಲ್ಲಿ ಯಶಸ್ವಿಯಾಗಿರಲಿಲ್ಲ. ಉದ್ಯಮಿಯೂ ಆಗಿರುವ ವಿವೇಕ್ ರಾಮಸ್ವಾಮಿ,



ಸರ್ಕಾರದ ಕಾರ್ಯ ದಕ್ಷತೆ ಇಲಾಖೆಯ ಸದಸ್ಯರಾಗಿದ್ದರು. ವಿಶ್ವದ ಶ್ರೀಮಂತ ಎಲಾನ್ ಮಸ್ಕ್ ಜೊತೆ, ರಾಮಸ್ವಾಮಿಗೆ ಈ ಜವಾಬ್ದಾರಿಯನ್ನು ಖುದ್ದು ಡೊನಾಲ್ಡ್ ಟ್ರಂಪ್ ವಹಿಸಿದ್ದರು.

ಇಲಾಖೆಯಿಂದ ಹೊರಬರಲು ಯಾವುದೇ ನಿರ್ದಿಷ್ಟ ಕಾರಣವನ್ನು ವಿವೇಕ್ ರಾಮಸ್ವಾಮಿ ನೀಡದೇ ಇದ್ದರೂ ಓಹಿಯೋ ರಾಜ್ಯದ ರಾಜ್ಯಪಾಲರಾಗಿ ಕೆಲಸ ನಿರ್ವಹಿಸಲು ಉತ್ಸುಕರಾಗಿದ್ದಾರೆ ಎಂದು ಹೇಳಲಾಗುತ್ತಿದೆ.

ಓಹಿಯೋ, ಅಮೆರಿಕಾದ ಮಧ್ಯ ಪಶ್ಚಿಮ ಭಾಗದಲ್ಲಿರುವ ಪ್ರದೇಶವಾಗಿದೆ. ಟ್ರಂಪ್ ತಮ್ಮ ಅವಧಿಯಲ್ಲಿ ಸರ್ಕಾರದ ಕೆಲಸ ಉತ್ತಮವಾಗಿರಬೇಕು ಎನ್ನುವ ಹಿನ್ನಲೆಯಲ್ಲಿ




ಇಲಾಖೆಯನ್ನು ಸ್ಥಾಪಿಸಿದ್ದರು. ಎಲಾನ್ ಮಸ್ಕ್ ಮತ್ತು ಅವರ ತಂಡ, ಟ್ರಂಪ್ ವಹಿಸಿರುವ ಕೆಲಸವನ್ನು ಸರಿಯಾಗಿ ನಿಭಾ ಯಿಸಿಕೊಂಡು ಹೋಗುತ್ತಾರೆ ಎನ್ನುವ ನಂಬಿಕೆಯಿದೆ ಎಂದು ವಿವೇಕ್ ರಾಮಸ್ವಾಮಿ ಟ್ವೀಟ್ ಮಾಡಿದ್ದಾರೆ.

ಓಹಿಯೋದಲ್ಲಿನ ನನ್ನ ಮುಂದಿನ ಪ್ಲ್ಯಾನ್ ಬಗ್ಗೆ ವಿವರವಾಗಿ ಮುಂದಿನ ದಿನಗಳಲ್ಲಿ ಮಾತನಾಡುತ್ತೇನೆ. ಡೊನಾಲ್ಡ್ ಟ್ರಂಪ್ ನೇತೃತ್ವದಲ್ಲಿ ಅಮೆರಿಕಾವನ್ನು ಇನ್ನಷ್ಟು ಸುದೃಢಗೊಳಿಸುವ ಕೆಲಸಕ್ಕೆ ನಾವೆಲ್ಲಾ ಕೈಜೋಡಿಸಬೇಕಿದೆ ಎಂದು ವಿವೇಕ್ ರಾಮಸ್ವಾಮಿ ಹೇಳಿದ್ದಾರೆ. ಟ್ರಂಪ್ ಮತ್ತು ಜೆ.ಡಿ.ವ್ಯಾನ್ಸ್ ಬಳಗದ ಆಪ್ತರಾಗಿರುವ ವಿವೇಕ್ ರಾಮಸ್ವಾಮಿಯವರನ್ನು ಡೊನಾಲ್ಡ್ ಟ್ರಂಪ್, ಸರ್ಕಾರದ ಕಾರ್ಯ ದಕ್ಷತೆ ಇಲಾಖೆಗೆ ಉಪನಾಯಕನಾಗಿ ನೇಮಿಸಿದ್ದರು. ಡಿಒಜಿಇ ಇಲಾಖೆ, ವಿವೇಕ್ ರಾಮಸ್ವಾಮಿಯ ಕಾರ್ಯವೈಖರಿಯನ್ನು ಮುಕ್ತಕಂಠದಿಂದ ಹೊಗಳಿದೆ.

ಅಮೆರಿಕಾದ ಚುನಾಯಿತ ಕಚೇರಿಗೆ ಅವರು ಸ್ಪರ್ಧಿಸಲು ಬಯಸಿದ್ದಾರೆ, ಈ ಹಿನ್ನಲೆಯಲ್ಲಿ ಡಿಒಜಿಇ ಹುದ್ದೆಯಿಂದ ಅವರು ಹೊರಬರಬೇಕಿದೆ. ಕಳೆದ ಎರಡು ತಿಂಗಳಲ್ಲಿ ಕಚೇರಿಗೆ ಅವರು ನೀಡಿದ ಕೊಡುಗೆಯ ಬಗ್ಗೆ ನಮಗೆ ಹೆಮ್ಮೆಯಿದೆ. ಅವರಿಗೆ ಧನ್ಯವಾದವನ್ನು ಹೇಳಲು ಬಯಸುತ್ತೇವೆ. ಅಮೆರಿಕಾದ ಅಭಿವೃದ್ದಿಗೆ ಅವರ ಕೊಡುಗೆ ಮುಂದುವರಿಯಲಿದೆ ಎಂದು ಸರ್ಕಾರದ ದಕ್ಷತೆಯ ಸಲಹಾ ಗುಂಪಿನ ವಕ್ತಾರ ಅನ್ನಾ ಕೆಲ್ಲಿ ಹೇಳಿದ್ದಾರೆ.

**ಅಮೆರಿಕಾದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ವಿಶ್ವದ ಶ್ರೀಮಂತ ಉದ್ಯಮಿ ಎಲಾನ್ ಮಸ್ಕ್ ಅವರ ಆಪ್ತ ವಿವೇಕ್ ರಾಮಸ್ವಾಮಿ, ನೂತನವಾಗಿ ಸ್ಥಾಪಿಸಲಾದ ಸರ್ಕಾರದ ಕಾರ್ಯ ದಕ್ಷತೆ ಇಲಾಖೆಯಿಂದ ಹೊರ ಬಂದಿದ್ದಾರೆ. ನಿರ್ದಿಷ್ಟ ಕಾರಣವನ್ನು ಅವರು ನೀಡಿಲ್ಲದಿದ್ದರೂ, ಓಹಿಯೋ ರಾಜ್ಯದ ರಾಜ್ಯಪಾಲ ಹುದ್ದೆಗೆ ಅವರು ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಲಾಗುತ್ತಿದೆ.**

- ಉಪಾಧ್ಯಕ್ಷರಾಗಿ ಜೆ.ಡಿ.ವ್ಯಾನ್ಸ್ ಪ್ರಮಾಣವಚನ ಸ್ವೀಕಾರ, ಕಾರ್ಯ ದಕ್ಷತೆ ಇಲಾಖೆಯ ಜವಾಬ್ದಾರಿಯಿಂದ ಹೊರಕ್ಕೆ
- ಓಹಿಯೋ ರಾಜ್ಯದ ರಾಜ್ಯಪಾಲರ ಹುದ್ದೆಯ ಚುನಾವಣೆಗೆ ವಿವೇಕ್ ರಾಮಸ್ವಾಮಿ ಸ್ಪರ್ಧೆ ಸಾಧ್ಯತೆ

## ಮಿನಿ ನ್ಯೂಸ್

### ಪಶ್ಚಿಮ ಬಂಗಾಳದಲ್ಲಿ ಅಪ್ರಾಪ್ತೆಯ ರೇಪ್ ಅಂಡ್ ಮರ್ಡರ್

**ಕೋಲ್ಕತ್ತಾ:** ಪಶ್ಚಿಮ ಬಂಗಾಳದ ದಕ್ಷಿಣ 24 ಪರಗಣ ಜಿಲ್ಲೆಯ ಬಸಂತಿ ಎಂಬಲ್ಲಿನ ಹೊಲವೊಂದರಲ್ಲಿ ಅತ್ಯಾಚಾರ, ಕೊಲೆಗೆ ಬಲಿಯಾಗಿರುವ ಅಪ್ರಾಪ್ತ ಬಾಲಕಿಯ ಮತದೇಹ ಪತ್ತೆಯಾಗಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪಲಾಶ್ ಚಂದ್ರ ಧಾಲಿ ಅವರ ಪ್ರಕಾರ, ಎಂಟನೇ ತರಗತಿಯ ವಿದ್ಯಾರ್ಥಿನಿ ಅಪ್ರಾಪ್ತ ಬಾಲಕಿ ಜನವರಿ 9 ರಿಂದ ಕಾಣೆಯಾಗಿದ್ದಳು. ಸಂತ್ರಸ್ತೆಯ ಕುಟುಂಬ ಸದಸ್ಯರು ಮೂರು ದಿನಗಳ ನಂತರ ಜನವರಿ 12 ರಂದು ನಾಪತ್ತೆ ಪ್ರಕರಣವನ್ನು ದಾಖಲಿಸಿದ್ದಾರೆ. ಈಗ ಮತದೇಹ ಪತ್ತೆಯಾಗಿದ್ದು, ಸಂತ್ರಸ್ತೆಯ ಪೋಷಕರ ದೂರಿನ ಆಧಾರದ ಮೇಲೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಅವರು ಹೇಳಿದರು. ಸಂತ್ರಸ್ತೆಯ ಪೋಷಕರು ನಾಪತ್ತೆಯಾದ ವರದಿಯನ್ನು ದಾಖಲಿಸಿದ್ದರಿಂದ, ಪೊಲೀಸರು ಅವಳನ್ನು ಹುಡುಕಲು ಪ್ರಾರಂಭಿಸಿದರು ಎಂದು ಮೂಲಗಳು ತಿಳಿಸಿವೆ. ಕೊನೆಗೆ, ನಿನ್ನೆ ಸಂಜೆ ಸಂತ್ರಸ್ತೆಯನ್ನು ತನ್ನ ನಿವಾಸದ ಸಮೀಪವಿರುವ ಹೊಲದಲ್ಲಿ ಶವವಾಗಿ ಪತ್ತೆಯಾಗಿದ್ದಾಳೆ. ಹೊಲದ ಒಂದು ಭಾಗ ಆಕೆಯ ನಗ್ನ ದೇಹ ಪತ್ತೆಯಾಗಿದೆ ಎಂದು ಅವರು ಹೇಳಿದರು. ಸ್ಥಳೀಯ ಯುವಕರು ಕರೆದ ನಂತರ ಜನವರಿ 9 ರಂದು ಮಧ್ಯಾಹ್ನ ಮಗಳು ಮನೆಯಿಂದ ಹೊರಗೆ ಹೋಗಿದ್ದಳು ಎಂದು ಸಂತ್ರಸ್ತೆಯ ಪೋಷಕರು ಹೇಳಿದ್ದಾರೆ. ಅಂದಿನಿಂದ ಆಕೆ ನಾಪತ್ತೆಯಾಗಿದ್ದಾಳೆ. ಮೊದಲು ಆಕೆಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿ ನಂತರ ಆಕೆಯ ಶವವನ್ನು ಹೂತು ಹಾಕಿರುವ ಶಂಕೆ ಇದೆ. ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಕಠಿಣ ಶಿಕ್ಷೆಗೆ ಒಳಪಡಿಸಬೇಕೆಂದು ನಾವು ಒತ್ತಾಯಿಸುತ್ತೇವೆ ಎಂದು ಕುಟುಂಬದ ಸದಸ್ಯರೊಬ್ಬರು ತಿಳಿಸಿದ್ದಾರೆ. ಮತದೇಹ ಪತ್ತೆಯಾದ ಹಿನ್ನೆಲೆಯಲ್ಲಿ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು. ಶವ ಪತ್ತೆಯಾದ ಬಳಿಕ ಸ್ಥಳೀಯರು ಪೊಲೀಸರ ವಿರುದ್ಧ ಪ್ರತಿಭಟನೆಯನ್ನೂ ನಡೆಸಿದರು.

### ಟರ್ಕಿ: ರೆಸಾರ್ಟ್ ಹೋಟೆಲ್‌ನಲ್ಲಿ ಅಗ್ನಿ ಅವಘಡ; 10 ಮಂದಿ ಸಾವು

**ಟರ್ಕಿ:** ಟರ್ಕಿಯ ಪ್ರೈ ರೆಸಾರ್ಟ್ ಹೋಟೆಲ್‌ನಲ್ಲಿ ಅಗ್ನಿ ಅವಘಡ ಸಂಭವಿಸಿದ್ದು, 10 ಮಂದಿ ಮೃತಪಟ್ಟು, 35ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ ಎಂದು ಆಂತರಿಕ ಸಚಿವ ಅಲಿ ಯರ್ಲಿಕಾಯಾ ಅವರನ್ನು ಉಲ್ಲೇಖಿಸಿ ಸಿಎನ್‌ಎನ್ ವರದಿ ಮಾಡಿದೆ. ಬೆಳಗಿನ ಜಾವ 3.27ರ ಸುಮಾರಿಗೆ ಬೊಲು ಪ್ರಾಂತ್ಯದ ಕಾರ್ತಲ್ಯ ರೆಸಾರ್ಟ್ ಹೋಟೆಲ್‌ವೊಂದರಲ್ಲಿ ಈ ಅವಘಡ ಸಂಭವಿಸಿದೆ ಎಂದು ಸಚಿವರು ತಿಳಿಸಿದ್ದಾರೆ. ದುರದೃಷ್ಟವಶಾತ್ ಮೃತರ ಸಂಖ್ಯೆ 10ಕ್ಕೆ ಏರಿಕೆಯಾಗಿದೆ.

ಗಾಯಾಳುಗಳ ಸಂಖ್ಯೆ 32 ಆಗಿದೆ. ಮೃತರ ಆತ್ಮಕ್ಕೆ ದೇವರು ಶಾಂತಿ ನೀಡಲಿ, ಗಾಯಾಳುಗಳು ಬೇಗ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುವುದಾಗಿ ಅವರು ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

267 ಮಂದಿ ತುರ್ತು ಕಾರ್ಯಾಚರಣಾ ಸಿಬ್ಬಂದಿಯನ್ನು ಸ್ಥಳಕ್ಕೆ ಕಳುಹಿಸಲಾಗಿದೆ. ಆಂತರಿಕ ಮತ್ತು ಪ್ರವಾಸೋದ್ಯಮ ಸಚಿವರು ಘಟನಾ ಸ್ಥಳದತ್ತ ತೆರಳುತ್ತಿದ್ದು, ಪತ್ರಿಕಾಗೋಷ್ಠಿ ನಡೆಸಲಿದ್ದಾರೆ ಎಂದು ಸಚಿವಾಲಯನ್ನು ತಿಳಿಸಿವೆ. ಈ ರೆಸಾರ್ಟ್ ಚಳಿಗಾಲದಲ್ಲಿ ಪ್ರವಾಸಿಗರ ಅತ್ಯಂತ ನೆಚ್ಚಿನ ಸ್ಥಳವಾಗಿದೆ. ಅದರಲ್ಲೂ ಶಾಲಾ ರಜಾದಿನಗಳಲ್ಲಿ (ಜನವರಿ, ಫೆಬ್ರುವರಿ) ಹಾಲಿಡೇ ಕಳೆಯಲು ಅಚ್ಚುಮೆಚ್ಚಿನ ಸ್ಥಳವಾಗಿದೆ.

ಹೋಟೆಲ್‌ನಲ್ಲಿ ಸುಮಾರು 234 ಅತಿಥಿಗಳು ತಂಗಿದ್ದರು. ಆತಂಕದಲ್ಲಿ ಕಟ್ಟಡದಿಂದ ಜಿಗಿದ ಇಬ್ಬರು ಅಸುನೀಗಿದ್ದಾರೆ ಎಂದು ಬೊಲು ಗವರ್ನರ್ ಅಬ್ದುಲ್ ಅಜೀಜ್ ತಿಳಿಸಿದ್ದಾರೆ.

ಹೋಟೆಲ್‌ನ ಮಹಡಿಗಳಲ್ಲಿ ಬೆಂಕಿಯ ಜ್ವಾಲೆ ಆವರಿಸಿದ್ದು, ಜನರು ಬೆಡ್‌ಶೀಡ್‌ಗಳನ್ನು ಸುತ್ತಿಕೊಂಡು ರಕ್ಷಣೆ ಪಡೆಯುತ್ತಿರುವ ವಿಡಿಯೋಗಳು ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡುತ್ತಿವೆ.

### ಯುಜಿಸಿ ಮಾರ್ಗಸೂಚಿ ಕೇರಳ ವಿರೋಧ

**ತಿರುವನಂತಪುರ:** ಯುಜಿಸಿಯ ಕರಡು ಮಾರ್ಗಸೂಚಿಯನ್ನು ಹಿಂಪಡೆಯುವಂತೆ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿ ಕೇರಳ ವಿಧಾನಸಭೆ ಮಂಗಳವಾರ ಸರ್ವಾನುಮತದ ನಿರ್ಣಯ ಅಂಗೀಕರಿಸಿದೆ.

ಸಿಪಿಎಂ ನೇತೃತ್ವದ ಎಲ್‌ಡಿಎಫ್ ಸರ್ಕಾರವು ಈ ವಿಷಯದಲ್ಲಿ ಕೇಂದ್ರದ ಮೇಲೆ ಒತ್ತಡ ಹೇರಲು ಬಿಜೆಪಿಯೇತರ ಆಡಳಿತವಿರುವ ರಾಜ್ಯಗಳ ಸಭೆ ಆಯೋಜಿಸಲು ಚಿಂತಿಸಿದೆ. ಎಲ್ಲಾ ರಾಜ್ಯ ಸರ್ಕಾರಗಳು ಮತ್ತು ತಜ್ಞರೊಂದಿಗೆ ಮಾತುಕತೆ ನಡೆಸಿ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಕೇಂದ್ರಕ್ಕೆ ಒತ್ತಾಯಿಸಿ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ವಿಧಾನಸಭೆಯಲ್ಲಿ ನಿರ್ಣಯ ಮಂಡಿಸಿದರು.

### ಪುಣೆ: 22 ಜನರಲ್ಲಿ ಶಂಕಿತ ಗಿಲೈನ್ ಬಗ್ರೆ ಸಿಂಡ್ರೋಮ್ ಪತ್ತೆ

**ಪುಣೆ:** ಮಹಾರಾಷ್ಟ್ರದ ಪುಣೆ ನಗರದಲ್ಲಿ 22 ಮಂದಿಯಲ್ಲಿ ಶಂಕಿತ ಗಿಲೈನ್ ಬರ್ರೆ ಸಿಂಡೋಮ್ ಪತ್ತೆಯಾಗಿದೆ. ಈ ಪೈಕಿ ಬಹುತೇಕ ಪ್ರಕರಣಗಳು ನಗರದ ಸಿಂಹಘಡ ರೋಡ್ ಪ್ರದೇಶದಲ್ಲಿ ಪತ್ತೆಯಾಗಿದ್ದು, ಈ ಕುರಿತಂತೆ ಪುಣೆ ಪಾಲಿಕೆ ಅಧಿಕಾರಿಗಳು ಸಮೀಕ್ಷೆ ನಡೆಸುತ್ತಿದ್ದಾರೆ. ಇದೊಂದು ನರಸಂಬಂಧಿತ ಅಸ್ವಸ್ಥತೆಯಾಗಿದ್ದು, ದೇಹದ ಪ್ರತಿರಕ್ಷಣಾ ವ್ಯವಸ್ಥೆಯು ಬಾಹ್ಯ ನರಮಂಡಲದ ಮೇಲೆ ದಾಳಿ ಮಾಡಿದಾಗ ಸಂಭವಿಸುತ್ತದೆ. ದೇಹ ಮರಗಟ್ಟುವಿಕೆ, ಸ್ನಾಯು ದೌರ್ಬಲ್ಯವನ್ನು ಉಂಟುಮಾಡುತ್ತದೆ, ಕೈಕಾಲುಗಳಲ್ಲಿ ತೀವ್ರ ದೌರ್ಬಲ್ಯ ಉಂಟಾಗಬಹುದು ಎಂದು ವೈದ್ಯರು ಹೇಳಿದ್ದಾರೆ. ನಗರದ ಮೂರ್ನಾಲ್ಕು ಆಸ್ಪತ್ರೆಯಲ್ಲಿ ಈ ಶಂಕಿತ ಜಿಬಿಎಸ್‌ನ 22 ಪ್ರಕರಣಗಳು ವರದಿಯಾಗಿವೆ ಎಂದು ಪಾಲಿಕೆ ಆರೋಗ್ಯ ಸಮಿತಿಯ ಮುಖ್ಯಸ್ಥರಾದ ಡಾ. ನೀನಾ ಬರೊಡೆ ತಿಳಿಸಿದ್ದಾರೆ. ಬ್ಯಾಕ್ಟೀರಿಯಾ ಮತ್ತು ವೈರಲ್ ಸೋಂಕು ಜಿಬಿಎಸ್ ಸಮಸ್ಯೆಗೆ ಕಾರಣವಾಗುತ್ತದೆ ಎಂದು ಬೊರಡೆ ಹೇಳಿದ್ದಾರೆ.

### 12 ಕೋಟಿ ಮೌಲ್ಯದ ನಿಷೇಧಿತ ಯಬಾ ಮಾತ್ರೆ ಸಾಗಿಸುತ್ತಿದ್ದ ಇಬ್ಬರ ಬಂಧನ

**ಅಗರ್ತಲಾ:** ಪಶ್ಚಿಮ ತ್ರಿಪುರಾ ಜಿಲ್ಲೆಯಲ್ಲಿ ಸುಮಾರು 12 ಕೋಟಿ ಮೌಲ್ಯದ ನಿಷೇಧಿತ ಯಬಾ ಮಾತ್ರೆಗಳನ್ನು ಸಾಗಿಸುತ್ತಿದ್ದ ಇಬ್ಬರು ಕಳ್ಳಸಾಗಣೆದಾರರನ್ನು ಪೊಲೀಸರು ಮಂಗಳವಾರ ಬಂಧಿಸಿದ್ದಾರೆ.


ಜಿಲ್ಲೆಯ ಸಲ್ಬಗನ್ ಪ್ರದೇಶದಲ್ಲಿ ಆರೋಪಿಗಳನ್ನು ಅಸ್ಸಾಂ ರೈಫಲ್ಸ್ ಸಿಬ್ಬಂದಿ ಬಂಧಿಸಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಬಂಧಿತ ಆರೋಪಿಗಳಿಂದ ಸುಮಾರು 60,000 ಯಬಾ ಮಾತ್ರೆಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಅಂದಾಜು 12 ಕೋಟಿ ಮೌಲ್ಯವಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆರೋಪಿಗಳನ್ನು ಹೆಚ್ಚಿನ ವಿಚಾರಣೆಗಾಗಿ ಡೈರೆಕ್ಟರೇಟ್ ಆಫ್ ರೆವೆನ್ಯೂ ಇಂಟೆಲಿಜೆನ್ಸ್‌ಗೆ (ಡಿಆರ್‌ಐ) ಕಳುಹಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ.



## ಕನ್ನಡದಲ್ಲೂ ಬರ್ತಿದೆ ಮಲಯಾಳಂನ ಹಿಟ್ ಸಿನಿಮಾ

ಉನ್ನಿ ಮುಕುಂದನ್ ನಟನೆಯ 'ಮಾರ್ಕೊ' ಚಿತ್ರ ಜನವರಿ 31 ರಂದು ಕನ್ನಡದಲ್ಲಿ ಬಿಡುಗಡೆಯಾಗಲಿದೆ. ಮಲಯಾಳಂನಲ್ಲಿ ಯಶಸ್ವಿಯಾದ ಈ ಚಿತ್ರ ಹಿಂದಿ, ತಮಿಳು ಮತ್ತು ತೆಲುಗು ಭಾಷೆಗಳಲ್ಲೂ ಬಿಡುಗಡೆಯಾಗಿದೆ. ಚಿತ್ರದಲ್ಲಿ ಹಿಂಸಾತ್ಮಕ ದೃಶ್ಯಗಳಿರುವುದರಿಂದ ವಿವಾದಕ್ಕೀಡಾಗಿದೆ. ಆದರೂ, 100 ಕೋಟಿಗೂ ಅಧಿಕ ಗಳಿಕೆ ಮಾಡಿದ ಚಿತ್ರದ ಒಟಿಟಿ ಹಕ್ಕುಗಳಿಗೆ ಭಾರಿ ಬೇಡಿಕೆಯಿದೆ. 'ಮಾರ್ಕೊ' ಸಿನಿಮಾ ಮಲಯಾಳಂ ಚಿತ್ರರಂಗದಲ್ಲಿ ಹೊಸ ಅಲೆಸೃಷ್ಟಿಸಿದ ಸಿನಿಮಾಗಳಲ್ಲಿ ಒಂದು. ಉನ್ನಿ ಮುಕುಂದನ್ ನಟನೆಯ ಈ ಚಿತ್ರ 2024ರ ಡಿಸೆಂಬರ್‌ನಲ್ಲಿ ತೆರೆಗೆ ಬಂತು. ಈ ಚಿತ್ರವನ್ನು ನೋಡಿ ಒಂದು ವರ್ಗದ ಪ್ರೇಕ್ಷಕರು ಮೆಚ್ಚಿಕೊಂಡಿದ್ದಾರೆ. ಈ ಸಿನಿಮಾ ಮೊದಲು ಮೂಲ ಭಾಷೆಯಲ್ಲಿ ರಿಲೀಸ್ ಆಗಿ ಹಿಟ್ ಆಯಿತು. ಆ ಬಳಿಕ ಈ ಚಿತ್ರವನ್ನು ಹಿಂದಿ, ತಮಿಳು ಹಾಗೂ ತೆಲುಗು ಭಾಷೆಯಲ್ಲೂ ರಿಲೀಸ್ ಮಾಡಲಾಯಿತು. ಈಗ ಚಿತ್ರದ ಕನ್ನಡ ವರ್ಷನ್ ರಿಲೀಸ್‌ಗೆ ದಿನಾಂಕ ಫಿಕ್ಸ್ ಆಗಿದೆ. ಉನ್ನಿ ಮುಕುಂದನ್ ನಟನೆಯ 'ಮಾರ್ಕೊ' ಚಿತ್ರತಂಡ ಹೊಸ ಪೋಸ್ಟರ್ ರಿಲೀಸ್ ಮಾಡಿದೆ. ಇದರಲ್ಲಿ ಜನವರಿ 31ರಂದು ಕನ್ನಡದಲ್ಲಿ ಸಿನಿಮಾ ರಿಲೀಸ್ ಆಗುತ್ತಿದೆ ಎಂಬ ಮಾಹಿತಿ ನೀಡಲಾಗಿದೆ. ಈ ಚಿತ್ರ ಸ್ಯಾಂಡಲ್‌ವುಡ್ ಬಾಕ್ಸ್ ಆಫೀಸ್‌ನಲ್ಲಿ ಯಾವ ರೀತಿಯಲ್ಲಿ ಗಳಿಕೆ ಮಾಡುತ್ತದೆ ಎಂಬುದನ್ನು ಕಾದು ನೋಡಬೇಕಿದೆ. ಈ ಚಿತ್ರ 'ಎ' ಸರ್ಟಿಫಿಕೇಟ್ ಪಡೆದುಕೊಂಡಿದ್ದು, ಸಾಕಷ್ಟು ಹಿಂಸಾತ್ಮಕ ದೃಶ್ಯಗಳು ಇವೆ.

## ಸಲ್ಮಾನ್‌ಗೆ ಟೈಮ್‌ಸೆನ್ಸ್ ಇಲ್ಲ ಎಂದು ಅಕ್ಷಯ್‌ಗೆ ಮೂಡಿತೆ ಸಿಟ್ಟು



ಅಕ್ಷಯ್ ಕುಮಾರ್ ಕೆಲ ದಿನಗಳ ಹಿಂದಷ್ಟೆ ಬಿಗ್‌ಬಾಸ್ ಹಿಂದಿ ಸೀಸನ್ 18 ರಲ್ಲಿ ಅತಿಥಿಯಾಗಿ ಭಾಗವಹಿಸಲು ತೆರಳಿದ್ದರು. ಆದರೆ ಸೆಟ್‌ನಿಂದ ಹೊರನಡೆದರು. ಸಲ್ಮಾನ್ ಖಾನ್ ಶೂಟ್‌ಗೆ ತಡವಾಗಿ ಬಂದಿದ್ದರಿಂದ ಅಕ್ಷಯ್ ಬೇಸರಗೊಂಡು ತೆರಳಿದರು ಎನ್ನಲಾಯ್ತು. ಆದರೆ ಈ ಬಗ್ಗೆ ಅಕ್ಷಯ್ ಕುಮಾರ್ ಇದೀಗ ಸ್ಪಷ್ಟನೆ ನೀಡಿದ್ದಾರೆ. 'ಬಿಗ್ ಬಾಸ್ ಹಿಂದಿ ಸೀಸನ್ 18' ಇತ್ತೀಚೆಗೆ ಪೂರ್ಣಗೊಂಡಿದೆ. ಕರಣ್ ವೀರ್ ಮೆಹ್ರಾ ಅವರು ಶೋನ ಗೆದ್ದಿದ್ದಾರೆ. ಈ ಎಪಿಸೋಡ್ನಲ್ಲಿ ಅಕ್ಷಯ್ ಕುಮಾರ್ ಕೂಡ ಇರಬೇಕಿತ್ತು. ಆದರೆ, ಸಲ್ಮಾನ್ ಖಾನ್ ತಡವಾಗಿ ಬಂದರು ಎಂಬ ಕಾರಣಕ್ಕೆ ಅವರು ಅಲ್ಲಿಂದ ತೆರಳಿದರು. ಸಲ್ಮಾನ್ ಖಾನ್ ಮೇಲೆ ಅಕ್ಷಯ್‌ಗೆ ಕೋಪ ಬಂದಿದೆ ಎಂದೆಲ್ಲ ಹೇಳಲಾಗಿತ್ತು. ಇದಕ್ಕೆ ಈಗ ಸ್ಪಷ್ಟನೆ ಸಿಕ್ಕಿದೆ. ಅಕ್ಷಯ್ ಕುಮಾರ್ ಅವರು ಮುಂಬರುವ 'ಸ್ಕೈ ಫೋರ್ಸ್' ಚಿತ್ರವನ್ನು ಪ್ರಚಾರ ಮಾಡಬೇಕಿತ್ತು. ಆದರೆ, ಸಲ್ಮಾನ್ ಖಾನ್ ಅವರು ಶೂಟ್‌ಗೆ ಸಾಕಷ್ಟು ತಡವಾಗಿ ಬಂದರು. ಆದರೆ, ಅಕ್ಷಯ್‌ಗೆ ಅಷ್ಟೆಲ್ಲ ಕಾಯುವ ತಾಳ್ಮೆ ಇರಲೇ ಇಲ್ಲ. ಹೀಗಾಗಿ, ಅಕ್ಷಯ್ ಅಲ್ಲಿಂದ ತೆರಳೇ ಬಿಟ್ಟರು. ಈ ಬಗ್ಗೆ ಅವರು ಮಾತನಾಡಿದ್ದಾರೆ.

'ಅಷ್ಟೊಂದು ತಡವೇನು ಆಗಿರಲಿಲ್ಲ. ಅವರಿಗೆ ಕೆಲವು ವೈಯಕ್ತಿಕ ಕೆಲಸಗಳು ಇದ್ದವು. ಹೀಗಾಗಿ, ಸ್ವಲ್ಪ ತಡವಾಗುತ್ತದೆ ಎಂದು ತಿಳಿಸಿದರು. 35-40 ನಿಮಿಷ ತಡವಾಗುತ್ತದೆ ಎಂಬ ಮಾಹಿತಿ ನನಗೆ ಬಂತು. ಹೀಗಾಗಿ, ನಾನು ತೆರಳಬೇಕಾಯಿತು. ನಾನು ಸಲ್ಮಾನ್ ಜೊತೆ ಈ ಬಗ್ಗೆ ಮಾತನಾಡಿದೆ ಮತ್ತು ಅಲ್ಲಿಂದ ತೆರಳಿದೆ. ನನ್ನ ಸಹ ನಟ ವೀರ್ ಅವರು ಅಲ್ಲಿಯೇ ಇದ್ದರು' ಎಂದಿದ್ದಾರೆ ಅಕ್ಷಯ್ ಕುಮಾರ್.

ಅಕ್ಷಯ್ ಅವರು ಸಮಯಪಾಲನೆ ಮಾಡುತ್ತಾರೆ. ಈ ಕಾರಣದಿಂದಲೇ ಅವರು ಅಷ್ಟೊಂದು ಖ್ಯಾತಿಯನ್ನು ಹೊಂದಿದ್ದಾರೆ. ಆದರೆ ಸಲ್ಮಾನ್ ಹಾಗಲ್ಲ. ಅವರು ಸಮಯ ಪಾಲನೆ ಮಾಡಿದ್ದು ತುಂಬಾನೇ ಕಡಿಮೆ ಎನ್ನಲಾಗಿದೆ. ಈ ಕಾರಣಕ್ಕೆ ಅಕ್ಷಯ್ ಕಾಯಲಾಗದೆ ತೆರಳಿಯೇ ಬಿಟ್ಟಿದ್ದಾರೆ.

## ಮಹಾಕುಂಭದ ವೈರಲ್ ಹುಡುಗಿಗೆ ಬಾಲಿವುಡ್‌ನಿಂದ ಬಂತು ಆಫರ್

ಕುಂಭ ಮೇಳದಲ್ಲಿ ರುದ್ರಾಕ್ಷಿ ಮಾರುತ್ತಿದ್ದ ಸುಂದರ ಯುವತಿಯ ಚಿತ್ರ ಇತ್ತೀಚೆಗೆ ವೈರಲ್ ಆಗಿತ್ತು. ಆ ಯುವತಿಯನ್ನು ಮೊನಾಲಿಸಾಗೆ ಹೋಲಿಸಲಾಗಿತ್ತು. ಭಾರತದ ಮೊನಾಲಿಸಾ ಎಂದೇ ಆ ಯುವತಿ ಫೇಮಸ್ ಆಗಿದ್ದರು. ಇದೀಗ ಆ ಯುವತಿಗೆ ಬಾಲಿವುಡ್ ಸಿನಿಮಾದಲ್ಲಿ ನಟಿಸುವ ಅವಕಾಶ ದೊರೆತಿದೆ.

ಈ ಸೋಷಿಯಲ್ ಮೀಡಿಯಾ ಕಾಲದಲ್ಲಿ ಎಲ್ಲೋ ಇದ್ದವರು ರಾತ್ರಿ ಕಳೆದು ಬೆಳಗಾಗುವದರೊಳಗೆ ಸ್ಟಾರ್ ಆಗಿಬಿಡುತ್ತಾರೆ. ಹಲವರ ಜೀವನವೇ ಬದಲಾಗಿ ಬಿಡುತ್ತದೆ. ಟೀ ಮಾರುವ ಹುಡುಗ ಮಾಡೆಲ್ ಆಗಿದ್ದು, ಭಿಕ್ಷುಕ ಮಾಡೆಲ್ ಆಗಿದ್ದು, ಮೀನು ಮಾರುವ ಹುಡುಗಿ ಫ್ಯಾಷನ್ ಶೋ ಮಾಡಿದ್ದು, ಒಂದು ಕಣ್ಸನ್ನೆಯಿಂದ ಪ್ರಿಯಾ ವಾರಿಯಸ್ ಸ್ಟಾರ್ ಆಗಿದ್ದು ಎಲ್ಲವೂ ಸಾಧ್ಯವಾಗಿದ್ದು ಇದೇ ಸೋಷಿಯಲ್ ಮೀಡಿಯಾದಿಂದ. ಇದೀಗ ಮಹಾಕುಂಭದಲ್ಲಿ ರುದ್ರಾಕ್ಷಿ ಮಾರುತ್ತಿದ್ದ ಹುಡುಗಿಗೆ ಇದೇ ಸಾಮಾಜಿಕ ಜಾಲತಾಣದಿಂದ ಅದೃಷ್ಟ ಖುಲಾಯಿಸಿದೆ. ವೈರಲ್ ಹುಡುಗಿಗೆ ಬಾಲಿವುಡ್‌ನಿಂದ ಆಫರ್ ಬಂದಿದೆ. ಮಹಾಕುಂಭ ಮೇಳದಲ್ಲಿ ರುದ್ರಾಕ್ಷಿ ಮಾರುತ್ತಿದ್ದ ಯುವತಿಯೊಬ್ಬಾಕೆಯ ಚಿತ್ರವೊಂದು ಸಖತ್ ವೈರಲ್ ಆಗಿತ್ತು. ಆಕೆಯ ಸೌಂದರ್ಯಕ್ಕೆ ವಿಶೇಷವಾಗಿ ಆಕೆಯ ಸೆಳೆಯುವ ಕಣ್ಣುಗಳಿಗೆ ಜನ ಮಾರು ಹೋಗಿದ್ದರು.



ಆ ಯುವತಿಯನ್ನು ಮೊನಾಲಿಸಾಗೆ ಹೋಲಿಸಲಾಗಿತ್ತು. ಭಾರತದ ಮೊನಾಲಿಸಾ ಎಂದೇ ಸಾಮಾಜಿಕ ಜಾಲತಾಣದಲ್ಲಿ ಆ ಚೆಲುವೆ ಫೇಮಸ್ ಆಗಿದ್ದರು.

ಇದೀಗ ಬಾಲಿವುಡ್ ಕಣ್ಣು ಯುವತಿಯ ಮೇಲೆ ಬಿದ್ದಿದೆ. ಯುವತಿಗೆ ಬಾಲಿವುಡ್‌ನಿಂದ ಆಫರ್ ಬಂದಿದೆ.

ಬಾಲಿವುಡ್ ನಿರ್ದೇಶಕ ಸನೋಜ್ ಮಿಶ್ರ, ಆ ವೈರಲ್ ಯುವತಿಗೆ ತಮ್ಮ ಸಿನಿಮಾದಲ್ಲಿ ಅವಕಾಶ ನೀಡಿದ್ದಾರೆ. 'ಡೈರಿ ಆಫ್ ಮಣಿಪುರ್' ಹೆಸರಿನ ಸಿನಿಮಾ ಅನ್ನು ಸನೋಜ್ ಮಿಶ್ರ ನಿರ್ದೇಶನ ಮಾಡುತ್ತಿದ್ದು, ಆ ಸಿನಿಮಾದಲ್ಲಿ ವೈರಲ್ ಹುಡುಗಿಯೇ ನಾಯಕಿ. ಇದಕ್ಕಾಗಿ ಮೊನಾಲಿಸಾ ಲುಕ್ ಟೆಸ್ಟ್ ಸಹ ನಡೆಸಲಾಗಿದೆ. ವೈರಲ್ ಯುವತಿಗೆ ಮೇಕೋವರ್ ಮಾಡಲಾಗಿದ್ದು, ಮೇಕೊವರ್ ವಿಡಿಯೋ ಇದೀಗ ವೈರಲ್ ಆಗಿದೆ. ಇದು ಮಾತ್ರವೇ ಅಲ್ಲದೆ ಮಹಾಕುಂಭದ ಮೊನಾಲಿಸಾಗೆ ನಟನಾ ತರಬೇತಿಯನ್ನು ಸಹ ಕೊಡಿಸಲಾಗುತ್ತಿದೆ.



## ನಮ್ಮ ಪಾಡಿಗೆ ನಮ್ಮ ಬಿಟ್ಟು ಬಿಡಿ

ಸೈಫ್ ಅಲಿ ಖಾನ್ ಅವರು ಚಾಕುವಿನಿಂದ ಇರಿತಕ್ಕೆ ಒಳಗಾಗಿ ಮುಂಬೈನ ಲೀಲಾವತಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕರೀನಾ ಕಪೂರ್ ಅವರು ಪಾಪರಾಜಿಗಳ ಕೆಲಸಕ್ಕೆ ಸಿಟ್ಟಾಗಿದ್ದು, ಖಾಸಗಿತನಕ್ಕೆ ಗೌರವ ನೀಡುವಂತೆ ಮನವಿ ಮಾಡಿದ್ದಾರೆ. ಸೈಫ್ ಅವರ ಚೇತರಿಕೆಗೆ ಅಭಿಮಾನಿಗಳು ಶುಭ ಹಾರೈಸುತ್ತಿದ್ದಾರೆ. ಸೈಫ್ ಅಲಿ ಖಾನ್ ಅವರು ಸದ್ಯ ಮುಂಬೈನ ಲೀಲಾವತಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಚಾಕುವಿನಿಂದ ಇರಿತಕ್ಕೆ ಒಳಗಾದ ಅವರು ಸಾಕಷ್ಟು ತೊಂದರೆ ಅನುಭವಿಸಿದ್ದಾರೆ. ಕಳ್ಳ ಮಾಡಿದ ಅವಾಂತರದಿಂದ ಸೈಫ್ ಕುಟುಂಬ ಇಷ್ಟೆಲ್ಲ ಸಮಸ್ಯೆ ಎದುರಿಸಬೇಕಾಯಿತು. ಅವರಿಗೆ ಏನಾಗಿದೆ ಎಂಬುದನ್ನು ತಿಳಿದುಕೊಳ್ಳುವ ಕುತೂಹಲ ಎಲ್ಲಾರಿಗೂ ಇದೆ. ಅವರ ಆರೋಗ್ಯದ ಬಗ್ಗೆ ಪದೇ ಪದೇ ಅಪ್‌ಡೇಟ್ ಕೇಳಲಾಗುತ್ತಿದೆ. ಇದನ್ನು ಕೊಡಲು ಪಾಪರಾಜಿಗಳು ಕೂಡ ಪ್ರಯತ್ನಿಸುತ್ತಿದ್ದಾರೆ. ಇದಕ್ಕೆ ಕರೀನಾ ಕಪೂರ್ ಸಿಟ್ಟಾಗಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ಈ ಬಗ್ಗೆ ಬರೆದುಕೊಂಡಿದ್ದಾರೆ. ಕರೀನಾ ಕಪೂರ್ ಅವರು ಸದ್ಯ ಟೆನ್ಷನ್‌ನಲ್ಲಿ ಇದ್ದಾರೆ. ಕುಟುಂಬಕ್ಕೆ ಈ ಪರಿಸ್ಥಿತಿ ಬಂದಿರುವುದರಿಂದ ಅವರು ಸಾಕಷ್ಟು ಆಘಾತದಲ್ಲಿ ಇದ್ದಾರೆ. ಅವರ ಕುಟುಂಬ ಕಷ್ಟದಲ್ಲಿ ಇದೆ. ಈ ಕಷ್ಟದ ಪರಿಸ್ಥಿತಿಯಲ್ಲಿ ಖಾಸಗಿತನಕ್ಕೆ ಗೌರವ ನೀಡಿ ಎಂದು ಕೋರಿದ್ದಾರೆ. ಆದರೆ, ಇದನ್ನು ಯಾರೂ ಪಾಲಿಸುತ್ತಿಲ್ಲ. ಕರೀನಾ ಮನೆಗೆ ಆಟಿಕೆ ತರುತ್ತಿರುವುದು ವಿಡಿಯೋ ವೈರಲ್ ಆಗಿದೆ. ಈ ವಿಡಿಯೋನ ಪಾಪರಾಜಿಗಳು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದರು.

## ಸುದೀಪ್ ಇಲ್ಲದೇ ಬಿಗ್ ಬಾಸ್

ಬಿಗ್ ಬಾಸ್ ನಿರೂಪಣೆಗೆ ಕಿಚ್ಚ ಸುದೀಪ್ ವಿದಾಯ ಘೋಷಿಸಿದ ಬೆನ್ನಲ್ಲೇ ಅಭಿಮಾನಿಗಳು ಬೇಸರ ವ್ಯಕ್ತಪಡಿಸುತ್ತಿದ್ದಾರೆ. ಈ ಕುರಿತು 'ಬಿಗ್ ಬಾಸ್ ಕನ್ನಡ 11'ರ ರಿಯಾಕ್ಟ್ ಮಾಡಿ, ಸುದೀಪ್ ಇಲ್ಲದೇ ಬಿಗ್ ಬಾಸ್ ಊಹಿಸಿಕೊಳ್ಳೋಕೆ ಸಾಧ್ಯವಿಲ್ಲ ಎಂದಿದ್ದಾರೆ.



ಸುದೀಪ್ ಅವರ ಈ ನಿರ್ಧಾರ ಬಿಗ್ ಬಾಸ್ ಕಂಟೆಸ್ಟಂಟ್‌ಗಳಿಗೂ ಬೇಸರ ತಂದಿದೆ. ಸುದೀಪ್ ಇಲ್ಲದೇ ಬಿಗ್‌ಬಾಸ್ ಊಹಿಸಿಕೊಳ್ಳೋಕೆ ಸಾಧ್ಯವಿಲ್ಲ ಎಂದಿದ್ದಾರೆ. ಈ ಸೀಸನ್‌ನಲ್ಲೇ ಇಲ್ಲ ಎನ್ನಲಾಗಿತ್ತು. ನಮ್ಮ ಅದೃಷ್ಟಕ್ಕೆ ಸುದೀಪ್ ಇದ್ದಾರೆ. ಮುಂದೆ ಸುದೀಪ್ ಸರ್ ನಿರೂಪಣೆ ಇರೋದಿಲ್ಲ ಅಂದ್ರೆ ಮುಂದೆ ಬರುವ ಕಂಟೆಸ್ಟಂಟ್‌ಗಳಿಗೆ ಅದು ದೊಡ್ಡ ನಿರಾಸೆ. ಅವರ ಕೊನೆಯ ಪಂಚಾಯ್ತಿಯಲ್ಲಿ ನಾವಿದ್ವಿ ಅನ್ನೋದೇ ನಮ್ಮ ಸೌಭಾಗ್ಯ ಎಂದಿದ್ದಾರೆ ಧನ್‌ರಾಜ್.

ಇನ್ನೂ ಬಿಗ್ ಬಾಸ್ ಮನೆಯಲ್ಲಿದ್ದಾಗ ಸ್ಪರ್ಧಿಗಳಿಗೆ ಅವರು ಆಡುತ್ತಿದ್ದ ಮಾತು ಸ್ಫೂರ್ತಿ ಕೊಡುತ್ತಿತ್ತು. ಸುದೀಪ್ ಸರ್ ಬಿಗ್ ಬಾಸ್‌ಗೆ ಬೇಕು ಎಂಬುದು ನಮ್ಮ ಆಸೆ ಎಂದಿದ್ದಾರೆ ಧನರಾಜ್. ಇನ್ನೂ ಜ.19ರ ಬಿಗ್ ಬಾಸ್ ಕೊನೆಯ ವೀಕೆಂಡ್ ಕಾರ್ಯಕ್ರಮ ಬಳಿಕ ಸೋಷಿಯಲ್ ಮೀಡಿಯಾದಲ್ಲಿ ಸುದೀಪ್ ಪ್ರತಿಕ್ರಿಯಿಸಿ, ಕಳೆದ 11 ಸೀಸನ್‌ಗಳಿಂದ ನಾನು ಬಿಗ್‌ಬಾಸ್ ಅನ್ನು ತುಂಬಾ ಇಷ್ಟಪಟ್ಟಿದ್ದೇನೆ. ನೀವು ತೋರಿಸಿದ ಪ್ರೀತಿಗೆ ಧನ್ಯವಾದಗಳು. ಮುಂಬರುವ ಫೈನಲ್ ನನ್ನ ಕೊನೆಯ ನಿರೂಪಣೆ. ನಿಮ್ಮನ್ನು ಮನರಂಜಿಸಲು ನಾನು ಪ್ರಯತ್ನಿಸುತ್ತೇನೆ ಎಂದಿದ್ದಾರೆ.

## ಚಾಂಪಿಯನ್ಸ್ ಟ್ರೋಫಿ ಜೆರ್ಸಿಯಲ್ಲಿ 'ಪಾಕಿಸ್ತಾನ್'ಗೆ ಸ್ಥಾನ ನೀಡಲು ಬಿಸಿಸಿಐ ನಿರಾಕರಣೆ

ಚಾಂಪಿಯನ್ಸ್ ಟ್ರೋಫಿ 2025 ರಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿದೆ. ಈ ತಂಡಗಳನ್ನು ಎರಡು ಗ್ರೂಪ್‌ಗಳಾಗಿ ವಿಂಗಡಿಸಲಾಗಿದ್ದು, ಮೊದಲ ಸುತ್ತಿನಲ್ಲಿ ಆಯಾ ಗ್ರೂಪ್‌ಗಳಲ್ಲಿನ ತಂಡಗಳ ನಡುವೆ ಪಂದ್ಯಗಳು ನಡೆಯಲಿದೆ. ಇಲ್ಲಿ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಒಂದೇ ಗ್ರೂಪ್‌ನಲ್ಲಿದ್ದು, ಅದರಂತೆ ಮೊದಲ ಸುತ್ತಿನಲ್ಲೇ ಉಭಯ ತಂಡಗಳು ಮುಖಾಮುಖಿಯಾಗಲಿದೆ. ಬಹುನಿರೀಕ್ಷಿತ ಚಾಂಪಿಯನ್ಸ್ ಟ್ರೋಫಿ ಆರಂಭಕ್ಕೆ ದಿನಗಣನೆ ಶುರುವಾಗಿದೆ. ಫೆಬ್ರವರಿ 19 ರಿಂದ ಆರಂಭವಾಗಲಿರುವ ಈ ಏಕದಿನ ಟೂರ್ನಿಗೆ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಆತಿಥ್ಯವಹಿಸಲಿದೆ. ಈ ಆತಿಥ್ಯದ ಕಾರಣ ಎಲ್ಲಾ ತಂಡಗಳ ಚಾಂಪಿಯನ್ಸ್ ಟ್ರೋಫಿ ಜೆರ್ಸಿ ಮೇಲೆ ಪಾಕಿಸ್ತಾನದ ಹೆಸರು ಕೂಡ ಕಾಣಿಸಿಕೊಳ್ಳಲಿದೆ. ಆದರೆ ಟೀಮ್ ಇಂಡಿಯಾ ಜೆರ್ಸಿಯಲ್ಲಿ 'ಪಾಕಿಸ್ತಾನ್' ಎಂಬ ಹೆಸರನ್ನು ಮುದ್ರಿಸಲು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ನಿರಾಕರಿಸಿದೆ ಎಂದು ವರದಿಯಾಗಿದೆ. ಈ ಬಾರಿಯ ಚಾಂಪಿಯನ್ಸ್ ಟ್ರೋಫಿಗೆ ಪಾಕಿಸ್ತಾನ್ ಆತಿಥ್ಯವಹಿಸುತ್ತಿದ್ದರೂ, ಟೀಮ್ ಇಂಡಿಯಾ ತನ್ನೆಲ್ಲಾ ಪಂದ್ಯಗಳನ್ನು ದುಬೈನಲ್ಲಿ ಆಡಲಿದೆ.

ಪಾಕಿಸ್ತಾನದಲ್ಲಿ ಚಾಂಪಿಯನ್ಸ್ ಟ್ರೋಫಿ ಆಡಲು ಟೀಮ್ ಇಂಡಿಯಾ ನಿರಾಕರಿಸಿರುವ ಕಾರಣ ಈ ಬಾರಿ ಟೂರ್ನಮೆಂಟ್ ಅನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಲಾಗುತ್ತಿದೆ. ಅದರಂತೆ ಬಹುತೇಕ ಪಂದ್ಯಗಳು ಪಾಕ್‌ನಲ್ಲಿ ನಡೆದರೆ, ಭಾರತ ತಂಡದ ಪಂದ್ಯಗಳು ದುಬೈನಲ್ಲಿ ಜರುಗಲಿದೆ.




ಇದೀಗ ಪಾಕಿಸ್ತಾನದಲ್ಲಿ ಪಂದ್ಯವಾಡದಿರುವ ಕಾರಣ ಭಾರತ ತಂಡದ ಜೆರ್ಸಿ ಮೇಲೆ ಆತಿಥೇಯ 'ಪಾಕಿಸ್ತಾನ್' ಹೆಸರು ನಮೂದಿಸಲು ಬಿಸಿಸಿಐ ನಿರಾಕರಿಸಿದೆ. ಬಿಸಿಸಿಐನ ಈ ನಿರ್ಧಾರವು ಇದೀಗ ಹೊಸ ಚರ್ಚೆಯನ್ನು ಹುಟ್ಟುಹಾಕಿದೆ. ಬಿಸಿಸಿಐ ನಡೆಯ ಬಗ್ಗೆ ಆಕ್ರೋಶ ವ್ಯಕ್ತಪಡಿಸಿರುವ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ, ಇದನ್ನು ಅಂತರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್ (ಐಸಿಸಿ) ಅನುಮತಿಸುವುದಿಲ್ಲ ತಿಳಿಸಿದೆ. ಅಲ್ಲದೆ ಭಾರತ ಪ್ರತಿಯೊಂದರಲ್ಲೂ ರಾಜಕೀಯ ಮಾಡುತ್ತಿದೆ ಎಂದು ಆರೋಪಿಸಿದೆ.

**ಏಷ್ಯಾಕಪ್‌ನಲ್ಲಿ 'ಪಾಕಿಸ್ತಾನ್' ಕೈ ಬಿಟ್ಟ ಭಾರತ:** 2023ರ ಏಷ್ಯಾಕಪ್ ಆತಿಥ್ಯವನ್ನು ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ವಹಿಸಿತ್ತು. ಆದರೆ ಭಾರತ ಪಾಕ್‌ನಲ್ಲಿ ಟೂರ್ನಿ ಆಡಲು ನಿರಾಕರಿಸಿದ್ದರಿಂದ ಪಂದ್ಯಾವಳಿಯನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಲಾಗಿತ್ತು. ಅದರಂತೆ ಪಾಕಿಸ್ತಾನ್ ಮತ್ತು ಶ್ರೀಲಂಕಾದಲ್ಲಿ ನಡೆದ ಏಷ್ಯಾಕಪ್ 2023 ರಲ್ಲಿ ಟೀಮ್ ಇಂಡಿಯಾ ತನ್ನೆಲ್ಲಾ ಪಂದ್ಯಗಳನ್ನು ಕೊಲಂಬೊದಲ್ಲಿ ಆಡಿತ್ತು. ಈ ವೇಳೆ ಕೂಡ ಭಾರತ ತಂಡ ತನ್ನ ಜೆರ್ಸಿ ಮೇಲೆ ಪಾಕಿಸ್ತಾನ್ ಹೆಸರು ಹಾಕಿರಲಿಲ್ಲ ಎಂಬುದು ವಿಶೇಷ. ಇದೀಗ ಚಾಂಪಿಯನ್ಸ್ ಟ್ರೋಫಿ ಜೆರ್ಸಿಯಿಂದಲೂ 'ಪಾಕಿಸ್ತಾನ್'ಗೆ ಕೊಕ್ ನೀಡಲು ಬಿಸಿಸಿಐ ನಿರ್ಧರಿಸಿದೆ. ಹೀಗಾಗಿ ಮುಂಬರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತೀಯರು ಆಟಗಾರರು ಧರಿಸುವ ಜೆರ್ಸಿ ಮೇಲೆ 'ಪಾಕಿಸ್ತಾನ್' ಕಾಣಿಸಿಕೊಳ್ಳುವುದಿಲ್ಲ ಎಂದೇ ಹೇಳಬಹುದು.

## ಮೂವರು ಆಲ್‌ರೌಂಡರ್‌ಗಳು ಇಬ್ಬರು ವೇಗಿಗಳು



ಭಾರತ ಮತ್ತು ಇಂಗ್ಲೆಂಡ್ ನಡುವಿನ ಟಿ20 ಸರಣಿಯು ಜನವರಿ 22 ರಿಂದ ಶುರುವಾಗಲಿದೆ. ಈ ಸರಣೀಯಲ್ಲಿ ಒಟ್ಟು ಐದು ಪಂದ್ಯಗಳನ್ನಾಡಲಾಗುತ್ತದೆ. ಮೊದಲ ಮ್ಯಾಚ್ ಕೊಲ್ಕತ್ತಾದಲ್ಲಿ ನಡೆದರೆ, 2ನೇ ಪಂದ್ಯವು ಜನವರಿ 25 ರಂದು ಚೆನ್ನೈನಲ್ಲಿ ನಡೆಯಲಿದೆ. ಇನ್ನು ಮೂರನೇ ಪಂದ್ಯ ಜ.28 ರಂದು ರಾಜ್‌ಕೋಟ್‌ನಲ್ಲಿ ನಡೆಯಲಿದ್ದು, ನಾಲ್ಕನೇ ಪಂದ್ಯ ಜನವರಿ 31 ರಂದು ಪುಣೆಯಲ್ಲಿ ಜರುಗಲಿದೆ. ಹಾಗೆಯೇ ಈ ಸರಣಿಯ ಕೊನೆಯ ಮ್ಯಾಚ್ ಫೆಬ್ರವರಿ 2 ರಂದು ಮುಂಬೈನಲ್ಲಿ ನಡೆಯಲಿದೆ. ಭಾರತ ಮತ್ತು ಇಂಗ್ಲೆಂಡ್ ನಡುವಣ 5 ಪಂದ್ಯಗಳ ಟಿ20 ಸರಣಿಯು ಬುಧವಾರದಿಂದ (ಜ.22) ಶುರುವಾಗಲಿದೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ಬಲಿಷ್ಠ ಪ್ಲೇಯಿಂಗ್ ಇಲೆವೆನ್ ರೂಪಿಸಬೇಕಿದೆ. ಏಕೆಂದರೆ ಈ ಸರಣಿಯಿಂದ ಶುಭ್‌ಮನ್ ಗಿಲ್, ರಿಷಭ್ ಪಂತ್, ಯಶಸ್ವಿ ಜೈಸ್ವಾಲ್ ಸೇರಿದಂತೆ ಕೆಲ ಆಟಗಾರರು ಹೊರಗುಳಿದಿದ್ದಾರೆ. ಹೀಗಾಗಿ ಮೊದಲ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಸಂಜು ಸ್ಯಾಮ್ಸನ್ ಹಾಗೂ ಅಭಿಷೇಕ್ ಶರ್ಮಾ ಇನಿಂಗ್ಸ್ ಆರಂಭಿಸುವುದು ಖಚಿತ ಎನ್ನಬಹುದು. ಇನ್ನು ಮೂರನೇ ಕ್ರಮಾಂಕದಲ್ಲಿ ತಿಲಕ್ ವರ್ಮಾ ಕಾಣಿಸಿಕೊಳ್ಳಲಿದ್ದಾರೆ. ನಾಲ್ಕನೇ ಕ್ರಮಾಂಕದಲ್ಲಿ ಸೂರ್ಯಕುಮಾರ್ ಯಾದವ್ ಕಣಕ್ಕಿಳಿದರೆ, ಐದನೇ ಕ್ರಮಾಂಕದಲ್ಲಿ ರಿಂಕು ಸಿಂಗ್ ಬ್ಯಾಟ್ ಬೀಸಬಹುದು. ಹಾಗೆಯೇ ಆಲ್‌ರೌಂಡರ್‌ಗಳಾಗಿ ಹಾರ್ದಿಕ್ ಪಾಂಡ್ಯ, ಅಕ್ಷರ್ ಪಟೇಲ್ ಹಾಗೂ ನಿತೀಶ್ ಕುಮಾರ್ ರೆಡ್ಡಿಗೆ ಅವಕಾಶ ನೀಡುವ ಸಾಧ್ಯತೆ ಹೆಚ್ಚಿದೆ. ಇವರೊಂದಿಗೆ ಪರಿಪೂರ್ಣ ಸ್ಪಿನ್ನರ್ ಆಗಿ ವರುಣ್ ಚಕ್ರವರ್ತಿ ಕಾಣಿಸಿಕೊಳ್ಳಲಿದ್ದಾರೆ. ಅಲ್ಲದೆ ವೇಗಿಗಳಾಗಿ ಮೊಹಮ್ಮದ್ ಶಮಿ ಹಾಗೂ ಅರ್ಷದೀಪ್ ಸಿಂಗ್ ಕಣಕ್ಕಿಳಿಯುವುದು ಬಹುತೇಕ ಖಚಿತ.


**ಮೂವರು ಆಲ್‌ರೌಂಡರ್, ಇಬ್ಬರು ವೇಗಿಗಳು:**

ಟೀಮ್ ಇಂಡಿಯಾ ಮೂವರು ಆಲ್‌ರೌಂಡರ್‌ಗಳನ್ನು ಕಣಕ್ಕಿಳಿಸುವ ಮೂಲಕ ಹಾರ್ದಿಕ್ ಪಾಂಡ್ಯ ಹಾಗೂ ನಿತೀಶ್ ಕುಮಾರ್ ರೆಡ್ಡಿ ಅವರನ್ನು ಹೆಚ್ಚುವರಿ ವೇಗಿಗಳಾಗಿ ಬಳಸಿಕೊಳ್ಳಬಹುದು.

ಡಿಡಿಮೊಹಮ್ಮದ್ ಶಮಿ ಹಾಗೂ ಅರ್ಷದೀಪ್ ಸಿಂಗ್ ಜೊತೆ ಪಾಂಡ್ಯ ಹಾಗೂ ನಿತೀಶ್ ಕುಮಾರ್ ಅವರನ್ನು ಬಳಸಿಕೊಂಡು ಒಟ್ಟು ನಾಲ್ವರು ವೇಗದ ಬೌಲರ್‌ಗಳ ಆಯ್ಕೆಯನ್ನು ಪಡೆಯಬಹುದು. ಹಾಗೆಯೇ ವರುಣ್ ಚಕ್ರವರ್ತಿ ಜೊತೆ 2ನೇ ಸ್ಪಿನ್ನರ್ ಆಗಿ ಅಕ್ಷರ್ ಪಟೇಲ್ ಬಳಸಿಕೊಳ್ಳಲು ಅವಕಾಶ ಸಿಗಲಿದೆ. ಇದರಿಂದ ಟೀಮ್ ಇಂಡಿಯಾಗೆ ಒಟ್ಟು ಆರು ಬೌಲರ್‌ಗಳನ್ನು ಬಳಸಿಕೊಳ್ಳಲು ಅವಕಾಶ ಸಿಗಲಿದೆ.

## ವಿರಾಟ್ ಕೊಹ್ಲಿಗೆ ಸಿಸ್ಟರ್ ಇನ್ ಲಾ ತೆಲುಗಿನ ಸ್ಟಾರ್ ನಟಿ!





ಭಾರತೀಯ ಕ್ರಿಕೆಟ್ ತಾರೆ ವಿರಾಟ್ ಕೊಹ್ಲಿ ಅವರ ಪತ್ನಿ ನಟಿ ಅನುಷ್ಕಾ ಶರ್ಮ ಎಂಬುದು ಎಲ್ಲಾರಿಗೂ ತಿಳಿದಿರುವ ವಿಚಾರ. ಆದರೆ, ವಿರಾಟ್ ಕೊಹ್ಲಿಗೆ ಇನ್ನೊಬ್ಬ ನಟಿಯೊಂದಿಗೂ ಬಂಧುತ್ವ ಇದೆ. ಅವರ ನಾದಿನಿ ರುಹಾನಿ ಶರ್ಮ ಕೂಡ ಒಬ್ಬ ನಟಿ.

ಚಿತ್ರರಂಗ, ರಾಜಕೀಯ, ಕ್ರಿಕೆಟ್.. ಈ ಮೂರು ಕ್ಷೇತ್ರಗಳ ನಡುವೆ ಬೇರ್ಪಡಿಸಲಾರದ ನಂಟಿದೆ. ಈ ಕ್ಷೇತ್ರಗಳ ನಕ್ಷತ್ರಗಳು ಒಬ್ಬರಿಗೊಬ್ಬರು ಒಂದಲ್ಲ ಒಂದು ರೀತಿಯಲ್ಲಿ ಬಂಧುತ್ವ ಹೊಂದಿದ್ದಾರೆ. ಅವುಗಳಲ್ಲಿ ಕೆಲವು ಬಹಿರಂಗವಾಗದವು, ಯಾರಿಗೂ ತಿಳಿಯದವು ಕೂಡ ಇವೆ. ಭಾರತೀಯ ಸ್ಟಾರ್ ಕ್ರಿಕೆಟಿಗ ವಿರಾಟ್ ಕೊಹ್ಲಿ.. ಅವರ ಪತ್ನಿ ಅನುಷ್ಕಾ ಶರ್ಮ ಬಾಲಿವುಡ್ ನಟಿ ಎಂಬುದು ಎಲ್ಲಾರಿಗೂ ತಿಳಿದಿದೆ. ವಿರಾಟ್ ಕೊಹ್ಲಿ ಭಾರತೀಯ ಕ್ರಿಕೆಟ್‌ನ ಸ್ಟಾರ್. ಸಚಿನ್ ನಂತರ ವಿಶ್ವಾದ್ಯಂತ ಖ್ಯಾತಿಯನ್ನು ಹೊಂದಿರುವ ಆಟಗಾರ ವಿರಾಟ್ ಕೊಹ್ಲಿ. ಅವರ ಪತ್ನಿ ನಟಿ ಅನುಷ್ಕಾ ಶರ್ಮ. ದೀರ್ಘಕಾಲ ಪ್ರೀತಿಸಿದ ಈ ಜೋಡಿ 2017 ರಲ್ಲಿ ಅದ್ದೂರಿಯಾಗಿ ವಿವಾಹವಾದರು. ಅವರಿಗೆ ಒಬ್ಬ ಮಗಳು ಮತ್ತು ಒಬ್ಬ ಮಗನಿದ್ದಾನೆ.

ಕುಟುಂಬ, ಮಕ್ಕಳೇ ಲೋಕ ಎಂದು ಜೀವಿಸುತ್ತಿರುವ ಅನುಷ್ಕಾ ಶರ್ಮ. ವಿರಾಟ್ ಕೊಹ್ಲಿಗೆ ಅನುಷ್ಕಾ ಶರ್ಮ ಮಾತ್ರವಲ್ಲ, ಇನ್ನೊಬ್ಬ ನಟಿಯೊಂದಿಗೂ ಬಂಧುತ್ವ ಇದೆ. ವಿರಾಟ್ ಅವರ ನಾದಿನಿ (ಸಿಸ್ಟರ್ ಇನ್ ಲಾ) ಒಬ್ಬ ಸ್ಟಾರ್ ನಟಿ. ರುಹಾನಿ ಶರ್ಮ ವಿರಾಟ್ ಕೊಹ್ಲಿ ಅವರ ಸಿಸ್ಟರ್ ಇನ್ ಲಾ. ಈ ಸುಂದರಿ ಮೊದಲು ತಮಿಳು ಚಿತ್ರರಂಗದಲ್ಲಿ ನಟಿಯಾಗಿ ಪರಿಚಯವಾದರು. ನಂತರ 'ಚಿ..ಲ..ಸೌ' ಚಿತ್ರದ ಮೂಲಕ ಟಾಲಿವುಡ್‌ಗೆ ಪಾದಾರ್ಪಣೆ ಮಾಡಿದರು.

## 2.5 ಓವರ್‌ಗಳಲ್ಲಿ ಮುಗಿದ ಪಂದ್ಯ ಭಾರತಕ್ಕೆ ಭರ್ಜರಿ ಜಯ

ಮಲೇಷ್ಯಾದಲ್ಲಿ ನಡೆಯುತ್ತಿರುವ ಮಹಿಳಾ ಅಂಡರ್-19 ಟಿ20 ವಿಶ್ವಕಪ್ ಪಂದ್ಯದಲ್ಲಿ ಟೀಮ್ ಇಂಡಿಯಾದ ವೈಷ್ಣವಿ ಶರ್ಮಾ 4 ಓವರ್‌ಗಳಲ್ಲಿ ಕೇವಲ 5 ರನ್ ನೀಡಿ 5 ವಿಕೆಟ್ ಕಬಳಿಸಿ ಮಿಂಚಿದ್ದಾರೆ. ಈ ಭರ್ಜರಿ ಬೌಲಿಂಗ್‌ನೊಂದಿಗೆ ಈ ಪಂದ್ಯದಲ್ಲಿ ಭಾರತ ತಂಡ ಅಮೋಘ ಗೆಲುವು ದಾಖಲಿಸಿದೆ. ಕೌಲಾಲಂಪುರ್‌ನ ಬೇಯುಮಾಸ್ ಓವಲ್ ಮೈದಾನದಲ್ಲಿ ನಡೆದ ಅಂಡರ್ 19 ಮಹಿಳಾ ಟಿ20 ವಿಶ್ವಕಪ್‌ನ 16ನೇ ಪಂದ್ಯದಲ್ಲಿ ಭಾರತ ತಂಡ ಭರ್ಜರಿ ಜಯ ಸಾಧಿಸಿದೆ. ಮಲೇಷ್ಯಾ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದ ಟೀಮ್ ಇಂಡಿಯಾ ನಾಯಕಿ ನಿಕಿ ಪ್ರಸಾದ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಮಲೇಷ್ಯಾ ತಂಡ ಉತ್ತಮ ಆರಂಭ ಪಡೆದಿರಲಿಲ್ಲ. ಭಾರತೀಯ ಬೌಲರ್‌ಗಳ ಕರಾರುವಾಕ್ ದಾಳಿ ಮುಂದೆ ರನ್‌ಗಳಿಸುವುದಿರಲಿ, ಕ್ರೀಸ್ ಕಚ್ಚಿ ನಿಲ್ಲಲು ಕೂಡ ಮಲೇಷ್ಯಾ ಬ್ಯಾಟರ್‌ಗಳು ಪರದಾಡಿದರು. ಪರಿಣಾಮ ಪವರ್‌ಪ್ಲೇ ಮುಗಿಯುವ ಮುನ್ನವೇ ಕೇವಲ 22 ರನ್‌ಗಳಿಗೆ 5 ವಿಕೆಟ್ ಕಳೆದುಕೊಂಡಿತು. ಆ ಬಳಿಕ ಬಂದ ಬ್ಯಾಟರ್‌ಗಳನ್ನು ಬಂದ ವೇಗದಲ್ಲೇ ಪೆವಿಲಿಯನ್‌ಗೆ ಕಳುಹಿಸುವಲ್ಲಿ ಟೀಮ್ ಇಂಡಿಯಾ ಬೌಲರ್‌ಗಳು ಯಶಸ್ವಿಯಾದರು. ಪರಿಣಾಮ 14.3 ಓವರ್‌ಗಳಲ್ಲಿ ಮಲೇಷ್ಯಾ ತಂಡವು ಕೇವಲ 31 ರನ್‌ಗಳಿಸಿ ಆಲೌಟ್ ಆಯಿತು. ಟೀಮ್ ಇಂಡಿಯಾ ಪರ ವೈಷ್ಣವಿ ಶರ್ಮಾ 4 ಓವರ್‌ಗಳಲ್ಲಿ ಕೇವಲ 5 ರನ್ ನೀಡಿ 5 ವಿಕೆಟ್ ಕಬಳಿಸಿದರೆ, ಆಯುಷಿ ಶುಕ್ಲಾ 3.3 ಓವರ್‌ಗಳಲ್ಲಿ 8 ರನ್ ನೀಡಿ 3 ವಿಕೆಟ್ ಉರುಳಿಸಿದರು. ಇನ್ನು ಜೋಶಿತಾ ಒಂದು ವಿಕೆಟ್ ಪಡೆಯುವಲ್ಲಿ ಯಶಸ್ವಿಯಾದರು.

32 ರನ್‌ಗಳ ಸುಲಭ ಗುರಿ ಪಡೆದ ಟೀಮ್ ಇಂಡಿಯಾ ಪರ ಆರಂಭಿಕರಾಗಿ ಕಣಕ್ಕಿಳಿದ ಗೊಂಗಡಿ ತ್ರಿಷಾ 12 ಎಸೆತಗಳಲ್ಲಿ 5 ಫೋರ್‌ಗಳೊಂದಿಗೆ 27 ರನ್ ಬಾರಿಸಿದರೆ, ಕಮಿಲಿನಿ 4 ರನ್ ಕಲೆಹಾಕಿದರು. ಈ ಮೂಲಕ ಭಾರತ ತಂಡವು 2.5 ಓವರ್‌ಗಳಲ್ಲಿ 32 ರನ್ ಕಲೆಹಾಕಿ 10 ವಿಕೆಟ್‌ಗಳ ಅಮೋಘ ಜಯ ಸಾಧಿಸಿದೆ.

**ಭಾರತ ಮಹಿಳಾ 19 ಪ್ಲೇಯಿಂಗ್ 11:** ಗೊಂಗಡಿ ತ್ರಿಷಾ, ಜಿ ಕಮಲಿನಿ (ವಿಕೆಟ್ ಕೀಪರ್), ಸಾನಿಕಾ ಚಲ್ಕೆ, ನಿಕಿ ಪ್ರಸಾದ್ (ನಾಯಕಿ), ಭಾವಿಕಾ ಅಹಿರೆ, ಮಿಥಿಲಾ ವಿನೋದ್, ಆಯುಷಿ ಶುಕ್ಲಾ, ಜೋಶಿತಾ ವಿಜೆ, ಶಬ್ನಮ್ ಶಕಿಲ್, ಪರುಣಿಕಾ ಸಿಸೋಡಿಯಾ, ವೈಷ್ಣವಿ ಶರ್ಮಾ.

ಮಲೇಷ್ಯಾ **ಮಹಿಳಾ 19 ಪ್ಲೇಯಿಂಗ್ 11:** ನೂರ್ ಅಲಿಯಾ ಹೈರುನ್ (ವಿಕೆಟ್ ಕೀಪರ್), ನುನಿ ಫರಿನಿ ಸಫ್ರಿ, ಹುಸ್ನಾ, ನೂರ್ ದಾನಿಯಾ ಸ್ಯುಹದಾ (ನಾಯಕಿ), ನೂರ್ ಇಜ್ಜತುಲ್ ಸೈಫಿಕಾ, ನೂರಿಮಾನ್ ಹಿದಾಯ, ಸುಬಿಕಾ ಮಣಿವಣ್ಣನ್, ನೂರ್ ಐನ್ ಬಿಂಟಿ ರೋಸ್ಲಾನ್, ನೂರ್ ಇಸ್ಮಾ ದನಿಯಾ, ಸಿತಿ ಮರ್ಸಿಯಾ ಕ್ವಿಸ್ಟ್.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966